ಸಂಪುಟ: 05 ಸಂಚಿಕೆ: 259 ಪುಟಗಳು: 08 ಬುಧವಾರ 03 ಡಿಸೆಂಬರ್ 2025

www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail. com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

**ಮುಂಜಾನೆ ಮಾತು**

ನೀವು ಮಾನವೀಯತೆಯ ಮೇಲಿನ ನಂಬಿಕೆಯನ್ನು ಎಂದಿಗೂ ಕಳೆದುಕೊಳ್ಳಬೇಡಿ. ಮಾನವೀಯತೆ ಎಂಬುದು ಒಂದು ಸಾಗರದಂತೆ. ಕೆಲವು ಹನಿಗಳು ಕೊಳಕಾಗಿದ್ದರೆ ಸಾಗರವು ಕೊಳಕು ಆಗುವುದಿಲ್ಲ

ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ಕುರ್ಚಿ ಚರ್ಚೆ ಜೋರು ನಾಟಿ ಕೋಳಿ ಸಾರು



### ಡಿಕೆಶಿ ನಿವಾಸದಲ್ಲಿ ನಾಟಿಕೋಳಿ ಸ್ಪೆಷಲ್ ಉಪಹಾರ ಸವಿದ ಸಿಎಂ

• ಉದಯವಾಹಿನಿ, ಬೆಂಗಳೂರು

ಡಿಸಿಎಂ ಡಿ.ಕೆ.ಶಿವಕುಮಾರ್ ನಿವಾಸದಲ್ಲಿ ಸಿಎಂ ಸಿದ್ದರಾಮಯ್ಯ ಮಂಗಳವಾರ ಉಪಹಾರ ಸೇವಿಸಿದರು. ಈ ವೇಳೆ ಉಭಯ ನಾಯಕರು ಕೆಲಕಾಲ ಪ್ರತ್ಯೇಕವಾಗಿ ಮಾತುಕತೆ ನಡೆಸಿದರು. ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ.ಶಿವಕುಮಾರ್ ನಡುವಿನ ಮತ್ತೊಂದು ಉಪಹಾರ ಸಭೆಯಲ್ಲೂ ಒಗ್ಗಟ್ಟು ಪ್ರದರ್ಶನ ಕಂಡುಬಂತು. ನಾವು ಯಾವಾಗಲೂ ಬ್ರದರ್ಸ್, ಒಂದೇ ಸಿದ್ಧಾಂತವನ್ನು ಒಪ್ಪಿಕೊಂಡಿದ್ದೇವೆ, ನಾವು ಒಟ್ಟಾಗಿದ್ದೇವೆ ಎಂದು ಸಿಎಂ ಸಿದ್ದರಾಮಯ್ಯ ಉಪಹಾರದ ಬಳಿಕ ಹೇಳಿದರು. ಉಪಹಾರದ ವೇಳೆ ಸಿಎಂ ಮತ್ತು ಡಿಸಿಎಂ ಸುಮಾರು ಎರಡು ತಾಸಿಗೂ ಹೆಚ್ಚು ಕಾಲ ಚರ್ಚೆ ನಡೆಸಿದ್ದಾರೆ. ಉಪಹಾರದ ಮೆನುವಿನಲ್ಲಿ ನಾಟಿ ಕೋಳಿ ಸ್ಪೆಷಲ್ ಐಟಂ ಆಗಿತ್ತು. ಮೈಸೂರು ಶೈಲಿಯ ಉಪಹಾರವನ್ನು ತಯಾರಿಸಲಾಗಿತ್ತು. ಸಿದ್ದರಾಮಯ್ಯನವರ ಕಾಲುಮುಟ್ಟಿ ನಮಸ್ಕರಿಸಿದ ಡಿ.ಕೆ.ಸುರೇಶ್ ಇದಕ್ಕೂ ಮುನ್ನ, ಬೆಳಗ್ಗೆ 9.30ಕ್ಕೆ ಸದಾಶಿವನಗರದ ಡಿಕೆಶಿ ಮನೆಗೆ ಆಗಮಿಸಿದ ಸಿಎಂ ಸಿದ್ದರಾಮಯ್ಯರನ್ನು ಡಿಕೆ ಬ್ರದರ್ಸ್ ಆತ್ಮೀಯವಾಗಿ ಬರಮಾಡಿಕೊಂಡರು. ಮಾಜಿ ಸಂಸದ ಡಿ.ಕೆ.ಸುರೇಶ್ ಅವರು ಸಿಎಂ ಕಾಲು ಮುಟ್ಟಿ ನಮಸ್ಕರಿಸಿದ್ದು ವಿಶೇಷವಾಗಿತ್ತು.

**ನಾವು ಯಾವಾಗಲೂ ಬ್ರದರ್ಸ್**



**ಎರಡೂ ತಾಸಿಗೂ ಹೆಚ್ಚು ಕಾಲ ಮೀಟಿಂಗ್**

**ರಾಜಕೀಯ ನಮ್ಮಪ್ಪನ ಆಸ್ತಿ ಅಲ್ಲ**

ರಾಜಕೀಯ ನಮ್ಮಪ್ಪನ ಆಸ್ತಿ ಅಲ್ಲ. ಏನು ಆಗುತ್ತೋ ಆಗಲಿ ಎಂದು ಸಿಎಂ ಸಿದ್ದರಾಮಯ್ಯ ವಿಧಾನಸೌಧದ ಕೆಂಗಲ್ ಗೇಟ್ ಬಳಿಯ ಪ್ರವೇಶ ದ್ವಾರದ ಬಳಿ ಶಾಸಕ ಬೇಳೂರು ಗೋಪಾಲಕೃಷ್ಣ ಜೊತೆ ಅನೌಪಚಾರಿಕವಾಗಿ ಮಾತನಾಡುತ್ತಾ ಹೇಳಿರುವುದು ಕುತೂಹಲಕ್ಕೆ ಕಾರಣವಾಗಿದೆ. ವಿಧಾನಸೌಧ ಕೆಂಗಲ್ ಗೇಟ್ ಬಳಿ ಸಿಎಂ ಸಿದ್ದರಾಮಯ್ಯ ಶಾಸಕ ಬೇಳೂರು ಗೋಪಾಲಕೃಷ್ಣ ಜೊತೆಗಿನ ಈ ಅನೌಪಚಾರಿಕ ರಾಜಕೀಯ ಮಾತು ಸಾಕಷ್ಟು ಕುತೂಹಲ ಕೆರಳಿಸಿತು. ಶಾಸಕರಾದ ಬೇಳೂರು ಗೋಪಾಲಕೃಷ್ಣ ಹಾಗೂ ಉದಯ ಕದಲೂರು ಜೊತೆ ವಿಧಾನಸೌಧದಿಂದ ತೆರಳುವ ವೇಳೆ ಲೋಕಾಭಿರಾಮವಾಗಿ ಮಾತನಾಡುತ್ತಾ ರಾಜಕೀಯ ವಿದ್ಯಮಾನದ ಬಗ್ಗೆ ಮಾತನಾಡಿರುವುದು ಹಲವು ಪ್ರಶ್ನೆಗಳಿಗೆ ಎಡೆಮಾಡಿಕೊಟ್ಟಿದೆ.

1 ಹನುಮ ಜಯಂತಿ ದಿನದಂದು ಡಿಕೆಶಿ ಮನೆಯಲ್ಲಿ ನಾಟಿಕೋಳಿ ಮರ್ಡರ್

2 ನಾವು ಯಾವಾಗ್ಲೂ ಬ್ರದರ್ಸ್: ಹೈಕಮಾಂಡ್ ಹೇಳಿದಾಗ ಡಿಕೆಶಿ ಸಿಎಂ ಆಗ್ತಾರೆ ಎಂದ ಸಿಎಂ

3 ಸಿಎಂ ಸ್ಥಾನ ಗದ್ದಲದ ನಡುವೆ ಮತ್ತೆ ಡಿಸಿಎಂ ನಿವಾಸದಲ್ಲಿ ಬ್ರೇಕ್‌ಫಾಸ್ಟ್ ಮೀಟಿಂಗ್

ಬ್ರೇಕ್‌ಫಾಸ್ಟ್ ಬಳಿಕ ಸಿಎಂ ಸಿದ್ದರಾಮಯ್ಯ , ಡಿಸಿಎಂ ಡಿ.ಕೆ.ಶಿವಕುಮಾರ್ ಒಟ್ಟಾಗಿ ಮನೆಯಿಂದ ಹೊರಬಂದು ಮಾಧ್ಯಮದವರನ್ನು ಉದ್ದೇಶಿಸಿ ಮಾತನಾಡಿದರು.

ಡಿಕೆಶಿಯವರು ನನ್ನನ್ನು ಉಪಹಾರಕ್ಕೆ ಕರೆದಿದ್ದರು. ಉಪಹಾರ ಮಾಡಿದ್ದೇನೆ. ನಾನು ಮಾಂಸಹಾರಿ, ಇವರು ಸಸ್ಯಹಾರಿ. ನಾನು ಅದಕ್ಕೆ ನನ್ನ ಮನೇಲಿ ವೆಜ್ ಮಾಡಿಸಿದ್ದೆ. ನಾನು ಡಿಕೆಶಿಗೆ ಹಳ್ಳಿಯಿಂದ ಕೋಳಿ ತರಿಸುವಂತೆ ಹೇಳಿದ್ದೆ ಎಂದರು.ಪಕ್ಷದ ವಿಚಾರಗಳನ್ನು ಚರ್ಚಿಸಿದ್ದೇವೆ. ಡಿ.8ರಂದು ಬೆಳಗಾವಿ ಅಧಿವೇಶನ ಶುರುವಾಗುತ್ತದೆ. ಅಲ್ಲಿ ನಮ್ಮ ಕಾರ್ಯತಂತ್ರದ ಬಗ್ಗೆ ಚರ್ಚೆ ನಡೆಸಿದ್ದೇವೆ. ಯಾವ ಯಾವ ವಿಚಾರಗಳ ಬಗ್ಗೆ ಅಧಿವೇಶನದಲ್ಲಿ ಚರ್ಚೆ ನಡೆಸಬೇಕು ಎಂದು ಸಮಾಲೋಚಿಸಿದ್ದೇವೆ. ವಿಪಕ್ಷ ಅವಿಶ್ವಾಸ ನಿರ್ಣಯ ಮಂಡನೆ ಮಾಡುತ್ತದೆ ಎಂಬ ವರದಿ ಇದೆ. ಅದನ್ನು ನಾವು ಒಟ್ಟಾಗಿ ಎದುರಿಸುತ್ತೇವೆ. ಅಧಿವೇಶನದಲ್ಲಿ ರಾಜ್ಯದ ಸಮಸ್ಯೆ ಬಗ್ಗೆ ಚರ್ಚೆ ಮಾಡುತ್ತೇವೆ.

ಕಬ್ಬು ವಿಚಾರ, ಕೃಷಿ, ಮೆಕ್ಕೆಜೋಳದ ಸಮಸ್ಯೆ ನಿವಾರಿಸಲು ಯತ್ನಿಸಿದ್ದೇವೆ. ಸರ್ಕಾರ ರೈತರ ಪರವಾಗಿದೆ.

ಕಬ್ಬು ಬೆಳೆಗಾರರ ಜೊತೆ ಮಾತನಾಡಿದ್ದೇನೆ. ಅದಕ್ಕೆ ಅಂತಿಮ ರೂಪ ಕೊಡಲು ಯತ್ನಿಸಿದ್ದೇನೆ ಎಂದು ಹೇಳಿದರು. ರಾಜ್ಯದ ಸಂಸದರ ಜೊತೆ ಸಭೆ ನಡೆಸುವ ಬಗ್ಗೆ ಮಾತನಾಡಿದ್ದೇವೆ. ಡಿ.8ರಂದು ಬೆಳಗಾವಿ ಅಧಿವೇಶನದಲ್ಲಿ ಸಂತಾಪದ ಬಳಿಕ ಕಲಾಪ ಮುಂದೂಡಿಕೆಯಾದರೆ ಅಂದೇ ದೆಹಲಿಗೆ ಹೋಗಿ ರಾಜ್ಯದ ಸಂಸದರ ಜೊತೆ ಸಭೆ ನಡೆಸುವ ಚಿಂತನೆ ಇದೆ. ಈ ವೇಳೆ ಸಮಯ ಕೊಟ್ಟರೆ ಹೈಕಮಾಂಡ್ ಭೇಟಿ ಮಾಡುತ್ತೇನೆ. ಕೆ.ಸಿ.ವೇಣುಗೋಪಾಲ್, ನಾನು ಮಂಗಳೂರು ಕಾರ್ಯಕ್ರಮದಲ್ಲಿ ಭೇಟಿಯಾಗುತ್ತೇವೆ ಎಂದು ತಿಳಿಸಿದರು.

**ನಮ್ಮದು ಒಂದೇ ಧ್ವನಿ ಒಂದೇ ಆಚಾರ ವಿಚಾರ**

ಸಿಎಂರನ್ನು ನಾನೇ ಮೊದಲು ಉಪಹಾರಕ್ಕೆ ಕರೆದಿದ್ದೆ. ಅವರು ನೀವೇ ಮೊದಲು ನನ್ನ ಮನೆಗೆ ಬಾ ಅಂದಿದ್ದರು. ಹಾಗಾಗಿ ಮೊನ್ನೆ ಶನಿವಾರ ಅವರ ಮನೆಯಲ್ಲಿ ಉಪಹಾರ ನಡೆಸಿದ್ದೆವು. ನಮ್ಮ ಮನೆಯಲ್ಲಿ ಉಪಹಾರ ಮಾಡಿದ್ದೇವೆ. ಮೈಸೂರು ಮೆನು ಮಾಡಿಸಿದ್ದೆ. ರಾಜಕೀಯ ವಿಚಾರಗಳ ಚರ್ಚೆ ಮಾಡಿದ್ದೇವೆ. ನಾಲ್ಕು ಎಂಎಲ್‌ಸಿಗಳ ಆಯ್ಕೆ ಮಾಡಬೇಕಾಗಿದೆ. ಅದರ ಬಗ್ಗೆ ಚರ್ಚಿಸಿದ್ದೇವೆ ಎಂದರು. ಅಧಿವೇಶನದಲ್ಲಿ ಏನು ಚರ್ಚೆ ಮಾಡಬೇಕು ಎಂಬ ಬಗ್ಗೆ ಮಾತನಾಡಿದ್ದೇವೆ. ನಮ್ಮದು ಒಂದೇ ಧ್ವನಿ, ಒಂದೇ ಆಚಾರ ವಿಚಾರ. ಪ್ರತಿಪಕ್ಷವನ್ನು ಒಟ್ಟಾಗಿ ಎದುರಿಸುತ್ತೇವೆ. ವಿಪಕ್ಷ ನಾಯಕರನ್ನೂ ದೆಹಲಿಗೆ ಕರೆದೊಯ್ದು ಸರ್ವಪಕ್ಷ ಸಭೆ ನಡೆಸಲು ಯೋಚಿಸಿದ್ದೇವೆ ಎಂದು ಡಿಸಿಎಂ ಡಿಕೆಶಿ ಹೇಳಿದರು.

**ಹೈಕಮಾಂಡ್ ಜೊತೆ ಮಾತುಕತೆ ನಡೆದಿಲ್ಲ:** ದಿಲ್ಲಿಯಲ್ಲಿ ಚರ್ಚೆ ಮಾಡಿದ್ದೇನೆ. ಹೈಕಮಾಂಡ್ ಏನು ಹೇಳುತ್ತದೋ ಅದರಂತೆ ನಡೆದುಕೊಳ್ಳುತ್ತೇವೆ. ಅದೇ ರೀತಿ ರಾಹುಲ್ ಗಾಂಧಿ ಏನು ತೀರ್ಮಾನ ಕೈಗೊಳ್ಳುತ್ತಾರೋ ಅದಕ್ಕೆ ನಾವು ಬದ್ಧ ಎಂದು ಈಗಾಗಲೇ ಹೇಳಿದ್ದೇವೆ. ಈವರೆಗೆ ಹೈಕಮಾಂಡ್ ಜೊತೆ ಯಾವುದೇ ಕಮ್ಯುನಿಕೇಷನ್ ಆಗಿಲ್ಲ ಎಂದರು.

ನಾವು ಯಾವಾಗಲೂ ಒಗ್ಗಟ್ಟಾಗಿದ್ದೇವೆ. ನಮ್ಮ ಎಲ್ಲಾ ಶಾಸಕರು ಒಗ್ಗಟ್ಟಾಗಿ ಇದ್ದಾರೆ. ಒಟ್ಟಾಗಿ ವಿಪಕ್ಷವನ್ನು ಎದುರಿಸಲಿದ್ದಾರೆ. ನಾವು ಯಾವಾಗಲೂ ಬ್ರದರ್ಸ್, ಒಂದೇ ಸಿದ್ಧಾಂತವನ್ನು ಒಪ್ಪಿಕೊಂಡಿದ್ದೇವೆ. ನಾವು ಒಟ್ಟಾಗಿದ್ದೇವೆ. 2028ರಲ್ಲೂ ಒಟ್ಟಿಗೆ ಕೆಲಸ ಮಾಡಿ ಚುನಾವಣೆ ಗೆಲ್ಲುತ್ತೇವೆ. ನಾನು ಡಿಸಿಎಂ ಒಟ್ಟಾಗಿ ಸರ್ಕಾರ ಮಾಡುತ್ತೇವೆ. ಮುಂದೆನೂ ಸರ್ಕಾರ ನಡೆಸುತ್ತೇವೆ ಎಂದು ಸ್ಪಷ್ಟಪಡಿಸಿದರು.



**ಆರ್ ಅಶೋಕ್ ಲೇವಡಿ**

ಹನುಮ ಜಯಂತಿ ದಿನದಂದು ಡಿಕೆ ಶಿವಕುಮಾರ್ ಅವರ ಮನೆಯಲ್ಲಿ ನಾಟಿಕೋಳಿ ಮರ್ಡರ್ ಆಗಿದೆ ಎಂದು ಡಿಕೆಶಿ ಮನೆಯಲ್ಲಿ ಬ್ರೇಕ್‌ಫಾಸ್ಟ್‌ಗೆ ಆರ್ ಅಶೋಕ್ ಲೇವಡಿ ಮಾಡಿದ್ದಾರೆ. ''ಹನುಮ ಜಯಂತಿ ದಿನ ಕನಕಪುರದ ನಾಟಿ ಕೋಳಿಯ ಮರ್ಡರ್ ನಡೆದಿದೆ. ನಾಟಿಕೋಳಿ ಪ'ಲಾವು, ಬಿರಿಯಾನಿ ಹಾಗೂ ಸಾರು ಮಾಡಲಾಗಿದೆ. ಸಿದ್ದರಾಮಯ್ಯ ಮೊದಲೇ ಮಾಂಸ ತಿಂದು ಧರ್ಮಸ್ಥಳಕ್ಕೆ ಹೋಗಿದ್ದು ಸುದ್ದಿಯಾಗಿತ್ತು. ಹನುಮ ಜಯಂತಿ ದಿನದಂದು ನಾಟಿಕೋಳಿ ಸಾರು ಮಾಡಲಾಗಿದೆ'' ಎಂದು ತಿರುಗೇಟು ನೀಡಿದರು. ನಾವು ಆಂಜನೇಯನ ಆರಾಧನೆ ಮಾಡಿದರೆ ಸಿದ್ದರಾಮಯ್ಯ ಅವರು ನಾಟಿಕೋಳಿ ಆರಾಧನೆ ಮಾಡಿದ್ದಾರೆ. ಬ್ರೇಕ್ ಫಾಸ್ಟ್ ಮೀಟಿಂಗ್ ಇದೊಂದು ಪ್ರಹಸನ. ಮೊನ್ನೆ ಸಿದ್ದರಾಮಯ್ಯ ಮನೆಯಲ್ಲಿ ಮಾಡಲಾಗಿದೆ. ಡಿಕೆ ಶಿವಕುಮಾರ್ ಮನೆಯಲ್ಲಿ ನಾಟಿ ಕೋಳಿ ಮಾಡಲಾಗಿದೆ.

## ಸ್ಮಾರ್ಟ್ ಮೀಟರ್: ಸಚಿವ ಜಾರ್ಜ್ ವಿರುದ್ಧದ ದೂರು ವಜಾ

• ಉದಯವಾಹಿನಿ, ಬೆಂಗಳೂರು

'ರಾಜ್ಯದಲ್ಲಿ ಸ್ಮಾರ್ಟ್ ಮೀಟರ್ ಅಳವಡಿಕೆಗೆ ಸಂಬಂಧಿಸಿದ ಟೆಂಡರ್‌ನಲ್ಲಿ ಅಕ್ರಮ ನಡೆದಿದೆ' ಎಂದು ಆರೋಪಿಸಿ ಇಂಧನ ಸಚಿವ ಕೆ.ಜೆ.ಜಾರ್ಜ್ ಸೇರಿದಂತೆ ಅಧಿಕಾರಿಗಳ ವಿರುದ್ಧ ಬಿಜೆಪಿ ನಾಯಕರು ದಾಖಲಿಸಿದ್ದ ಖಾಸಗಿ ದೂರನ್ನು ಹೈಕೋರ್ಟ್ ವಜಾಗೊಳಿಸಿದೆ. ಈ ಆದೇಶ ರದ್ದು ಕೋರಿ ಸಲ್ಲಿಸಲಾಗಿದ್ದ ಅರ್ಜಿ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಂ.ಐ.ಅರುಣ್ ಅವರಿದ್ದ ಏಕಸದಸ್ಯ ನ್ಯಾಯಪೀಠ, ಮಂಗಳವಾರ ಈ ಕುರಿತಂತೆ ಆದೇಶಿಸಿತು. ರಾಜ್ಯದಲ್ಲಿ ಸ್ಮಾರ್ಟ್ ಮೀಟರ್ ಅಳವಡಿಕೆಗೆ ಸಂಬಂಧಿಸಿದ ಟೆಂಡರ್ ಸಂಪೂರ್ಣ ಕಾನೂನು ಬಾಹಿರವಾಗಿದೆ ಎಂದು ಆರೋಪಿಸಿ ದಾಖಲಿಸಿರುವ ಖಾಸಗಿ ದೂರಿಗೆ ಸಂಬಂಧಿಸಿದಂತೆ ಲೋಕಾಯುಕ್ತ ಪೊಲೀಸರ ಪ್ರಾಥಮಿಕ ತನಿಖಾ ವರದಿ ತರಿಸಿಕೊಳ್ಳಬೇಕು' ಎಂದು ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ಆದೇಶಿಸಿತ್ತು. ಈ ಆದೇಶ ಪ್ರಶ್ನಿಸಿ ಕೆ.ಜೆ.ಜಾರ್ಜ್, ತಾಂತ್ರಿಕ ವಿಭಾಗದ ಎಚ್. ಜೆ.ರಮೇಶ್ ಮತ್ತು ಇತ್ತೀಚೆಗೆ ಮರಣ ಹೊಂದಿದ ಬೆಸ್ಕಾಂ ವ್ಯವಸ್ಥಾಪಕ ನಿರ್ದೇಶಕರಾಗಿದ್ದ ದಿವಂಗತ ಮಹಾಂತೇಶ ಬೀಳಗಿ ಹೈಕೋರ್ಟ್ ಮೆಟ್ಟಿಲೇರಿದ್ದರು.

## ಶಾಲಾ ಆವರಣದಲ್ಲಿನ ನಾಯಿಗಳ ಸ್ಥಳಾಂತರಕ್ಕೆ ಕ್ರಮ: ಶಿಕ್ಷಣ ಇಲಾಖೆ

• ಉದಯವಾಹಿನಿ, ಬೆಂಗಳೂರು

ಮಕ್ಕಳ ಸುರಕ್ಷತೆಗಾಗಿ ರಾಜ್ಯದ ಎಲ್ಲಾ ಶಾಲೆಗಳ ಆವರಣದಲ್ಲಿರುವ ಬೀದಿ ನಾಯಿಗಳ ಮಾಹಿತಿ ಸಂಗ್ರಹಿಸಿ, ಸ್ಥಳೀಯ ಸಂಸ್ಥೆಗಳಿಗೆ ನೀಡುವಂತೆ ಶಾಲಾ ಶಿಕ್ಷಣ ಇಲಾಖೆ ಸುತ್ತೋಲೆ ಹೊರಡಿಸಿದೆ. ಎಲ್ಲಾ ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಶಿಕ್ಷಣ ಸಂಸ್ಥೆಗಳು ಬೀದಿ ನಾಯಿಗಳ ಉಪಟಳ ತಪ್ಪಿಸಲು ಕ್ರಮಕೈಗೊಳ್ಳಬೇಕು.

ಶಾಲಾ ಆವರಣದಲ್ಲಿರುವ ನಾಯಿಗಳ ಸಂಖ್ಯೆಯನ್ನು ಲೆಕ್ಕ ಹಾಕಬೇಕು. ನಗರ ಹಾಗೂ ಗ್ರಾಮೀಣ ಸಂಸ್ಥೆಗಳಿಗೆ ಮಾಹಿತಿ ನೀಡಬೇಕು. ನಾಯಿಗಳನ್ನು ಹಿಡಿದು ಪ್ರಾಣಿ ಆಶ್ರಯ ಸ್ಥಾನಗಳಿಗೆ ಸ್ಥಳಾಂತರಿಸಲು ಸಹಕರಿಸಬೇಕು ಎಂದು ಶಾಲಾ ಶಿಕ್ಷಣ ಇಲಾಖೆ ಪ್ರಧಾನ ಕಾರ್ಯದರ್ಶಿ ರಶ್ಮಿ ಮಹೇಶ್ ಸೂಚಿಸಿದ್ದಾರೆ.

ಬೀದಿನಾಯಿಗಳು ಶಾಲಾ ಆವರಣದೊಳಗೆ ಪ್ರವೇಶಿಸುವುದನ್ನು ತಡೆಯಲು ಸಂಸ್ಥೆಯ ಆವರಣಕ್ಕೆ ಕಾಂಪೌಂಡ್ ನಿರ್ಮಿಸಬೇಕು. ಮೇಲುಸ್ತುವಾರಿ ಮಾಡಲು ಹಾಗೂ ಸ್ಥಳೀಯ ಸಂಸ್ಥೆಗಳೊಂದಿಗೆ ಸಮನ್ವಯ ಸಾಧಿಸಲು ಆಯಾ ಶಾಲೆಯ ಮುಖ್ಯಶಿಕ್ಷಕರು ಅಥವಾ ಪ್ರಾಂಶುಪಾಲರನ್ನು ನೋಡಲ್ ಅಧಿಕಾರಿಗಳನ್ನಾಗಿ ನೇಮಕ ಮಾಡಬೇಕು. ಕ್ಷೇತ್ರ ಶಿಕ್ಷಣಾಧಿಕಾರಿಗಳು, ಉಪ ನಿರ್ದೇಶಕರು ಕ್ರಮಕೈಗೊಳ್ಳಬೇಕು ಎಂದು ನಿರ್ದೇಶನ ನೀಡಿದ್ದಾರೆ.

## ಇನ್ಮುಂದೆ ಪೂರ್ವ ಪ್ರಾಥಮಿಕ ಶಾಲಾ ಮಕ್ಕಳಿಗೂ ಮಧ್ಯಾಹ್ನದ ಬಿಸಿಯೂಟ

• ಉದಯವಾಹಿನಿ, ಬೆಂಗಳೂರು

ಸರಕಾರಿ ಶಾಲೆಗಳಲ್ಲಿ ಆರಂಭಿಸಲಾದ ಪೂರ್ವ ಪ್ರಾಥಮಿಕ ತರಗತಿಯ ಮಕ್ಕಳಿಗೂ ಮೊಟ್ಟೆ, ಬಾಳೆಹಣ್ಣು ಸೇರಿದಂತೆ ಮಧ್ಯಾಹ್ನದ ಬಿಸಿಯೂಟ ಯೋಜನೆ ವಿಸ್ತರಿಸಿ ರಾಜ್ಯ ಸರಕಾರ ಆದೇಶ ಹೊರಡಿಸಿದೆ. ಪೂರ್ವ ಪ್ರಾಥಮಿಕ ತರಗತಿಗಳಿಗೆ ಮಧ್ಯಾಹ್ನದ ಬಿಸಿಯೂಟ ಯೋಜನೆ ವಿಸ್ತರಣೆ ಆಗಿರಲಿಲ್ಲ. ಈಗ ಪ್ರಧಾನ ಮಂತ್ರಿ ಪೋಷಣ ಶಕ್ತಿ ನಿರ್ಮಾಣ ಯೋಜನೆಯಡಿ ಮಧ್ಯಾಹ್ನದ ಬಿಸಿಯೂಟ, ಕ್ಷೀರಭಾಗ್ಯ ಯೋಜನೆಯಡಿ ಬಿಸಿಹಾಲು ಮತ್ತು ಮೊಟ್ಟೆ, ಬಾಳೆಹಣ್ಣು ನೀಡುವ ಕಾರ್ಯಕ್ರಮವನ್ನು ಡಿಸೆಂಬರ್ 1ರಿಂದ ಅನ್ವಯವಾಗುವಂತೆ ಅನುಷ್ಠಾನಗೊಳಿಸಲು ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಅಧೀನ ಕಾರ್ಯದರ್ಶಿ ಆಧಿರ್.ವಿ. ಶುಭಮಂಗಳಾ ಆದೇಶ ಹೊರಡಿಸಿದ್ದಾರೆ.

ಒಂದು ದಿನಕ್ಕೆ ಪ್ರತಿ ಮಗುವಿಗೆ ಆಹಾರ ತಯಾರಿಗೆ 6.78 ರೂ. ಗಳ ವೆಚ್ಚ ನಿಗದಿಪಡಿಸಲಾಗಿದೆ. ಇದರಲ್ಲಿ ಕೇಂದ್ರ ಸರಕಾರ ಪ್ರತಿ ಮಗುವಿಗೆ ದಿನಕ್ಕೆ 4.07 ರೂ. ಮತ್ತು ರಾಜ್ಯ ಸರಕಾರ 2.71 ರೂ. ಗಳನ್ನು ವ್ಯಯಿಸಲಿವೆ. ಅಲ್ಲದೆ, ವಾರದಲ್ಲಿ ನಾಲ್ಕು ದಿನ ಮೊಟ್ಟೆ/ ಬಾಳೆಹಣ್ಣು ಖರೀದಿಗಾಗಿ ಅಜೀಂ ಪ್ರೇಮ್‌ಜಿ ಫೌಂಡೇಶನ್ ಹಣಕಾಸಿನ ಸಹಾಯ ಮಾಡಲಿದೆ. ಉಳಿದ ಎರಡು ದಿನಗಳ ವೆಚ್ಚವನ್ನು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಭರಿಸಲಿದೆ ಎಂದು ಆದೇಶದಲ್ಲಿ ವಿವರಿಸಲಾಗಿದೆ.

## ನೌಕರರಿಗೆ ಋತುಚಕ್ರ ರಜೆ: ಕರ್ನಾಟಕ ಸರ್ಕಾರದಿಂದ ಮಹತ್ವದ ಆದೇಶ

• ಉದಯವಾಹಿನಿ, ಬೆಂಗಳೂರು

ರಾಜ್ಯ ಸರಕಾರಿ ಮಹಿಳಾ ನೌಕರರ ಮನೋಸ್ಥೈರ್ಯ ಹೆಚ್ಚಿಸುವ ಉದ್ದೇಶದಿಂದ ಪ್ರತಿ ತಿಂಗಳು ಒಂದು ದಿನದ ಋತುಚಕ್ರ ರಜೆ ಕಲ್ಪಿಸಲು ತೀರ್ಮಾನಿಸಿರುವ ಸರ್ಕಾರ ಈ ಸಂಬಂಧ ಮಂಗಳವಾರ ಆದೇಶ ಹೊರಡಿಸಿದೆ. ಮಹಿಳಾ ನೌಕರರಿಗೆ ಪ್ರತಿ ತಿಂಗಳು ಒಂದು ದಿನದ ಋತುಚಕ್ರ ರಜೆ ಸೌಲಭ್ಯವನ್ನು ಕೆಲ ಷರತ್ತುಗಳಿಗೆ ಒಳಪಟ್ಟಂತೆ ತಕ್ಷಣದಿಂದ ಜಾರಿಗೊಳಿಸುವಂತೆ ಸೂಚಿಸಿ ಆರ್ಥಿಕ ಇಲಾಖೆ ಆದೇಶ ಹೊರಡಿಸಿದೆ.

ಋತುಚಕ್ರ ಹೊಂದಿರುವ, 18 ರಿಂದ 52 ವಯಸ್ಸಿನ ಮಹಿಳಾ ನೌಕರರು ಈ ರಜೆ ಪಡೆಯಲು ಅರ್ಹರಿರುತ್ತಾರೆ. ಸಾಂದರ್ಭಿಕ ರಜೆಯನ್ನು ಮಂಜೂರು ಮಾಡಲು ಸಕ್ಷಮವಾದ ಪ್ರಾಧಿಕಾರಿಯು ಋತುಚಕ್ರ ರಜೆಯನ್ನು ಮಂಜೂರು ಮಾಡಬಹುದು. ಈ ರಜೆಯನ್ನು ಪಡೆಯಲು ಯಾವುದೇ ವೈದ್ಯಕೀಯ ಪ್ರಮಾಣ ಪತ್ರವನ್ನು ಒದಗಿಸುವ ಅಗತ್ಯವಿಲ್ಲ ಎಂದು ಸ್ಪಷ್ಟಪಡಿಸಲಾಗಿದೆ.

## ಸುಗಮವಾಗಿ ಅಧಿವೇಶನ ನಡೆಸಲು ತಯಾರಿ

• ಉದಯವಾಹಿನಿ, ಬೆಳಗಾವಿ

'ಇಲ್ಲಿನ ಸುವರ್ಣ ವಿಧಾನಸೌಧದಲ್ಲಿ ಈ ಬಾರಿ ಸುಗಮವಾಗಿ ವಿಧಾನಮಂಡಲ ಚಳಿಗಾಲದ ಅಧಿವೇಶನ ನಡೆಸಲು ಜಿಲ್ಲಾಡಳಿತದ ವತಿಯಿಂದ ಎಲ್ಲಾ ರೀತಿಯ ತಯಾರಿ ಮಾಡಿಕೊಂಡಿದ್ದೇವೆ' ಎಂದು ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್ ಹೇಳಿದರು. ಇಲ್ಲಿನ ಸುವರ್ಣ ವಿಧಾನಸೌಧಕ್ಕೆ ಮಂಗಳವಾರ ಭೇಟಿ ನೀಡಿ, ಅಧಿವೇಶನದ ಸಿದ್ಧತೆ ಪರಿಶೀಲಿಸಿದ ನಂತರ ಸುದ್ದಿಗಾರರೊಂದಿಗೆ ಅವರು ಮಾತನಾಡಿದರು.



'ಕಳೆದ ವರ್ಷ ಉತ್ತಮವಾಗಿ ಅಧಿವೇಶನ ನಡೆದಿತ್ತು. ಈ ಬಾರಿಯೂ ಯಾವುದೇ ಸಮಸ್ಯೆಯಾಗದು. ವಿವಿಧ ಇಲಾಖೆಗಳ ಮುಖ್ಯಸ್ಥರ ಜತೆ ಚರ್ಚಿಸಿ ಅಗತ್ಯ ಕ್ರಮ ವಹಿಸಿದ್ದೇವೆ' ಎಂದರು.

'ಅಧಿವೇಶನ ಹಿನ್ನೆಲೆಯಲ್ಲಿ ವಸತಿಗಾಗಿ 3 ಸಾವಿರ ಕೊಠಡಿ ಕಾಯ್ದಿರಿಸಿದ್ದೇವೆ. 700 ವಾಹನ ಬಳಸಿಕೊಳ್ಳಲಿದ್ದೇವೆ. ಲೋಕೋಪಯೋಗಿ ಇಲಾಖೆಯಿಂದ ಬೃಹತ್ ಆಕಾರದ ರಾಷ್ಟ್ರಧ್ವಜ ಪ್ರದರ್ಶಿಸಲಿದ್ದೇವೆ' ಎಂದು ಹೇಳಿದರು.

**ಪಾರ್ಕ್ ಉದ್ಘಾಟನೆ:** 'ಲೋಕೋಪಯೋಗಿ ಇಲಾಖೆ 4.5 ಕೋಟಿಯ ವೆಚ್ಚದಲ್ಲಿ ಸೌಧದ ಆವರಣದಲ್ಲಿ ನಿರ್ಮಿಸಿದ ಪಾರ್ಕ್ ಅನ್ನು ಇದೇ ಅಧಿವೇಶನದಲ್ಲಿ ಉದ್ಘಾಟಿಸಲಿದ್ದೇವೆ.

ಸಿದ್ದರಾಮಯ್ಯ, ಡಿಸಿಎಂ ಡಿ.ಕೆ.ಶಿವಕುಮಾರ್ ಕಾರ್ಯಕ್ರಮದಲ್ಲಿ ಭಾಗವಹಿಸುವರು. ವಿವಿಧ ರೀತಿಯ ಕಾರಂಜಿ ಒಳಗೊಂಡ ಪಾರ್ಕ್‌ಗೆ ಜನರು ಭೇಟಿ ನೀಡಿ ನಿರಾಳರಾಗಬಹುದು ಎಂದು ತಿಳಿಸಿದರು.

## ಪದೇ ಪದೇ ರಾಜ್ಯಕ್ಕೆ ಆಗಮಿಸುತ್ತಿದ್ದ ಸುರ್ಜೇವಾಲ ಸೈಲೆಂಟ್

### ಸುರ್ಜೇವಾಲ ವಿರುದ್ಧ ಹೈಕಮಾಂಡ್ ನಾಯಕರಿಗೆ ದೂರು ಹೋಗಿದ್ಯಾ

• ಉದಯವಾಹಿನಿ, ಬೆಂಗಳೂರು

ರಾಜ್ಯ ಕಾಂಗ್ರೆಸ್‌ನಲ್ಲಿ ಇದೀಗ ಬ್ರೇಕ್ ಫಾಸ್ಟ್ ಮೀಟಿಂಗ್ ಸದ್ದು. ಈ ನಡುವೆ ಕಾಂಗ್ರೆಸ್ ಪಕ್ಷದ ರಾಜ್ಯ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲ ತೆರೆಯಲ್ಲಿ ಎಲ್ಲೂ ಕಾಣಿಸುತ್ತಿಲ್ಲ. ದಿಢೀರ್ ಆಗಿ ಉಸ್ತುವಾರಿಯ 'ನಾಪತ್ತೆ' ನಾನಾ ಅನುಮಾನಗಳಿಗೆ ಕಾರಣವಾಗಿದೆ. ಪದೇ ಪದೇ ರಾಜ್ಯಕ್ಕೆ ಆಗಮಿಸುತ್ತಿದ್ದ ಸುರ್ಜೇವಾಲ ಯಾಕೆ ಇದ್ದಕ್ಕಿದ್ದಂತೆ ಮರೆಯಾದರು ಎಂಬ ಪ್ರಶ್ನೆ ರಾಜಕೀಯ ಪಡಸಾಲೆಯಲ್ಲಿ ಚರ್ಚೆಯನ್ನು ಹುಟ್ಟುಹಾಕಿದೆ.

ರಾಜ್ಯದಲ್ಲಿ ಕಾಂಗ್ರೆಸ್ ವಿರೋಧ ಪಕ್ಷದಲ್ಲಿದ್ದಾಗ ಸಿಎಂ ಯಾರಾಗುತ್ತಾರೆ ಎಂಬ ಪ್ರಶ್ನೆ ಉದ್ಭವಿಸಿತ್ತು. ಅಂದೂ ಉಸ್ತುವಾರಿ ಆಗಿದ್ದ ಸುರ್ಜೇವಾಲ ಸಿದ್ದರಾಮಯ್ಯ ಮತ್ತು ಡಿಕೆ ಶಿವಕುಮಾರ್ ನಡುವಿನ ಗೊಂದಲಗಳನ್ನು ಬಗೆಹರಿಸುವಲ್ಲಿ ಪ್ರಮುಖ ಪಾತ್ರ ನಿರ್ವಹಣೆಯನ್ನು ಮಾಡಿದ್ದರು.

ಬಹುತೇಕ ಪತ್ರಿಕಾಗೋಷ್ಠಿಯಲ್ಲಿ ಅವರು ಸಿದ್ದರಾಮಯ್ಯ ಮತ್ತು ಡಿಕೆ ಶಿವಕುಮಾರ್ ಮಧ್ಯೆ ಕುಳಿತುಕೊಳ್ಳುತ್ತಿದ್ದರು. ಪತ್ರಕರ್ತರ ಪ್ರಶ್ನೆಗಳಿಗೂ ಅವರೇ ಮಧ್ಯಪ್ರವೇಶಿಸಿ ಉತ್ತರ ಕೊಡುತ್ತಿದ್ದರು.

ಸಿದ್ದರಾಮಯ್ಯ ಹಾಗೂ ಡಿಕೆ ಶಿವಕುಮಾರ್ ನಡುವೆ ಯಾವುದೇ ಗೊಂದಲ ಇಲ್ಲ. ಇಬ್ಬರೂ ಒಗ್ಗಟ್ಟಿನಲ್ಲಿ ಇದ್ದಾರೆ ಎಂದು ಬ್ಯಾಲನ್ಸ್ ಮಾಡುವ ಪ್ರಯತ್ನ ನಡೆಸುತ್ತಿದ್ದರು. ಇನ್ನು ಕಾಂಗ್ರೆಸ್ ರಾಜ್ಯದಲ್ಲಿ ಅಧಿಕಾರಕ್ಕೆ ಬಂದ ಸಂದರ್ಭದಲ್ಲೂ ಸುರ್ಜೇವಾಲ ಬಹುಮುಖ್ಯ ಪಾತ್ರ ನಿರ್ವಹಣೆ ಮಾಡಿದ್ದರು. ರಾಜ್ಯಕ್ಕೆ ಪದೇ ಪದೇ ಅವರು ಆಗಮಿಸುತ್ತಿದ್ದರು. ಗೊಂದಲಗಳು ಕಾಣಿಸಿಕೊಂಡಾಗ ಅದನ್ನು ಬಗೆಹರಿಸುವ ಪ್ರಯತ್ನ ನಡೆಸುತ್ತಿದ್ದರು. ಆದರೆ ಇದೀಗ ಸನ್ನಿವೇಶ ಬದಲಾವಣೆ ಆಗಿದೆ, ಸುರ್ಜೇವಾಲ ಪಾತ್ರವೂ ಬದಲಾವಣೆ ಆಗಿದೆ.

**ಸುರ್ಜೇವಾಲ ವಿರುದ್ಧ ಆರೋಪ:** ರಾಜ್ಯದಲ್ಲಿ ರಣದೀಪ್ ಸಿಂಗ್ ಸುರ್ಜೇವಾಲ ಅವರು ಉಸ್ತುವಾರಿಯಾಗಿ ಸುರ್ಜೇವಾಲ ಅವರು ಏಕಪಕ್ಷೀಯವಾಗಿ ನಡೆದುಕೊಳ್ಳುತ್ತಾರೆ ಎಂಬ ಆರೋಪ ಕಾಂಗ್ರೆಸ್ ವಲಯದಲ್ಲಿ ಇದೆ. ಕೆಲವು ತಿಂಗಳ ಹಿಂದೆ ಸುರ್ಜೇವಾಲ ವಿರುದ್ಧವಾಗಿ ಆಂತರಿಕವಾಗಿ ಸಹಿ ಸಂಗ್ರಹ ಮಾಡಲಾಗಿತ್ತು. ಕಾಂಗ್ರೆಸ್ ಪಕ್ಷದ ಒಂದು ಬಣ ಸುರ್ಜೇವಾಲ ವಿರುದ್ಧ ಹೈಕಮಾಂಡ್ ಬಳಿ ತಮ್ಮ ಆಕ್ಷೇಪ ವ್ಯಕ್ತಪಡಿಸಿತ್ತು.

ಅದರಲ್ಲೂ ಸಿಎಂ ಸಿದ್ದರಾಮಯ್ಯ ಇಷ್ಟಪಡುವ ಅವರ ಆಪ್ತರು ಸುರ್ಜೇವಾಲ ಬಗ್ಗೆ ಅಸಮಾಧಾನ ಹೊಂದಿದ್ದಾರೆ. ಈ ಎಲ್ಲವೂ ಸುರ್ಜೇವಾಲ ಅವರಿಗೆ ಹಿನ್ನಡೆ ಉಂಟು ಮಾಡಿದೆ. ಹೀಗಾಗಿ ಈ ಬಾರಿ ಹೈಕಮಾಂಡ್ ನಾಯಕರು ನೇರವಾಗಿ ಅಖಾಡಕ್ಕೆ ಇಳಿದಿದ್ದಾರೆ. ರಾಹುಲ್ ಗಾಂಧಿ ಅವರು ನೇರವಾಗಿ ಮಲ್ಲಿಕಾರ್ಜುನ ಖರ್ಗೆ ಅವರ ಬಳಿಯೇ ರಾಜ್ಯದ ಗೊಂದಲಗಳ ಬಗ್ಗೆ ಮಾತುಕತೆ ನಡೆಸಿದ್ದಾರೆ. ಇದೆಲ್ಲದರ ಪರಿಣಾಮ ಸುರ್ಜೇವಾಲ ಅವರು ಸೈಲೆಂಟಾಗಿದ್ದಾರೆ ಎನ್ನಲಾಗುತ್ತಿದೆ.



**ದಿಢೀರ್ ಸೈಲೆಂಟ್**

ರಾಜ್ಯದಲ್ಲಿ ಸಕ್ರಿಯವಾಗಿದ್ದ ಸುರ್ಜೇವಾಲ ದಿಢೀರ್ ಆಗಿ ಸೈಲೆಂಟ್ ಆಗಿದ್ದಾರೆ. ಅಧಿಕಾರ ಹಸ್ತಾಂತರ, ಸಂಪುಟ ಪುನಾರಚನೆ ಸಂಗತಿಗಳು ಗೊಂದಲ ಸೃಷ್ಟಿ ಮಾಡುತ್ತಿದ್ದರೂ ಸುರ್ಜೇವಾಲ ಎಲ್ಲಿಯೂ ಎಂಟ್ರಿ ಕೊಡುತ್ತಿಲ್ಲ. ಡಿಕೆ ಶಿವಕುಮಾರ್ ಆಪ್ತ ಶಾಸಕರು ದೆಹಲಿಗೆ ತೆರಳಿದ್ದ ಸಂದರ್ಭದಲ್ಲೂ ಸುರ್ಜೇವಾಲ ಭೇಟಿಗೆ ಸಾಧ್ಯವಾಗಿರಲಿಲ್ಲ. ಯಾಕಾಗಿ ಈ ರೀತಿಯ ಹೆಜ್ಜೆ ಇಟ್ಟಿದ್ದಾರೆ ಎಂಬುವುದು ಕುತೂಹಲ ಕೆರಳಿಸಿದೆ.

## ಪೋಕ್ಸೋ ಪ್ರಕರಣದಲ್ಲಿ ಬಿಎಸ್‌ ಯಡಿಯೂರಪ್ಪಗೆ ತಾತ್ಕಾಲಿಕ ರಿಲೀಫ್

### ● ಬಿಎಸ್‌ವೈ ವಿರುದ್ಧ ಬಾಲಕಿಗೆ ಲೈಂಗಿಕ ಕಿರುಕುಳ ● ಸುಪ್ರೀಂ ಕೋರ್ಟ್‌ನಿಂದ ಮಧ್ಯಂತರ ತಡೆ

• ಉದಯವಾಹಿನಿ, ಬೆಂಗಳೂರು

ಮಾಜಿ ಸಿಎಂ ಬಿಎಸ್ ಯಡಿಯೂರಪ್ಪ ಅವರಿಗೆ ಪೋಕ್ಸೋ ಪ್ರಕರಣದಲ್ಲಿ ಸದ್ಯ ತಾತ್ಕಾಲಿಕ ರಿಲೀಫ್ ಸಿಕ್ಕಿದೆ.


ಬಿಎಸ್ ಯಡಿಯೂರಪ್ಪನವರ ವಿಚಾರಣೆ ಮಧ್ಯಂತರ ತಡೆಯನ್ನು ಸುಪ್ರೀಂ ಕೋರ್ಟ್ ನೀಡಿದೆ. ಪೋಕ್ಸೋ ಪ್ರಕರಣದಲ್ಲಿ ಯಡಿಯೂರಪ್ಪರಿಗೆ ಸಮನ್ಸ್ ಜಾರಿಗೊಳಿಸಲಾಗಿತ್ತು.

ಈ ಪ್ರಕರಣದಲ್ಲಿ ತನಿಖೆಯ ಉದ್ದೇಶದಿಂದ ಬಿಎಸ್‌ವೈಗೆ ನೀಡಿದ್ದ ಸಮನ್ಸ್ ಪ್ರಶ್ನಿಸಿ ಅವರು ಸುಪ್ರೀಂ ಕೋರ್ಟ್ ಮೊರೆ ಹೋಗಿದ್ದರು. ಅರ್ಜಿ ವಿಚಾರಣೆ ನಡೆಸಿದ ಸುಪ್ರೀಂ ಕೋರ್ಟ್ ಇದೀಗ ಮಧ್ಯಂತರ ತಡೆ ನೀಡಿದೆ.

ಸುಪ್ರೀಂ ಕೋರ್ಟ್ ಮುಖ್ಯ ನ್ಯಾಯಮೂರ್ತಿಗಳ ಪೀಠದಲ್ಲಿ ಅರ್ಜಿ ವಿಚಾರಣೆ ನಡೆಸಲಾಗಿತ್ತು. ಈ ವೇಳೆ ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಹೈಕೋರ್ಟ್ ತೀರ್ಪನ್ನು ತಪ್ಪಾಗಿ ಅರ್ಥೈಸಲಾಗಿದೆ. ಹಿಂದಿನ ಸುತ್ತಿಯ ತೀರ್ಪಿನ ಕಾರಣ ನೀಡಿ ಹೈಕೋರ್ಟ್ ಪರಿಗಣಿಸಲಿಲ್ಲ ಎಂದು ಹಿರಿಯ ವಕೀಲರು ಯಡಿಯೂರಪ್ಪ ಪರವಾಗಿ ವಾದ ಮಂಡಿಸಿದ್ದರು. ವಾದ ಆಲಿಸಿದ ಸುಪ್ರೀಂ ಕೋರ್ಟ್ ಪೋಕ್ಸೋ ಪ್ರಕರಣದಲ್ಲಿ ವಿಚಾರಣೆಗೆ ಮಧ್ಯಂತರ ತಡೆಯನ್ನು ನೀಡಿದೆ. ಇದರಿಂದಾಗಿ ಯಡಿಯೂರಪ್ಪನವರಿಗೆ ತಾತ್ಕಾಲಿಕ ರಿಲೀಫ್ ಸಿಕ್ಕಂತಾಗಿದೆ.

**ಅರ್ಜಿ ವಿಚಾರಣೆ ನಡೆಸಿದ ಸುಪ್ರೀಂ**

**ಪ್ರಕರಣ ಏನು:** ಮಾಜಿ ಸಿಎಂ ಬಿಎಸ್ ಯಡಿಯೂರಪ್ಪನವರ ವಿರುದ್ಧ ಅಪ್ರಾಪ್ತ ವಯಸ್ಸಿನ ಬಾಲಕಿಗೆ ಲೈಂಗಿಕ ಕಿರುಕುಳ ನೀಡಿದ ಆರೋಪ ಇದೆ.



**ಪ್ರಕರಣವನ್ನು ಮುಚ್ಚಿಹಾಕಲು ಪ್ರಯತ್ನಿಸಿದ ಆರೋಪ**

ಈ ಪ್ರಕರಣ ಸಾಕಷ್ಟು ಸದ್ದು ಗದ್ದಲಕ್ಕೆ ಕಾರಣವಾಗಿತ್ತು. ಪ್ರಕರಣ ಗಂಭೀರ ಸ್ವರೂಪ ಪಡೆದುಕೊಂಡ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರವು ಈ ಪ್ರಕರಣವನ್ನು ಸಿಐಡಿಗೆ ವರ್ಗಾವಣೆ ಮಾಡಿತ್ತು. ಸಿಐಡಿ ತನಿಖೆಯನ್ನು ನಡೆಸಿ, ಸಾಕ್ಷ್ಯ ನಾಶ ಮತ್ತು ಪ್ರಕರಣವನ್ನು ಮುಚ್ಚಿಹಾಕಲು ಪ್ರಯತ್ನಿಸಿದ ಆರೋಪದ ಅಡಿಯಲ್ಲಿ ಬಿಎಸ್ ಯಡಿಯೂರಪ್ಪ ಮತ್ತು ಮೂವರು ಸಹಾಯಕರ ವಿರುದ್ಧ 750 ಪುಟಗಳ ಆರೋಪ ಪಟ್ಟಿ ಸಲ್ಲಿಸಿದೆ.

ಡಾಲರ್ಸ್ ಕಾಲೋನಿಯಲ್ಲಿನ ನಿವಾಸದಲ್ಲಿ 17 ವರ್ಷದ ಬಾಲಕಿ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ್ದಾರೆ ಎಂಬ ಆರೋಪ ಕೇಳಿಬಂದಿತ್ತು. ಸಮಸ್ಯೆ ಪರಿಹಾರ ನೀಡುವಂತೆ ಸಹಾಯ ಕೇಳಿ ತಾಯಿ ಜೊತೆಗೆ ಬಾಲಕಿ ಬಂದಿದ್ದರು. ಈ ಸಂದರ್ಭದಲ್ಲಿ ಬಿಎಸ್‌ವೈ ಬಾಲಕಿ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ್ದಾರೆ ಎಂಬುವುದು ಆರೋಪವಾಗಿದೆ. ಈ ಸಂಬಂಧಿಸಿದಂತೆ ಮಾರ್ಚ್ 2024ರಲ್ಲಿ ಬಾಲಕಿಯ ತಾಯಿ ದೂರು ನೀಡಿದ್ದರು. ಈ ದೂರಿನ ಅನ್ವಯ ಲೈಂಗಿಕ ಅಪರಾಧಗಳಿಂದ ಮಕ್ಕಳ ರಕ್ಷಣೆ ಕಾಯ್ದೆ( ಪೋಕ್ಸೋ) ಅಡಿಯಲ್ಲಿ ನಗರದ ಸದಾಶಿವನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣವನ್ನು ದಾಖಲು ಮಾಡಲಾಗಿತ್ತು. ಈ ನಡುವೆ ದೂರು ನೀಡಿದ್ದ ಬಾಲಕಿಯ ತಾಯಿ ಮತ್ತು ಆ ಬಾಲಕಿ ಇಬ್ಬರೂ ಈಗಾಗಲೇ ಮ್ಯಾಜಿಸ್ಟ್ರೇಟ್ ಮುಂದೆ ಹೇಳಿಕೆಯನ್ನು ನೀಡಿದ್ದಾರೆ. ಬಾಲಕಿಯ ತಾಯಿ ಮೇ 26, 2024ರಂದು ಮೃತಪಟ್ಟಿದ್ದಾರೆ. ಇದಕ್ಕೆ ಅನಾರೋಗ್ಯ ಕಾರಣ ಎಂದು ಹೇಳಲಾಗುತ್ತಿದೆ.



**ಈ ದಿನದ ದರ** ಪೆಟ್ರೋಲ್: 103.49 ₹/L ಡೀಸೆಲ್ : 91.64 ₹/L ಬಂಗಾರ: ₹12,987/Gram24ct ₹11,905/Gram22ct ಬೆಳ್ಳಿ: ₹188.00/Gram



## ಸಿದ್ಧಸೂಕ್ತಿ

**ಡಾ ಆರೂಢಭಾರತೀ ಸ್ವಾಮೀಜಿ**
**ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ**
**ರಾಮೋಹಳ್ಳಿ**

### ಲಿಂಗಾಯತಧರ್ಮ: ಸಿದ್ಧೇಶ್ವರ ಶ್ರೀ


ಎರಡು ಸಾವಿರದ ಮೂರರಲ್ಲಿ ಬೆಂಗಳೂರಿನಲ್ಲಿ ಜ್ಞಾನಯೋಗಾಶ್ರಮದ ಸಿದ್ಧೇಶ್ವರ ಶ್ರೀಗಳ ತಿಂಗಳ ಪ್ರವಚನ. ಹಿರಿಯರೊಬ್ಬರು ಲಿಂಗಾಯತ ಧರ್ಮದ ಕರಡುಪ್ರತಿ ತಂದು ಶ್ರೀಗಳ ಕೈಗಿತ್ತರು. ಸ್ವೀಕರಿಸಿ ಕಣ್ಣಾಡಿಸಿ ಮುಗುಳ್ನಕ್ಕು ನನ್ನ ಕೈಗಿತ್ತರು. ಯಾವ ಪ್ರತಿಕ್ರಿಯೆಯೂ ಇಲ್ಲ. ಲಿಂಗಾಯತಧರ್ಮವಾದಿಗಳು ವೇದ ಆಗಮ ಪುರಾಣ ಭಗವದ್ಗೀತೆ ವೀರಶೈವ ಸಿದ್ಧಾಂತ ಶಿಖಾಮಣಿ ಇವೆಲ್ಲವನ್ನೂ ಧಿಕ್ಕರಿಸುವರು. ಸಿದ್ಧೇಶ್ವರ ಶ್ರೀಗಳದ್ದು ತೆರೆದ ಹೃದಯ ಮತ್ತು ಒಳಿತೆಲ್ಲವನ್ನೂ ಒಪ್ಪಿದರು. ಗುರುದೇವ ಮಲ್ಲಿಕಾರ್ಜುನ ಶಿವಯೋಗಿಗಳ

ಉಪನ್ಯಾಸ ಸಂಗ್ರಹದ ಸಿದ್ಧಾಂತ ಶಿಖಾಮಣಿ ಅವರ ಮೊದಲ ಕೃತಿ. ಭಗವದ್ಗೀತೆ ಶಿವಸೂತ್ರ ನಾರದಭಕ್ತಿಸೂತ್ರ ಪಾತಂಜಲ ಯೋಗಸೂತ್ರ ಇವು ಸಂಸ್ಕೃತಾಧಾರಿತ ಕೃತಿಗಳು. ಅಲ್ಲಮಪ್ರಭುದೇವರ ವಚನ ನಿರ್ವಚನ ಶ್ರೀಗಳ ಅಮೋಘ ಕೃತಿ. Nijaguna's exposition of spiritual wisdom ನಿಜಗುಣ ಶಿವಯೋಗಿಗಳ ಅಧ್ಯಾತ್ಮ ಕುರಿತಾದ ಇಂಗ್ಲಿಷ್ ಕೃತಿ. ಭಗವಚ್ಚಿಂತನ ಮುಂತಾದ ಕೃತಿಗಳಲ್ಲಿ ಉಪನಿಷತ್ತು ವಚನಸಾಹಿತ್ಯ ಮುಂತಾದ್ದನ್ನು ಆಧರಿಸಿದ ವಿಷಯಗಳನ್ನು ಕಟ್ಟಿಕೊಟ್ಟಿದ್ದಾರೆ. ಅವರ ಪ್ರವಚನ ವೇದೋಪನಿಷತ್ ಭಗವದ್ಗೀತೆ ವಚನ ಜೈನ ಬೌದ್ಧ - ಸಿಖ್ಖ ಕ್ರೈಸ್ತ ಇಸ್ಲಾಂ - ವಿಜ್ಞಾನ ಎಲ್ಲವನ್ನೂ ಒಳಗೊಂಡಿತ್ತು. ಅವರ ನಡೆ ನುಡಿ ಆ ನೋ ಭದ್ರಾಃ ಕ್ರತವೋ ಯಂತು ವಿಶ್ವತಃ = ಸುಭದ್ರ, ಗೊತ್ತು ಗುರಿ ಸಂಕಲ್ಪಗಳು ವಿಶ್ವಾದ್ಯಂತದಿಂದ ನಮ್ಮೆಡೆಗೆ ಹರಿದು ಬರಲಿ ಎಂಬ ಋಙ್ಮಂತ್ರವನ್ನು ನೆನಪಿಸುತ್ತಿದ್ದವು!

## ಪದ್ಮನಾಭನಗರದಲ್ಲಿ ವರಪ್ರದ ಆಂಜನೇಯ ಜಯಂತಿ: ವಿಶೇಷ ಪೂಜೆ, ಹೋಮ-ಹವನ

• **ಉದಯವಾಹಿನಿ, ಬೆಂಗಳೂರು**

ಬನಶಂಕರಿಯ ಪದ್ಮನಾಭನಗರದಲ್ಲಿ ಶ್ರೀ ವರಪ್ರದ ಆಂಜನೇಯ ಸ್ವಾಮಿ ದೇವಾಲಯದಲ್ಲಿ ಹನುಮ ಜಯಂತಿ ಪ್ರಯುಕ್ತ ಇಂದು ವಿಶೇಷ ಪೂಜೆ, ಹೋಮ-ಹವನ ಕಾರ್ಯಕ್ರಮಗಳು ಭಕ್ತಿಭಾವದಿಂದ ನೆರವೇರಿದವು. ಸುಮಾರು



1,500ಕ್ಕೂ ಹೆಚ್ಚು ಭಕ್ತರು ದೇವರ ದರ್ಶನ ಪಡೆದು ಪುಣ್ಯಲಾಭ ಪಡೆದರು. ಭಕ್ತರಿಗೆ ಉಚಿತ ಮಹಾ ಪ್ರಸಾದ ವ್ಯವಸ್ಥೆಯನ್ನು ಮಾಡಲಾಗಿತ್ತು.

ಸಂಜೆಯ ವೇಳೆಯಲ್ಲಿ ಸಾಂಸ್ಕೃತಿಕ ಹಾಗೂ ಸಂಗೀತ ಕಾರ್ಯಕ್ರಮಗಳು ಏರ್ಪಡಿಸಲಾಗಿದ್ದು, ಸ್ಥಳೀಯ ಕಲಾವಿದರು ಭಾಗವಹಿಸಿ ಭಕ್ತರನ್ನು ಆಕರ್ಷಿಸಿದರು

## ಕನ್ನಡ ಭಾಷೆ, ನಾಡು, ನುಡಿ, ಜಲದ ಬಗ್ಗೆ ಅಪಾರವಾದ ಗೌರವ,ಕಾಳಜಿ ವಹಿಸಿ


ಉದಯವಾಹಿನಿ ಚಿತ್ರ

• **ಉದಯವಾಹಿನಿ, ಕೆ.ಆರ್.ಪುರ**

ಕನ್ನಡ ಭಾಷೆ, ನಾಡು, ನುಡಿ, ಜಲದ ಬಗ್ಗೆ ಅಪಾರವಾದ ಗೌರವ ಮತ್ತು ಕಾಳಜಿ ವಹಿಸುವಂತೆ ಯುವಕರಿಗೆ ಮಹದೇವಪುರ ಟಾಸ್ಕ್ ಫೋರ್ಸ್ ಆರೋಗ್ಯ ಮತ್ತು ವಿಪತ್ತು ಧಳದ ಅಧ್ಯಕ್ಷ ಮಾರಪ್ಪ ಅವರು ಸಲಹೆ ನೀಡಿದರು.

ಮಹದೇವಪುರ ಕ್ಷೇತ್ರದ ಅಂಬೇಡ್ಕರ್ ಗುಟ್ಟ ಗ್ರಾಮದ ಯುವಕರು ಆಯೋಜಿಸಿದ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಿ ಧ್ವಜಾರೋಹಣ ನೆರವೇರಿಸಿ ಮತ್ತು ಭುವನೇಶ್ವರಿ ತಾಯಿಗೆ ಪುಷ್ಪನಮನ ಸಲ್ಲಿಸಿ ಮಾತನಾಡಿದ ಅವರು. ಅನ್ಯಭಾಷಿಕರಿಗೆ ಕನ್ನಡ ಕಲಿಸಿ, ಕನ್ನಡದ ಇತಿಹಾಸ, ಸಂಸ್ಕೃತಿ, ಪರಂಪರೆಯ ಬಗ್ಗೆ ಇಂದಿನ ಯುವಸಮುದಾಯ ಕಾಳಜಿ ವಹಿಸಿ ಗೌರವಿಸಬೇಕಿದೆ ಎಂದರು. ಈ ಭಾಗದ ಜನರ ಕಲ್ಯಾಣ ಕಾರ್ಯಗಳನ್ನು, ಜನಪರ ಸೇವೆ, ಮೂಲಭೂತ ಸೌಕರ್ಯಗಳನ್ನು ನೀಡಿ ಸ್ಲಾಂ ಬದಲಿಗೆ ಇನ್ನು ಮುಂದೆ ಅಂಬೇಡ್ಕರ್ ನಗರ ಮೊದಲನೇ ಅಡರಸ್ತೆ ಎಂದು ಮರುನಾಮಕರಣ ಮಾಡಲಾಗಿದೆ. ನಮ್ಮ ನಾಯಕರಾದ ಮಾಜಿ ಸಚಿವ ಅರವಿಂದ ಲಿಂಬಾವಳಿ ಅವರು ಸ್ಮಶಾನ ಪಕ್ಕಸಲ್ಲಿದ ಬಡ ಸ್ಲಾಂನಿವಾಸಿಗಳಿಗೆ 94ಸಿ ಅಡಿಯಲ್ಲಿ ಹಕ್ಕುಪತ್ರ ವಿತರಿಸಿದ ಕಾರಣ ಇಂದು ಈ ಸ್ಥಳಕ್ಕೆ ಕೋಟ್ಯಾಂತರ ಮೌಲ್ಯದ ಬೆಲೆ ಬಂದಿದೆ. ನಿಮ್ಮ ಜಾಗವನ್ನು ಮಾರಾಟ ಮಾಡದೆ ರಕ್ಷಿಸಿಕೊಳ್ಳಿ ಎಂದರು. ಇದೇವೇಳೆ ಕಾರ್ಯಕ್ರಮದಲ್ಲಿ ಅನ್ನ ದಾಸೋಹ, ಸಿಹಿ ವಿತರಣೆ ಮಾಡಿದರು. ಶಿಕ್ಷಕರಾದ ಸೋಣ್ಣಪ್ಪ ಗ್ರಾಮದ ಮುಖಂಡರು, ಕಾರ್ಯಕರ್ತರು ಸೇರಿದಂತೆ ಸ್ಥಳೀಯ ವಾಸಿಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

## ಕನಕಪುರದಲ್ಲಿ ಮಾಜಿ ಶಾಸಕ ಆರ್ ವಿ ದೇವರಾಜ್ ಅಂತ್ಯಕ್ರಿಯೆ

• **ಉದಯವಾಹಿನಿ, ಬೆಂಗಳೂರು**

ಹೃದಯಾಘಾತದಿಂದ ನಿಧನರಾದ ಕಾಂಗ್ರೆಸ್ ಮಾಜಿ ಶಾಸಕ ಆರ್‌ವಿ ದೇವರಾಜ್ ಅಂತ್ಯಕ್ರಿಯೆಯನ್ನು ನಡೆಯಲಿದೆ. ಮೈಸೂರಿನ ಜಯದೇವ ಆಸ್ಪತ್ರೆಯಲ್ಲಿದ್ದ ಮೃತದೇಹವನ್ನು ಬೆಳಗ್ಗೆ ಆ್ಯಂಬುಲೆನ್ಸ್ ಮೂಲಕ ಕಲಾಸಿಪಾಳ್ಯ ಬಳಿಯ ಅವರ ನಿವಾಸಕ್ಕೆ ತರಲಾಯಿತು. ಜೆಸಿ ರಸ್ತೆಯ ಪಕ್ಷದ ಕಚೇರಿ ಬಳಿ ಸಾರ್ವಜನಿಕ ವ್ಯವಸ್ಥೆಗೆ ವ್ಯವಸ್ಥೆ ಕಲ್ಪಿಸಲಾಗಿದೆ. ಅವರ ಹುಟ್ಟುಹಬ್ಬದ ಹಿನ್ನೆಲೆಯಲ್ಲಿ ಅಂದೇ ಕನಕಪುರ ಸೋಮನಹಳ್ಳಿಯ ತೋಟದ ಮನೆಯಲ್ಲಿ ಅಂತ್ಯಕ್ರಿಯೆ ನಡೆಸಲಾಗುವುದು ಎಂದು ಕುಟುಂಬ ಸದಸ್ಯರು ಮಾಹಿತಿ ನೀಡಿದ್ದಾರೆ.

ಹುಟ್ಟುಹಬ್ಬ ಆಚರಣೆಗೂ ಮೊದಲು ದೇವರಾಜ್ ಅವರು ಚಾಮುಂಡಿ ತಾಯಿಯ ದರ್ಶನಕ್ಕೆಂದು ನಿನ್ನೆ ಮೈಸೂರಿಗೆ ಕಾರಿನಲ್ಲಿ ಪ್ರಯಾಣಿಸುತ್ತಿದ್ದರು. ಕಾರಿನಲ್ಲಿ ಪ್ರಯಾಣಿಸುತ್ತಿದ್ದಾಗಲೇ ಅವರಿಗೆ ಹೃದಯಾಘಾತವಾಗಿದ್ದು ಕೂಡಲೇ ಅವರನ್ನು ಮೈಸೂರಿನ ಅಪೋಲೋ ಆಸ್ಪತ್ರೆಗೆ ದಾಖಲಿಸಲಾಗಿತ್ತು. ನಂತರ ಹೆಚ್ಚಿನ ಚಿಕಿತ್ಸೆಗೆ ಜಯದೇವ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಆದರೆ ಚಿಕಿತ್ಸೆ ಫಲಿಸದೇ ಆರ್‌ವಿ ದೇವರಾಜ್ ಕೊನೆಯುಸಿರೆಳೆದಿದ್ದಾರೆ.

1957 ರಲ್ಲಿ ಜನಿಸಿದ ಅವರು 3 ಬಾರಿ ಶಾಸಕ, ಒಂದು ಬಾರಿ ಪರಿಷತ್ ಸದಸ್ಯರಾಗಿದ್ದರು. 2004ರಲ್ಲಿ ಅವರು ಚಾಮರಾಜಪೇಟೆ ಕ್ಷೇತ್ರವನ್ನು ಎಸ್.ಎಂ. ಕೃಷ್ಣ ಅವರಿಗೆ ಕ್ಷೇತ್ರ ಬಿಟ್ಟುಕೊಟ್ಟು ಸುದ್ದಿಯಾಗಿದ್ದರು. 1989ರಲ್ಲಿ ಮೊದಲ ಬಾರಿಗೆ ಶಾಸಕರಾದ ಅವರು 2 ಬಾರಿ ಕೆಎಸ್‌ಆರ್‌ಟಿಸಿ ಅಧ್ಯಕ್ಷ ಹಾಗೂ ಕೊಳೆಗೇರಿ ಅಭಿವೃದ್ಧಿ ಮಂಡಳಿ ಅಧ್ಯಕ್ಷರಾಗಿದ್ದರು. ಆದರೆ ಕೊನೆಯವರೆಗೆ ಸಚಿವ ಸ್ಥಾನ ಒಲಿದಿರಲಿಲ್ಲ. 2018 ಹಾಗೂ 2023ರ ಚುನಾವಣೆಯಲ್ಲಿ ಚಿಕ್ಕಪೇಟೆ ಕ್ಷೇತ್ರದಲ್ಲಿ ಬಿಜೆಪಿಯ ಉದಯ್ ಗರುಡಾಚಾರ್ ವಿರುದ್ಧ ದೇವರಾಜ್ ಸೋತಿದ್ದರು.

**ಸಿಎಂ ಡಿಕೆಶಿ ಸಂತಾಪ:** ಮಾಜಿ ಶಾಸಕ ಆರ್.ವಿ.ದೇವರಾಜ್ ಅವರ ನಿಧನಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸೇರಿದಂತೆ ಸಚಿವರು ಮತ್ತು ಕಾಂಗ್ರೆಸ್ ಪಕ್ಷದ ಮುಖಂಡರು ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ.

# ವಿವಿಧ ಬೇಡಿಕೆಗಳ ಈಡೇರಿಸುವಂತೆ ಆಗ್ರಹ

## ಅಂಗನವಾಡಿ ಕಾರ್ಯಕರ್ತೆರಿಂದ ಅನಿರ್ದಿಷ್ಟಾವಧಿ ಧರಣಿ..!

• **ಉದಯವಾಹಿನಿ, ಬೆಂಗಳೂರು**

ವಿವಿಧ ಬೇಡಿಕೆಗಳ ಈಡೇರಿಸುವಂತೆ ಆಗ್ರಹಿಸಿ ಲಕ್ಷಾಂತರ ಅಂಗನವಾಡಿ ಸಹಾಯಕಿಯರು ಮತ್ತು ಕಾರ್ಯಕರ್ತೆಯರು ಅನಿರ್ದಿಷ್ಟಾವಧಿ ಧರಣಿ ಆರಂಭಿಸಿದ್ದಾರೆ. ನಗರದ ಸ್ವಾತಂತ್ರ್ಯ ಉದ್ಯಾನ ಸೇರಿದಂತೆ ಮಂಡ್ಯ, ಹುಬ್ಬಳ್ಳಿಯಲ್ಲಿ ಕೇಂದ್ರ ಸರ್ಕಾರದ ಸಚಿವರ ನಿವಾಸಗಳ ಎದುರು ಪ್ರತಿಭಟಿಸುವುದರೊಂದಿಗೆ ರಾಜ್ಯಾದ್ಯಂತ ಹೋರಾಟ ಆರಂಭಿಸಿದ್ದಾರೆ. ತುಮಕೂರಿನಲ್ಲೂ ಅಹೋರಾತ್ರಿ ಧರಣಿ ನಡೆಸಿದ್ದಾರೆ. ಅಂಗನವಾಡಿ ಘಟಕ ವೆಚ್ಚ ಹೆಚ್ಚಳ ಮಾಡಿ, ಸ್ಥಳೀಯ ಆಹಾರ ಪದಾರ್ಥಗಳನ್ನು ನೀಡಬೇಕು. ಆದರೆ, 2018ರಿಂದ ಅಂಗನವಾಡಿ ನೌಕರರಿಗೆ ಕೇಂದ್ರ ಸರ್ಕಾರ ವೇತನ ಹೆಚ್ಚಳ ಮಾಡಲಿಲ್ಲ. ಇಂದಿಗೂ ಅಂಗನವಾಡಿ ಕಾರ್ಯಕರ್ತೆಗೆ 2,700 ರೂ. ಸಹಾಯಕಿಯರಿಗೆ 1,350 ರೂ. ಮಾತ್ರ ಕೇಂದ್ರ ಸರ್ಕಾರ ನೀಡುತ್ತಿದೆ. ಕನಿಷ್ಠವೇತನವನ್ನೂ ನೀಡುತ್ತಿಲ್ಲ. ಕೇಂದ್ರ ಸರ್ಕಾರ ಜಾರಿಗೊಳಿಸಿರುವ ಭೌತಿಕ ಗುರುತು ವ್ಯವಸ್ಥೆ (ಎಫ್‌ಆರ್‌ಎಸ್) ರದ್ದು ಮಾಡಬೇಕು. ಇಲ್ಲದಿದ್ದರೆ ಎಫ್‌ಆರ್‌ಎಸ್ ಇರುವ ಎಲ್ಲಾ ಅಂಗನವಾಡಿ ಕೇಂದ್ರಗಳಲ್ಲಿ ವೈಫೈ ವ್ಯವಸ್ಥೆ ಅಳವಡಿಸಬೇಕು. ಅಂಗನವಾಡಿ ನೌಕರರನ್ನು ಚುನಾವಣಾ ಕೆಲಸಗಳಿಗೆ ಬಳಸಬಾರದು.ಅಂಗನವಾಡಿ ನೌಕರರನ್ನು 3 ಮತ್ತು 4ನೇ ದರ್ಜೆ ನೌಕರರನ್ನಾಗಿ ಪರಿಗಣಿಸ ಬೇಕು ಪ್ರತಿಭಟನಾಕಾರರು ಒತ್ತಾಯಿಸಿದರು.

ರಾಜ್ಯದಲ್ಲಿ ಅಸಂಘಟಿತ ಕಾರ್ಮಿಕರಿಗೆ ಇಎಸ್‌ಐ, ಪಿಎಫ್ ವ್ಯವಸ್ಥೆಯಿದೆ. ನಿಗದಿತ ವೇತನ ನೀಡಲಾಗುತ್ತಿದೆ. ಆದರೆ, ದೇಶಾದ್ಯಂತ 64 ಲಕ್ಷ ಅಂಗನವಾಡಿ, ಬಿಸಿಯೂಟ, ಆಶಾ ಕಾರ್ಯಕರ್ತೆಯರಿಗೆ ಯಾವುದೇ ಸೌಲಭ್ಯ ನೀಡದಿರುವುದು ಖಂಡನೀಯ. ಅಲ್ಲದೆ, ಹಲವು ದಶಕಗಳಿಂದ ಸೇವೆ ಸಲ್ಲಿಸುತ್ತಿರುವ ಕಾರ್ಯಕರ್ತೆಯರನ್ನು ಕಾಯಂಗೊಳಿಸದೇ ಶೋಷಣೆ ಮಾಡಲಾಗುತ್ತಿದೆ. ಈ ಎಲ್ಲಾ ಸಮಸ್ಯೆಗಳ ಕುರಿತು ಕೇಂದ್ರ ಸರ್ಕಾರ ಪರಿಹಾರ ನೀಡಬೇಕು ಎಂದು ಆಗ್ರಹಿಸಿದರು.

ವೇತನ, ಸಾಮಾಜಿಕ ಭದ್ರತೆ, ಔದ್ಯೋಗಿಕ ಸುರಕ್ಷತೆ ಮತ್ತು ಆರೋಗ್ಯ ಮತ್ತು ಕೆಲಸದ ಪರಿಸ್ಥಿತಿಗಳ ಕುರಿತು ನಾಲ್ಕು ಹೊಸ ಕಾರ್ಮಿಕ ಸಂಹಿತೆಗಳಲ್ಲಿ ನಮ್ಮನ್ನು ಸೇರ್ಪಡೆಗೊಳಿಸಬೇಕೆಂದು ನಾವು ಕೇಂದ್ರ ಸರ್ಕಾರ ಒತ್ತಾಯಿಸುತ್ತಿದ್ದೇವೆ. ಈ ಎಲ್ಲಾ ಕಾರ್ಮಿಕರನ್ನು ವಿವಿಧ ಯೋಜನೆಗಳ ಅಡಿಯಲ್ಲಿ ನೇಮಿಸಲಾಗಿದೆ, ಸರ್ಕಾರವು ಗೌರವಧನದ ಹೆಸರಿನಲ್ಲಿ ವೇತನವನ್ನು ಕಡಿಮೆ ನೀಡುತ್ತಿದೆ. ನಮ್ಮ ಕಾರ್ಯಕರ್ತೆಯರಿಗೂ ಸರ್ಕಾರ ಭವಿಷ್ಯ ನಿಧಿ, ಇಎಸ್‌ಐನಂತಹ ಎಲ್ಲಾ ಪ್ರಯೋಜನಗಳನ್ನು ಒದಗಿಸಬೇಕೆಂದು, ಉದ್ಯೋಗ ಭದ್ರತೆಯನ್ನು ಖಚಿತ ಪಡಿಸಬೇಕೆಂದು ನಾವು ಒತ್ತಾಯಿಸುತ್ತೇವೆಂದು ಹೇಳಿದ್ದಾರೆ.

ಸರ್ಕಾರದ ನೀತಿಗಳು ಈ ಕಾರ್ಮಿಕರ ಪರವಾಗಿಲ್ಲ, ಇದು ಅವರ ಉದ್ಯೋಗ ಭದ್ರತೆಯ ಮೇಲೆ ಪರಿಣಾಮ ಬೀರುತ್ತದೆ. 25,000 ಕ್ಕೂ ಹೆಚ್ಚು ಶಾಲೆಗಳನ್ನು ಕರ್ನಾಟಕ ಸಾರ್ವಜನಿಕ ಶಾಲೆಗಳೊಂದಿಗೆ ವಿಲೀನಗೊಳಿಸಲಾಗುತ್ತಿರುವುದರಿಂದ ಹಲವಾರು ಕಾರ್ಮಿಕರು ಉದ್ಯೋಗ ಕಳೆದುಕೊಳ್ಳುತ್ತಾರೆಂದು ಕಳವಳ ವ್ಯಕ್ತಪಡಿಸಿದರು.



ಉದಯವಾಹಿನಿ ಚಿತ್ರ

**ತುಮಕೂರಿನಲ್ಲೂ ಅಹೋರಾತ್ರಿ ಧರಣಿ**

ಈ ಮುಷ್ಕರ ನಡೆಸುವುದು ಪ್ರಜ್ಞಾಪೂರ್ವಕ ನಿರ್ಧಾರವಾಗಿತ್ತು. ನಮ್ಮ ಪ್ರತಿಭಟನೆಯಿಂದ ಅಂಗನವಾಡಿಗಳ ಕೇಂದ್ರಗಳು, ಮಧ್ಯಾಹ್ನದ ಊಟ ಮತ್ತು ಆರೋಗ್ಯ ಸೇವೆಗಳ ಮೇಲೆ ಪರಿಣಾಮ ಬೀರಿದೆ ಎಂದು ನಾನು ಒಪ್ಪುತ್ತೇನೆ, ವಿಶೇಷವಾಗಿ ಗ್ರಾಮೀಣ ಪ್ರದೇಶಗಳಲ್ಲಿ. ಆದರೆ, ಕಾರ್ಯಕರ್ತೆಯರು ಕೂಡ ವೇತನವಿಲ್ಲದ ಕಾರಣ ಬೆಲೆ ತೆರುತ್ತಿದ್ದಾರೆಂದು ಹೇಳಿದರು.

**ಕರ್ನಾಟಕ ಸೆಂಟರ್ ಆಫ್ ಇಂಡಿಯನ್ ಟ್ರೇಡ್ ಯೂನಿಯನ್ಸ್ ಅಧ್ಯಕ್ಷೆ ಎಸ್ ವರಲಕ್ಷ್ಮಿ**

**ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಅವರ ಕಚೇರಿ ಮುಂದೆ ಹುಬ್ಬಳ್ಳಿಯಲ್ಲಿ ನಡೆದ ಪ್ರತಿಭಟನೆಯ ನೇತೃತ್ವ ವಹಿಸಿದ್ದ ಮಾಲಿನಿ ಮೇಸ್ತ ಅವರು ಮಾತನಾಡಿ, ಮಧ್ಯಾಹ್ನ ಊಟ, ಐಸಿಡಿಎಸ್ ಮತ್ತು ಆಶಾ ಕಾರ್ಮಿಕರಿಗೆ ಕೇಂದ್ರ ಸರ್ಕಾರ ಬಜೆಟ್ ಹೆಚ್ಚಿಸಬೇಕು. ಮಧ್ಯಾಹ್ನ ಊಟದ ಕಾರ್ಯಕರ್ತರಿಗೆ 4,700 ರೂ. ವೇತನ ನೀಡಲಾಗುತ್ತಿದ್ದು, ಅದರಲ್ಲಿ 600 ರೂ. ಕೇಂದ್ರ ಸರ್ಕಾರ ಭರಿಸುತ್ತದೆ. ಉಳಿದ ಹಣವನ್ನು ರಾಜ್ಯ ಸರ್ಕಾರ ಭರಿಸುತ್ತದೆ. 2009 ರಿಂದ ಅವರ ವೇತನ ಏರಿಕೆಯಾಗಿಲ್ಲ. ಅದೇ ರೀತಿ, 2018 ರಿಂದ ಅಂಗನವಾಡಿ ಕಾರ್ಯಕರ್ತೆಯರ ವೇತನ ಏರಿಕೆಯಾಗಿಲ್ಲ. ಅವರ ವೇತನ 11,500 ರಿಂದ 12,000 ರೂ. ಆಗಿದ್ದು, ಇದರಲ್ಲಿ ಕೇಂದ್ರದ ಪಾಲು 2,700 ರೂ. ಸಹಾಯಕಿಯರ ವೇತನ 7,000 ರೂ. ಮತ್ತು ಕೇಂದ್ರ ಸರ್ಕಾರ 2,000 ರೂ. ನೀಡುತ್ತದೆ ಎಂದು ಹೇಳಿದರು.**

## ರಾಮೇಶ್ವರಂ ಕೆಫೆ ವಿರುದ್ಧ ಎಫ್‌ಐಆರ್ ದಾಖಲು



ಉದಯವಾಹಿನಿ ಚಿತ್ರ

• **ಉದಯವಾಹಿನಿ ಬೆಂಗಳೂರು**

ಮಹತ್ವದ ಬೆಳವಣಿಗೆಯಲ್ಲಿ ಆಹಾರ ಸುರಕ್ಷತೆ ಮತ್ತು ಮಾನನಷ್ಟ ಆರೋಪದ ಮೇಲೆ ರಾಮೇಶ್ವರಂ ಕೆಫೆ ಮಾಲೀಕರ ವಿರುದ್ಧ ಎಫ್‌ಐಆರ್ ದಾಖಲಿಸಲಾಗಿದೆ ಎಂದು ತಿಳಿದುಬಂದಿದೆ.

ಬೆಂಗಳೂರಿನ ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣದ ಟರ್ಮಿನಲ್ 1 ರಲ್ಲಿರುವ ಜನಪ್ರಿಯ ರಾಮೇಶ್ವರಂ ಕೆಫೆಯ ಮಾಲೀಕರು ಮತ್ತು ಪ್ರತಿನಿಧಿಯ ವಿರುದ್ಧ ಬೆಂಗಳೂರು ಪೊಲೀಸರು ಎಫ್‌ಐಆರ್ ದಾಖಲಿಸಿಕೊಂಡಿದ್ದಾರೆ. ಈ ಕುರಿತು ಮಾಧ್ಯಮವೊಂದು ವರದಿ ಮಾಡಿದ್ದು, ಹಾನಿಕಾರಕ ಆಹಾರವನ್ನು ಮಾರಾಟ ಮಾಡುವುದು, ಸುಳ್ಳು ಮಾಹಿತಿ ನೀಡುವುದು, ಕ್ರಿಮಿನಲ್ ಪಿತೂರಿ ಮತ್ತು ಇತರ ಅಪರಾಧಗಳಿಗಾಗಿ ಬಿಲ್ಡರ್ ಒಬ್ಬರು ಸಲ್ಲಿಸಿದ ದೂರಿನ ಮೇರೆಗೆ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದಾರೆ ಎಂದು ತಿಳಿದುಬಂದಿದೆ.

ರಾಮೇಶ್ವರಂ ಕೆಫೆಯ ಮಾಲೀಕ ರಾಘವೇಂದ್ರ ರಾವ್, ಅವರ ಪತ್ನಿ ದಿವ್ಯಾ ರಾಘವೇಂದ್ರ ರಾವ್ ಮತ್ತು ಹಿರಿಯ ಕಾರ್ಯನಿರ್ವಾಹಕ ಸುಮಂತ್ ಲಕ್ಷ್ಮಿನಾರಾಯಣ್ ವಿರುದ್ಧ ಎಫ್‌ಐಆರ್ ದಾಖಲಾಗಿದ್ದು, ಬಿಎನ್‌ಎಸ್ ಸೆಕ್ಷನ್ 61, 123, 217, 228, 229, 274 ಮತ್ತು 275 ರ ನಿಬಂಧನೆಗಳ ಅಡಿಯಲ್ಲಿ ಸಲ್ಲಿಸಲಾದ ಎಫ್‌ಐಆರ್‌ನಲ್ಲಿ ಸುಮಂತ್ ಬಿ. ಎಲ್. (ಎ 1), ದಿವ್ಯಾ ರಾಘವೇಂದ್ರ ರಾವ್ (ಎ 2) ಮತ್ತು ರಾಘವೇಂದ್ರ ರಾವ್ (ಎ 3) ಎಂಬ ಮೂವರು ಆರೋಪಿಗಳ ಹೆಸರಿದೆ ಎಂದು ಹೇಳಲಾಗಿದೆ. ಅಂತೆಯೇ ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪೊಲೀಸರು ಮೂವರಿಗೆ ವಿಚಾರಣೆಗೆ ಹಾಜರಾಗುವಂತೆ ನೋಟಿಸ್ ಜಾರಿ ಮಾಡಿದ್ದಾರೆ.

## ಸ್ಮಾರ್ಟ್ ಮೀಟರ್ ಟೆಂಡರ್ ಹಗರಣದಲ್ಲಿ ಸಚಿವ ಕೆ.ಜೆ ಜಾರ್ಜ್‌ಗೆ ರಿಲೀಫ್

• **ಉದಯವಾಹಿನಿ, ಬೆಂಗಳೂರು**

ಸ್ಮಾರ್ಟ್ ಮೀಟರ್ ಟೆಂಡರ್ ಹಗರಣ ಆರೋಪಕ್ಕೆ ಸಂಬಂಧಿಸಿದಂತೆ ಕೆ.ಜೆ.ಜಾರ್ಜ್ ಸೇರಿದಂತೆ ಕೆಲ ಪ್ರಮುಖರ ವಿರುದ್ಧ ದಾಖಲಾಗಿದ್ದ ಖಾಸಗಿ ದೂರುಗಳನ್ನು ಕರ್ನಾಟಕ ಹೈಕೋರ್ಟ್ ರದ್ದುಪಡಿಸಿದೆ. ಬಿಜೆಪಿ ನಾಯಕರು ದಾಖಲಿಸಿದ್ದ ಪ್ರಕರಣ ರದ್ದುಪಡಿಸಿ ನ್ಯಾ. ಎಂ.ಐ.ಅರುಣ್ ಅವರಿದ್ದ ಹೈಕೋರ್ಟ್ ಪೀಠ ಆದೇಶಿಸಿದೆ. ಆ ಮೂಲಕ ಅಧಿಕಾರಿಗಳಾದ ಗೌರವ್ ಗುಪ್ತಾ, ಮಹಾಂತೇಶ ಬೀಳಗಿ, ಹೆಚ್.ಜೆ.ರಮೇಶ್ ವಿರುದ್ಧದ ಕೇಸ್ ಕೂಡ ರದ್ದಾಗಿದೆ. ಸ್ಮಾರ್ಟ್ ವಿದ್ಯುತ್ ಮೀಟರ್ ವಿಚಾರದಲ್ಲಿ ಭ್ರಷ್ಟಾಚಾರ ನಡೆದಿದೆ ಎಂದು ಇಂಧನ ಇಲಾಖೆ ವಿರುದ್ಧ ಬಿಜೆಪಿ ಸಮರ ಸಾರಿತ್ತು. ಸ್ಮಾರ್ಟ್ ಮೀಟರ್ ಖರೀದಿಯಲ್ಲಿ ಭಾರೀ ಅವ್ಯವಹಾರ ನಡೆದಿದೆ. ಇತರೆ ಕಂಪೆನಿಗಳನ್ನು ಕೈಬಿಟ್ಟು ದಾವಣಗೆರೆಯ ರಾಜಶ್ರೀ ಎಲೆಕ್ಟ್ರಿಕಲ್ಸ್‌ಗೆ ಗುತ್ತಿಗೆ ನೀಡಲಾಗಿದೆ. ಈ ಕಂಪೆನಿಗಾಗಿ ಇತರೆ ಕಂಪೆನಿಗಳು ಟೆಂಡರ್‌ನಲ್ಲಿ ಭಾಗವಹಿಸದಂತೆ ನೋಡಿಕೊಳ್ಳಲಾಗಿದೆ ಎಂದು ಬಿಜೆಪಿ ಆರೋಪಿಸಿತ್ತು.



ಉದಯವಾಹಿನಿ ಚಿತ್ರ

ಬೇರೆ ರಾಜ್ಯಗಳಲ್ಲಿ 900 ರೂಪಾಯಿಗಳಿಗೆ ಸಿಗುವ ಸ್ಮಾರ್ಟ್ ಮೀಟರ್ ಅನ್ನು 5 ಸಾವಿರದಿಂದ 10 ಸಾವಿರ ರೂಪಾಯಿಗಳಿಗೆ ಗ್ರಾಹಕರಿಗೆ ನೀಡಲಾಗುತ್ತಿದೆ. ಹೀಗಾಗಿ ಇದೊಂದು ದೊಡ್ಡ ಹಗರಣ ಎಂದು ಆರೋಪಿಸಲಾಗಿತ್ತು. ಸ್ಮಾರ್ಟ್ ಮೀಟರ್ ಟೆಂಡರ್ ಸುಮಾರ್ 10 ಸಾವಿರ ಕೋಟಿ ರೂಪಾಯಿ ಮೊತ್ತದ್ದಾಗಿರುವ ಕಾರಣ ಜಾಗತಿಕ ಟೆಂಡರ್ ಕರೆಯಬೇಕಿತ್ತು.

ಆದರೆ ಕೇವಲ 354 ಕೋಟಿ ರೂ. ವ್ಯವಹಾರ ನಡೆಸುವ ರಾಜಶ್ರೀ ಎಲೆಕ್ಟ್ರಿಕಲ್ಸ್‌ಗೆ ಟೆಂಡರ್ ನೀಡಲಾಗಿದೆ. 10 ವರ್ಷಕ್ಕೆ 5296 ಕೋಟಿ ರೂಪಾಯಿಗೆ ನೀಡಲಾಗಿರುವ ಟೆಂಡರ್ ಅನ್ನು ಬೇಕೆಂದೇ 997 ಕೋಟಿ ರೂ. ಟೆಂಡರ್ ಎಂಬಂತೆ ಬಿಂಬಿಸಲಾಗಿದೆ. ಬೆಸ್ಕಾಂ ವ್ಯಾಪ್ತಿಗೆ ಮಾತ್ರ ಈ ಟೆಂಡರ್ ಅನ್ವಯವಾದರೂ ಇತರೆ ಎಸ್ಕಾಂಗಳಿಗೂ ಇದೇ ಸ್ಮಾರ್ಟ್ ಮೀಟರ್ ಖರೀದಿಸಿರುವಂತೆ ಸೂಚಿಸಲಾಗಿದೆ. ಇದು ಸಂಪೂರ್ಣ ಕಾನೂನು ಬಾಹಿರ. ಕೇಂದ್ರದ ಆರ್‌ಡಿಎಸ್‌ಎಸ್ ಯೋಜನೆಯಡಿ 900 ರೂ.ಗೆ ಸಿಗುವ ಮೀಟರ್ ಅನ್ನು 5 ಸಾವಿರದಿಂದ 8,800 ರೂಪಾಯಿಗಳಿಗೆ ಗ್ರಾಹಕರು ಖರೀದಿಸಬೇಕಾಗಿದೆ. ಇದಕ್ಕೆ ಇದಕ್ಕೆಲ್ಲಾ ಬೆಸ್ಕಾಂ ಅಧ್ಯಕ್ಷ ಹಾಗೂ ಇಂಧನ ಸಚಿವ ಕೆ.ಜೆ. ಜಾರ್ಜ್ ಹಾಗೂ ಇತರೆ ಅಧಿಕಾರಿಗಳೇ ಹೊಣೆ ಎಂದು ಬಿಜೆಪಿ ಆರೋಪ ಮಾಡಿತ್ತು. ಆದರೆ, ಬಿಜೆಪಿ ನಾಯಕರು ದಾಖಲಿಸಿದ್ದ ಪ್ರಕರಣ ರದ್ದುಪಡಿಸಿ ಹೈಕೋರ್ಟ್ ಆದೇಶಿಸಿದೆ.


**ಸ್ಮಾರ್ಟ್ ವಿದ್ಯುತ್ ಮೀಟರ್ ವಿಚಾರದಲ್ಲಿ ಭ್ರಷ್ಟಾಚಾರ**

## ಪಲ್ಸ್‌ಪೋಲಿಯೊಗೆ ಮೈಕ್ರೋ ಪ್ಲ್ಯಾನ್: ಮಹೇಶ್ವರ್ ರಾವ್

• **ಉದಯವಾಹಿನಿ, ಬೆಂಗಳೂರು**

ನಗರದಲ್ಲಿ ಡಿ.21ರಿಂದ 24ರವರೆಗೆ 'ರಾಷ್ಟ್ರೀಯ ಪಲ್ಸ್ ಪೋಲಿಯೊ' ಕಾರ್ಯಕ್ರಮದ ಭಾಗವಾಗಿ ಮೈಕ್ರೋ ಪ್ಲ್ಯಾನ್ ಸಿದ್ಧಪಡಿಸಲು ಅಧಿಕಾರಿಗಳಿಗೆ ಜಿಬಿಎ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಸೂಚಿಸಿದರು. ಆರೋಗ್ಯ ವಿಭಾಗ ಹಾಗೂ ಕಲ್ಯಾಣ ಕಾರ್ಯಕ್ರಮಕ್ಕೆ ಸಂಬಂಧಿಸಿದಂತೆ ನಡೆದ ಸಭೆಯಲ್ಲಿ ಮಾತನಾಡಿದ ಅವರು, ಪಲ್ಸ್ ಪೋಲಿಯೊ ಕುರಿತು ಜಾಗೃತಿ ಮೂಡಿಸಲು ಕಾರ್ಯಕ್ರಮಗಳನ್ನು ರೂಪಿಸಬೇಕು. ನರ್ಸಿಂಗ್ ಕಾಲೇಜುಗಳು, ವೈದ್ಯಕೀಯ ಕಾಲೇಜುಗಳು, ಪ್ಯಾರಾಮೆಡಿಕಲ್ ಕಾಲೇಜುಗಳ ವಿದ್ಯಾರ್ಥಿಗಳನ್ನು ಸ್ವಯಂಸೇವಕರನ್ನಾಗಿ ಬಳಸಿಕೊಂಡು ಪೋಲಿಯೊ ಹನಿ ಹಾಕಬೇಕು' ಎಂದು ಹೇಳಿದರು.

ಸಂಚಾರ ಲಸಿಕಾ ತಂಡಗಳನ್ನು ನಗರದ ಬಸ್ ನಿಲ್ದಾಣ, ಮಾರುಕಟ್ಟೆ, ರೈಲ್ವೆ ಮತ್ತು ಮೆಟ್ರೊ ನಿಲ್ದಾಣ. ಮಾಲ್ ಮತ್ತು ಪ್ರಮುಖ ಉದ್ಯಾನಗಳು, ಕೊಳಚೆ ಪ್ರದೇಶಗಳು ಸೇರಿದಂತೆ ಜನನಿಬಿಡ ಪ್ರದೇಶಗಳಲ್ಲಿ ಪೋಲಿಯೊ ಹನಿ ಹಾಕುವಂತೆ ಸೂಚಿಸಿದರು. ವಿಶೇಷ ಆಯುಕ್ತರ ಸುರೋಲ್ಕರ್ ವಿಕಾಸ್ ಕಿಶೋರ್ ಮಾತನಾಡಿ, 'ಡಿ.21ರಂದು ಬೆಳಿಗ್ಗೆ 8ರಿಂದ ಸಂಜೆ 5ರವರೆಗೆ ಬೂತ್‌ಗಳಲ್ಲಿ ಲಸಿಕೆ ಹಾಕಲಾಗುವುದು. 22ರಿಂದ 24ರವರೆಗೆ ಮನೆ-ಮನೆಗೆ ಭೇಟಿ ನೀಡಿ ಲಸಿಕೆ ಹಾಕಲಾಗುವುದು. ಇದಲ್ಲದೆ, 21ರಿಂದ 24 ರವರೆಗೆ ಹೆಚ್ಚು ಜನದಟ್ಟಣೆ ಹೊಂದಿರುವ ಪ್ರದೇಶ, ಕೊಳೆಗೇರಿ, ವಲಸಿಗರ ಮೇಲೆ ಹೆಚ್ಚು ಗಮನ ನೀಡುವ ಕೆಲಸ ಮಾಡಲಾಗುವುದೆಂದು ತಿಳಿಸಿದರು. ನವಜಾತ ಶಿಶುವಿನಿಂದ ಐದು ವರ್ಷದೊಳಗಿನ ಎಲ್ಲಾ ಮಕ್ಕಳಿಗೆ ಕಡ್ಡಾಯವಾಗಿ ಪೋಲಿಯೊ ಹನಿ ನೀಡಬೇಕು. ನಮ್ಮ ಕ್ಲಿನಿಕ್, ಪ್ರಾಥಮಿಕ ಆರೋಗ್ಯ ಕೇಂದ್ರ, ಹೆರಿಗೆ ಆಸ್ಪತ್ರೆ, ರೆಫರಲ್ ಆಸ್ಪತ್ರೆ, ಖಾಸಗಿ ಆಸ್ಪತ್ರೆಗಳಲ್ಲೂ ನೀಡಲಾಗುತ್ತದೆ ಎಂದು ಹೇಳಿದರು. ಇ-ಖಾತಾ ಸಹಾಯವಾಣಿಗೆ ಬರುವ ದೂರುಗಳನ್ನು ಪ್ರತ್ಯೇಕವಾಗಿ ಮೇಲ್ವಿಚಾರಣೆ ಮಾಡಬೇಕು. ತಿರಸ್ಕೃತವಾಗಿರುವ ಇ-ಖಾತಾ ಅರ್ಜಿಗಳನ್ನು ಯಾವ ಕಾರಣಕ್ಕಾಗಿ ತಿರಸ್ಕರಿಸಲಾಗಿದೆ ಎಂಬುದನ್ನು ಪರಿಶೀಲಿಸಿ ಸೂಕ್ತ ಕ್ರಮಗಳನ್ನು ಕೈಗೊಳ್ಳಬೇಕು ಎಂದರು. ವಿಶೇಷ ಆಯುಕ್ತ ಮುನೀಶ್ ಮೌದ್ಗಿಲ್ ಮಾತನಾಡಿ, ಇ-ಖಾತಾಗೆ ಸಂಬಂಧಿಸಿದಂತೆ ಪ್ರತಿನಿತ್ಯ ಸುಮಾರು 1,000 ಕರೆಗಳು ಬರುತ್ತಿದ್ದು, ಅವುಗಳನ್ನು ಟ್ರ್ಯಾಕ್ ಮಾಡಿ ಇರುವ ಸಮಸ್ಯೆ ಬಗೆಹರಿಸಿ ಆದ್ಯತೆ ಮೇರೆಗೆ ವಿಲೇವಾರಿ ಮಾಡುವ ಕೆಲಸ ಮಾಡಲಾಗುತ್ತಿದೆ' ಎಂದು ತಿಳಿಸಿದರು.



**ಇ-ಖಾತಾಗೆ ದೂರವಾಣಿ: ಇ-ಖಾತಾ ವಿತರಣೆ, ಬಿ-ಖಾತಾದಿಂದ ಎ-ಖಾತಾ ಪರಿವರ್ತನೆ ಹಾಗೂ ಆಸ್ತಿ ತೆರಿಗೆಗೆ ಸಂಬಂಧಿಸಿದ ದೂರುಗಳಿಗಾಗಿ ಪ್ರತ್ಯೇಕ ದೂರವಾಣಿ 94806 83035 ಇದ್ದು. ಅದಕ್ಕೆ ಬರುವ ದೂರುಗಳನ್ನು ಕಾಲಮಿತಿಯೊಳಗಾಗಿ ಇತ್ಯರ್ಥಪಡಿಸಬೇಕು ಎಂದು ಮಹೇಶ್ವರ್ ರಾವ್ ಸೂಚಿಸಿದರು.**

## ವಿಮಾನ ನಿಲ್ದಾಣದ ಪಿಕಪ್, ಡ್ರಾಪ್ ಪ್ರದೇಶದಲ್ಲಿ ಹೆಚ್ಚು ಟೈಮ್ ನಿಲ್ಲಿಸುವ ವಾಹನಗಳಿಗೆ ದುಬಾರಿ ಶುಲ್ಕ!

• **ಉದಯವಾಹಿನಿ, ಬೆಂಗಳೂರು**

ಡಿಸೆಂಬರ್ 8 ರಿಂದ ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಪಿಕಪ್, ಡ್ರಾಪ್ ಪ್ರದೇಶದಲ್ಲಿ ಎಂಟು ನಿಮಿಷಗಳ ಉಚಿತ ಸಮಯ ಮೀರಿ ಹೆಚ್ಚು ಹೊತ್ತು ನಿಲ್ಲಿಸುವ ವಾಹನಗಳಿಗೆ ಪ್ರವೇಶ ಶುಲ್ಕ ವಿಧಿಸಲಾಗುತ್ತಿದೆ.

ವಿಮಾನ ನಿಲ್ದಾಣದ ನಿರ್ವಾಹಕರಾದ ಬಿಐಎಎಲ್, ಪ್ರಯಾಣಿಕರ ಸಂಚಾರವನ್ನು ಸುಗಮಗೊಳಿಸಲು, ದಟ್ಟಣೆಯನ್ನು ಕಡಿಮೆ ಮಾಡಲು ಮತ್ತು ಸುರಕ್ಷತೆಯನ್ನು ಸುಧಾರಿಸಲು ಈ ಕ್ರಮ ತೆಗೆದುಕೊಳ್ಳುತ್ತಿರುವುದಾಗಿ ಘೋಷಿಸಿದೆ. ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಲಿಮಿಟೆಡ್ ಶಿಸ್ತನ್ನು ಜಾರಿಗೊಳಿಸುತ್ತಿದ್ದು, ಅನಧಿಕೃತ ಪಾರ್ಕಿಂಗ್ ಅನ್ನು ತಡೆಯಲು ಮತ್ತು ಅನಗತ್ಯವಾಗಿ ಹೆಚ್ಚು ಸಮಯ ನಿಲ್ಲಿಸುವುದನ್ನು ಕಡಿಮೆ ಮಾಡಲು ಲೇನ್ ಪ್ರತ್ಯೇಕತಾ ವ್ಯವಸ್ಥೆಯನ್ನು ಪರಿಚಯಿಸುತ್ತಿದೆ. ಇದು ಕರ್ಬ್‌ಸೈಡ್ ದಟ್ಟಣೆಯನ್ನು ಕಡಿಮೆ ಮಾಡುತ್ತದೆ ಮತ್ತು ಟರ್ಮಿನಲ್‌ಗಳ ಮುಂದೆ ಪಿಕಪ್ ವಲಯದ ದುರುಪಯೋಗವನ್ನು ತಡೆಯುತ್ತದೆ ಎಂದು ಪ್ರಕಟಣೆ ತಿಳಿಸಿದೆ. ವಿಮಾನ ನಿಲ್ದಾಣವು ಎಲ್ಲಾ ಬಳಕೆದಾರರಿಗೆ ವಲಯದ ಉಚಿತ ಬಳಕೆಯನ್ನು ಎಂಟು ನಿಮಿಷಗಳ ಕಾಲ ಅಂತರರಾಷ್ಟ್ರೀಯ ಮತ್ತು ಮಾನದಂಡಗಳಿಗಿಂತ ಹೆಚ್ಚಿನದು ನೀಡುತ್ತದೆ, ಅದನ್ನು ಮೀರಿ 8-13 ನಿಮಿಷಗಳವರೆಗೆ ಓವರ್‌ಸ್ಟೇಗೆ 150 ರೂ. 13-18 ನಿಮಿಷಗಳವರೆಗೆ 300 ರೂ. ಶುಲ್ಕ ವಿಧಿಸಲಾಗುತ್ತದೆ.



**ಹೊಸ ಲೇನ್ ಪ್ರತ್ಯೇಕತಾ ವ್ಯವಸ್ಥೆಯಡಿಯಲ್ಲಿ, T1 ಮತ್ತು T2ನಲ್ಲಿ ಗೊತ್ತುಪಡಿಸಿದ ಪಿಕಪ್ ಡ್ರಾಪ್ ವಲಯಗಳಿಗೆ ಪ್ರವೇಶವು ಎಲ್ಲಾ ಖಾಸಗಿ ಕಾರುಗಳಿಗೆ ಬಿಳಿ-ಬೋರ್ಡ್ ವಾಹನಗಳು ಉಚಿತವಾಗಿರುತ್ತದೆ. ಆದಾಗ್ಯೂ, ನಿಗದಿತ ಸಮಯ ಮಿತಿಯನ್ನು ಮೀರಿ ಹೆಚ್ಚು ನಿಲ್ಲಿಸಿದರೆ ಅಥವಾ ಅವಧಿ ಮೀರಿ ನಿಲ್ಲಿಸಿದ್ದಕ್ಕಾಗಿ ಶುಲ್ಕ ಅನ್ವಯವಾಗುತ್ತವೆ ಎಂದು ಬಿಐಎಲ್ ಹೇಳಿದೆ.**

## ಅರಿವು ಸಭೆ: 1,250 ಶಾಲಾ ಕಾಲೇಜುಗಳಲ್ಲಿ ಜಾಗೃತಿ

• **ಉದಯವಾಹಿನಿ, ಬೆಂಗಳೂರು**

ಮಹಿಳೆಯರ ಸುರಕ್ಷತೆ, ಮಾದಕ ವಸ್ತುಗಳ ನಿಯಂತ್ರಣ, ಸೈಬರ್ ಅಪರಾಧ ತಡೆ ಹಾಗೂ ಸಂಚಾರ ನಿರ್ವಹಣೆ ಕುರಿತು ನಗರ ಪೊಲೀಸ್ ಕಮಿಷನ್‌ರೇಟ್ ವ್ಯಾಪ್ತಿಯ 11 ವಿಭಾಗದ ಪೊಲೀಸರು, ವಿವಿಧ ಶಾಲಾ-ಕಾಲೇಜಿಗೆ ಭೇಟಿ ನೀಡಿ ಜಾಗೃತಿ ಮೂಡಿಸಿದರು. ಪೂರ್ವ, ಪಶ್ಚಿಮ, ಆಗ್ನೇಯ, ವಾಯವ್ಯ, ನೈರುತ್ಯ, ಎಲೆಕ್ಟ್ರಾನಿಕ್ ಸಿಟಿ, ಉತ್ತರ, ದಕ್ಷಿಣ, ಕೇಂದ್ರ, ಈಶಾನ್ಯ ಹಾಗೂ ವೈಟ್ ಫೀಲ್ಡ್ ವಿಭಾಗದ ಶಾಲಾ ಕಾಲೇಜುಗಳಲ್ಲಿ ಏಕಕಾಲದಲ್ಲಿ ಜಾಗೃತಿ ಮೂಡಿಸಲಾಯಿತು. 1.250 ಶಾಲಾ-ಕಾಲೇಜುಗಳ ಸುಮಾರು 2.50 ಲಕ್ಷ ವಿದ್ಯಾರ್ಥಿಗಳು ಅರಿವು ಸಭೆಗಳಲ್ಲಿ ಪಾಲ್ಗೊಂಡಿದ್ದರು.

ಆಯಾ ವಿಭಾಗದ ಡಿಸಿಪಿಗಳು, ಎಸಿಪಿಗಳು, ಇನ್‌ಸ್ಪೆಕ್ಟರ್, ಪಿಎಸ್‌ಐ ಪೊಲೀಸ್ ಸಿಬ್ಬಂದಿ ಅರಿವು ಮೂಡಿಸಿದರು. ಆಗ್ನೇಯ ವಿಭಾಗದ 59 ಶಾಲೆಗಳು ಹಾಗೂ 24 ಕಾಲೇಜುಗಳಲ್ಲಿ ಜಾಗೃತಿ ಕಾರ್ಯಕ್ರಮ ನಡೆದಿದ್ದು, 11,515 ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು. ಮಾದಕ ದ್ರವ್ಯದಿಂದ ಉಂಟಾಗುತ್ತಿರುವ ದುಷ್ಪರಿಣಾಮಗಳ ಕುರಿತು ತಿಳಿಸಲಾಯಿತು. ಮಹಿಳೆ, ಮಕ್ಕಳ ಸುರಕ್ಷತೆಗೆ ಸಂಬಂಧಿಸಿದಂತೆ 'ರಾಣಿ ಚನ್ನಮ್ಮ ಪಡೆಯಿಂದ ಸ್ವಯಂ ರಕ್ಷಣೆ ತಂತ್ರಗಳ ಬಗ್ಗೆ ತರಬೇತಿ ನೀಡಲಾಯಿತು.

ಮಹಿಳೆಯರು ಹಾಗೂ ಮಕ್ಕಳ ಪರವಾಗಿ ಇರುವ ಕಾನೂನುಗಳ ಬಗ್ಗೆಯೂ ತಿಳಿಸಲಾಯಿತು. ಇಲಾಖೆಯಿಂದ ಸ್ಥಾಪಿಸಲಾಗಿರುವ ಸಹಾಯವಾಣಿ ಬಗ್ಗೆಯೂ ಮಾಹಿತಿ ನೀಡಲಾಯಿತು ಎಂದು ಆಗ್ನೇಯ ವಿಭಾಗದ ಡಿಸಿಪಿ ಸಾರಾ ಫಾತಿಮಾ ತಿಳಿಸಿದರು. ಸುದ್ದಗುಂಟೆಪಾಳ್ಯ ಠಾಣೆಯ ಪೊಲೀಸರು ತಮ್ಮ ವ್ಯಾಪ್ತಿಯ ಶಾಲಾ ಕಾಲೇಜುಗಳಿಗೆ ಭೇಟಿ ನೀಡಿ ಸೈಬರ್ ವಂಚನೆ ಪ್ರಕರಣಗಳಿಗೆ ಸಂಬಂಧಿಸಿದಂತೆ ಅರಿವು ಮೂಡಿಸಿದರು. ಉದ್ಯೋಗದ ಆಮಿಷವೊಡ್ಡಿ ವಂಚನೆ, ವೆಬ್‌ಸೈಟ್‌ನ ನಕಲಿ ಲಿಂಕ್ ಕಳಿಹಿಸಿ ಮೋಸ, ಒಎಲ್‌ಎಕ್ಸ್ ವಂಚನೆ, ವಿಮೆಗೆ ಸಂಬಂಧಿಸಿದ ವಂಚನೆಗಳ ಬಗ್ಗೆ ಎಚ್ಚರಿಕೆ ವಹಿಸುವಂತೆ ವಿದ್ಯಾರ್ಥಿಗಳಿಗೆ ತಿಳಿಸಲಾಯಿತು.


ಉದಯವಾಹಿನಿ ಚಿತ್ರ

# ಕಸದ ಮಾಫಿಯಾದವರು ನನ್ನ ಮೇಲೆ ಏನೇನೋ ಗೂಬೆ ಕೂರಿಸಲು ಪ್ರಯತ್ನ

## ನಗರದ ಕಸದ ಸಮಸ್ಯೆಗೆ ಮುಕ್ತಿ ಹಾಡಲು ಸಂಕಲ್ಪ, ಕಸದಿಂದ ಜೈವಿಕ ಅನಿಲ ಉತ್ಪಾದನೆಗೆ ಒತ್ತು

• **ಉದಯವಾಹಿನಿ, ಬೆಂಗಳೂರು**

ಕಸದ ಮಾಫಿಯಾದವರು ನನ್ನ ಮೇಲೆ ಏನೇನೋ ಗೂಬೆ ಕೂರಿಸಲು ಪ್ರಯತ್ನಿಸಿದರು. ಆದರೆ, ನಾನು ಯಾವುದಕ್ಕೂ ಜಗ್ಗದೆ ಕಸ ಸಂಗ್ರಹಿಸಿ, ವಿಲೇವಾರಿ ಮಾಡಲು 33 ಪ್ಯಾಕೇಜ್‌ಗಳಲ್ಲಿ ಟೆಂಡರ್ ಕರೆದು ಅಂತಿಮಗೊಳಿಸಿದ್ದೇನೆ. ಕಸದಿಂದ ರಸ ತೆಗೆಯಲು ಹೊರಟಿದ್ದೇನೆ, ಎಂದು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದರು.

ಮಾಗಡಿ ಮುಖ್ಯರಸ್ತೆಯ ಕನ್ನಹಳ್ಳಿಯಲ್ಲಿ ಸಮಗ್ರ ಘನತ್ಯಾಜ್ಯ ವಿಂಗಡಣಾ ಘಟಕದ 1ನೇ ಹಂತಕ್ಕೆ ಶಿಲಾನ್ಯಾಸ ನೆರವೇರಿಸಿ ಅವರು ಮಾತನಾಡಿದರು. 33 ಪ್ಯಾಕೇಜ್ ಟೆಂಡರ್‌ಗೆ ನ್ಯಾಯಾಲಯ ಸಮ್ಮತಿ ನೀಡಿದೆ. ಶೀಘ್ರದಲ್ಲೇ ಟೆಂಡರ್ ವ್ಯವಸ್ಥೆ ಜಾರಿಗೆ ಬರಲಿದೆ. ಕಸದ ಮಾಫಿಯಾದವರು ಪ್ರತಿ ಹಂತದಲ್ಲೂ ನ್ಯಾಯಾಲಯದಿಂದ ತಡೆಯಾಜ್ಞೆ ತಂದು ಸರಕಾರವನ್ನು ಬ್ಲ್ಯಾಕ್‌ಮೇಲ್ ಮಾಡುತ್ತಿದೆ.

ಇವರು ಸರಕಾರ ತಾವು ಹೇಳಿದಂತೆ ಕೇಳಬೇಕೆಂಬ ಧೋರಣೆ ಹೊಂದಿದ್ದರು. ಇದಕ್ಕೆಲ್ಲ ಕಡಿವಾಣ ಹಾಕಲಾಗಿದೆ, ಎಂದರು. ಈ ಹಿಂದೆ 10-12ಕ್ಕೂ ಹೆಚ್ಚು ಸಂಸ್ಥೆಗಳು ಕಸದಿಂದ ವಿದ್ಯುತ್ ಉತ್ಪಾದಿಸಲು ಮುಂದೆ ಬಂದಿದ್ದವು. ಆದರೆ, ಆನಂತರ ವಿಫಲವಾದವು.

24 ಮೆಗಾ ವ್ಯಾಟ್ ವಿದ್ಯುತ್ ಉತ್ಪಾದನೆ ತಂತ್ರಜ್ಞಾನ ಬಳಸಿಕೊಂಡರೆ ಯಶಸ್ವಿಯಾಗಬಹುದೆಂದು ಗೊತ್ತಾಗಿದೆ. ಇದು ಹೊಸದಿಲ್ಲಿ, ಚೆನ್ನೈ, ಹೈದರಾಬಾದ್ ನಗರಗಳಲ್ಲಿ ಯಶಸ್ವಿಯಾಗಿದೆ, ಎಂದರು.

**ಕಸದಿಂದ ಜೈವಿಕ ಅನಿಲ ಉತ್ಪಾದಿಸಲಿರುವ ಅಭಿಷೇಕ್ ಅವರ ಸಂಸ್ಥೆಯು ಪ್ರಾಥಮಿಕವಾಗಿ 100 ಕೋಟಿ ರೂ. ಬಂಡವಾಳ ಹೂಡಲಿದೆ. ಒಟ್ಟಾರೆ 300 ಕೋಟಿ ರೂ. ಹೂಡಿಕೆ ಮಾಡಲಿದ್ದಾರೆ. ಅವರಿಗೆ ಸರಕಾರ ಎಲ್ಲಾ ರೀತಿಯ ಸಹಕಾರ ನೀಡಲಿದೆ. ಈ ಪ್ರಯೋಗ ಯಶಸ್ವಿಯಾದರೆ, ರಾಜ್ಯದ ಹಲವೆಡೆ ಇಂತಹ ಘಟಕ ನಿರ್ಮಿಸಲು ಕ್ರಮ ಕೈಗೊಳ್ಳಲಾಗುವುದು, ಎಂದು ತಿಳಿಸಿದರು. ಜಿಬಿಎ ವತಿಯಿಂದ 8-10 ಮಂದಿ ಪೌರ ಕಾರ್ಮಿಕರ ತಂಡವನ್ನು ರಚಿಸಲಾಗುತ್ತಿದೆ. ಈ ತಂಡವು ನಗರ ಪ್ರದಕ್ಷಿಣೆ ಮಾಡಿ ಎಲ್ಲೆಲ್ಲಿ ಕಸ ಇದೆಯೋ ಅದನ್ನು ವಿಲೇವಾರಿ ಮಾಡಲಿದೆ, ಎಂದು ಹೇಳಿದರು.**

### ಕಸದ ಸಮಸ್ಯೆ ಮುಕ್ತಿಗೆ ಸಂಕಲ್ಪ




**ನಗರದ ಕಸದ ಸಮಸ್ಯೆಗೆ ಮುಕ್ತಿ ಹಾಡಲು ಸಂಕಲ್ಪ ಮಾಡಿದ್ದೇನೆ. ಸ್ವಯಂಸೇವಾ ಸಂಸ್ಥೆಯಾದ ಹಸಿರು ದಳವು ಅತ್ಯಂತ ಕ್ಲಿಷ್ಟಕರವಾದ ಕೆಲಸ ಮಾಡುತ್ತಿದೆ. ಜನರು ಎಲ್ಲೆಂದರಲ್ಲಿ ಕಸ, ಕಟ್ಟಡ ತ್ಯಾಜ್ಯ ಸುರಿಯುತ್ತಿದ್ದಾರೆ. ಇದರ ನಿಯಂತ್ರಣಕ್ಕೆ ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸಲಾಗಿದೆ. ದಂಡವನ್ನೂ ವಿಧಿಸಲಾಗುತ್ತಿದೆ. ಎಲ್ಲೆಂದರಲ್ಲಿ ಕಸ ಬಿಸಾಡಿ ಹೋಗುವ ವಾಹನಗಳಿಗೆ ಪೊಲೀಸರು ನೋಟಿಸ್ ನೀಡುತ್ತಿದ್ದಾರೆ,ಎಂದು ಹೇಳಿದರು. ಕಸದಿಂದ ಜೈವಿಕ ಅನಿಲ ಉತ್ಪಾದಿಸುವ ಕಾರ್ಯವನ್ನು 4 ಸಂಸ್ಥೆಗಳಿಗೆ ವಹಿಸಲು ನಿರ್ಧರಿಸಲಾಗಿತ್ತು. ಆದರೆ, ಜಾಗದ ಸಮಸ್ಯೆಯಿಂದ ಎರಡು ಸ್ಥಳಗಳಲ್ಲಿ ಘಟಕ ನಿರ್ಮಿಸಲು ಟೆಂಡರ್ ಆಹ್ವಾನಿಸಲಾಗುತ್ತಿದೆ, ಎಂದು ತಿಳಿಸಿದರು.**

# ರಾಗಿ ಬೆಳೆಗೆ ಕಂಟಕವಾದ ಅಕಾಲಿಕ ಮಳೆ, ರೈತರು ಕಂಗಾಲು

## ■ ಅಕಾಲಿಕವಾಗಿ ಸುರಿಯುತ್ತಿರುವ ಮಳೆಯಿಂದಾಗಿ ಫಸಲು ಮಣ್ಣು ಪಾಲಾಗುವ ಭೀತಿಯಲ್ಲಿ ಕೃಷಿಕರು

• **ಉದಯವಾಹಿನಿ, ಚಿಕ್ಕಬಳ್ಳಾಪುರ**


ಉದಯವಾಹಿನಿ ಚಿತ್ರ

ಅಕಾಲಿಕ ಮಳೆಯ ಹೊಡೆತಕ್ಕೆ ಜಿಲ್ಲೆಯ ರೈತರು ನಲುಗುತ್ತಿದ್ದಾರೆ. ದಿತ್ವಾ ಚಂಡಮಾರುತದ ಪರಿಣಾಮ ವಿಪರೀತ ಚಳಿ ಜತೆಗೆ ತುಂತುರು ಮಳೆಯಾಗುತ್ತಿದೆ. ಜಿಲ್ಲೆಯಲ್ಲಿ ದೀಪಾವಳಿವರೆಗೂ ಮಳೆ ಬರುತ್ತೆ ಎನ್ನುವುದು ವಾಡಿಕೆ, ಆದರೆ ದೀಪಾವಳಿ ನಂತರವೂ ಕಾಡುತ್ತಿರುವ ಮಳೆಯಿಂದ ರಾಗಿ ಬಿತ್ತನೆಗೆ ಸಾಕಷ್ಟು ತೊಡಕಾಗಿದೆ. ಬಂದಿರುವ ರಾಗಿ ಬೆಳೆ ಕೊಯ್ಲು ಮಾಡಲಾಗದೆ ರೈತರು ಕೈಕೈ ಹಿಸುಕಿಕೊಳ್ಳುವಂತಾಗಿದೆ. ಪ್ರತಿ ವರ್ಷದಂತೆ ಈ ಬಾರಿಯೂ ಹಿಂಗಾರು ಮಳೆ ರೈತರ ಕೈ ಹಿಡಿದಿತ್ತು. ರಾಗಿ,ಬೆಳೆ ಕೊನೆ ಹಂತದಲ್ಲಿ ಕೈ ಕೊಟ್ಟಿದ್ದರಿಂದ ಹಿಂದೆಯೇ ರಾಗಿ ಬಿತ್ತನೆ ಮಾಡಿದ್ದ ರೈತರಿಗೆ ತೊಂದರೆಯಾಗಿದೆ. ಕೊನೆ ಹಂತದಲ್ಲಿ ಮಳೆ ಬಾರದ ಕಾರಣ ರಾಗಿ ಫಸಲು ಇಳಿಮುಖವಾಗಿದೆ.

**ನಿರೀಕ್ಷೆ ಮೀರಿ ರಾಗಿ ಬೆಳೆ ಬಿತ್ತನೆ**

ಸರಿಯಾದ ಮಳೆಯಾಗದ ಕಾರಣ ಹೊಲದಲ್ಲೇ ರಾಗಿ ಬೆಳೆ ಮಲಗಿದೆ. ಹೀಗಾಗಿ ವಿಳಂಬವಾಗಿ ರಾಗಿ ಬಿತ್ತನೆ ಮಾಡಿದ್ದ ರೈತರು ಒಂದೆಡೆ ಫಸಲು ಇಲ್ಲದೆ, ಕೊಯ್ಲು ಮಾಡಲಾಗದೆ ತೊಂದರೆ ಅನುಭವಿಸುತ್ತಿದ್ದಾರೆ.

**ಮಣ್ಣು ಪಾಲಾಗುವ ಆತಂಕ:** ಮುಂಗಾರು ಅಂತ್ಯ, ಹಿಂಗಾರು ಆರಂಭದಲ್ಲಿ ಜಿಲ್ಲೆಯಲ್ಲಿ ಒಳ್ಳೆಯ ಮಳೆ ಸುರಿದಿತ್ತು. ಆಗಸ್ಟ್‌ನಲ್ಲಿ ಮಳೆ ಕೊರತೆಯಿಂದ ಒಣಗಿದ್ದ ಬೆಳೆಗಳು ಸೆಪ್ಟೆಂಬರ್ ಹಾಗೂ ಅಕ್ಟೋಬರ್ ಮಳೆಯಿಂದ ಕಂಗೊಳಿಸಿದ್ದವು.

ಆದರೆ ಅಕ್ಟೋಬರ್ ಕೊನೆ ವಾರದಿಂದ ನವೆಂಬರ್ ತಿಂಗಳುಪೂರ್ತಿ ಜಿಲ್ಲೆಯಲ್ಲಿ ಎಲ್ಲೂ ಸರಿಯಾಗಿ ಮಳೆ ಬಿದ್ದಿರಲಿಲ್ಲ, ಹೀಗಾಗಿ ತಡವಾಗಿ ಬಿತ್ತನೆ ಮಾಡಿರುವ ರಾಗಿ ಬೆಳೆಯಲ್ಲಿ ನಿರೀಕ್ಷಿತ ಫಸಲು ಬಾರದ ಹೊಲಗಳಲ್ಲಿ ಬಿದ್ದು ಹೋಗಿತ್ತು. ಈಗ ಸುರಿಯುತ್ತಿರುವ ಮಳೆಯಿಂದ ಅಷ್ಟೋ ಇಷ್ಟೋ ಬಂದಿದ್ದ ಫಸಲು ಸಹ ಮಣ್ಣು ಪಾಲಾಗುವ ಆತಂಕ ಎದುರಾಗಿದೆ. ಜಿಲ್ಲೆಯಲ್ಲಿ ಕೆಲವು ವರ್ಷಗಳಿಂದ ಹಿಂಗಾರು ಮಳೆ ಸಮೃದ್ಧವಾಗಿ ಆಗಿತ್ತು.

ಅದೇ ರೀತಿ ಜಿಲ್ಲೆಯಲ್ಲೂ ಈಗಲೂ ಹಿಂಗಾರು ಭರವಸೆ ಮೂಡಿಸಿತ್ತು. ಶೇ.70ರಷ್ಟು ರಾಗಿ ಬೆಳೆ ಕೈ ಹಿಡಿದಿತ್ತು. ದೀಪಾವಳಿವರೆಗೂ ಮಾತ್ರವಲ್ಲ, ದೀಪಾವಳಿ ನಂತರವೂ ಮಳೆ ಸುರಿದು ಬಹುಪಾಲು ರಾಗಿ ಬೆಳೆ ಚೆನ್ನಾಗೇ ಇತ್ತು. ಆದರೆ ರಾಗಿ ತೆನೆ ಹಾಲು ಕಟ್ಟುತ್ತಿರುವ ವೇಳೆಗೆ ಮಳೆ ಕೈ ಕೊಟ್ಟಿತ್ತು. ಹೀಗಾಗಿ ನಿರೀಕ್ಷಿತ ಫಸಲು ಬಂದಿರಲಿಲ್ಲ. ಈಗ ಸುರಿಯುತ್ತಿರುವ ತುಂತುರು ಮಳೆಯಿಂದ ತೆನೆಗಳಲ್ಲಿ ನೀರು ತುಂಬಿಕೊಂಡು ನಿಂತಿದ್ದ ಪೈರೆಲ್ಲ ನೆಲಕ್ಕೊರಗಿದೆ.

**ದಿತ್ವಾ ಹೊಡೆತ:** ಜಿಲ್ಲೆಯಲ್ಲಿ ಗುರಿ ಮೀರಿ ಶೇ.108ರಷ್ಟು ಬಿತ್ತನೆ ಮಾಡಲಾಗಿತ್ತು. ಜಿಲ್ಲೆಯಲ್ಲಿ ಒಟ್ಟು 44,000 ಹೆಕ್ಟೇರ್ ಪ್ರದೇಶದಲ್ಲಿರಾಗಿ ಬಿತ್ತನೆ ಗುರಿ ಹೊಂದಲಾಗಿತ್ತು. ಆದರೆ ಇದುವರೆಗೂ 47,659 ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆಯಾಗಿದ್ದು, ಶೇ.108ರಷ್ಟು ಗುರಿ ಸಾಧನೆ ಮಾಡಲಾಗಿದೆ. ಮುಂಗಾರು ಆರಂಭದಲ್ಲಿ ಮಳೆ ಕೊರತೆಯಿಂದ ತೊಗರಿ, ನೆಲಗಡಲೆ, ಜೋಳ ಬಿತ್ತನೆಯಾಗಿ ಹಿನ್ನಡೆಯಾಗಿದೆ. ಹೀಗಾಗಿ ಜಿಲ್ಲೆಯಲ್ಲಿ ಈ ಬಾರಿ ನಿರೀಕ್ಷೆ ಮೀರಿ ರಾಗಿ ಬಿತ್ತನೆಯಾಗಿತ್ತು. ಈಗಾಗಲೇ ಶೇ.50ಕ್ಕೂ ಹೆಚ್ಚು ಪ್ರದೇಶದಲ್ಲಿ ಕೊಯ್ಲುಆಗಿದೆ.

> ಜಿಲ್ಲೆಯಲ್ಲಿ ಈಗಾಗಲೇ ನೆಲಗಡಲೆ, ಜೋಳ, ತೊಗರಿ ಸೇರಿದಂತೆ ಹಲವು ಬೆಳೆಗಳ ಕೊಯ್ಲುಆಗಿದೆ. ಶೇ.60ರಷ್ಟು ರಾಗಿ ಬೆಳೆಯ ಕೊಯ್ಲುಆಗಿದೆ. ಅಲ್ಲದೆ, ಈಗ ಹೆಚ್ಚಿನ ಮಳೆ ಬೀಳುತ್ತಿಲ್ಲ. ಕೇವಲ ತುಂತುರು ಮಳೆಯಾಗುತ್ತಿದ್ದು, ಹೆಚ್ಚಿನ ನಷ್ಟವೇನೂ ಆಗಲ್ಲ.
>
> – ಅಬಿದ್, ಜಂಟಿ ನಿರ್ದೇಶಕ, ಕೃಷಿ ಇಲಾಖೆ

> ಇದೇ ಮಳೆ ಇನ್ನು 20 ದಿನಗಳ ಹಿಂದೆ ಬಿದ್ದಿದ್ದರೆ ಹಿಂದಿನ ಬಿತ್ತನೆಗಳಲ್ಲೂ ಒಳ್ಳೆಯ ಫಸಲು ಬರುತ್ತಿತ್ತು. ಆದರೆ ನವೆಂಬರ್‌ನಲ್ಲಿ ಮಳೆಯೇ ಬಿದ್ದಿಲ್ಲ. ಹೀಗಾಗಿ ತೆನೆ ಕಟ್ಟುವ ಹಂತದಲ್ಲಿದ್ದ ಬೆಳೆಗಳಲ್ಲಿ ರಾಗಿ ಗಾತ್ರ ಸಣ್ಣದಾಗಿದ್ದು, ಹೆಚ್ಚಿನ ಫಸಲು ಸಿಗಲ್ಲ. ಈಗ ಸುರಿಯುತ್ತಿರುವ ತುಂತುರು ಮಳೆ ಹೀಗೆ ಮುಂದುವರಿದರೆ ಎಲ್ಲಾ ಬೆಳೆ ನೆಲಕ್ಕೊರಗಲಿದೆ.
>
> – ರಾಜಣ್ಣ, ರಾಗಿ ಬೆಳೆಗಾರ

ಇನ್ನುಳಿದ ಪ್ರದೇಶಕ್ಕೆ ದಿತ್ವಾ ಚಂಡಮಾರುತದ ಹೊಡೆತ ಬಿದ್ದಿದೆ.

ಬೆಟ್ಟದ ಸಾಲಿನ ತಾಲ್ಲೂಕುಗಳಲ್ಲಿ ಉತ್ತಮ ರಾಗಿ ಫಸಲು ಬಂದಿದೆ. ಈಗಾಗಲೇ ಆ ಭಾಗದಲ್ಲಿ ಕೊಯ್ಲು ನಡೆದಿದೆ. ಚಿಕ್ಕಬಳ್ಳಾಪುರ, ಶಿಡ್ಲಘಟ್ಟ, ಚಿಂತಾಮಣಿ ತಾಲ್ಲೂಕುಗಳಲ್ಲಿ ತಡವಾಗಿ ರಾಗಿ ಬಿತ್ತನೆಯಾಗಿದ್ದು. ಕೊನೆ ಹಂತದಲ್ಲಿ ಸರಿಯಾಗಿ ಮಳೆಯಾಗದ ಕಾರಣ ನಿರೀಕ್ಷಿತ ಫಸಲು ಬಂದಿಲ್ಲ. ಈಗ ಮಳೆ ಬಿದ್ದಿರುವುದರಿಂದ ರಾಗಿ ಬೆಳೆ ನೆಲಕ್ಕೊರಗಿದ್ದು ಕೊಯ್ಲು ಮಾಡುವುದು ಕಷ್ಟವಾಗಿದೆ. ಇದೇ ರೀತಿ ಇನ್ನೂ ಐದಾರು ದಿನ ದಿತ್ವಾ ಚಂಡಮಾರುತದ ಎಫೆಕ್ಟ್‌ನಿಂದ ಮಳೆ ಸುರಿದರೆ ತೆನೆಗಳಲ್ಲೇ ರಾಗಿ ಮೊಳಕೆಯೊಡೆಯುವ ಅಪಾಯವೂ ಇದೆ.

## ಸುಸಜ್ಜಿತ ಗ್ರಾಮಪಂಚಾಯತಿ ಕಟ್ಟಡ ಲೋಕಾರ್ಪಣೆ

• **ಉದಯವಾಹಿನಿ, ಗುಂಡ್ಲುಪೇಟೆ**


ಉದಯವಾಹಿನಿ ಚಿತ್ರ

ತಾಲ್ಲೂಕಿನ ಹುಂಡೀಪುರ ಗ್ರಾಮದಲ್ಲಿ ನಿರ್ಮಾಣವಾಗಿದ್ದ ನೂತನ ಸಭಾಭವನ ಹಾಗೂ ಗ್ರಾಮಸೌಧವನ್ನ ಶಾಸಕ ಎಚ್.ಎಂ. ಗಣೇಶ್ ಪ್ರಸಾದ್ ಉದ್ಘಾಟಿಸಿದರು. ಗ್ರಾಮಪಂಚಾಯತಿಗಳಿಗೆ ಸರ್ಕಾರದಿಂದ ಬರುವ ಅನುದಾನಗಳು ಕಡಿಮೆಯಿದ್ದರು ಸಹ 15 ಹಣಕಾಸಿನ ಯೋಜನೆ ಸೇರಿದಂತೆ ಹಲವು ಅನುದಾನಗಳಲ್ಲಿನ ಅಲ್ಪ ಪ್ರಮಾಣದ ಹಣವನ್ನ ವ್ಯಯಿಸಿ ಸುಸಜ್ಜಿತ ಕಟ್ಟಡ ನಿರ್ಮಾಣ ಮಾಡಿರುವುದು ವಿಶೇಷವಾಗಿದೆ ಎಂದರು.

ಗ್ರಾಮಪಂಚಾಯತಿ ಸದಸ್ಯರು ಹಾಗೂ ಅಧ್ಯಕ್ಷ ಉಪಾಧ್ಯಕ್ಷರ ಸಹಕಾರದಿಂದ ಉತ್ತಮ ಕಟ್ಟಡ ನಿರ್ಮಾಣ ಮಾಡಲಾಗಿದೆ , ಹಾಗೆಯೇ ಗ್ರಾಮಕ್ಕೆ ಪಶು ಆಸ್ಪತ್ರೆ ನಿರ್ಮಾಣಕ್ಕೆ ಒತ್ತಾಯ ಕೇಳಿಬಂದಿದೆ ಮುಂದಿನ ದಿನಗಳಲ್ಲಿ ಪಶು ಆಸ್ಪತ್ರೆ ನಿರ್ಮಾಣಕ್ಕೆ ಕ್ರಮ ಕೈಗೊಳ್ಳಲಾಗುವುದು, ಹುಂಡೀಪುರ ಭಾಗದಲ್ಲಿ ಕೆ.ಎಸ್.ನಾಗರತ್ನಮ್ಮ ಅವರು ಅನೇಕ ಅಭಿವೃದ್ಧಿ ಕೆಲಸಗಳನ್ನ ಮಾಡಿದ್ದಾರೆ, ಶಿವಪುರ ಕಲ್ಲುಕಟ್ಟೆ ಡ್ಯಾಮ್, ಸೇರಿದಂತೆ ಅನೇಕ ಕಾರ್ಯಕ್ರಮಗಳನ್ನ ಜಾರಿಗೊಳಿಸಿದ ಕೀರ್ತಿ ಅವರದ್ದಾಗಿದೆ, ಮಂತ್ರಿಯಾಗಿದ್ದಾಗಲು ಗುಂಡ್ಲುಪೇಟೆಯನ್ನ ಬರಪೀಡಿತ ಪ್ರದೇಶ ಎಂದು ಘೋಷಣೆ ಮಾಡುವ ಮೂಲಕ ತಾಲ್ಲೂಕಿಗೆ ನೀರು ಹರಿಸಲು ಅವಿರತ ಸೇವೆಗೈದಿದ್ದಾರೆ ಎಂದು ಸ್ಮರಿಸಿದರು. ಕ್ಷೇತ್ರದಲ್ಲಿ ಅನೇಕ ಅಭಿವೃದ್ಧಿ ಕಾಮಗಾರಿಗಳಿಗೆ ಶಂಕುಸ್ಥಾಪನೆ ನೆರವೇರಿಸಲಾಗಿದೆ ಹಾಗೆಯೇ ಮುಂದಿನ ದಿನಗಳಲ್ಲಿ ಹಂತಹಂತವಾಗಿ ಬೇಡಿಕೆಗಳನ್ನ ಈಡೇರಿಸಲು ಕ್ರಮವಹಿಸಲಾಗುವುದು ಎಂದು ಭರವಸೆ ನೀಡಿದರು. ಈ ವೇಳೆ ಗ್ರಾ.ಪ.ಅಧ್ಯಕ್ಷ ನಂಜಪ್ಪ, ಉಪಾಧ್ಯಕ್ಷೆ ಪುಟ್ಟಮಾದಮ್ಮ, ಸದಸ್ಯರಾದ ನೀಲಮ್ಮ, ಪಾರ್ವತಿ, ಸಾಕಮ್ಮ, ರಾಜು, ಮಧು, ಆನಂದ, ಮಹೇಂದ್ರ ಎಚ್.ಪಿ. ಶಿವಬಸಪ್ಪ, ಪಿಡಿಓ ಕಿರಣ್, ಸೇರಿದಂತೆ ಸಿಬ್ಬಂದಿಗಳು ಗ್ರಾಮದ ಮುಖಂಡರು ಹಾಜರಿದ್ದರು.

## ರಸ್ತೆಗೆ ಕಸ: ನಗರಸಭೆಯಿಂದ ದಂಡಾಸ್ತ್ರ

• **ಉದಯವಾಹಿನಿ, ಚಿಕ್ಕಬಳ್ಳಾಪುರ**



ಉದಯವಾಹಿನಿ ಚಿತ್ರ

ಚಿಕ್ಕಬಳ್ಳಾಪುರ ನಗರ ವ್ಯಾಪ್ತಿಯಲ್ಲಿ ಈ ಹಿಂದಿನಿಂದಲೂ ಎಲ್ಲೆಂದರಲ್ಲಿ ಕಸ ಎಸೆಯಲಾಗುತ್ತಿದೆ. ಸಾಮಾನ್ಯ ಸಭೆಗಳಲ್ಲಿಯೂ ಕಸದ ವಿಷಯ ಪ್ರಮುಖವಾಗಿ ಚರ್ಚೆ ಆಗುತ್ತಿತ್ತು. ಹಸಿರು ಚಿಕ್ಕಬಳ್ಳಾಪುರ ಘೋಷಣೆಯಡಿ ಆಗಾಗ್ಗೆ ಅಧಿಕಾರಿಗಳು ಸಹ ನಗರದ ಕಸ ತೆರವಿಗೆ ಮುಂದಾಗುತ್ತಿದ್ದರು. ಹೀಗೆ ಎಲ್ಲೆಂದರಲ್ಲಿ ಕಸ ಎಸೆಯುವುದನ್ನು ತಡೆಯಲು ನಗರಸಭೆ ನಾನಾ ಪ್ರಯತ್ನಗಳು, ಅರಿವಿನ ಕಾರ್ಯಕ್ರಮಗಳನ್ನು ನಡೆಸಿದರೂ ಫಲ ಮಾತ್ರ ನಿರೀಕ್ಷಿತವಾಗಿರಲಿಲ್ಲ. ಆದರೆ ಈಗ ದೃಢ ಹೆಜ್ಜೆ ಎನ್ನುವಂತೆ ಕಸ ಎಸೆಯುವವರ ಮೇಲೆ ದಂಡಾಸ್ತ್ರ ಪ್ರಯೋಗಕ್ಕೆ ನಗರಸಭೆ ಮುಂದಾಗಿದೆ.

ನವೆಂಬರ್‌ನಲ್ಲಿ, ಡಿಸೆಂಬರ್ ಮೊದಲ ದಿನ ಸೇರಿ ನಗರಸಭೆಯು 13, 120 ದಂಡ ವಸೂಲಿ ಮಾಡಿದೆ. ಕಸ ಎಸೆಯುವವರ ಮೇಲೆ ನಿಗಾಯಿಟ್ಟ ನಗರಸಭೆ ಅಧಿಕಾರಿಗಳು ನವೆಂಬರ್‌ನಲ್ಲಿ 12,100 ದಂಡ ವಿಧಿಸಿದ್ದಾರೆ. ಡಿಸೆಂಬರ್ 1ರಂದು ಕಂದವಾರ ಬಳಿ ರಸ್ತೆ ಬದಿಗೆ ಕಸ ಎಸೆದ ಇಬ್ಬರಿಗೆ 1,020 ದಂಡ ವಿಧಿಸಲಾಗಿದೆ. 100ರಿಂದ 2,000ದವರೆಗೆ ದಂಡವನ್ನು ವಿಧಿಸಲಾಗಿದೆ. ದಂಡ ವಿಧಿಸುತ್ತಾರೆ ಎನ್ನುವ ಮಾತುಗಳು ಈಗ ಒಂದು ವಾರ್ಡ್‌ನಿಂದ ಮತ್ತೊಂದು ವಾರ್ಡ್‌ಗೆ ಹರಡುತ್ತಿದೆ. ಈ ಕಾರಣದಿಂದ ರಸ್ತೆ ಬದಿ ಕಸ ಎಸೆಯುವುದು ತಹಬದಿಗೆ ಬರುತ್ತಿದೆ ಎನ್ನುತ್ತಾರೆ ನಗರಸಭೆ ಅಧಿಕಾರಿಗಳು.

**ಬೈಕ್ ವಶಕ್ಕೆ ಪಡೆದಿದ್ದ ಅಧಿಕಾರಿಗಳು:** ನಗರದ ಕಂದವಾರ ರಸ್ತೆಯಲ್ಲಿ ಅಕ್ಟೋಬರ್‌ನಲ್ಲಿ ಕಸ ಸುರಿಯುತ್ತಿದ್ದ ಯುವಕನ ಬೈಕ್ ನಗರಸಭೆ ಸಿಬ್ಬಂದಿ ವಶಕ್ಕೆ ಪಡೆದಿದ್ದರು. ನಗರಸಭೆ ದಂಡ ಕಟ್ಟುವಂತೆ ಸೂಚಿಸಿದ್ದರು. ಆಗ ಯುವಕ ಸಿಬ್ಬಂದಿ ಬಳಿ ಗಲಾಟೆ ಮಾಡಿ 'ದಂಡ ಕಟ್ಟಲ್ಲ, ಏನ್ ಮಾಡ್ತೀರೋ ಮಾಡಿ' ಎಂದು ಅವಾಜ್ ಹಾಕಿದ್ದ. ದಂಡ ಕಟ್ಟದ ಕಾರಣ ಯುವಕನ ಬೈಕ್ ಅನ್ನು ನಗರಸಭೆ ಸಿಬ್ಬಂದಿ ವಶಕ್ಕೆ ಪಡೆದಿದ್ದರು. ಬೈಕ್ ವಶಕ್ಕೆ ಪಡೆಯುವ ವೇಳೆ ಬೈಕ್ ಕೀ ತಗುಲಿ ಅಧಿಕಾರಿಗೆ ಗಾಯವೂ ಆಗಿತ್ತು.

**ಬ್ಲಾಕ್‌ಸ್ಪಾಟ್‌ಗಳ ಇಳಿಕೆ:** ನಗರದಲ್ಲಿ ಕಸ ಎಸೆಯುವುದಕ್ಕೆ ಸಂಬಂಧಿಸಿದಂತೆ ನಗರಸಭೆಯು ಒಟ್ಟು 65 ಬ್ಲಾಕ್ ಸ್ಪಾಟ್ ಗುರುತಿಸಿತ್ತು. ಈ ಬ್ಲಾಕ್‌ಸ್ಪಾಟ್‌ಗಳಲ್ಲಿ ಜನರು ಅಪಾರ ಪ್ರಮಾಣದಲ್ಲಿ ಕಸ ಎಸೆಯುತ್ತಿದ್ದರು. 'ಇಲ್ಲಿ ಕಸ ಎಸೆಯಬಾರದು' ಎಂದು ಫಲಕಗಳನ್ನು ಅಳವಡಿಸಲಾಯಿತು. ಆ ಸ್ಥಳಗಳ ಮೇಲೆ ನಿಗಾ ಸಹ ಇರಿಸಲಾಯಿತು. ಆ ಪರಿಣಾಮ 8ರಿಂದ 10 ಬ್ಲಾಕ್ ಸ್ಪಾಟ್‌ಗಳಲ್ಲಿ ಇಳಿಕೆಯಾಗಿವೆ. ನಗರಸಭೆ ಕಚೇರಿ, ಕೌಸರ್ ನಗರ, ಒಕ್ಕಲಿಗರ ಕಲ್ಯಾಣ ಮಂಟಪದ ಹಿಂಭಾಗ, ಕಂದವಾರ ಬಾಗಿಲಿನ ಎರಡು ಕಡೆ, ಎಂ.ಜಿ ರಸ್ತೆ, ವಾಪಸಂದ್ರ ರಸ್ತೆಯಲ್ಲಿ ಗುರುತಿಸಿದ್ದ ಬ್ಲಾಕ್ ಸ್ಪಾಟ್‌ಗಳಲ್ಲಿ ಈಗ ಕಸ ಬೀಳುತ್ತಿಲ್ಲ. ನಗರಸಭೆಯಲ್ಲಿ 11 ಮಂದಿ ಕಮ್ಯುನಿಟಿ ಮೊಬಿಲೈಜರ್‌ಗಳಿದ್ದು 31 ವಾರ್ಡ್‌ಗಳಲ್ಲಿಯೂ ನಿಗಾ ವಹಿಸಿದ್ದಾರೆ ಎಂದರು.

## ಚಿರತ ಹಾವಳಿ ತಡಗಟ್ಟಲು ರೈತರ ಮನವಿ

• **ಉದಯವಾಹಿನಿ, ಪಾಂಡವಪುರ**


ಉದಯವಾಹಿನಿ ಚಿತ್ರ

ಚಿರತೆಗಳ ಹಾವಳಿ ಹೆಚ್ಚುತ್ತಿರುವುದರಿಂದ ಅರಣ್ಯ ಪ್ರದೇಶದಲ್ಲಿ ಸೂಕ್ತ ವಿದ್ಯುತ್ ದೀಪದ ವ್ಯವಸ್ಥೆ, ರೈತರ ಜಮೀನುಗಳಿಗೆ ಹಗಲು ವೇಳೆ ವಿದ್ಯುತ್ ಪೂರೈಸಲು ಸೂಕ್ತ ಕ್ರಮವಹಿಸಬೇಕು ಎಂದು ಸೆಸ್ಕ್ ಅಧಿಕಾರಿಗಳಿಗೆ ಶಾಸಕ ದರ್ಶನ್ ಪುಟ್ಟಣ್ಣಯ್ಯ ಸೂಚನೆ ನೀಡಿದರು. ತಾಲ್ಲೂಕಿನ ದೊಡ್ಡಬ್ಯಾಡರಹಳ್ಳಿ ಗ್ರಾಮ ಪಂಚಾಯಿತಿಯಲ್ಲಿ ನಡೆಯುತ್ತಿರುವ ಸರ್ಕಾರಿ ಸೇವೆ ಮನೆ ಬಾಗಿಲಿಗೆ ಕಾರ್ಯಕ್ರಮದಲ್ಲಿ ರೈತರ ಅಹವಾಲು ಸ್ವೀಕರಿಸಿ ಅವರು ಮಾತನಾಡಿದರು.

ದೊಡ್ಡಬ್ಯಾಡರಹಳ್ಳಿ ಪಂಚಾಯಿತಿ ವ್ಯಾಪ್ತಿಯ ತಿಮ್ಮನಕೊಪ್ಪಲು, ನೊದೆಕೊಪ್ಪಲು, ಚಿಕ್ಕಬ್ಯಾಡರಹಳ್ಳಿ, ತಾಳಶಾಸನ ಸೇರಿದಂತೆ 8 ಗ್ರಾಮಗಳಲ್ಲಿ ಚಿರತೆ ಹಾವಳಿ ಹೆಚ್ಚಾಗುತ್ತಿರುವ ಬಗ್ಗೆ ಗ್ರಾಮಸ್ಥರು ತಮ್ಮ ಅಳಲು ತೋಡಿಕೊಂಡರು. ದೊಡ್ಡ ಬ್ಯಾಡರಹಳ್ಳಿ ಡೇರಿ ಅಧ್ಯಕ್ಷ ಚಂದ್ರು ಮಾತನಾಡಿ, ಕಳೆದ ಎರಡು ವರ್ಷಗಳಿಂದ ನಾವು ಚಿರತೆ ಹಾವಳಿ ಸಮಸ್ಯೆ ಎದುರಿಸುತ್ತಿದ್ದೇವೆ.

ಅರಣ್ಯ ಇಲಾಖೆಯವರು ಬೇಜವಾಬ್ದಾರಿಯಿಂದ ನಡೆದುಕೊಳ್ಳುತ್ತಿದ್ದಾರೆ. 800 ಎಕರೆಗೂ ಹೆಚ್ಚಿನ ವ್ಯಾಪ್ತಿಯ ಕಾಡಿರುವ ಪ್ರದೇಶವಿದು. ಈ ಕಾಡಿಗೆ ಹೊಂದಿಕೊಂಡಂತೆ ಗ್ರಾಮಗಳಿದ್ದು, ಚಿರತೆಗಳು ಪದೇ ಪದೇ ಕಾಣಿಸಿಕೊಳ್ಳುತ್ತಿವೆ ಎಂದು ಸಮಸ್ಯೆಯನ್ನು ವಿವರಿಸಿದರು.

ಎಚ್.ಡಿ.ಕೋಟೆಯಲ್ಲಿ ಹುಲಿ ದಾಳಿಯ ಹಿನ್ನೆಲೆಯಲ್ಲಿ ಸರ್ಕಾರ ಹಗಲು ಹೊತ್ತು ವಿದ್ಯುತ್ ಪೂರೈಸುವುದಕ್ಕೆ ಕ್ರಮಕೈಗೊಂಡಿದೆ. ಅದೇ ರೀತಿಯಲ್ಲಿ ನಮ್ಮ ಭಾಗದಲ್ಲೂ ಕ್ರಮವಹಿಸಿದರೆ ರೈತರಿಗೆ ಅನುಕೂಲವಾಗುವುದು ಎಂದು ಗ್ರಾಮಸ್ಥರು ಮನವಿ ಮಾಡಿದರು. ಸೆಸ್ಕ್ ಇಇ ವಿನುತಾ, ಎಇಇ ರವಿಕುಮಾರ್, ಎಇ ಸುಷ್ಮಾ ಅವರು ರೈತರಿಂದ ಮಾಹಿತಿ ಪಡೆದುಕೊಂಡು ಅಗತ್ಯ ಕ್ರಮಕೈಗೊಳ್ಳುವುದಾಗಿ ಹೇಳಿದರು.

## ನಿಮ್ಮ ಹಣ ನಿಮ್ಮ ಹಕ್ಕು ಅಭಿಯಾನ

• **ಉದಯವಾಹಿನಿ, ರಾಮನಗರ**



ಉದಯವಾಹಿನಿ ಚಿತ್ರ

ದೀರ್ಘ ಕಾಲದವರೆಗೆ ಹಕ್ಕು ಪಡೆಯದೆ ಉಳಿದಿರುವ ಬ್ಯಾಂಕ್ ಠೇವಣಿ, ವಿಮಾ ಕಂತು, ಷೇರುಗಳನ್ನು ಅವುಗಳ ಮಾಲೀಕರು, ಕಾನೂನುಬದ್ಧ ವಾರಸುದಾರರಿಗೆ ಹಸ್ತಾಂತರಿಸುವ ನಿಮ್ಮ ಹಣ ನಿಮ್ಮ ಹಕ್ಕು ಅಭಿಯಾನವನ್ನು ನಗರದ ಜಿಲ್ಲಾ ಪಂಚಾಯತ್ ಭವನದಲ್ಲಿ ಆಯೋಜಿಸಲಾಗಿತ್ತು. ನಾನಾ ಬ್ಯಾಂಕ್‌ಗಳಲ್ಲಿ ದಶಕಗಳಿಂದ ನಿಷ್ಕ್ರಿಯಗೊಂಡ, ವಹಿವಾಟು ನಡೆಸದ ಖಾತೆಗಳಲ್ಲಿ ಜಿಲ್ಲೆಯಲ್ಲಿ ಒಟ್ಟು 25 ಬ್ಯಾಂಕ್‌ಗಳಿಂದ 1,66,779 ಖಾತೆಗಳಲ್ಲಿ 48.69 ಕೋಟಿ ಹಣ ಕ್ಲೈಮ್ ಆಗಿಲ್ಲದ ಠೇವಣಿಗಳಿವೆ.

ಇದನ್ನು ಕಾನೂನು ಬದ್ಧ ವಾರಸುದಾರರಿಗೆ, ಖಾತೆದಾರರಿಗೆ ವಾಪಸ್ ನೀಡಲು ನಿಮ್ಮ ಹಣ ನಿಮ್ಮ ಹಕ್ಕು ಅಭಿಯಾನ ಆರಂಭಿಸಲಾಗಿದೆ. ಆರ್‌ಬಿಐ ನಿರ್ದೇಶನದಂತೆ ನಿಷ್ಕ್ರಿಯ ಖಾತೆ ವಾರಸುದಾರರು ಮೃತಪಟ್ಟು ಕಾನೂನು ಬದ್ಧ ಉತ್ತರಾಧಿಕಾರಿ ಇರದೆ ಇದ್ದರೆ ಖಾತೆದಾರರ ಮರಣ ಪ್ರಮಾಣ ಪತ್ರ, ಪಾಸ್ ಬುಕ್, ಗುರುತಿನ ಚೀಟಿ, ವಾರಸುದಾರರ ಪತ್ರ, ಉತ್ತರಾಧಿಕಾರಿ ಒಬ್ಬರಿಗಿಂತ ಹೆಚ್ಚು ಜನರಿದ್ದರೆ ಯಾರಿಗೆ ಹಣ ಸಂದಾಯ ಮಾಡಬೇಕು ಎಂಬ ಕುರಿತು ಒಪ್ಪಿಗೆ ಪತ್ರ ನೀಡಬೇಕು. ಜತೆಗೆ ಕ್ಲೈಮ್ ಮಾಡುವ ವ್ಯಕ್ತಿಯ ವಿಳಾಸದ ಪುರಾವೆ ಮತ್ತು ಕೆವೈಸಿ ದಾಖಲೆ ಸಲ್ಲಿಸಬೇಕು. ಡಿಸೆಂಬರ್ ಅಂತ್ಯದವರೆಗೆ ಬ್ಯಾಂಕ್‌ಗಳಲ್ಲಿ ನಡೆಯುವ ಈ ಅಭಿಯಾನದಲ್ಲಿ ಎಲ್ಲಾ ಬ್ಯಾಂಕ್‌ಗಳು ಕನಿಷ್ಠ ನೂರು ಖಾತೆಗಳನ್ನಾದರೂ ಸಕ್ರಿಯಗೊಳಿಸಬೇಕು ಎಂಬ ಗುರಿ ನೀಡಲಾಗಿದೆ.

## ಕುಡಿಯುವ ನೀರಿನಗಾಗಿ ಪಂಚಾಯಿತಿ ಮುಂದೆ ಒಲೆ ಹಚ್ಚಿ ಪ್ರತಿಭಟನೆ


ಉದಯವಾಹಿನಿ ಚಿತ್ರ

• **ಉದಯವಾಹಿನಿ, ಕೊಡಿಗೇನಹಳ್ಳಿ:**

6 ತಿಂಗಳಿಂದ ಶುದ್ಧ ಕುಡಿಯುವ ನೀರಿನ ಘಟಕ ಕೆಟ್ಟು ನಿಂತು ಗ್ರಾಮಸ್ಥರಿಗೆ ತೊಂದರೆಯಾಗುತ್ತಿದ್ದರೂ ಸಂಬಂಧಿಸಿದ ಯಾರೊಬ್ಬರು ಗಮನಹರಿಸುತ್ತಿಲ್ಲ ಎಂದು ಆರೋಪಿಸಿ ಅಡವಿನಾಗೇನಹಳ್ಳಿ ಗ್ರಾಮಸ್ಥರು ಸಿಂಗನಹಳ್ಳಿ ಗ್ರಾಮ ಪಂಚಾಯಿತಿ ಮುಂದೆ ಒಲೆ ಹಚ್ಚಿ ಪ್ರತಿಭಟನೆ ನಡೆಸಿದರು.

ಬೆಳಿಗ್ಗೆಯಿಂದ ಸಿಂಗನಹಳ್ಳಿ ಗ್ರಾಮ ಪಂಚಾಯಿತಿ ಮುಂದೆ ಧರಣಿ ಕುಳಿತು ನೀರು ಬೇಕು ಎಂದು ಕೇಳುತ್ತಿದ್ದೇವೆ. ಅಧ್ಯಕ್ಷ, ಪಿಡಿಒ, ಅಧಿಕಾರಿಗಳು ಉಡಾಫೆ ಉತ್ತರ ನೀಡುತ್ತಿದ್ದಾರೆಯೇ ಹೊರತು ಸಮಸ್ಯೆಗೆ ಸ್ಪಂದಿಸುತ್ತಿಲ್ಲ. ಕುಡಿಯುವ ನೀರಿಲ್ಲದೆ ವಯಸ್ಸಾದವರು, ಮಕ್ಕಳು ಜ್ವರ, ಕೆಮ್ಮು, ನೆಗಡಿಯಂತಹ ಕಾಯಿಲೆಯಿಂದ ಬಳಲುತ್ತಿದ್ದಾರೆ. ಪಿಡಿಒಗೆ ಎಷ್ಟೋ ಬಾರಿ ಅರ್ಜಿ ಕೊಟ್ಟಿದ್ದಾರೆ.

ಸಮಸ್ಯೆಗೆ ಸ್ಪಂದಿಸದಿದ್ದರೆ ತಾಲ್ಲೂಕು ಕಚೇರಿ ಮುಂದೆ ಧರಣಿ ನಡೆಸಬೇಕಾಗುತ್ತದೆ ಎಂದು ಗ್ರಾಮಸ್ಥರು ಆಕ್ರೋಶ ವ್ಯಕ್ತಪಡಿಸಿದರು. ಅಡವಿನಾಗೇನಹಳ್ಳಿ ಗ್ರಾಮದಲ್ಲಿ ಕುಡಿಯುವ ನೀರಿನ ಸಮಸ್ಯೆ ಇರುವ ಬಗ್ಗೆ ಮಂಗಳವಾರ ಗೊತ್ತಾಗಿದೆ. ತಾತ್ಕಾಲಿಕವಾಗಿ ನೀರು ಸರಬರಾಜು ಮಾಡಲು ವ್ಯವಸ್ಥೆ ಮಾಡಿಸಿದ್ದು, ಮಂಗಳವಾರ ಸಂಜೆಯೊಳಗೆ ಶುದ್ಧ ಕುಡಿಯುವ ನೀರಿನ ಘಟಕ ಸರಿಪಡಿಸಲಾಗುವುದು ಎಂದು ಎಇಇ ಲೋಕೇಶಪ್ಪ ತಿಳಿಸಿದರು.

## ಏರಿಕೆಯತ್ತ ಟೊಮೆಟೊ ಬೆಲೆ

• **ಉದಯವಾಹಿನಿ, ಚಿಂತಾಮಣಿ**


ಉದಯವಾಹಿನಿ ಚಿತ್ರ

ಹವಾಮಾನದ ವೈಪರೀತ್ಯ ಮತ್ತು ಮಳೆಯಿಂದ ಟೊಮೆಟೊ ಬೆಳೆ, ಇಳುವರಿ ಕಡಿಮೆಯಾಗಿದೆ. ಈ ಹಿನ್ನೆಲೆಯಲ್ಲಿ ಧಾರಣೆ ಏರುಗತಿಯಲ್ಲಿ ಸಾಗಿದೆ. ಸ್ಥಳೀಯ ವರ್ತಕರು ಮತ್ತು ಹೊರರಾಜ್ಯಗಳ ವರ್ತಕರಿಂದಲೂ ಬೇಡಿಕೆ ಹೆಚ್ಚಾಗುತ್ತಿದೆ. ಇದೂ ಸಹ ದರ ಏರಿಕೆಗೆ ಕಾರಣವಾಗಿದೆ. ತಾಲ್ಲೂಕಿನ ರೈತರ ಪ್ರಮುಖ ವಾಣಿಜ್ಯ ಬೆಳೆ ಟೊಮೆಟೊ. ಮಾರುಕಟ್ಟೆಯಲ್ಲಿ ಒಂದು ವಾರದಿಂದ ಟೊಮೆಟೊ ಬೆಲೆ ನಿಧಾನವಾಗಿ ಏರಿಕೆ ಆಗುತ್ತಿದೆ. ಬೆಳೆಗಾರರಿಗೆ ಸ್ವಲ್ಪ ಸಮಾಧಾನ ತಂದಿದೆ.

ನಗರದ ಎಪಿಎಂಸಿ ಮಾರುಕಟ್ಟೆಯಲ್ಲಿ ಸೋಮವಾರ 15 ಕೆ.ಜಿ ಟೊಮೆಟೊ ಗುಣಮಟ್ಟಕ್ಕೆ ಅನುಗುಣವಾಗಿ 450ರಿಂದ 70ವರೆಗೂ ಮಾರಾಟವಾಯಿತು. ಚಿಲ್ಲರೆ ಮಾರುಕಟ್ಟೆಯಲ್ಲಿ 1 ಕೆ.ಜಿ 40ರಿಂದ 80ವರೆಗೆ ಮಾರಾಟವಾಗುತ್ತಿದೆ. ಆಗಸ್ಟ್‌ನಿಂದಲೂ ಟೊಮೆಟೊ ಬೆಲೆ ಕಡಿಮೆ ಇತ್ತು. ಈಗ ಬೆಲೆ ಹೆಚ್ಚಳವು ಬೆಳೆಗಾರರ ಮೊಗದಲ್ಲಿ ನಗು ಮೂಡಿದೆ. ಸಾಮಾನ್ಯವಾಗಿ ನವೆಂಬರ್‌ನಲ್ಲಿ ದರ ಹೆಚ್ಚಾಗುವುದಿಲ್ಲ. ರೈತರ ತೋಟಗಳಲ್ಲಿ ಬೆಳೆಗಳು ಹಾಳಾಗಿದೆ. ಇಳುವರಿ ಕಡಿಮೆ ಆಗಿದೆ. ಗುಣಮಟ್ಟದ ಹಣ್ಣು ಬರುತ್ತಿಲ್ಲ. ಹೀಗಾಗಿ ಬೆಲೆ ಏರಿಕೆ ಆಗಿದ್ದರೂ ಬೆಳೆಗಾರರಿಗೆ ಹೆಚ್ಚಿನ ಲಾಭ ಆಗುವುದಿಲ್ಲ ಎಂದು ಬೆಳೆಗಾರರು ನುಡಿಯುವರು. ರಾಜ್ಯದ ದೊಡ್ಡ ಟೊಮೆಟೊ ಮಾರುಕಟ್ಟೆಗಳಲ್ಲಿ ಚಿಂತಾಮಣಿ ಎಪಿಎಂಸಿಯೂ ಒಂದು. ಪ್ರತಿನಿತ್ಯ 50--60 ಸಾವಿರ ಬಾಕ್ಸ್ ಆವಕವಾಗುತ್ತದೆ.

ದೆಹಲಿ, ಉತ್ತರಪ್ರದೇಶ, ರಾಜಾಸ್ಥಾನ, ಛತ್ತೀಸ್ ಗಡ, ಗುಜರಾತ್, ಪಂಜಾಬ್, ಜಮ್ಮು ಕಾಶ್ಮೀರ ಸೇರಿದಂತೆ ಉತ್ತರ ಭಾರತದ ಹಲವು ರಾಜ್ಯಗಳಿಗೆ ಇಲ್ಲಿನ ಟೊಮೆಟೊ ರವಾನೆ ಆಗುತ್ತದೆ. ಬಾಂಗ್ಲಾ, ಪಾಕಿಸ್ತಾನ ಹಾಗೂ ಕೊಲ್ಲಿ ರಾಷ್ಟ್ರಗಳಿಗೂ ರಫ್ತಾಗುತ್ತದೆ. ಇದೇ ಧಾರಣೆ ಮುಂದುವರಿದರೆ ರೈತರಿಗೆ ಲಾಭವಾಗುತ್ತದೆ. ಆದರೆ ಈ ದರ ತಾತ್ಕಾಲಿಕ ಎಂದು ಮಂಡಿ ಮಾಲೀಕರು ಹೇಳುತ್ತಾರೆ. ಈ ವರ್ಷದಲ್ಲಿ ಜುಲೈ ನಲ್ಲಿ ಬೆಲೆ ಏರುಗತಿಯಲ್ಲಿ ಸಾಗಿತ್ತು. ನಂತರ ಇಳಿಮುಖವಾಗಿದೆ. ಏರಿಕೆಯನ್ನು ಕಾಣಲೇ ಇಲ್ಲ ಎಂದು ರೈತ ಶಿವಾನಂದ ತಿಳಿಸುವರು.

> ಬೆಳೆಯೇ ಇಲ್ಲ ಬೆಳೆಗಾರರೂ ಕಡಿಮೆ ನೊಣಗಳ ಕಾಟದಿಂದ ಫಸಲೂ ಕಡಿಮೆ. ಹೀಗಾಗಿ ಸಾಧಾರಣ ಬೆಲೆ ಸಿಗುತ್ತಿದೆ. ಆದರೆ ಬೆಲೆ ಏರಿಕೆಯ ಲಾಭ ಪಡೆಯಲು ರೈತರಲ್ಲಿ ಟೊಮೆಟೊ ತೋಟಗಳೇ ಇಲ್ಲ. ಬೆಲೆ ಏರಿಕೆ ಆದರೂ ಅದರ ಪೂರ್ಣ ಲಾಭ ರೈತರಿಗೆ ದೊರೆಯದೆ ಮಧ್ಯವರ್ತಿಗಳ ಪಾಲಾಗುತ್ತದೆ.
>
> -ಆಂಜನೇಯರೆಡ್ಡಿ, ರೈತ ಮುಖಂಡ

## ಪರಿಹಾರ ಪಡೆಯುವ ಬದಲು ಶೇ. 50 ಅಭಿವೃದ್ಧಿ ಪಾಲುದಾರಿಕೆ ಪಡೆದುಕೊಳ್ಳಿ

### ● ಸಮಗ್ರ ಉಪನಗರ ಯೋಜನೆಯಲ್ಲಿ ಭೂ ಪರಿಹಾರದ ಬದಲು ಪಾಲುದಾರಿಕೆ ಪಡೆಯಿರಿ: ರೈತರಿಗೆ ಕಾಂಗ್ರೆಸ್ ಶಾಸಕ ಕರೆ

• **ಉದಯವಾಹಿನಿ, ರಾಮನಗರ**

ಗ್ರೇಟರ್ ಬೆಂಗಳೂರು ಸಮಗ್ರ ಉಪನಗರ ಯೋಜನೆ ಭೂ ಸ್ವಾಧೀನ ಪ್ರಕ್ರಿಯೆಯಲ್ಲಿ ರೈತರು ಪರಿಹಾರ ಪಡೆಯುವ ಬದಲು ಶೇ. 50 ಅಭಿವೃದ್ಧಿ ಪಾಲುದಾರಿಕೆ ಪಡೆದುಕೊಳ್ಳಿ ಎಂದು ಶಾಸಕ ಎಚ್.ಸಿ. ಬಾಲಕೃಷ್ಣ ಅವರು ರೈತರಿಗೆ ಕರೆ ನೀಡಿದರು. ರಾಮನಗರದ ಜಿಬಿಡಿಎ ಕಚೇರಿಯಲ್ಲಿ ಕರೆಯಲಾಗಿದ್ದ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಭೂಮಿ ಪರಿಹಾರ ವಿತರಣೆ ಇಂದಿನಿಂದಲೇ ನೀಡಲು ಸಿದ್ಧ ಆದರೆ ಅಭಿವೃದ್ಧಿ ಪಾಲುದಾರಿಕೆ ಪಡೆದುಕೊಂಡರೆ ಭೂಮಿ ಕಳೆದುಕೊಂಡವರಿಗೆ ಉತ್ತಮ ಭವಿಷ್ಯ ಇದೆ ಎಂದರು. ಜಿಲ್ಲಾಧಿಕಾರಿಗಳು ಭೂ ಸ್ವಾಧೀನ ಪರಿಹಾರ ಮೊತ್ತವನ್ನು ಘೋಷಣೆ ಮಾಡಿದ್ದಾರೆ.

ಈ ಹಿಂದೆ 1.25 ಯಿಂದ 1.5 ಕೋಟಿ ರೂ.ನಷ್ಟು ಪರಿಹಾರ ಮಾತ್ರ ದೊರೆಯಬಹುದು ಎಂದು ಅಂದಾಜಿಸಲಾಗಿತ್ತು. ನಾನು ಪಟ್ಟು ಹಿಡಿದು 2 ಕೋಟಿ ರೂ.ಗಿಂತ ಹೆಚ್ಚು ಪರಿಹಾರ ನೀಡಬೇಕು ಎಂದು ಒತ್ತಾಯಿಸಿದ್ದೆ. ಅದರಂತೆ ಡಿಸಿಎಂ ಹಾಗೂ ಡಿ.ಕೆ. ಶಿವಕುಮಾರ್ ಅವರು ಪರಿಶ್ರಮ ಪಟ್ಟಿದ್ದಾರೆ. ಇದೀಗ ಡಿಸಿ 2013ರ ಭೂ ಸ್ವಾಧೀನ ಕಾಯಿದೆ ಅನ್ವಯ ಗರಿಷ್ಠ ಪ್ರಮಾಣದ ಪರಿಹಾರನ್ನು ನಿಗದಿ ಮಾಡಿದ್ದಾರೆ ಎಂದು ತಿಳಿಸಿದರು.

**ಇಂದಿನಿಂದಲೇ ಪರಿಹಾರ:** ರೈತರು ತಮ್ಮ ಇಚ್ಛೆಯಂತೆ ನಡೆದುಕೊಳ್ಳಬಹುದು. ಪ್ರಾಧಿಕಾರದಲ್ಲಿ ದುಡ್ಡು ಇಲ್ಲ. ಹೇಗೆ ಯೋಜನೆ ಮಾಡುತ್ತಾರೆ? ಎಂದು ಅಪಪ್ರಚಾರ ಮಾಡುತ್ತಾರೆ. ಪರಿಹಾರ ಮೊತ್ತ ವಿತರಣೆಗೆ ಸರಕಾರ ಸಿದ್ಧವಿದೆ. ಇಂದಿನಿಂದ ಮೂರು ತಿಂಗಳೊಳಗೆ ಪರಿಹಾರ ಮೊತ್ತ ವಿತರಣೆಯನ್ನು ಪೂರ್ಣಗೊಳಿಸುತ್ತೇವೆ.


ಉದಯವಾಹಿನಿ ಚಿತ್ರ

**ಕೋರ್ಟ್‌ನಲ್ಲಿ ರೈತರಿಗೆ ಹಿನ್ನಡೆ**

ಆದರೆ ರೈತರು ಹಣ ಪಡೆಯಬೇಡಿ. ಶೇ. 45ರಷ್ಟು ವಾಣಿಜ್ಯ ಭೂಮಿ ಹಾಗೂ ಶೇ. 50 ರಷ್ಟು ವಸತಿ ಯೋಗ್ಯ ಭೂಮಿ ಉಳಿಸಿಕೊಳ್ಳಿ ಎಂದರು.

ಯೋಜನೆಯ ಪಾಲುದಾರರಾಗಿ. ಸಮಗ್ರ ಉಪನಗರ ಅತ್ಯಾಧುನಿಕವಾಗಿ ಬೆಂಗಳೂರಿಗೆ ಪರ್ಯಾಯವಾಗಿ ಅಭಿವೃದ್ಧಿ ಆಗಲಿದೆ. ಅಭಿವೃದ್ಧಿ ಲಾಭವನ್ನು ನೀವೂ ಪಡೆದುಕೊಳ್ಳಿ ಎಂದು ಹೇಳಿದರು. ಭೂ ಪರಿಹಾರ ನಿಗದಿಯಿಂದ ಬಹುತೇಕ ರೈತರು ಸಂತಸಗೊಂಡಿದ್ದಾರೆ. ಶೇ. 80ರಷ್ಟು ರೈತರು ಒಪ್ಪಿಗೆ ಸೂಚಿಸಲಿದ್ದಾರೆ.

> ದುರುದ್ದೇಶ ಪೂರಕವಾಗಿ ಅಪಪ್ರಚಾರ ಮಾಡಿ ರೈತರಲ್ಲಿ ಆತಂಕ ಮೂಡಿಸುತ್ತಿದ್ದಾರೆ. ಭೂ ಪರಿಹಾರ 80 ಲಕ್ಷ ರೂ. ಮಾತ್ರ ನೀಡುತ್ತಾರೆ. ಊರಿಗೆ ಊರನ್ನೇ ಒಕ್ಕಲೆಬ್ಬಿಸುತ್ತಾರೆ ಎಂದು ಮನಬಂದಂತೆ ಅಪಪ್ರಚಾರ ಮಾಡಿದ್ದರು. ಆದರೆ ಅವರಿಗೆ ಈಗ ನಿರಾಸೆಯಾಗಿದೆ. ಗರಿಷ್ಠ ಪ್ರಮಾಣದಲ್ಲಿ ಭೂ ಪರಿಹಾರ ನೀಡುತ್ತಿದ್ದೇವೆ. ಇಡೀ ಗ್ರಾಮವನ್ನು ಅಭಿವೃದ್ಧಿ ಮಾಡುತ್ತೇವೆ. ಗ್ರಾಮದ ಸುತ್ತ ವರ್ತುಲ ರಸ್ತೆ ನಿರ್ಮಾಣ ಮಾಡುತ್ತೇವೆ. ಯಾವುದೇ ಕಾರಣಕ್ಕೆ ಅಪಪ್ರಚಾರಗಳಿಗೆ ಕಿವಿಗೊಡಬೇಡಿ, ಎಲ್ಲರ ಸಹಕಾರ ದೊರೆತರೆ ಒಂದೂವರೆ ವರ್ಷದಿಂದ ಎರಡು ವರ್ಷದೊಳಗೆ ಯೋಜನೆ ಪೂರ್ಣಗೊಳ್ಳಲಿದೆ. ಅಲ್ಲಿಯವರೆಗೆ ಜೀವನೋಪಾಯ ಬೆಂಬಲವಾಗಿ ವಾರ್ಷಿಕ 30 ರಿಂದ 50 ಸಾವಿರ ರೂ.ವರೆಗೆ ಭತ್ಯೆ ನೀಡುತ್ತೇವೆ. ವಸತಿ ರಹಿತರಿಗೆ ನಿವೇಶ ಮಂಜೂರು ಮಾಡುತ್ತೇವೆ.
>
> -ಎಚ್.ಸಿ. ಬಾಲಕೃಷ್ಣ, ಶಾಸಕ

**ಪ್ರಮುಖ ಅಂಶಗಳು**

- ಭೂ ಸ್ವಾಧೀನ ಪ್ರಕ್ರಿಯೆಯಲ್ಲಿ 1150 ಎಕರೆ ಜಂಟಿ ಸಮೀಕ್ಷೆ ಪೂರ್ಣ
- ಎಕರೆಗೆ 2.7 ರಿಂದ 2.55 ಕೋಟಿ ಭೂ ಪರಿಹಾರ ಘೋಷಣೆ
- ಸಾಗುವಳಿ ಚೀಟಿ ಅರ್ಜಿದಾರರಿಗೆ ನಿವೇಶನ ನೀಡುವ ಘೋಷಣೆ
- ಭೂ ಪರಿಹಾರ ಮೊತ್ತಕ್ಕೆ ಆದಾಯ ತೆರಿಗೆ ವಿನಾಯಿತಿ
- ಭೂಮಿ ಕಳೆದುಕೊಳ್ಳುವ ಕುಟುಂಬಗಳಿಗೆ ಶೇ.5 ರಷ್ಟು ಉದ್ಯೋಗ, ಶೈಕ್ಷಣಿಕ ಮೀಸಲಾತಿ ಪಡೆಯುವ ಅವಕಾಶ
- ಖಾಸಗಿ ಮಾಲೀಕತ್ವದ ಭೂಮಿ ಪ್ರಮಾಣ 6,731 ಎಕರೆ
- ಒಟ್ಟು ರೈತರ ಸಂಖ್ಯೆ 6,300
- ಸರಕಾರಿ ಸ್ವಾಮ್ಯದ ಭೂಮಿ 750 ಎಕರೆ

ಉಳಿದವರು ಹೋರಾಟ ಮಾಡುತ್ತಿದ್ದಾರೆ. ಅವರನ್ನು ಸಭೆ ಕರೆದು ಮಾತನಾಡಿ ವಿಶ್ವಾಸಕ್ಕೆ ತೆಗೆದುಕೊಳ್ಳುತ್ತೇವೆ. ಜಂಟಿ ಸರ್ವೆ ಸಂದರ್ಭದಲ್ಲಿ ಅನಿವಾರ್ಯವಾಗಿ ರೈತರ ಮೇಲೆ ಕೇಸ್ ಹಾಕಲಾಗಿದೆ. ಅದನ್ನು ಹಿಂಪಡೆಯಲು ಮಾತನಾಡಿದ್ದೇನೆ. ಸಂಪುಟ ಸಭೆಯಲ್ಲಿ ನಿರ್ಣಯ ತೆಗೆದುಕೊಂಡು ರೈತರ ಮೇಲಿನ ಕೇಸ್ ಅನ್ನು ಹಿಂಪಡೆಯಲಾಗುವುದು ಎಂದು ಭರವಸೆ ನೀಡಿದರು.

**ಕುಮಾರಸ್ವಾಮಿ ಕನಸು ನನಸು ಮಾಡುತ್ತಿರುವ ಶಿವಕುಮಾರ್:** ಬಿಡದಿ ಉಪನಗರ ನಿರ್ಮಾಣ ಯೋಜನೆ ಕನಸು ಕಂಡಿದ್ದು ಕೇಂದ್ರ ಸಚಿವ ಕುಮಾರಸ್ವಾಮಿ ಅವರು. ಅವರ ಕನಸನ್ನು ಡಿಸಿಎಂ ಶಿವಕುಮಾರ್ ಅವರು ಇದೀಗ ನನಸು ಮಾಡುತ್ತಿದ್ದಾರೆ ಎಂದು ಶಾಸಕ ಬಾಲಕೃಷ್ಣ ಹೇಳಿದ್ದಾರೆ. 15 ವರ್ಷದ ಹಿಂದೆಯೇ ಯೋಜನೆ ವಿರೋಧಿಸಿ ರೈತರು ನ್ಯಾಯಾಲಯಕ್ಕೆ ಹೋಗಿದ್ದರು. ಆದರೆ ಕೋರ್ಟ್‌ನಲ್ಲಿ ರೈತರಿಗೆ ಹಿನ್ನಡೆ ಆಗಿತ್ತು. ಯೋಜನೆಯ ಅಗತ್ಯತೆಯ ಪರ ನ್ಯಾಯಾಲಯ ಆದೇಶ ನೀಡಿತ್ತು. ನಂತರ ಈ ಪ್ರದೇಶವನ್ನು ರೇಡ್ ಝೋನ್ ಮಾಡಲಾಯಿತು. ಯಾವುದೇ ರೀತಿ ಅಭಿವೃದ್ಧಿ ಆಗದಂತೆ ನೋಡಿಕೊಳ್ಳಲಾಯಿತು. ಅಂದಿನ ಸರಕಾರದ ಈ ನಡೆ ಈ ಭಾಗದ ಭೂಮಿಯ ಮಾರ್ಗಸೂಚಿ ಬೆಲೆ ಕುಸಿಯಲು ಕಾರಣವಾಯಿತು ಎಂದರು.

## ಮಿನಿ ನ್ಯೂಸ್


### ಚಿರತೆ ದಾಳಿ; ಹಸುವಿನ ಎಡಗಾಲಿಗೆ ಪೆಟ್ಟು

• **ಉದಯವಾಹಿನಿ, ಗುಂಡ್ಲುಪೇಟೆ**

ಗ್ರಾಮದ ಕೆರೆಬದಿಯಲ್ಲಿ ಮೇಯಲು ಬಿಟ್ಟಿದ್ದ ಹಸುವಿನ ಮೇಲೆ ದಾಳಿ ನಡೆಸಿದ ಚಿರತೆ ಎಡಗಾಲಿಗೆ ತೀವ್ರತರವಾಗಿ ಗಾಯಗೊಳಿಸಿರುವ ಘಟನೆ ತಾಲ್ಲೂಕಿನ ಮಲ್ಲಯ್ಯನಪುರ ಗ್ರಾಮದಲ್ಲಿ ನಡೆದಿದೆ.

ಮಲ್ಲಯ್ಯನಪುರ ಗ್ರಾಮದ ಸ್ವಾಮಿಗೌಡ ಎಂಬವರಿಗೆ ಸೇರಿದ ಹಸುವಿನ ಎಡಗಾಲಿಗೆ ಕಚ್ಚಿ ಮಾರಣಾಂತಿಕವಾಗಿ ಗಾಯಗೊಳಿಸಿದ ಹಿನ್ನೆಲೆ ನಡೆಯಲಾಗದೆ ಕುಸಿದು ಬಿದ್ದಿದೆ, ಕಳೆದ ಕೆಲ ದಿನಗಳಿಂದಲೂ ಚಿರತೆ ಉಪಟಳ ಹೆಚ್ಚಾಗಿದ್ದು ಜಾನುವಾರುಗಳನ್ನ ಮೇಯಲು ಬಿಡಲು ಸಹ ಭಯದ ವಾತಾವರಣ ನಿರ್ಮಾಣವಾಗಿದೆ ಎಂದು ಸ್ಥಳೀಯರು ಅಳಲು ತೋಡಿಕೊಂಡಿದ್ದಾರೆ, ರೈತಾಪಿ ವರ್ಗಕ್ಕೆ ಉಪಟಳ ನೀಡುತ್ತಿರುವ ಚಿರತೆ ಸೆರೆಗೆ ಬೋನ್ ಇರಿಸಬೇಕು ಹಾಗೆಯೇ ಚಿಕಿತ್ಸೆಗಾಗಿ ರೈತನಿಗೆ ಅರಣ್ಯ ಇಲಾಖೆ ಪರಿಹಾರ ನೀಡಬೇಕು ಎಂದು ಆಗ್ರಹಿಸಿದ್ದಾರೆ.

### ಶ್ರದ್ಧಾಭಕ್ತಿಯಿಂದ ಹನುಮ ಜಯಂತಿ ಆಚರಣೆ; ವಾಯುಪುತ್ರನಿಗೆ ಪೂಜೆ


ಉದಯವಾಹಿನಿ ಚಿತ್ರ

• **ಉದಯವಾಹಿನಿ, ಗುಂಡ್ಲುಪೇಟೆ**

ಹನುಮ ಜಯಂತಿ ಹಿನ್ನೆಲೆ ಪಟ್ಟಣದ ಚಾಮರಾಜನಗರ ರಸ್ತೆಯಲ್ಲಿರುವ ಹನುಮ ದೇಗುಲಕ್ಕೆ ತೆರಳಿದ ಸಾವಿರಾರು ಭಕ್ತರು ವಾಯುಪುತ್ರನ ದರ್ಶನ ಪಡೆದು ಪ್ರಸಾದ ಸ್ವೀಕರಿಸಿ ಪುನೀತರಾದರು.

ಪುರಸಭಾ ಮಾಜಿ ಅಧ್ಯಕ್ಷ ಪಿ.ಗಿರೀಶ್ ನೇತೃತ್ವದಲ್ಲಿ ವಿಜೃಂಭಣೆಯಿಂದ ಜರುಗಿದ ಹನುಮ ಜಯಂತಿಯಲ್ಲಿ ಮುಂಜಾನೆಯಿಂದಲೇ ಭಕ್ತಗಣಕ್ಕೆ ದರ್ಶನದ ವ್ಯವಸ್ಥೆ ಮಾಡಲಾಗಿತ್ತು. ದೇಗುಲದ ಸುತ್ತಲೂ ತಳಿರು ತೋರಣಗಳಿಂದ ಸಿಂಗಾರ ಮಾಡಲಾಗಿತ್ತು, ವಾಯುಪುತ್ರನಿಗೆ ವಿವಿಧ ರೀತಿಯ ಅಭಿಷೇಕವನ್ನ ಅರ್ಪಿಸಿ ಮಹಾಮಂಗಳಾರತಿ ನೆರವೇರಿಸಲಾಯಿತು.

### ಡಿವೈಡರ್‌ಗೆ ಡಿಕ್ಕಿ: ದಂಪತಿ ಸಾವು

• **ಉದಯವಾಹಿನಿ, ಮಧುಗಿರಿ**

ತಾಲ್ಲೂಕಿನ ಜಡೆಗೊಂಡನಹಳ್ಳಿ ಗ್ರಾಮದಲ್ಲಿ ಮುಂಜಾನೆ ರಸ್ತೆ ಬದಿಯ ಡಿವೈಡರ್‌ಗೆ ಕಾರು ಡಿಕ್ಕಿ ಹೊಡೆದು ದಂಪತಿ ಗಂಭೀರವಾಗಿ ಗಾಯಗೊಂಡು ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಇಬ್ಬರು ಗಂಭೀರವಾಗಿ ಗಾಯಗೊಂಡಿದ್ದಾರೆ. ಸೀಮಾಂಧ್ರ ಪ್ರದೇಶದ ಮಡಕಶಿರಾ ತಾಲ್ಲೂಕಿನ ಗುಂಡಂಪಲ್ಲಿ ಗ್ರಾಮದ ಕೃಷ್ಣಾರೆಡ್ಡಿ (45), ಪತ್ನಿ ಜ್ಯೋತಿ (42) ಮೃತಪಟ್ಟವರು. ಪ್ರಯಾಣ ಮಾಡುತ್ತಿದ್ದ ಸಂಬಂಧಿಕರಾದ ಚಿದಂಬರ ರೆಡ್ಡಿ (54), ಅವರ ಮಗ ಮಧುಸೂದನ್ ರೆಡ್ಡಿ (17) ಅವರಿಗೆ ಗಾಯವಾಗಿ ಜಿಲ್ಲಾ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.ಮಧುಗಿರಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

### ಆಂಜನೇಯರ ಜೀವನಾದರ್ಶ ಸಮಾಜಕ್ಕೆ ಬೆಳಕಾಗಲಿ : ಚೂಡಾರತ್ನಮ್ಮ


ಉದಯವಾಹಿನಿ ಚಿತ್ರ

• **ಉದಯವಾಹಿನಿ, ಮಂಡ್ಯ**

ಪಾಂಡುಪುರ ತಾಲ್ಲೂಕು ಕೋಡಿಹಳ್ಳಿ ಹೊಸೂರು ಗ್ರಾಮದ ಅಭಯ ಆಂಜನೇಯ ಸ್ವಾಮಿ ದೇವಸ್ಥಾನದ ವತಿಯಿಂದ ಏರ್ಪಡಿಸಿದ್ದ ಹನುಮ ಜಯಂತಿ ಕಾರ್ಯಕ್ರಮದಲ್ಲಿ ಕಲಿಯುಗದ ಶ್ರವಣಕುಮಾರ ಕೃಷ್ಣಕುಮಾರ್, ಮಾತೃಶ್ರೀ ಚೂಡಾರತ್ನಮ್ಮ ರವರನ್ನು ಗ್ರಾಮಸ್ಥರು, ದೇವಸ್ಥಾನದ ವತಿಯಿಂದ ಆತ್ಮೀಯವಾಗಿ ಬರಮಾಡಿಕೊಂಡು ಸನ್ಮಾನಿಸಲಾಯಿತು,ಸಮಷ್ಟಿ ಹಿತದೊಂದಿಗೆ ನಡೆಯುವ ಇಂತಹ ಧಾರ್ಮಿಕ ಉತ್ಸವಗಳು ನಮ್ಮ ನಾಡಿನ ಹೆಮ್ಮೆ, ಎಲ್ಲರ ಸಹಕಾರದೊಂದಿಗೆ ಇಂಥ ಕಾರ್ಯಕ್ರಮಗಳು ನಿರಂತರವಾಗಿ ಸಮಾಜದಲ್ಲಿ ಮುಂದುವರೆಯುತ್ತಿರಲಿ ಎಂದು ಆಶಿಸಿದರು. ಊರಿನ ಗಣ್ಯ ಮಾನ್ಯರು, ರಾಜಕೀಯ ಮುಖಂಡರು, ಸಂಘ ಸಂಸ್ಥೆಯ ಹಿರಿಯರು ಹಾಜರಿದ್ದರು.

ಅಂತರಾಳದಿಂದ..
EDITORIAL

# ಸರಕಾರಿ ನೌಕರಿ ಮತ್ತು ನಕಲಿ ಪ್ರಮಾಣ ಪತ್ರಗಳು

ನಕಲಿ ಪ್ರಮಾಣ ಪತ್ರಗಳ ಇಂಥ ಹಾವಳಿಯಿಂದಾಗಿ ಉನ್ನತ ಶಿಕ್ಷಣ ಕ್ಷೇತ್ರದ ದುರವಸ್ಥೆ ಬಯಲಿಗೆ ಬಂದಂತಾಗಿದೆ. ಸರಕಾರಿ ಪದವಿ ಕಾಲೇಜುಗಳಲ್ಲಿ ಕೆಲಸ ಮಾಡುತ್ತಿರುವ ಕೆಲವು ಅತಿಥಿ ಉಪನ್ಯಾಸಕರ ಪದವಿ ಪ್ರಮಾಣ ಪತ್ರಗಳು ಕೂಡ ನಕಲಿ ಎಂದು ಹೇಳಲಾಗುತ್ತಿದೆ. ಅಷ್ಟೇ ಅಲ್ಲ ಈ ನಕಲಿ ಪ್ರಮಾಣ ಪತ್ರಗಳನ್ನು ದೃಢೀಕರಿಸುವ ದಾಖಲೆಗಳು ಕೂಡ ನಕಲಿ ಎಂಬ ವರದಿ ಶೈಕ್ಷಣಿಕ ಕ್ಷೇತ್ರದ ಪರಿಸ್ಥಿತಿಯ ಮೇಲೆ ಬೆಳಕು ಚೆಲ್ಲುತ್ತದೆ. ಈ ಮಧ್ಯೆ, ಕಾಲೇಜು ಶಿಕ್ಷಣ ಇಲಾಖೆ ತಡವಾಗಿಯಾದರೂ ಇದನ್ನು ಸರಿಪಡಿಸಲು ಹೊರಟಿರುವುದು ಸರಿಯಾದರೂ ಅದರ ಕ್ರಮ ತುಂಬಾ ಗೊಂದಲಕಾರಿಯಾಗಿದೆ.


ನಕಲಿ ಪ್ರಮಾಣ ಪತ್ರಗಳ ನೈಜತೆಯನ್ನು ಪರೀಕ್ಷಿಸುವ ಕಾಲೇಜು ಶಿಕ್ಷಣ ಇಲಾಖೆಯ ಕ್ರಮ ಒಳ್ಳೆಯದು. ಆದರೆ ಅದಕ್ಕೆ ತಗಲುವ ಖರ್ಚು, ವೆಚ್ಚಗಳನ್ನು ಅತಿಥಿ ಉಪನ್ಯಾಸಕರೇ ಭರಿಸಬೇಕೆಂದು ಸದರಿ ಇಲಾಖೆ ಸೂಚಿಸಿರುವುದು ಮಾತ್ರ ಸೂಕ್ತವಲ್ಲ. ಅತ್ಯಂತ ಕಡಿಮೆ ಸಂಬಳದಲ್ಲಿ ಅಭದ್ರ ಸ್ಥಿತಿಯಲ್ಲಿ ಬದುಕುತ್ತಿರುವ ಅತಿಥಿ ಉಪನ್ಯಾಸಕರು ತಮ್ಮ ಪ್ರಮಾಣ ಪತ್ರಗಳು ನಕಲಿಯಲ್ಲ ಎಂದು ಸಾಬೀತು ಪಡಿಸಲು ತಾವೇ ಖರ್ಚು ಮಾಡಬೇಕೆಂದು ಹೇಳುವುದು ಅಮಾನವೀಯ ಕ್ರಮವಾಗಿದೆ. ತಮ್ಮ ಪ್ರಮಾಣ ಪತ್ರಗಳ ನೈಜತೆಯನ್ನು ಸಾಬೀತುಪಡಿಸಲು ಅತಿಥಿ ಉಪನ್ಯಾಸಕರು ಸ್ನಾತಕೋತ್ತರ ಪದವಿಯ ಅಂಕಪಟ್ಟಿ, ಘಟಿಕೋತ್ಸವದ ಪ್ರಮಾಣ ಪತ್ರ, ಪಿ.ಎಚ್‌ಡಿ, ಎಂ.ಫಿಲ್. ಮತ್ತಿತರ ಪ್ರಮಾಣ ಪತ್ರಗಳನ್ನು ಒದಗಿಸಬೇಕಾಗಿದೆ. ಇದಕ್ಕೆ ಸಂಬಂಧಿಸಿದ ವಿಶ್ವವಿದ್ಯಾನಿಲಯಗಳು ದುಬಾರಿ ಶುಲ್ಕವನ್ನು ನಿಗದಿ ಪಡಿಸಿವೆ. ಇದು ಈಗಾಗಲೇ ಹಣಕಾಸಿನ ತೊಂದರೆಯಲ್ಲಿರುವ ಅತಿಥಿ ಉಪನ್ಯಾಸಕರ ಮೇಲೆ ಮತ್ತೊಂದು ಹೊರೆಯನ್ನು ಹೊರಿಸಿದಂತಾಗಿದೆ. ಅತಿಥಿ ಉಪನ್ಯಾಸಕರ ಶೈಕ್ಷಣಿಕ ದಾಖಲೆಗಳ ನೈಜತೆಯನ್ನು ಖಚಿತ ಪಡಿಸಲು ಕಾಲೇಜು ಶಿಕ್ಷಣ ಇಲಾಖೆ 2017ರಲ್ಲಿಯೂ ಕ್ರಮವನ್ನು ಕೈಗೊಂಡಿತ್ತು. ಆಗ ಸದರಿ ಇಲಾಖೆಯೇ ಎಲ್ಲಾ ಖರ್ಚು ವೆಚ್ಚಗಳನ್ನು ಭರಿಸಿತ್ತು. ಆಗ 23 ಅಭ್ಯರ್ಥಿಗಳ ಪಿಎಚ್‌ಡಿ ಪ್ರಮಾಣ ಪತ್ರಗಳು ನಕಲಿ ಎಂದು ಬಯಲಿಗೆ ಬಂದಿತ್ತು. ಅವರ ಮೇಲೆ ಕಾಲೇಜು ಶಿಕ್ಷಣ ಇಲಾಖೆ ಕ್ರಿಮಿನಲ್ ಪ್ರಕರಣವನ್ನು ದಾಖಲಿಸಿತ್ತು. ಆಗಿನಂತೆ ಈಗಲೂ ಕೂಡ ಕ್ರಿಮಿನಲ್ ಪ್ರಕರಣವನ್ನು ದಾಖಲಿಸಬಹುದಾಗಿದೆ. ಆದರೆ ಪ್ರಮಾಣ ಪತ್ರಗಳ ಅಸಲೀತನವನ್ನು ಅಭ್ಯರ್ಥಿಗಳೇ ಸಾಬೀತುಪಡಿಸುವ ಪ್ರಕ್ರಿಯೆಯಲ್ಲಿ ನಕಲಿ ಪ್ರಮಾಣ ಪತ್ರಗಳನ್ನು ಪತ್ತೆ ಹಚ್ಚುವುದು ಸುಲಭದ ಕೆಲಸವಲ್ಲ. ಅಭ್ಯರ್ಥಿಗಳು ಒದಗಿಸುವ ಪ್ರಮಾಣ ಪತ್ರಗಳು ಅಸಲಿಯೋ ನಕಲಿಯೋ ಎಂಬುದನ್ನು ಖಚಿತಪಡಿಸುವ ಅಧಿಕಾರ ಪ್ರಾಂಶುಪಾಲರಿಗೆ ಇಲ್ಲ. ಹೀಗಾಗಿ ತಪ್ಪು ಮಾಡಿರುವ ಅಭ್ಯರ್ಥಿಗಳ ಮೇಲೆ ಕಾನೂನು ಕ್ರಮವನ್ನು ಜರುಗಿಸಲು ಆಗುವುದಿಲ್ಲ.

> **ವರ್ಷದಿಂದ ವರ್ಷಕ್ಕೆ ಶಿಕ್ಷಣದ ಗುಣಮಟ್ಟ ಕುಸಿಯುತ್ತಿದೆ. ಈಗಂತೂ ಪದವಿಗಳ ಮಾರಾಟ ಮತ್ತು ಖರೀದಿ ವ್ಯವಹಾರ ವ್ಯಾಪಕವಾಗಿ ನಡೆಯುತ್ತಿದೆ. ಹಣಕ್ಕಾಗಿ ನಕಲಿ ಪದವಿಗಳನ್ನು ಒದಗಿಸುವ ಜಾಲ ಕರ್ನಾಟಕ ಸೇರಿದಂತೆ ದೇಶದ ಎಲ್ಲಾ ಕಡೆ ಸಕ್ರಿಯವಾಗಿದೆ.**
>
> **ಸರಕಾರಿ ಹಾಗೂ ಖಾಸಗಿ ವಿಶ್ವವಿದ್ಯಾನಿಲಯಗಳ ಹೆಸರಿನಲ್ಲಿ ನಕಲಿ ಪ್ರಮಾಣಪತ್ರಗಳನ್ನು ಹಾಡ ಹಗಲೇ ಮಾರಾಟ ಮಾಡಲಾಗುತ್ತಿದೆ ಎಂದು ದೂರುಗಳು ಸಂಬಂಧಿಸಿದ ಇಲಾಖೆಗಳಿಗೆ ಬರುತ್ತಲೇ ಇವೆ. ಆದರೂ ನಿಲ್ಲಿಸಲು ಆಗುತ್ತಿಲ್ಲ. ನಮ್ಮ ಕರ್ನಾಟಕದಲ್ಲೇ ಬಳ್ಳಾರಿಯ ಶ್ರೀ ಕೃಷ್ಣ ದೇವರಾಯ ವಿಶ್ವವಿದ್ಯಾನಿಲಯದ ಘಟಿಕೋತ್ಸವದ ಪ್ರಮಾಣ ಪತ್ರಗಳನ್ನು ಹಣ ಪಡೆದು ವಿತರಿಸಿದ ಲಕ್ಷಾಂತರ ರೂಪಾಯಿಗಳ ಹಗರಣ ಇತ್ತೀಚೆಗೆ ಬೆಳಕಿಗೆ ಬಂದಿತ್ತು. ಪತ್ರಿಕೆಗಳಲ್ಲಿ ಜಾಹೀರಾತು ಕೊಟ್ಟು ಆ ಮೂಲಕ ಜನರನ್ನು ನಂಬಿಸಿ ನಕಲಿ ಪ್ರಮಾಣ ಪತ್ರಗಳನ್ನು ಮಾರಾಟ ಮಾಡಲಾಗುತ್ತಿದೆ ಎಂಬುದು ಜನಜನಿತವಾದ ಸಂಗತಿಯಾಗಿದೆ. ಈ ನಕಲಿ ಪ್ರಮಾಣ ಪತ್ರವನ್ನೇ ಉಪಯೋಗಿಸಿಕೊಂಡು ಸರಕಾರಿ ಹಾಗೂ ಖಾಸಗಿ ವಲಯಗಳಲ್ಲಿ ನೌಕರಿ ಪಡೆದಿರುವವರು ಕೂಡ ಸಾಕಷ್ಟು ಸಂಖ್ಯೆಯಲ್ಲಿ ಇದ್ದಾರೆ.**

ಕಾಲೇಜು ಶಿಕ್ಷಣ ಇಲಾಖೆಯೇ ಪ್ರಮಾಣ ಪತ್ರಗಳ ಅಸಲೀತನವನ್ನು ಪರಿಶೀಲನೆ ಮಾಡುವ ಕೆಲಸವನ್ನು ಕೈಗೆತ್ತಿಕೊಂಡಿದ್ದರೆ ನಕಲಿ ಪ್ರಮಾಣ ಪತ್ರವನ್ನು ಸಲ್ಲಿಸಿದವರ ಮೇಲೆ ಕಾನೂನು ಕ್ರಮವನ್ನು ಕೈಗೊಳ್ಳಲು ಸಾಧ್ಯವಿತ್ತು. ಇಂಥ ಅವಕಾಶವನ್ನು ಇಲಾಖೆ ಬಿಟ್ಟುಕೊಟ್ಟಿರುವುದು ಸರಿಯಲ್ಲ. ಕಾಲೇಜು ಶಿಕ್ಷಣ ಇಲಾಖೆಯ ಈ ಲೋಪದಿಂದಾಗಿ ಶೈಕ್ಷಣಿಕ ಕ್ಷೇತ್ರದಲ್ಲಿ ತುಂಬಿ ತುಳುಕುತ್ತಿರುವ ಹೊಲಸು ಮುಂದುವರಿಯಲು ಮತ್ತಷ್ಟು ಅವಕಾಶ ನೀಡಿದಂತಾಗಿದೆ.

ನಕಲಿ ಪ್ರಮಾಣ ಪತ್ರಗಳನ್ನು ಸಲ್ಲಿಸಿ ನೌಕರಿ ಗಿಟ್ಟಿಸಿಕೊಳ್ಳುವವರಿಂದ ಏನನ್ನು ನಿರೀಕ್ಷಿಸಲು ಸಾಧ್ಯ ಶೈಕ್ಷಣಿಕ ಕ್ಷೇತ್ರದಲ್ಲಿ ಇಂಥವರು ತುಂಬಿಕೊಂಡರೆ ವಿದ್ಯಾರ್ಥಿಗಳ ಭವಿಷ್ಯದ ಮೇಲೆ ಕಲ್ಲು ಚಪ್ಪಡಿ ಎಳೆದಂತಾಗುವುದಿಲ್ಲವೇ? ಈಗಾಗಲೇ ಬೇರು ಬಿಟ್ಟಿರುವ ಈ ಭ್ರಷ್ಟಾಚಾರವನ್ನು ತೊಲಗಿಸುವುದು ಸುಲಭದ ಸಂಗತಿಯಲ್ಲ.ಈ ನಕಲಿ ಪ್ರಮಾಣ ಪತ್ರದಂತೆ ಗೌರವ ಡಾಕ್ಟರೇಟ್‌ಗಳ ಬಹುದೊಡ್ಡ ಹಗರಣವಿದೆ. ಸಾಮಾಜಿಕವಾಗಿ ಅಸಾಧಾರಣ ಸಾಧನೆಯನ್ನು ಮಾಡಿದವರಿಗೆ ಈ ಹಿಂದೆ ಅಪರೂಪದ ಸಂದರ್ಭಗಳಲ್ಲಿ ಗೌರವ ಕೊಡಲಾಗುತ್ತಿತ್ತು. ಕನ್ನಡದ ವರ ನಟ ರಾಜಕುಮಾರ್ ಅವರಿಗೆ ಮೈಸೂರು ವಿಶ್ವವಿದ್ಯಾನಿಲಯ ಹಿಂದೆ ಗೌರವ ಡಾಕ್ಟರೇಟ್ ನೀಡಿತ್ತು.

ಆದರೆ ರಾಜಕುಮಾರ್ ಅವರು ತಮ್ಮ ಹೆಸರಿನ ಮುಂದೆ ಇದನ್ನು ಬಳಸುತ್ತಿರಲಿಲ್ಲ. ಈಗಂತೂ ರಿಯಲ್ ಎಸ್ಟೇಟ್ ಮಾಫಿಯಾಗಳು, ಅಕ್ರಮ ಗಣಿಗಾರಿಕೆಯ ಖದೀಮರು, ಸಕ್ಕರೆ ಕಾರ್ಖಾನೆಗಳ ಮಾಲಕರು ಹಣ ಕೊಟ್ಟು ಗೌರವ ಡಾಕ್ಟರೇಟ್ ಗಿಟ್ಟಿಸಿಕೊಳ್ಳುತ್ತಿದ್ದಾರೆ ಎಂಬ ಆರೋಪಗಳು ಇವೆ. ಹಂಪಿ ವಿಶ್ವವಿದ್ಯಾನಿಲಯದ ನಾಡೋಜ ಪದವಿಯ ಪರಿಸ್ಥಿತಿಯೂ ಭಿನ್ನವಾಗಿಲ್ಲ.



# ರಾಮಾಯಣ

## ಲಕ್ಷ್ಮಣನು ಶ್ರೀರಾಮನಿಗೆ ಹೇಳಿದ ಸಮಾಧಾನ

• ಹಿಂದಿನ ಸಂಚಿಕೆಯಿಂದ **120 ನೆಯ ಅಧ್ಯಾಯ**

ಆದ್ದರಿಂದ ಯಾರಾದರೂ ನನ್ನ ಪ್ರಾಣಕಾಂತೆಯಾದ ಜಾನಕಿಯನ್ನು ತಂದುಕೊಡದಿದ್ದರೆ ಭೂ ಮಂಡಲವನ್ನು ಸಮಸ್ತ ವನಪರ್ವತ ಸಹಿತವಾಗಿ ಉರುಳಿಸಿ ತಲೆಕೆಳಗುಮಾಡುತ್ತೇನೆ ಎಂದು ಆರ್ಭಟಿಸಿದನು.

**ಲಕ್ಷ್ಮಣನು ಶ್ರೀರಾಮನಿಗೆ ಹೇಳಿದ ಸಮಾಧಾನ**

ಈ ಪ್ರಕಾರದಲ್ಲಿ ಶ್ರೀರಾಮನು ವಿರಹತಾಪದಿಂದ ಕಂಗೆಟ್ಟು ಸೀತಾದೇವಿಯನ್ನು ನಾನಾದಿಕ್ಕುಗಳಲ್ಲಿಯೂ ಹುಡುಕಿ ಕಾಣದೆ ಪ್ರಳಯಕಾಲಾಗ್ನಿಯಂತೆ ಅತ್ಯಂತ ಕೋಪಯುಕ್ತನಾದನು. ಹೆದೆಯೇರಿಸಿದ ಬಿಲ್ಲನ್ನು ನೋಡುತ್ತ ಅಡಿಗಡಿಗೆ ನಿಟ್ಟುಸಿರುಬಿಡುತ್ತ ಪ್ರಳಯಕಾಲದ ರುದ್ರನಂತೆ ಆವೇಶ ತಳೆದನು. ಎಂದೂ ಕಾಣದ ಅವನ ಕೋಪಾತಿರೇಕವನ್ನು ಕಂಡು ಲಕ್ಷ್ಮಣನು ಹೀಗೆಂದನು: ಶ್ರೀರಾಮ, ವ್ಯಾನುಗುಣಸಂಪತ್ತಿಯುಳ್ಳವನಾದ ನೀನು ಈಗ ಕೋಪಪರವಶನಾಗಿ ನಿನ್ನ ಸ್ವಭಾವ ಗುಣವನ್ನು ಒದಿಬಂದೆ ಚಂದ್ರನಲ್ಲಿ ಸುಸ್ತ ಜಗತ್ತಿಗೂ ಸಂತೋಷಕರದಿಂದ ಕಾಂತಿಯ ಸೂರ್ಯನಲ್ಲಿ ಬಿಜಕ್ಕೂ ವಾಯುವಿನಲ್ಲಿ ಚಲನವೂ ಭೂಮಿಯಲ್ಲಿ ಕ್ಷಮೆಯೂ ಇರುವಂತೆ ನಿನ್ನಲ್ಲಿ ಸೌಜನ್ಯಗುಣವೂ ಸರ್ವಜೀವನದಾವರತ್ಯವೂ ಇವೆಯೆಂದು ನೀನು ಲೋಕದಲ್ಲಿ ಕೀರ್ತಿ ಪಡೆದಿರುವೆ. ಲೋಕದಲ್ಲಿ ಒಬ್ಬ ಪ್ರಾಣಿಯು ಅಪರಾಧ ಮಾಡಿದರೆ ಅವನ ಅಪರಾಧಕ್ಕಾಗಿ ಸರ್ವ ಪ್ರಾಣಿಗಳನ್ನೂ ಸಂಹರಿಸಬೇಕೆಂಬುದು ನೀತಿಯದ ಲೋಕದಲ್ಲಿ ಒಬ್ಬನ ಅಪರಾಧಕ್ಕಾಗಿ ಬಲವಂತನು ಬಹುಮಲಯನ್ನು ಕೊಲ್ಲುವುದು ನ್ಯಾಯಸಂಮತವಲ್ಲ, ಅರಸರು ಒಬ್ಬನು ಅಪರಾಧವನ್ನು ಮಾಡಿದರೆ ಆ ಅಪರಾಧದ ಬಲಾಬಲಗಳನ್ನು ವಿಚಾರಿಸಿ ಅವನನ್ನು ಮಾತ್ರವೇ ದುಡಿಸುವರಲ್ಲದೆ ಉಳಿದವರನ್ನು ದಂಡಿಸರು. ಸಮಸ್ತ ಪ್ರಾಣಗಳಿಗೂ ಶರಣ್ಯನಾಗಿ ಕೃಪಾಳುವಾದ ನಿನಗೆ ನಿನ್ನ ಹತ್ನಿಯ ಸ್ಪಷ್ಟಳಾಗುವುದನ್ನು ಯಾರು ತಾನೇ ಸಹಿಸುವರು ಸೀತಾದೇವಿಯನ್ನು ಯಾವನು ಅಪಹರಿಸಿರುವನೋ ಅವನನ್ನು ಹುಡುಕೋಟೆ. ಧನುರ್ಧಾರಿಯಾಗಿ ಅನ್ವೇಷಣೆ ಮಾಡುತ್ತಾ ಹೊರಡು. ನಾನು ನಿನಗೆ ಸಹಾಯಮಾಡುತ್ತೇನೆ. ಈ ವನದಲ್ಲಿರುವ ಋಷಿಗಳೂ ನಮಗೆ ನೆರವಾಗುತ್ತಾರೆ. ಪರ್ವತಗಳು ಗುಹೆಗಳು ಸಮುದ್ರಗಳು ವನಗಳು ಕೊಳಗಳು ದೇವಗಂಧರ್ವಲೋಕಗಳು ಮೊದಲಾದ ಸಮಸ್ಯೆ ಸ್ಥಾನಗಳಲ್ಲಿಯೂ ಸೀತಾದೇವಿಯನ್ನು ಹುಡುಕೋಣ ಮತ್ತು ಅಪಹರಿಸಿದವನನ್ನು ಕಂಡುಹಿಡಿಯೋಣ. ಅನಂತರ ನಯ ವಿನಯಗಳಿಂದ ಕೇಳಿದರೂ ಸೀತೆಯನ್ನೊಪ್ಪಿಸದಿದ್ದರೆ, ವಜ್ರಾಯುಧಸದೃಶಗಳಾದ ನಿನ್ನ ನಿಶಿತಬಾಣಗಳನ್ನು ಪ್ರಯೋಗಿಸಿ ರಕ್ಕುದನ್ನು ಮಾಡಬಹುದು ಎಂದು ಸಮಾಧಾನ ಹೇಳಿದನು. ಶ್ರೀರಾಮ.

**ಲಕ್ಷ್ಮಣನು ಶ್ರೀ ರಾಮನಿಗೆ ಔಚಿತ್ಯವನ್ನು ಹೇಳಿದ್ದು:** ಈ ಪ್ರಕಾರ ಸೀತಾದೇವಿಯ ವಿರಹದಿಂದ ಅನಾಥನಂತೆ ಕಂಗೆಟ್ಟು ಚೈತನ್ಯಗುಂದಿ ಹಂಬಲಿಸುತ್ತಿದ್ದ ಪ್ರಿಯ ರಾಮನನ್ನು ಕಂಡು, ಲಕ್ಷಣನು ಆತನ ಪಾದಗಳನ್ನು ಮುಟ್ಟಿನಮಸ್ಕರಿಸಿ ವಿನಯದಿಂದ ಹೇಳಿದನು

**ಮುಂದುವರಿಯುವುದು...**




# ಅಸಾಮಾನ್ಯ ಜೀವ ಚೈತನ್ಯರು



■ ಶ್ರೀ. ಸುಭಾಷ್ ಹೇಮಣ್ಣಾ
■ ಚವ್ಹಾಣ, ಪರಮವಾಡಿ ತಾಂಡೆ,

ದೇಹದಂಗಾಂಗಳವು ಸ್ವಾಧೀನವಿರದೆ ಅಳಲದವರು
ದೇಹಾಂಗ ಶುದ್ಧುಳ್ಳವರಿಗೆ ಆದರ್ಶ ವಿಶೇಷ ಚೇತನರು
ಕಂಗಳಲ್ಲಿ ಬೆಳಕಿರದ ಚಿಂತೆಯನು ಸುಟ್ಟವರು
ಪರರ ಬಾಳಲಿ ಆರದ ಪ್ರಣತಿ ಹಚ್ಚಿದವರು
ಮಾತು ಹೊರಡಲು ನಾಲಿಗೆ ನಡುಗಿದರು
ದೃಢತೆ ಮನದಲಿ ಎಂದಿಗೂ ಕುಗ್ಗದ ಧೀರರು
ಜೇನುಗೂಡವರು ಸಾಧನೆ ಸಾರ್ಥಕತೆ ಸವಿಜೇನವರು
ಡೊಂಕು ಕಬ್ಬಿನೊಳಗಣ ಸವಿ ಹಾಲ ಶರಧಿಯವರು
ಅಂಕುಡೊಂಕ ಬೆಟ್ಟದೊಡಲಲಿ ಭೋರ್ಗರೆವ ಜಲಧಾರೆಯವರು
**ದಿವ್ಯಾಂಗರಿವರು ದಿವ್ಯಾತ್ಮರು;** ವಿಕಲಾಂಗರಿವರು ವಿಶೇಷ ಚೇತನರು
ದೈಹಿಕ ಅಡೆತಡೆಗಳವರಿಗೆ ಬಂಧನವಲ್ಲ, ನಂದನ
ಚೇತನರ ಇಚ್ಛಾಶಕ್ತಿಗಸಾಧ್ಯ ಇರುವುದೇನು ಮುಂದಣ
ಸಾಧನೆ ಶಿಖರವನ್ನೇರಲವರು ಸದಾ ಶುದ್ಧ ಚಂದನ
ಸಾಮಾನ್ಯರಂತೆ ಸ್ಪರ್ಧೆಯಲವರು ಸಚೇತನ ಕುಂದಣ
ಸಾಧನಾ ಸಾಹಸ, ಛಲ, ಶ್ರಮ, ಆತ್ಮವಿಶ್ವಾಸ
ಎಲ್ಲಾರೆಲ್ಲರಿಗೂ ಸಾಧನೆ ಸ್ಫೂರ್ತಿ ಚಿಲುಮೆ ಶ್ವಾಸ
ಎಡವಿದರೂ ಮತ್ತೆದ್ದು ಮುನ್ನುಗ್ಗುವ ಧೀರ ಗುಣ,
ಜೀವನಕ್ಕೊಂದು ಹೊಸ ಅರ್ಥ ತಂದಿದೆ ಕಾಣ
ಭಿನ್ನ ವಿಭಿನ್ನ ಕಲಾ ಕೌಸಲ್ಯ ಪ್ರತಿಭಾ ಚತುರರು
ಶರೀರ ಶಾರೀರ ಸಾರ ಸಂಹಿತಾ ಮಾಧುರ್ಯರು
ಗಂಧ ಡೊಂಕಿದ್ದಡೇನು ಕಮ್ಮನೆ ಘಮಲಿವರು
ಆಕಳು ಕಪ್ಪಾದಡೆನು ಕ್ಷೀರಾಮೃತ ಸಾಗರದವರು
ದೀನರಂತೆ ಕಾಣುವುದೇಕೆ ವಿಚೇತನರನು ಮನುಜರು
ಅವರು ನಮ್ಮಂತೆಯೇ ಸಾಮಾನ್ಯ ರೊಳಗಣ ಅಸಾನ್ಯರು
ಅವರೊಳಗಿನ ಅನಂತ ಶಕ್ತಿಯನ್ನು ಅರಿಯದ ಅದಮರು
ಸೌಜನ್ಯ ಸುಗುಣ ಸಂಪನ್ನ ಕ್ರಿಯಾಶೀಲ ಚೇತನರು
ಪುಟಿವ ಚೆಂಡು, ಸೆಳೆವ ಕಾಂತ, ಚಿಮ್ಮುವ ಕಾರಂಜಿಯಿವರು
ವಿಶಿಷ್ಟ ಚೇತನರು ಆಶಾ ಕಿರಣ ವಿಶ್ವತೋಮುಖ ಬೆಳಕಿವರು

• ಉದಯವಾಹಿನಿ, ವಿಶೇಷ



# ಬೇವಿನ ಎಲೆ ಈ ಎಲ್ಲಾ ಸಮಸ್ಯೆಗೆ ಪರಿಹಾರ

ಬೆಳಗ್ಗೆ ಖಾಲಿ ಹೊಟ್ಟೆಯಲ್ಲಿ ಒಂದೆರಡು ಬೇವಿನ ಎಲೆಯನ್ನು ತಿನ್ನುವ ಅಭ್ಯಾಸ ಮಾಡಿಕೊಂಡಿದ್ರೆ ಚರ್ಮಕ್ಕೆ ಸಂಬಂಧಿಸಿದ ಹಲವಾರು ಸಮಸ್ಯೆಗಳಿಂದ ಪಾರಾಗಬಹುದು. ಬೇವು ಒಂದು ಔಷಧೀಯ ಗುಣಗಳನ್ನು ಹೊಂದಿರುವ ಗಿಡಮೂಲಿಕೆಯಾಗಿದೆ. ಇದು ಕಹಿ ರುಚಿಯನ್ನು ಹೊಂದಿದ್ದರೂ ಇದರಿಂದಾಗು ಪ್ರಯೋಜನಗಳು ಅಷ್ಟಿಷ್ಟಲ್ಲ. ಉತ್ತಮ ಆರೋಗ್ಯಕ್ಕಾಗಿ ಖಾಲಿ ಹೊಟ್ಟೆಯಲ್ಲಿ ಬೇವನ್ನು ತಿನ್ನಲು ಆಯುರ್ವೇದ ತಜ್ಞರು ಸಲಹೆ ನೀಡುತ್ತಾರೆ. ಬೇವನ್ನು ಸೇವಿಸುವುದು ಆರೋಗ್ಯಕ್ಕೆ ಪ್ರಯೋಜನಕಾರಿ ಎಂದು ಪರಿಗಣಿಸಲಾಗುತ್ತದೆ. ಬೇವು ಬ್ಯಾಕ್ಟೀರಿಯಾ ವಿರೋಧಿ, ಶಿಲೀಂಧ್ರ ವಿರೋಧಿ, ಉರಿಯೂತ ನಿವಾರಕ ಮತ್ತು ಉತ್ಕರ್ಷಣ ನಿರೋಧಕ ಗುಣಗಳನ್ನು ಹೊಂದಿದೆ. ಇದು ಅನೇಕ ಆರೋಗ್ಯ ಸಮಸ್ಯೆಗಳನ್ನು ನಿವಾರಿಸಲು ಸಹಾಯ ಮಾಡುತ್ತದೆ.

**ಆಯುರ್ವೇದ ತಜ್ಞರ ಸಲಹೆ:** ಯೋಗ, ಪ್ರಕೃತಿ ಚಿಕಿತ್ಸೆ ಪೋಷಣೆ ಮತ್ತು ಆಯುರ್ವೇದ ತಜ್ಞ ಮೇವಾರ್ ವಿಶ್ವವಿದ್ಯಾಲಯದ ಪ್ರಾಧ್ಯಾಪಕ ಮತ್ತು ಜೈಪುರದ ಬಾಪುನಗರದ ಪ್ರಕೃತಿ ಚಿಕಿತ್ಸಾ ಆಸ್ಪತ್ರೆಯ ಹಿರಿಯ ವೈದ್ಯ ಡಾ. ಕಿರಣ್ ಗುಪ್ತಾ ಅವರು, ಖಾಲಿ ಹೊಟ್ಟೆಯಲ್ಲಿ ಬೇವಿನ ಎಲೆಗಳನ್ನು ತಿನ್ನುವುದರಿಂದ ಯಾವ ರೋಗಗಳು ಗುಣವಾಗಬಲ್ಲದು ಎನ್ನುವುದರ ಬಗ್ಗೆ ತಿಳಿಸಿದ್ದಾರೆ.

**ರಕ್ತದಲ್ಲಿನ ಸಕ್ಕರೆಯನ್ನು ನಿಯಂತ್ರಿಸುತ್ತದೆ:** ಬೇವು ಮಧುಮೇಹ ವಿರೋಧಿ ಗುಣಗಳನ್ನು ಹೊಂದಿದೆ. ಖಾಲಿ ಹೊಟ್ಟೆಯಲ್ಲಿ ಬೇವಿನ ಎಲೆಗಳನ್ನು ಜಗಿಯುವುದರಿಂದ ದೇಹದಲ್ಲಿ ರಕ್ತದಲ್ಲಿನ ಸಕ್ಕರೆ ಮಟ್ಟವನ್ನು ನಿಯಂತ್ರಿಸಲು ಸಹಾಯ ಮಾಡುತ್ತದೆ ಮತ್ತು ರಕ್ತದ ಮಟ್ಟ ವೇಗವಾಗಿ ಹೆಚ್ಚಾಗುವುದನ್ನು ತಡೆಯುತ್ತದೆ.

**ಬಾಯಿಯ ಆರೋಗ್ಯ ಸಮಸ್ಯೆಗಳಿಗೆ ಪ್ರಯೋಜನಕಾರಿ:** ಔಷಧೀಯ ಗುಣಗಳಿಂದ ಸಮೃದ್ಧವಾಗಿರುವ ಬೇವಿನ ಎಲೆಗಳನ್ನು ಅಗಿಯುವುದು ಬಾಯಿಯ ಆರೋಗ್ಯವನ್ನು ಸುಧಾರಿಸಲು ಪ್ರಯೋಜನಕಾರಿಯಾಗಿದೆ.

> **ತಲೆಹೊಟ್ಟನ್ನು ತಡೆಯುತ್ತದೆ**
>
> **ಬೇವಿನ ಗುಣಗಳು ನೆತ್ತಿಗೆ ಸಹ ಪ್ರಯೋಜನಕಾರಿಯಾಗಿದೆ. ಖಾಲಿ ಹೊಟ್ಟೆಯಲ್ಲಿ ಬೇವಿನ ಎಲೆಗಳನ್ನು ಅಗಿಯುವುದರಿಂದ ನೆತ್ತಿಯ ಶಿಲೀಂಧ್ರಗಳ ಸೋಂಕನ್ನು ತಡೆಗಟ್ಟಬಹುದು, ತಲೆಹೊಟ್ಟು ಕಡಿಮೆ ಮಾಡಬಹುದು, ನೆತ್ತಿಯಲ್ಲಿ ರಕ್ತ ಪರಿಚಲನೆ ಸುಧಾರಿಸಬಹುದು ಮತ್ತು ಕೂದಲಿನ ಸಮಸ್ಯೆಗಳನ್ನು ತಡೆಯಬಹುದು.**

ಇದನ್ನು ಅಗಿಯುವುದರಿಂದ ಬಾಯಿಯ ಬ್ಯಾಕ್ಟೀರಿಯಾಗಳು ಕಡಿಮೆಯಾಗೋದಲ್ಲದೆ, ಬಾಯಿಯ ದುರ್ವಾಸನೆಯನ್ನು ಕಡಿಮೆ ಮಾಡುತ್ತದೆ. ವಸಡು ಕೊಳೆತ ಮತ್ತು ಹಲ್ಲಿನ ಕುಳಿಗಳನ್ನು ತಡೆಯಲು ಸಹಾಯ ಮಾಡುತ್ತದೆ.

**ಉರಿಯೂತವನ್ನು ಕಡಿಮೆ ಮಾಡುತ್ತದೆ:** ಬೇವು ಉರಿಯೂತದ ಗುಣಗಳನ್ನು ಹೊಂದಿದೆ. ಇದನ್ನು ಸೇವಿಸುವುದರಿಂದ ದೇಹದಲ್ಲಿ ಉರಿಯೂತವನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ. ಇದು ದೇಹವನ್ನು ಸೋಂಕುಗಳಿಂದ ರಕ್ಷಿಸುತ್ತದೆ, ರೋಗನಿರೋಧಕ ಶಕ್ತಿಯನ್ನು ಹೆಚ್ಚಿಸುತ್ತದೆ.

**ಚರ್ಮದ ಅಲರ್ಜಿಯನ್ನು ತಡೆಯುತ್ತದೆ:** ಬೇವಿನ ಎಲೆಗಳನ್ನು ಅಗಿಯುವುದು ನೈಸರ್ಗಿಕವಾಗಿ ರಕ್ತವನ್ನು ಶುದ್ಧೀಕರಿಸಲು ಮತ್ತು ರಕ್ತ ಪರಿಚಲನೆ ಸುಧಾರಿಸಲು ಸಹಾಯ ಮಾಡುತ್ತದೆ. ಬೇವಿನ ಉತ್ಕರ್ಷಣ ನಿರೋಧಕ, ಮತ್ತು ಉರಿಯೂತ ನಿವಾರಕ, ಬ್ಯಾಕ್ಟೀರಿಯಾ ವಿರೋಧಿ ಮತ್ತು ಶಿಲೀಂಧ್ರ ವಿರೋಧಿ ಗುಣಲಕ್ಷಣಗಳು ಚರ್ಮಕ್ಕೆ ಹಲವು ವಿಧಗಳಲ್ಲಿ ಪ್ರಯೋಜನಕಾರಿಯಾಗಿದೆ. ಅವು ಬ್ಯಾಕ್ಟೀರಿಯಾದ ಸೋಂಕನ್ನು ತಡೆಗಟ್ಟಲು, ಮೊಡವೆಗಳನ್ನು ಕಡಿಮೆ ಮಾಡಲು, ಚರ್ಮದ ತುರಿಕೆಯನ್ನು ಶಮನಗೊಳಿಸಲು, ಉರಿಯೂತವನ್ನು ಕಡಿಮೆ ಮಾಡಲು ಮತ್ತು ಚರ್ಮವನ್ನು ಆಳವಾಗಿ ಶುದ್ಧೀಕರಿಸಲು ಸಹಾಯ ಮಾಡುತ್ತದೆ.

# ಶ್ರೀರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಮಂತ್ರಾಲಯ ಶ್ರೀಗಳಿಂದ ಶ್ರೀಮನ್ ಮೂಲ ಶ್ರೀರಾಮಚಂದ್ರದೇವರ ಪೂಜೆ

• **ಉದಯವಾಹಿನಿ, ಬೆಂಗಳೂರು**

ಜಯನಗರ ಐದನೇ ಬಡಾವಣೆಯಲ್ಲಿರುವ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಪರಮಪೂಜ್ಯ ಶ್ರೀ 1008 ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರು ತಮ್ಮ ಅಮೃತ ಹಸ್ತದಿಂದ ಶ್ರೀಮನ್ ಮೂಲ ರಾಮಚಂದ್ರ ದೇವರ ಸಂಸ್ಥಾನ ಪೂಜೆ ಮತ್ತು ಹನುಮದ್ವತ ಪೂಜೆಯೊಂದಿಗೆ ಶ್ರೀ ರಾಘವೇಂದ್ರ ಸ್ವಾಮಿಗಳ ಮೂಲ ಪಾದುಕೆ


ಉದಯವಾಹಿನಿ ಚಿತ್ರ

ಪೂಜೆ ಮತ್ತು ಶ್ರೀ ರಾಘವೇಂದ್ರ ಸ್ವಾಮಿಗಳ ಬೃಂದಾವನಕ್ಕೆ ಮಹಾ ಮಂಗಳಾರತಿಯನ್ನು ನೆರವೇರಿಸಿದರು ಎಂದು ಶ್ರೀ ನಂದಕಿಶೋರ್ ಆಚಾರ್ಯರು ತಿಳಿಸಿದರು

ಈ ಸಂದರ್ಭದಲ್ಲಿ ಶ್ರೀ ಮಠದ ಹಿರಿಯ ವ್ಯವಸ್ಥಾಪಕರಾದ ಆರ್ ಕೆ ವಾದೀಂದ್ರಾಚಾರ್ ಮತ್ತು ಸಿಬ್ಬಂದಿಗಳು ಭಕ್ತರು ಭಾಗವಹಿಸಿ ಶ್ರೀಹರಿ ವಾಯು ಗುರುಗಳ ಅನುಗ್ರಹಕ್ಕೆ ಪಾತ್ರರಾದರು.

# ಖಾಪ್ರೋಳಿ ನೀವೂ ಮಾಡಿ; ದೋಸೆಗಿಂತ ಮೃದು!



ಮಹಾರಾಷ್ಟ್ರದ ಸಂಸ್ಕೃತಿಯಲ್ಲಿ ಹಲವು ರೀತಿಯ ಖಾದ್ಯಗಳ ಮಾಡಿ ಸವಿಯೋದು ನೋಡಬಹುದು. ಅದ್ರಲ್ಲೂ ಹಲವು ಖಾದ್ಯಗಳು ಮಹಾರಾಷ್ಟ್ರದಲ್ಲಿ ಮಾತ್ರವಲ್ಲ ಹೊರಗಡೆಯು ಬಹಳ ಫೇಮಸ್. ಮಹಾರಾಷ್ಟ್ರದಲ್ಲಿ ಮಾಡುವಂತಹ ಹಲವು ಖಾದ್ಯಗಳು ಎಲ್ಲಾರಿಗೂ ಇಷ್ಟವಾಗುತ್ತೆ. ಹಾಗೆ ಬೆಳಗಿನ ತಿಂಡಿಗೆ ವಿವಿಧ ರೀತಿಯ ಖಾದ್ಯಗಳ ಮಾಡಿ ಸವಿಯೋದು ಸಾಮಾನ್ಯವಾಗಿ ನೋಡಬಹುದು.

ಇನ್ನು ಅದೇ ರೀತಿ ಬೆಳಗ್ಗೆ ತಿಂಡಿಗೆ ಹಲವು ಬಗೆಯ ಖಾದ್ಯಗಳ ಜೊತೆಗೆ ಮೃದುವಾದ ಖಾಪ್ರೋಳಿ ಮಾಡುವುದು ನೋಡಿರಬಹುದು. ಇದು ಉತ್ತರ ಕರ್ನಾಟಕದ ಕೆಲ ಭಾಗದಲ್ಲಿ ಮಾಡುತ್ತಾರೆ. ಬೆಳಗಾವಿಯಲ್ಲಿ ಸಹ ಇದು ಬಹಳ ಫೇಮಸ್. ಖಾಪ್ರೋಳಿ ದೋಸೆಯಂತೆ ಕಂಡು ಅದಕ್ಕಿಂತ ರುಚಿಕರ ಹಾಗೆ ಮೃದುವಾದ ಖಾದ್ಯ. ಮಹಾರಾಷ್ಟ್ರದ ಸಾಂಪ್ರದಾಯಿಕ ಅಡುಗೆ ವಿಧಾನದಲ್ಲಿ ಈ ಖಾಪ್ರೋಳಿ ಕೂಡ ಬಹಳ ಹೆಸರುವಾಸಿಯಾಗಿದೆ. ಹಾಗಾದ್ರೆ, ನಾವಿಂದು ಮನೆಯಲ್ಲಿ ಖಾಪ್ರೋಳಿ ಮಾಡುವುದು ಹೇಗೆ ಅನ್ನೋದನ್ನು ತಿಳಿದುಕೊಳ್ಳೋಣ. ಅದ್ರಲ್ಲೂ ಸುಲಭವಾಗಿ ಬೆಳಗ್ಗೆ ತಿಂಡಿಯ ಸಮಯದಲ್ಲಿ ಈ ಖಾಪ್ರೋಳಿ ಮಾಡಿ ಸವಿಯುವ ಕುರಿತಾಗಿ ತಿಳಿದುಕೊಳ್ಳಿ. ಈ ಖಾಪ್ರೋಳಿ ಮಾಡುವುದು ಹೇಗೆ? ಈ ರೆಸಿಪಿ ಮಾಡಲು ಯಾವೆಲ್ಲಾ ವಸ್ತುಗಳು ಬೇಕು? ಎಷ್ಟು ಸಮಯ ಹಿಡಿಯಲಿದೆ ಎಂಬುದನ್ನು ಇಲ್ಲಿ ತಿಳಿದಿಕೊಳ್ಳೋಣ.

> **ಖಾಪ್ರೋಳಿ ಮಾಡಲು ಬೇಕಾಗುವ ವಸ್ತುಗಳು**
>
> - ಅಕ್ಕಿ
> - ಉದ್ದಿನ ಬೇಳೆ
> - ಕಡಲೆ ಬೇಳೆ
> - ಅವಲಕ್ಕಿ
> - ಎಣ್ಣೆ
> - ಮೆಂತ್ಯ
> - ಅರಶಿಣ

**ಖಾಪ್ರೋಳಿ ಮಾಡುವ ಸುಲಭದ ವಿಧಾನವೇನು?:** ಮೊದಲಿಗೆ ಒಂದು ಕಪ್ ಅಕ್ಕಿಯನ್ನು ತೊಳೆದು ನೆನೆಸಿಡಿ. ಹಾಗೆ ಮತ್ತೊಂದು ಬೌಲ್‌ನಲ್ಲಿ ಉದ್ದಿನ ಬೇಳೆ, ಕಾಲು ಕಪ್ ಕಡಲೆ ಬೇಳೆ, ಮೆಂತ್ಯ ಸಹ ಹಾಕಿ ತೊಳೆದು ನೆನೆಸಿಡಿ. ಇದೆಲ್ಲವು 6 ಗಂಟೆಯಾದರು ನೆನೆಸಿಡಿ. ನಂತರ ಎಲ್ಲಾ ಪದಾರ್ಥಗಳನ್ನು ರುಬ್ಬಿಕೊಳ್ಳಬೇಕು.

ಅಗತ್ಯ ನೀರು ಹಾಕಿ ನುಣ್ಣಗೆ ರುಬ್ಬಿ. ಹೀಗೆ ರುಬ್ಬಿಕೊಳ್ಳಲು 10 ನಿಮಿಷ ಮುನ್ನ ಅರ್ಧ ಕಪ್ ಅವಲಕ್ಕಿಯನ್ನು ನೆನೆಸಿಟ್ಟು ಅದನ್ನು ಸಹ ಇದರೊಂದಿಗೆ ಬೆರೆಸಿ ಚೆನ್ನಾಗಿ ರುಬ್ಬಿ ಹಿಟ್ಟು ರೆಡಿ ಮಾಡಿಕೊಳ್ಳಬೇಕು. ಈ ಹಿಟ್ಟನ್ನು ಪಾತ್ರೆಗೆ ಹಾಕಿ ಅರಶಿಣ ಹಾಕಿ ಕೈಯಿಂದ ಚೆನ್ನಾಗಿ ಮಿಕ್ಸ್ ಮಾಡಿಕೊಳ್ಳಬೇಕು. ಇದೇ ಸಮಯದಲ್ಲಿ ಉಪ್ಪು ಸಹ ಹಾಕಿ ಮಿಶ್ರಣ ಮಾಡಿ. ನಂತರ ಮುಚ್ಚಳ ಮುಚ್ಚಿ ಒಂದು ರಾತ್ರಿ ಬಿಡಬೇಕು.

ಈಗ ಮಾರನೆ ದಿನ ಹುದುಗಿ ಬಂದಿರುವ ಹಿಟ್ಟನ್ನು ಮಿಶ್ರಣ ಮಾಡಿಕೊಂಡು ದೋಸೆ ಮಾಡಿಕೊಳ್ಳಲು ಸಿದ್ದ ಮಾಡಿ. ಮೊದಲು ಕಾವಲಿಯನ್ನು ಒಲೆ ಮೇಲೆ ಇಟ್ಟು ಬಿಸಿ ಮಾಡಿಕೊಂಡು ಎಣ್ಣೆ ಹಚ್ಚಿ ಅಥವಾ ಬೆಣ್ಣೆಯನ್ನು ಹಚ್ಚಿಕೊಂಡು ಮಾಡಿಕೊಳ್ಳಬಹುದು. ಈ ಖಾಪ್ರೋಳಿ ಸವಿಯಲು ಕಾಯಿ ಹಾಲು ಮಾಡಿಕೊಳ್ಳಬಹುದು, ಇಲ್ಲವೆ ಕಡಲೆಯಿಂದ ಮಾಡುವ ಚಟ್ನಿ ಬಹಳ ರುಚಿ ನೀಡಲಿದೆ. ಹಾಗೆ ಎಲ್ಲಾ ಬಗೆಯ ತೆಂಗಿನಕಾಯಿ ಚಟ್ನಿ ಕೂಡ ಇದಕ್ಕೆ ಬಹಳ ರುಚಿ ತರಲಿವೆ. ನೀವು ಸಹ ಇದನ್ನು ಬೆಳಗ್ಗೆ ತಿಂಡಿಗೆ ಸುಲಭವಾಗಿ ಮಾಡಿ ಸವಿಯಬಹುದು. ಎಲ್ಲಾರಿಗೂ ಇಷ್ಟವಾಗುವಂತಹ ಖಾದ್ಯ ಇದಾಗಿದೆ. ದೋಸೆಗಿಂತ ಇದು ಬಹಳ ರುಚಿ ನೀಡಲಿದೆ.

# ಏನೂ ಕೆಲಸ ಮಾಡದಿದ್ದರೂ ಜನ ಮೋದಿ, ಮೋದಿ ಎಂದು ಜಪಿಸುತ್ತಾರೆ: ಸಿಎಂ

• **ಉದಯವಾಹಿನಿ, ಬೆಂಗಳೂರು**

ಸಿದ್ದರಾಮಯ್ಯ ಬಿಜೆಪಿ ನಾಯಕರನ್ನು ಬುರುಡೆ ಗ್ಯಾಂಗ್ ಎಂದು ಕರೆದಿದ್ದಾರೆ. ಅವರು ಕೆಲಸ ಮಾಡದೆಯೇ ಕ್ರೆಡಿಟ್ ಪಡೆಯುತ್ತಾರೆ ಎಂದು ಸಿದ್ದರಾಮಯ್ಯ ಟೀಕಿಸಿದ್ದಾರೆ. ಮಹಿಳೆಯರು ಅಸಮಾನತೆ ವಿರುದ್ಧ ಹೋರಾಡಲು ಸಹಾಯ ಮಾಡಲು ನಾವು ಗ್ಯಾರಂಟಿ ಯೋಜನೆಗಳನ್ನು ಪರಿಚಯಿಸಿದ್ದೇವೆ. ಬಿಜೆಪಿ ಹಾಗೆ ಮಾಡಿದೆಯೇ ಆಹಾರ ಭದ್ರತಾ ಕಾನೂನನ್ನು ತಂದವರು ಯಾರು ಅದು ಮನಮೋಹನ್ ಸಿಂಗ್ ಅವರು ಎಂದು ಸಿದ್ದರಾಮಯ್ಯ ಹೇಳಿದರು.


ಉದಯವಾಹಿನಿ ಚಿತ್ರ

> **ಬಿಜೆಪಿ ನಾಯಕರು ಬುರುಡೆ ಗ್ಯಾಂಗ್**

ಮೋದಿ ಏನೂ ಮಾಡದಿದ್ದರೂ ಜನರು ಮೋದಿ, ಮೋದಿ ಎಂದು ಜಪಿಸುತ್ತಾರೆ. ದೇಶದಲ್ಲಿ ಇಂತಹ ರಾಜಕೀಯ ಮಾಡುವ ಅವರು ಬುರುಡೆ ಗ್ಯಾಂಗ್‌ನಂತೆ ಇದ್ದಾರೆ' ಎಂದು ಟೀಕಿಸಿದರು. 2023-24 ರ ಗಾಂಧಿ ಗ್ರಾಮ ಪುರಸ್ಕಾರ ಪ್ರಶಸ್ತಿಗಳನ್ನು ನೀಡಿದ ಕಾರ್ಯಕ್ರಮದಲ್ಲಿ ಸಿಎಂ ಮಾತನಾಡುತ್ತಿದ್ದರು. ಇ-ಸ್ವತ್ತು 2.0 ಪೋರ್ಟಲ್‌ಗೆ ಚಾಲನೆ ನೀಡಿದರು. ಜಲ ಜೀವನ್ ಮಿಷನ್ (ಎಎಬ) ಮತ್ತು ಪ್ರಧಾನ ಮಂತ್ರಿ ಆವಾಸ್ ಯೋಜನೆ ನಂತಹ ಯೋಜನೆಗಳಿಗೆ ಹಣವನ್ನು ಒದಗಿಸದ ಮೋದಿ ಆಡಳಿತವನ್ನು ಸಿದ್ದರಾಮಯ್ಯ ಟೀಕಿಸಿದರು. ಕರ್ನಾಟಕ ರಾಜ್ಯದಿಂದ ಹೋಗುವ ಪ್ರತಿ ರೂಪಾಯಿಗೆ ಕೇವಲ 13-15 ಪೈಸೆ ನೀಡುತ್ತಿರುವ ಕೇಂದ್ರ ಸರ್ಕಾರವನ್ನು ಟೀಕಿಸಿದರು.

ಸ್ಥಳೀಯ ಸಂಸ್ಥೆಗಳಲ್ಲಿ ಮಹಿಳೆಯರಿಗೆ ಮೀಸಲಾತಿ ನೀಡುವುದರ ವಿರುದ್ಧ ನ್ಯಾಯಾಲಯದ ಮೊರೆ ಹೋಗಿದ್ದು ಬಿಜೆಪಿಯ ಮಾಜಿ ರಾಜ್ಯಸಭಾ ಸದಸ್ಯ ದಿವಂಗತ ರಾಮ ಜೋಯಿಸ್ ಎಂದು ಸಿದ್ದರಾಮಯ್ಯ ಹೇಳಿದರು. ಹೊಸ ಇ-ಸ್ವತ್ತು 2.0 ವೇದಿಕೆಯಡಿಯಲ್ಲಿ, ಗ್ರಾಮೀಣ ಸ್ಥಳೀಯ ಸಂಸ್ಥೆಗಳು ಏಪ್ರಿಲ್ 2025 ರ ಮೊದಲು ನಿರ್ಮಿಸಲಾದ ಅನಧಿಕೃತ ಆಸ್ತಿಗಳಿಗೆ ದುಪ್ಪಟ್ಟು ತೆರಿಗೆ ವಿಧಿಸುವ ಮೂಲಕ ಖಾತಾಗಳನ್ನು ನೀಡಲು ಒಂದು ಬಾರಿ ಕ್ರಮ ಕೈಗೊಳ್ಳಲಿವೆ. ಇ-ಸ್ವತ್ತು 2.0 ಮೂಲಕ ಸುಮಾರು 95 ಲಕ್ಷ ಗ್ರಾಮೀಣ ಆಸ್ತಿಗಳನ್ನು ತೆರಿಗೆ ನಿವ್ವಳದ ಅಡಿಯಲ್ಲಿ ತರಲಾಗುವುದು ಎಂದು ಪಂಚಾಯತ್ ರಾಜ್ ಆಯುಕ್ತೆ ಡಾ. ಅರುಂಧತಿ ಚಂದ್ರಶೇಖರ್ ಹೇಳಿದರು.

# ಡಾ:ಬಾಬು ರಾಜೇಂದ್ರ ಪ್ರಸಾದ್ ರವರ 141ನೇ ವರ್ಷದ ಜಯಂತಿ




**ಕಲಾ ಸಾಹಿತ್ಯ**
**ಕೃಷ್ಣಪ್ಪ**
**ಲೇಖಕರು**
**ಪ್ರಗತಿ ಪರ ಚಿಂತಕ ,**
**ವಿಮರ್ಶಕರು**

ಡಾ.ಬಾಬು ರಾಜೇಂದ್ರ ಪ್ರಸಾದ್ ರವರು 1884 ಡಿಸೆಂಬರ್ 03 ರಂದು ಬಿಹಾರ್‌ನಲ್ಲಿ ಜನಿಸಿದರು.

ತಂದೆ ತಾಯಿಗಳಿಂದ ಉತ್ತಮ ಸಂಸ್ಕಾರ ಪಡೆದು ಗುಣಮಟ್ಟದ ಶಿಕ್ಷಣದಲ್ಲಿ ಕಾನೂನು ಪದವಿಯನ್ನು ಗಳಿಸಿ ನಂತರ ಕಾನೂನು ಶಾಸ್ತ್ರದಲ್ಲಿ ಡಾಕ್ಟರೇಟ್ ಪದವಿಯನ್ನು ಗಳಿಸಿದರು. ಕೆಲಕಾಲ ಪಾಟ್ನಾದಲ್ಲಿ ವಕೀಲ ವೃತ್ತಿಯನ್ನು ನಡೆಸಿ ಹೆಸರು ಮತ್ತು ಹಣವನ್ನು ಗಳಿಸಿದರು. ಅವರು ಗಳಿಸಿದ ಹಣದಲ್ಲಿ ದೀನದಲಿತರಿಗೆ ಉದಾರವಾಗಿ ದಾನ ಮಾಡುತ್ತಿದ್ದರು. ಹೀಗಿರುವಲ್ಲಿ ಸತ್ಯ ಮತ್ತು ಅಹಿಂಸೆ ತತ್ವಗಳಲ್ಲಿ ಅಪಾರ ನಂಬಿಕೆ ಇಟ್ಟುಕೊಂಡು ದೇಶದ ಸ್ವಾತಂತ್ರ್ಯ ಹೋರಾಟಕ್ಕೆ ಗಾಂಧೀಜಿ ಜೊತೆ ಸೇರಿಕೊಂಡರು.

ಪ್ರಸಾದರವರು ಸ್ವಾತಂತ್ರ್ಯ ಹೋರಾಟಗಾರರಾಗಿ, ಕಾಂಗ್ರೆಸ್ ಪಕ್ಷದ ನಾಯಕರಾಗಿ ಚಳುವಳಿಯಲ್ಲಿ ಮಹತ್ವದ



• ಉದಯವಾಹಿನಿ, ವಿಶೇಷ

ಪಾತ್ರವನ್ನು ನಿರ್ವಹಿಸಿದರು. ಭಾರತ ಸಂವಿಧಾನವನ್ನು ರಚಿಸಲು ರಾಜ್ಯಾಂಗ ರಚನಾ ಸಭೆಯು ಅಸ್ತಿತ್ವಕ್ಕೆ ಬಂದಾಗ ರಾಜೇಂದ್ರ ಪ್ರಸಾದ್ ಅವರು 1948 ರಿಂದ 1950 ರವರೆಗೆ ಅಧ್ಯಕ್ಷ ಹುದ್ದೆಯನ್ನು ಸಮರ್ಥವಾಗಿ ಕಾರ್ಯ ನಿರ್ವಹಿಸಿದರು.

ನೆಹರುರವರು ಪ್ರಥಮ ಪ್ರಧಾನಮಂತ್ರಿಯಾಗಿ ಸರ್ಕಾರ ರಚಿಸಿದಾಗ ಅವರ ಸಚಿವ ಸಂಪುಟದಲ್ಲಿ ಆಹಾರ ಹಾಗೂ ಕೃಷಿ ಸಚಿವರಾಗಿದ್ದರು. ಆಹಾರದ ಕೊರತೆ ಇದ್ದ ಕಾಲದಲ್ಲಿ ಜನರ ಹಸಿವು ನೀಗಿಸಲು ಸಾಕಷ್ಟು ಶ್ರಮ ವಹಿಸಿದರು.

> **ಭಾರತ ಸಂವಿಧಾನವನ್ನು ರಚಿಸಲು ರಾಜ್ಯಾಂಗ ರಚನಾ ಸಭೆ**

1934ರಲ್ಲಿ ಇಂಡಿಯನ್ ನ್ಯಾಷನಲ್ ಕಾಂಗ್ರೆಸ್ ಅಧ್ಯಕ್ಷರಾಗಿ ಚುನಾಯಿತರಾದರು.

ಭಾರತಕ್ಕೆ ಸ್ವಾತಂತ್ರ್ಯ ಬಂದಮೇಲೆ ಸ್ವತಂತ್ರ ಭಾರತ ಪ್ರಜಾಸತ್ತಾತ್ಮಕ ಗಣರಾಜ್ಯದ ಪ್ರಪ್ರಥಮ ರಾಷ್ಟ್ರಪತಿಯಾಗಿ ಸರ್ವಾನುಮತದಿಂದ ಆಯ್ಕೆಯಾದರು. ರಾಷ್ಟ್ರಪತಿಗಳಿಗೆ ಸಂವಿಧಾನಾತ್ಮಕವಾಗಿ ಹತ್ತು ಸಾವಿರ ರೂಪಾಯಿಗಳ ಸಂಬಳ ನಿಗದಿಪಡಿಸಲಾಗಿತ್ತು. ಆದರೆ ಪ್ರಸಾದರವರು ಕೇವಲ ಎರಡೂವರೆ ಸಾವಿರ ರೂಪಾಯಿಗಳು ಮಾತ್ರ ಪಡೆದು ಉಳಿದ ಹಣವನ್ನು ಪ್ರಧಾನಮಂತ್ರಿಗಳ ರಾಷ್ಟ್ರೀಯ ಪರಿಹಾರ ನಿಧಿಗೆ ನೀಡುತ್ತಿದ್ದರು. ಸ್ವಾತಂತ್ರ್ಯ ಭಾರತದಲ್ಲಿ 12 ವರ್ಷಗಳ ಕಾಲ ಅಂದರೆ 1950 ರಿಂದ 1962 ರವರೆಗೆ ರಾಷ್ಟ್ರದಲ್ಲಿ ರಾಷ್ಟ್ರಾಧ್ಯಕ್ಷ ರಾಗಿದ್ದರು. 1962 ರಲ್ಲಿ ರಾಷ್ಟ್ರಾಧ್ಯಕ್ಷ ಪದವಿಯಿಂದ ನಿವೃತ್ತರಾದರು.

1963 ರಲ್ಲಿ ಭಾರತ ಸರ್ಕಾರ ದೇಶದ ಅತ್ಯುನ್ನತ ನಾಗರಿಕ ಪ್ರಶಸ್ತಿಯಾದ ಭಾರತರತ್ನ ಪ್ರಶಸ್ತಿಯನ್ನು ನೀಡಿ ಗೌರವಿಸಿತು.

1963 ಫೆಬ್ರವರಿ 28ರಂದು ತನ್ನ 79ನೇ ವಯಸ್ಸಿನ ವಯೋಸಹಜವಾಗಿ ಭೌತಿಕ ಶರೀರವನ್ನು ತ್ಯಜಿಸಿದರು. ಅಂದು ಇಡೀ ರಾಷ್ಟ್ರ ಒಬ್ಬ ಪ್ರಾಮಾಣಿಕ, ನಿಷ್ಠಾವಂತ, ದೇಶಭಕ್ತರಿಗೆ ಭಾವಪೂರ್ಣ ಶ್ರದ್ಧಾಂಜಲಿ ಅರ್ಪಿಸಿತು. ಇವರು ಒಬ್ಬ ಶ್ರೇಷ್ಠ ಲೇಖಕರು ಆಗಿ ಹಲವಾರು ಕೃತಿಗಳನ್ನು ರಚಿಸಿದ್ದಾರೆ. ಚಂಪಾರಣ್ಯದಲ್ಲಿ ಸತ್ಯಾಗ್ರಹ, ಬಾಪುವಿನ ಪಾದಗಳ ಅಡಿಯಲ್ಲಿ, ಭಾರತದ ವಿಭಜನೆ, ಆತ್ಮಕಥೆ ಅವರ ಕೆಲವು ಮುಖ್ಯ ಗ್ರಂಥಗಳಾಗಿವೆ.

ಡಾ.ಬಾಬು ರಾಜೇಂದ್ರ ಪ್ರಸಾದರವರ ಬದುಕು ಜನಕ ಮಹಾರಾಜನಂತೆ, ಧರ್ಮರಾಯನಂತೆ, ನಿಷ್ಕಳಂಕ, ನಿರ್ಮಲ, ನಿಸ್ವಾರ್ಥ, ಧರ್ಮನಿಷ್ಠೆಯ ಬದುಕಾಗಿತ್ತು. ವಿಶ್ವದ ದೃಷ್ಟಿಯಲ್ಲಿ ಅವರು ಒಬ್ಬ ಮಹಾನ್ ವ್ಯಕ್ತಿಯಾಗಿದ್ದರು.

ಇಂತಹ ಮಹಾನ್ ವ್ಯಕ್ತಿತ್ವವುಳ್ಳ ಪ್ರಪ್ರಥಮ ರಾಷ್ಟ್ರಾಧ್ಯಕ್ಷರನ್ನು ಸ್ಮರಿಸಿ, ನೆನೆಯುತ್ತಾ ಇಂದು ಅವರ 141ನೇ ವರ್ಷದ ಜಯಂತಿಯನ್ನು ಇಂದು ಭಾರತೀಯರಾದ ನಾವುಗಳೆಲ್ಲರೂ ಆಚರಿಸುವ ಮೂಲಕ ಅವರ ಆದರ್ಶ ಹಾಗೂ ತತ್ವ ಸಿದ್ಧಾಂತಗಳನ್ನು ಪಾಲಿಸಿ ಆ ನಿಟ್ಟಿನಲ್ಲಿ ಅಳವಡಿಸಿಕೊಳ್ಳುವ ಸಂಕಲ್ಪ ಮಾಡೋಣ.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಮಧ್ಯಾಹ್ನ | 12:00 ರಿಂದ 01:30 |
| ಗುಳಿಕ ಕಾಲ | ಬೆಳಿಗ್ಗೆ | 10:30 ರಿಂದ 12:00 |
| ಯಮಗಂಡ ಕಾಲ | ಬೆಳಿಗ್ಗೆ | 07:30 ರಿಂದ 09:00 |

**ಮೇಷ** ನಿಮ್ಮ ಕಾಯಿಲೆ ಅತೃಪ್ತಿಯ ಕಾರಣ ವಾಗಿರಬಹುದು. ಕುಟುಂಬದಲ್ಲಿ ಸಂತೋಷವನ್ನು ಪುನಃಸ್ಥಾಪಿಸಲು ನೀವು ಸಾಧ್ಯವಾದಷ್ಟೂ ಬೇಗ ಇದರಿಂದ ಹೊರಬರುವ ಅಗತ್ಯವಿದೆ.

**ವೃಷಭ** ಆರೋಗ್ಯದ ಬಗ್ಗೆಸ್ವಲ್ಪ ಗಮನ ನೀಡಬೇಕು. ಹಣದ ಆಗಮನವು ನಿಮ್ಮನ್ನು ಸಮಸ್ಯೆಗಳಿಂದ ಮುಕ್ತಗೊಳಿಸಬಹುದು ನಿಮ್ಮ ಗೌಪ್ಯ ಮಾಹಿತಿಯನ್ನು ನಿಮ್ಮ ಸಂಗಾತಿಯ ಜೊತೆ ಹಂಚಿಕೊಳ್ಳುವ ಮೊದಲು ಯೋಚಿಸಿ.

**ಮಿಥುನ** ಒಂದು ಲಾಭಕರ ದಿನ ಮತ್ತು ನೀವು ಧೀರ್ಘಕಾಲದ ಅನಾರೋಗ್ಯಕ್ಕೆ ಪರಿಹಾರ ಹುಡುಕಲು ಸಾಧ್ಯವಾಗಬಹುದು. ಹಣದ ಆಗಮನವು ನಿಮ್ಮನ್ನು ಯಾವುದೇ ಸಮಸ್ಯೆಗಳಿಂದ ಮುಕ್ತಗೊಳಿಸಬಹುದು.

**ಕರ್ಕಾಟಕ** ನಿಮ್ಮ ಆಕರ್ಷಕ ವರ್ತನೆ ಗಮನ ಸೆಳೆಯುತ್ತದೆ. ವಿದೇಶದಲ್ಲಿ ಮಲಗಿರುವ ನಿಮ್ಮ ಭೂಮಿಯನ್ನು ಇಂದು ಉತ್ತಮ ಬೆಲೆಗೆ ಮಾರಾಟ ಮಾಡಬಹುದು, ಅದು ನಿಮಗೆ ಲಾಭದಾಯಕವಾಗಲಿದೆ.

**ಸಿಂಹ** ವೈಯಕ್ತಿಕ ಸಮಸ್ಯೆಗಳು ಮಾನಸಿಕ ಸಂತೋಷವನ್ನು ಹಾಳು ಮಾಡಬಹುದು. ಆದರೆ ಒತ್ತಡವನ್ನು ನಿಭಾಯಿಸಲು ಆಸಕ್ತಿದಾಯಕವಾದದ್ದನ್ನೇ ನಾದರೂ ಓದುವ ಮೂಲಕ ಸ್ವಲ್ಪ ಮಾನಸಿಕ ವ್ಯಾಯಾಮ ಮಾಡಿಕೊಳ್ಳಿ.

**ಕನ್ಯಾ** ಪ್ರವಾಸ-ಪಾರ್ಟಿಗಳು ಮತ್ತು ಆನಂದ ವಿಹಾರಗಳು ಇಂದು ನಿಮ್ಮನ್ನು ಉತ್ತಮ ಮೂಡ್‌ನಲ್ಲಿಡುತ್ತವೆ. ಇನ್ನೂ ಸಂಬಳ ಪಡೆಯದವರು, ಇಂದು ಅವರು ಹಣಕ್ಕಾಗಿ ತುಂಬಾ ಚಿಂತೆ ಮಾಡಬಹುದು.

**ತುಲಾ** ನಿಮ್ಮನ್ನು ನೀವೇ ಪ್ರೇರೇಪಿಸಿಕೊಳ್ಳಿ. ಇದು ವಿಶ್ವಾಸ ಮತ್ತು ನಮ್ಯತೆಯನ್ನು ಹೆಚ್ಚಿಸುತ್ತದಾದರೂ ಅದೇ ಸಮಯದಲ್ಲಿ ಭಯ, ದ್ವೇಷ, ಅಸೂಯೆ, ಸೇಡಿನಂಥ ನಕಾರಾತ್ಮಕ ಭಾವನೆಗಳನ್ನು ಹಿಂದೆ ಬಿಡಲು ಸಿದ್ಧವಾಗಿ.

**ವೃಶ್ಚಿಕ** ಹೆಂಡತಿ ನಿಮ್ಮ ಜೀವನವನ್ನು ಬದಲಾಯಿಸಲು ಸಹಾಯ ಮಾಡುತ್ತಾಳೆ. ಇತರರನ್ನು ಊರುಗೋಲಾಗಿ ಅವಲಂಬಿಸುವ ವ್ಯಕ್ತಿಗಿಂತ ತನ್ನ ಜೀವನವನ್ನು ತಾನೇ ರೂಪಿಸಿಕೊಳ್ಳಬಯಸುವ ಒಬ್ಬ ಚೈತನ್ಯಯುಕ್ತ ವ್ಯಕ್ತಿಯಾಗಿ.

**ಧನಸ್ಸು** ನಿಮ್ಮ ಅಹಾರ ಕ್ರಮದ ಬಗ್ಗೆ, ವಿಶೇಷವಾಗಿ ಮೈಗ್ರೇನ್ ರೋಗಿಗಳು ಸೂಕ್ತ ಎಚ್ಚರ ತೆಗೆದುಕೊಳ್ಳಬೇಕು. ಅವರು ತಮ್ಮ ಊಟ ತಪ್ಪಿಸಿಕೊಂಡಲ್ಲಿ ಅದು ಅವರಿಗೆ ಅನಗತ್ಯ ಭಾವನಾತ್ಮಕ ಒತ್ತಡವನ್ನು ಉಂಟುಮಾಡಬಹುದು.

**ಮಕರ** ಇಂದು ರಾತ್ರಿ ಸಣ್ಣ ವಿಷಯಗಳಲ್ಲೂ ಕೂಡ ನಿಮ್ಮ ಪ್ರಿಯತಮೆಯ ಜೊತೆಗಿನ ಸಂಬಂಧಗಳು ಶಿಥಿಲಗೊಳ್ಳುತ್ತವೆ. ನೀವು ಕೆಲಸದಲ್ಲಿ ಪ್ರಮುಖ ವಿಜಯಗಳನ್ನು ಸಾಧಿಸುತ್ತೀರಿ.

**ಕುಂಭ** ನಿಮ್ಮ ಹೆಚ್ಚು ಆತ್ಮವಿಶ್ವಾಸವನ್ನು ಇಂದು ಚೆನ್ನಾಗಿ ಬಳಸಿಕೊಳ್ಳಲು ಪ್ರಯತ್ನಿಸಿ. ಒತ್ತಡದ ದಿನದ ಹೊರತಾಗಿಯೂ ನೀವು ನಿಮ್ಮ ಚೈತನ್ಯವನ್ನು ಮರಳಿ ಪಡೆಯಲು ಸಾಧ್ಯವಾಗುತ್ತದೆ.

**ಮೀನ** ನೀವು ಬಹುಕಾಲದಿಂದ ಎದುರು ನೋಡುತ್ತಿದ್ದ ಜೀವನದ ಒತ್ತಡಗಳಿಂದ ಶಮನ ಪಡೆಯುತ್ತೀರಿ. ಅವುಗಳನ್ನು ಶಾಶ್ವತವಾಗಿ ದೂರವಿಸಿರಿಸಲು ನಿಮ್ಮ ಜೀವನಶೈಲಿಯನ್ನು ಬದಲಿಸಲು ಇದು ಸರಿಯಾದ ಸಮಯ.

### • ಕಾಯಂ ಸಿಬ್ಬಂದಿ ಇಲ್ಲದೇ ಸೊರಗಿರುವ ಪ್ರಾಥಮಿಕ , ಪ್ರೌಢ ಮತ್ತು ಪದವಿ ಶಿಕ್ಷಣ

# ಅನಿಶ್ಚಿತ ಸ್ಥಿತಿಯಲ್ಲಿ ಅತಿಥಿ ಶಿಕ್ಷಕರು: ವಿದ್ಯಾರ್ಥಿಗಳಿಗೂ ತೊಂದರೆ

• ಉದಯವಾಹಿನಿ ಮುಂಡರಗಿ

ಪಟ್ಟಣ ಸೇರಿದಂತೆ ತಾಲ್ಲೂಕಿನಾದ್ಯಂತ ಕಾರ್ಯ ನಿರ್ವಹಿಸುತ್ತಿರುವ ಪ್ರಾಥಮಿಕ, ಪ್ರೌಢಶಾಲೆ, ಪದವಿಪೂರ್ವ ಮತ್ತು ಪದವಿ ಕಾಲೇಜುಗಳಲ್ಲಿ ಕಾಯಂ ಉಪನ್ಯಾಸಕರು ಹಾಗೂ ಶಿಕ್ಷಕರು ಇಲ್ಲವಾದ್ದರಿಂದ ಬಹುತೇಕ ಶಾಲೆ, ಕಾಲೇಜುಗಳ ಪಾಠ, ಪ್ರವಚನ ಹಾಗೂ ಬೋಧನೆಯು ಅತಿಥಿ ಶಿಕ್ಷಕರು ಹಾಗೂ ಅತಿಥಿ ಉಪನ್ಯಾಸಕರನ್ನೇ ಅವಲಂಬಿಸಿದೆ.

ಕೆಲಸಕ್ಕೆ ತಕ್ಕ ಹಾಗೂ ನ್ಯಾಯಸಮ್ಮತ ಪ್ರತಿಫಲ ದೊರೆಯದೇ ಇರುವುದರಿಂದ ಅತಿಥಿ ಶಿಕ್ಷಕರು ಹಾಗೂ ಅತಿಥಿ ಉಪನ್ಯಾಸಕರು ಹಲವು ತೊಂದರೆಗಳನ್ನು ಎದುರಿಸುತ್ತಿದ್ದು, ಸೇವಾ ಭದ್ರತೆ ದೊರೆಯದೇ ಅವರೆಲ್ಲ ಹಲವು ವರ್ಷಗಳಿಂದ ಅತಂತ್ರ ಸ್ಥಿತಿಯಲ್ಲಿದ್ದಾರೆ. ತಾಲ್ಲೂಕಿನಾದ್ಯಂತ 99 ಸರ್ಕಾರಿ ಪ್ರಾಥಮಿಕ ಶಾಲೆಗಳು, 5 ಅನುದಾನಿತ ಹಾಗೂ 19 ಅನುದಾನರಹಿತ ಪ್ರಾಥಮಿಕ ಶಾಲೆಗಳು ಕಾರ್ಯನಿರ್ವಹಿಸುತ್ತಿವೆ.

ಅದೇ ರೀತಿ 18 ಸರ್ಕಾರಿ ಪ್ರೌಢಶಾಲೆಗಳು, 12 ಅನುದಾನಿತ ಹಾಗೂ 5 ಅನುದಾನರಹಿತ ಪ್ರೌಢಶಾಲೆಗಳು ಕಾರ್ಯನಿರ್ವಹಿಸುತ್ತಿವೆ.

ಇಲಾಖೆ ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮಾರ್ಗದರ್ಶನದಲ್ಲಿ ಅತಿಥಿ ಶಿಕ್ಷಕರನ್ನು ಆಯ್ಕೆ ಮಾಡಿಕೊಳ್ಳುವ ಹೊಣೆಯು ಆಯಾ ಶಾಲೆಗಳ ಮುಖ್ಯಶಿಕ್ಷಕರ ಮೇಲಿದ್ದು, ಅರ್ಹತೆ ಆಧಾರದ ಮೇಲೆ ನೇಮಕ ಮಾಡಿಕೊಳ್ಳಲಾಗುತ್ತದೆ.



ಉದಯವಾಹಿನಿ ಚಿತ್ರ

ಆಯ್ಕೆಯಾಗುವ ಶಿಕ್ಷಕರನ್ನು ಪ್ರತಿ ವರ್ಷ ಮಾರ್ಚ್‌ನಲ್ಲಿ (ಶೈಕ್ಷಣಿಕ ವರ್ಷದ ಕೊನೆಯ ತಿಂಗಳು) ಸೇವೆಯಿಂದ ಬಿಡುಗಡೆಗೊಳಿಸಲಾಗುತ್ತದೆ. ಹೀಗಾಗಿ ಅತಿಥಿ ಶಿಕ್ಷಕರು ವರ್ಷದಲ್ಲಿ ಕೇವಲ ಹತ್ತು ತಿಂಗಳು ಮಾತ್ರ ಕೆಲಸ ಮಾಡಿ ಮನೆಗೆ ಹೋಗಬೇಕಿದೆ. ಅತಿಥಿ ಶಿಕ್ಷಕರ ಸಮಸ್ಯೆಗಳಂತೆ ಪದವಿಪೂರ್ವ ಹಾಗೂ ಪದವಿ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರೂ ಹಲವಾರು ಸಮಸ್ಯೆಗಳನ್ನು ಎದುರಿಸುತ್ತಿದ್ದು,ಅವರು ಹಲವು ವರ್ಷಗಳಿಂದ ಅತಂತ್ರ ಸ್ಥಿತಿಯಲ್ಲಿದ್ದಾರೆ.

**ಹಲವು ವರ್ಷಗಳಿಂದ ಅತಂತ್ರ**

ಪಟ್ಟಣದಲ್ಲಿ ಜಗದ್ಗುರು ತೋಂಟದಾರ್ಯ ಸರ್ಕಾರಿ ಪದವಿ ಕಾಲೇಜು ಕಾರ್ಯನಿರ್ವಹಿಸುತ್ತಿದ್ದು ಕಲಾ, ವಾಣಿಜ್ಯ ಹಾಗೂ ವಿಜ್ಞಾನ ವಿಭಾಗಗಳನ್ನು ಒಳಗೊಂಡಿದೆ. ಕಾಲೇಜಿನಲ್ಲಿ ಒಟ್ಟು 441 ವಿದ್ಯಾರ್ಥಿಗಳು ಕಲಿಯುತ್ತಿದ್ದಾರೆ. ಕಾಲೇಜಿನಲ್ಲಿ ಒಟ್ಟು 23 ಮಂದಿ ಅತಿಥಿ ಉಪನ್ಯಾಸಕರು ಕಾರ್ಯನಿರ್ವಹಿಸುತ್ತಿದ್ದು, ಕೇವಲ ಹತ್ತು ಕಾಯಂ ಉಪನ್ಯಾಸಕರಿದ್ದಾರೆ. ಪಟ್ಟಣದ ಜಗದ್ಗುರು ಅನ್ನದಾನೀಶ್ವರ ವಿದ್ಯಾ ಸಮಿತಿಯ ಕ.ರಾ. ಬೆಲ್ಲದ ಪದವಿ ಕಾಲೇಜಿನಲ್ಲಿ ಒಟ್ಟು 942 ವಿದ್ಯಾರ್ಥಿಗಳು ಅಧ್ಯಯನ ಮಾಡುತ್ತಿದ್ದು, 15 ಅತಿಥಿ ಉಪನ್ಯಾಸಕರು ಹಾಗೂ 7 ಕಾಯಂ ಉಪನ್ಯಾಸಕರಿದ್ದಾರೆ. ನೂರಾರು ಅತಿಥಿ ಉಪನ್ಯಾಸಕರು ದಶಕಗಳಿಂದ ಕಾರ್ಯನಿರ್ವಹಿಸುತ್ತಿದ್ದು, ಸರ್ಕಾರ ಉಪನ್ಯಾಸಕ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳುತ್ತಿಲ್ಲ. ಹೀಗಾಗಿ ಬಹುತೇಕರು ವಯೋಮಿತಿ ಮೀರುತ್ತಿದ್ದು, ಏನು ಮಾಡಬೇಕೆಂದು ತಿಳಿಯದೇ ತಲೆಯ ಮೇಲೆ ಕೈಹೊತ್ತು ಕುಳಿತುಕೊಳ್ಳುವಂತಾಗಿದೆ. ಅತ್ತ ಅತಿಥಿ ಉಪನ್ಯಾಸಕ ಹುದ್ದೆಯು ದೊರೆಯದೇ, ಇತ್ತ ನೇಮಕಾತಿಯೂ ನಡೆಯದೇ ಅವರೆಲ್ಲ ಸಂಪೂರ್ಣವಾಗಿ ಅತಂತ್ರವಾಗಿದ್ದಾರೆ. ಪಟ್ಟಣದಲ್ಲಿರುವ ಸರ್ಕಾರಿ ಪಿಯು ಕಾಲೇಜಿನಲ್ಲಿ ಒಟ್ಟು 834 ವಿದ್ಯಾರ್ಥಿಗಳಿದ್ದು, ಅಲ್ಲಿ ಒಟ್ಟು 26 ಅತಿಥಿ ಉಪನ್ಯಾಸಕರು ಕಾರ್ಯನಿರ್ವಹಿಸುತ್ತಿದ್ದಾರೆ. ಕೇವಲ 13 ಪೂರ್ಣಕಾಲಿಕ ಉಪನ್ಯಾಸಕರಿದ್ದಾರೆ. ತಾಲ್ಲೂಕಿನಾದ್ಯಂತ ಕಾರ್ಯ ನಿರ್ವಹಿಸುತ್ತಿರುವ ಪದವಿ ಪೂರ್ವ ಕಾಲೇಜುಗಳಲ್ಲಿಯೂ ಅತಿಥಿ ಉಪನ್ಯಾಸಕರು ಕಾರ್ಯನಿರ್ವಹಿಸುತ್ತಿದ್ದಾರೆ. ಇವರೆಲ್ಲಾ ಸೇವಾ ಭದ್ರತೆ ಇಲ್ಲದೆ ಅತಂತ್ರರಾಗಿದ್ದು, ಹುದ್ದೆ ಭರ್ತಿ ಮಾಡಿಕೊಳ್ಳದ ಸರ್ಕಾರವನ್ನು ಶಪಿಸುತ್ತಿದ್ದಾರೆ.

ಪ್ರಾಥಮಿಕ, ಪ್ರೌಢಶಾಲೆ, ಪದವಿಪೂರ್ವ ಮತ್ತು ಪದವಿ ಶಿಕ್ಷಣ ವ್ಯವಸ್ಥೆಯಲ್ಲಿ ಇರುವ ಈ ಅವ್ಯವಸ್ಥೆ ಸರಿಪಡಿಸಿ, ಸರ್ಕಾರ ಕೂಡಲೇ ವಿದ್ಯಾರ್ಥಿಗಳ ಓದಿಗೆ ಅನುಕೂಲ ಕಲ್ಪಿಸಬೇಕು ಎಂದು ಆಗ್ರಹಿಸಿದ್ದಾರೆ.

**ಅತಿಥಿ ಉಪನ್ಯಾಸಕರು ಉದ್ಯೋಗ ಕಳೆದುಕೊಳ್ಳುವ ಭೀತಿ**

ಈ ಮೊದಲು ಸ್ನಾತಕೋತ್ತರ ಪದವಿಯಲ್ಲಿ ಶೇ 55ಕ್ಕಿಂತ ಹೆಚ್ಚು ಅಂಕ ಗಳಿಸಿದವರನ್ನು ಗರಿಷ್ಠ ಅಂಕಗಳ ಆಧಾರದ ಮೇಲೆ ಅತಿಥಿ ಉಪನ್ಯಾಸಕರ ಹುದ್ದೆಗೆ ನೇಮಕ ಮಾಡಿಕೊಳ್ಳಲಾಗುತ್ತಿತ್ತು. ಅವರಿಗೆ ಮಾಸಿಕ ರೂ.30 ಸಾವಿರ ವೇತನ ನೀಡಲಾಗುತ್ತಿತ್ತು. ಈಗ ಯುಜಿಸಿಯು (ವಿಶ್ವವಿದ್ಯಾನಿಲಯ ಅನುದಾನ ಆಯೋಗ) ಅತಿಥಿ ಉಪನ್ಯಾಸಕರ ನೇಮಕಕ್ಕೂ ಹಲವು ನಿಬಂಧನೆಗಳನ್ನು ವಿಧಿಸಿದ್ದು, ರಾಜ್ಯದಾದ್ಯಂತ ಸುಮಾರು 6,000 ಅತಿಥಿ ಉಪನ್ಯಾಸಕರು ತಮ್ಮ ತಾತ್ಕಾಲಿಕ ಹುದ್ದೆಯನ್ನು ಕಳೆದುಕೊಳ್ಳಲಿದ್ದಾರೆ. ಅತಿಥಿ ಉಪನ್ಯಾಸಕ ಹುದ್ದೆ ಬೇಕೆನ್ನುವವರು ಸಹಿತ ಈಗ ನೆಟ್, ಸ್ಲೆಟ್, ಎಂ. ಫಿಲ್, ಪಿಎಚ್ ಡಿ ಮೊದಲಾದ ಅರ್ಹತೆಗಳನ್ನು ಹೊಂದಿರಬೇಕೆಂದು ಯುಜಿಸಿ ಆದೇಶಿಸಿದ್ದು, ಅಂತಹ ವಿಶೇಷ ಅರ್ಹತೆ ಇಲ್ಲದ ಅತಿಥಿ ಉಪನ್ಯಾಸಕರು ಈಗ ಉದ್ಯೋಗ ಕಳೆದುಕೊಳ್ಳುವ ಭೀತಿಯಲ್ಲಿದ್ದಾರೆ.

**26 ಅತಿಥಿ ಶಿಕ್ಷಕರು ಕಾರ್ಯ**

ಬಹುತೇಕ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಅತಿಥಿ ಶಿಕ್ಷಕರು ಕಾರ್ಯನಿರ್ವಹಿಸುತ್ತಿದ್ದು, ತಾಲ್ಲೂಕಿನ ವಿವಿಧ ಗ್ರಾಮಗಳ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಒಟ್ಟು 106 ಅತಿಥಿ ಶಿಕ್ಷಕರು ಕಾರ್ಯನಿರ್ವಹಿಸುತ್ತಿದ್ದಾರೆ. ಪ್ರೌಢಶಾಲೆಗಳಲ್ಲಿ ವಿವಿಧ ವಿಷಯಗಳ ಒಟ್ಟು 26 ಅತಿಥಿ ಶಿಕ್ಷಕರು ಕಾರ್ಯನಿರ್ವಹಿಸುತ್ತಿದ್ದಾರೆ. ಇಲಾಖೆಯು ಪ್ರಾಥಮಿಕ ಶಾಲೆಗಳ ಅತಿಥಿ ಶಿಕ್ಷಕರಿಗೆ ರೂ.10 ಸಾವಿರ ಹಾಗೂ ಪ್ರೌಢಶಾಲಾ ಶಿಕ್ಷಕರಿಗೆ ರೂ.10,500 ಮಾಸಿಕ ಗೌರವ ವೇತನ ನೀಡುತ್ತಲಿದೆ.

## ಬೆಳೆ ಹಾನಿ: ಸೂಕ್ತ ಪರಿಹಾರ ನೀಡಲು ಆಗ್ರಹ

• ಉದಯವಾಹಿನಿ ಯಲ್ಲಾಪುರ

ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ರಾಜ್ಯ ಅನ್ನದಾತ ರೈತ ಸಂಘ ಮತ್ತು ಹಸಿರುಸೇನೆ ಆಶ್ರಯದಲ್ಲಿ ರೈತರು ಸೋಮವಾರ ಕಿರವತ್ತಿಯಲ್ಲಿ ಪ್ರತಿಭಟನಾ ಮೆರವಣಿಗೆ ನಡೆಸಿದರು. ಕಿರವತ್ತಿ ಪೊಲೀಸ್ ಠಾಣೆ ಎದುರಿನಿಂದ ರಾಷ್ಟ್ರೀಯ ಹೆದ್ದಾರಿ 63 ಮೂಲಕ ಗ್ರಾಮ ಪಂಚಾಯಿತಿವರೆಗೆ ಪ್ರತಿಭಟನಾ ಮೆರವಣಿಗೆ ನಡೆಸಿ, ಅತಿಕ್ರಮಣ ಸಕ್ರಮ ಮಾಡಬೇಕು, ಬೆಳೆಹಾನಿಗೆ ಸೂಕ್ತ ಪರಿಹಾರ ನೀಡಬೇಕು, ಬೆಳೆಗಳಿಗೆ ಬೆಂಬಲ ಬೆಲೆ ಘೋಷಿಸಬೇಕು ಎಂದು ಒತ್ತಾಯಿಸಿದರು.

ಕರ್ನಾಟಕ ರಾಜ್ಯ ಅನ್ನದಾತ ಹಸಿರು ಸೇನೆಯ ರಾಜ್ಯಾಧ್ಯಕ್ಷ ಚಿದಾನಂದ ಹರಿಜನ ಮಾತನಾಡಿ, ಅರಣ್ಯ ಅತಿಕ್ರಮಣದಾರರಿಗೆ ಪಟ್ಟಾ ಕೊಡಬೇಕು. ಬಡವರ ಕಷ್ಟಕ್ಕೆ ಧ್ವನಿಯಾಗಬೇಕು ಇಲ್ಲದಿದ್ದರೆ ದೆಹಲಿಗೆ ಹೋಗಿ ಹೋರಾಟ ನಡೆಸುತ್ತೇವೆ' ಎಂದರು.

ಪ್ರತಿಭಟನಾಕಾರರು ಉಪ ತಹಶೀಲ್ದಾರ್ ಎಚ್. ಎನ್.ರಾಘವೇಂದ್ರ ಅವರ ಮೂಲಕ ಸರ್ಕಾರಕ್ಕೆ ತಮ್ಮ ಬೇಡಿಕೆಯ ಮನವಿ ಸಲ್ಲಿಸಿದರು. ರಾಜ್ಯದಲ್ಲಿ ಅತಿವೃಷ್ಟಿಯಿಂದ ಬೆಳೆ ಹಾನಿಯಾಗಿದ್ದು, ಸೂಕ್ತ ಪರಿಹಾರ ನೀಡಬೇಕು.


ಉದಯವಾಹಿನಿ ಚಿತ್ರ

ಜಿಲ್ಲೆಯಲ್ಲಿ 1978ರ ಪೂರ್ವದಿಂದ ಸಾಗುವಳಿ ಮಾಡಿಕೊಂಡು ಬರುತ್ತಿರುವ ದಲಿತರಿಗೆ ಕೂಡಲೇ ಹಕ್ಕುಪತ್ರ ನೀಡಬೇಕು. ಅರಣ್ಯ ಅತಿಕ್ರಮಣದಾರರಿಗೆ ಕಂದಾಯ ಇಲಾಖೆಯಿಂದ ಹಕ್ಕುಪತ್ರ ನೀಡಬೇಕು. ಹಾಳಾಗಿರುವ ಎಲ್ಲಾ ರಸ್ತೆಗಳ ಸುಧಾರಣೆ ಆಗಬೇಕು. ಕೊಳೆ ರೋಗದಿಂದ ಅಡಿಕೆಗೆ ಹಾನಿಯಾಗಿದ್ದು ತಕ್ಷಣ ಪರಿಹಾರ ನೀಡಬೇಕು. ರಾಷ್ಟ್ರೀಕೃತ ಬ್ಯಾಂಕ್ ಹಾಗೂ ಸಹಕಾರಿ ಸಂಘಗಳಲ್ಲಿನ ರೈತರ ಎಲ್ಲಾ ಸಾಲ ಮನ್ನಾ ಮಾಡಬೇಕು. ಮೈಕ್ರೋ ಫೈನಾನ್ಸ್ ಹಾವಳಿ ಹೆಚ್ಚಿದ್ದು ರೈತರು, ಕೂಲಿ ಕಾರ್ಮಿಕರು ಮಹಿಳೆಯರು ತೊಂದರೆಗೆ ಒಳಗಾಗಿದ್ದಾರೆ. ಈ ಬಗ್ಗೆ ಕ್ರಮ ಕೈಗೊಳ್ಳಬೇಕು ಎಂದು ಮನವಿಯಲ್ಲಿ ತಿಳಿಸಿದ್ದಾರೆ.

## ಗ್ರಾಮೀಣ ಆರ್ಥಿಕತೆಗೆ ವೃದ್ಧಿಗೆ ಯೋಜನೆ: ಜಿಲ್ಲಾಧಿಕಾರಿ

• ಉದಯವಾಹಿನಿ ಗದಗ

ಗ್ರಾಮೀಣ ಆರ್ಥಿಕತೆಗೆ ಹೊಸ ಚೈತನ್ಯ ತುಂಬುವ ಉದ್ದೇಶದಿಂದ ಕೇಂದ್ರ ಸರ್ಕಾರವು 2025-26ನೇ ಸಾಲಿನ ಸಾಮಾನ್ಯ ಬಜೆಟ್‌ನಲ್ಲಿ ಆರ್‌ಪಿಆರ್‌ಪಿ (ಗ್ರಾಮೀಣ ಸಮೃದ್ಧಿ ಮತ್ತು ಸ್ಥಿತಿಸ್ಥಾಪಕತ್ವ ಕಾರ್ಯಕ್ರಮ) ಯೋಜನೆ ಘೋಷಿಸಿದ್ದು, ಇದು ಗ್ರಾಮೀಣ ಪ್ರದೇಶಗಳಲ್ಲಿ ಉದ್ಯೋಗವಕಾಶ ಹೆಚ್ಚಿಸುವುದು, ಕೃಷಿ ಉತ್ಪಾದಕತೆ ವೃದ್ಧಿಸುವುದು ಹಾಗೂ ಸಮಗ್ರ ಅಭಿವೃದ್ಧಿಯ ಉದ್ದೇಶ ಹೊಂದಿದೆ' ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.

ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ನಡೆದ ಆರ್‌ಪಿಆರ್‌ಪಿ ಯೋಜನೆಯ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಈ ಯೋಜನೆಯಡಿ ಗ್ರಾಮೀಣ ಬದುಕಿನ ಗುಣಮಟ್ಟ ಹೆಚ್ಚಿಸುವ ಆದ್ಯತೆಯ ಯೋಜನೆಗಳನ್ನು ಜಾರಿಗೆ ತರಲಾಗುವುದು. ಉದ್ಯೋಗ ಸೃಷ್ಟಿ,


ಉದಯವಾಹಿನಿ ಚಿತ್ರ

**ವಿವಿಧ ಇಲಾಖೆಗಳ ಅಧಿಕಾರಿಗಳು ನೀಡಿದ ಮಾಹಿತಿ ಗಮನಿಸಿ ಆರ್‌ಪಿಆರ್‌ಪಿ ಯೋಜನೆಯನ್ನು ಗದಗ ಜಿಲ್ಲೆಯಲ್ಲಿ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ಉದ್ದೇಶ ಹೊಂದಲಾಗಿದೆ. ಆರ್‌ಪಿಆರ್‌ಪಿ ಯೋಜನೆಗೆ ಸಂಬಂಧಿಸಿದಂತೆ ಡಿಸೆಂಬರ್ 7ರೊಳಗಾಗಿ ವರದಿ ನೀಡಬೇಕಿದೆ. ಅಲ್ಲದೇ 2026ರ ಮಾರ್ಚ್ ಅಂತ್ಯದವರೆಗೆ ರಾಜ್ಯದ ಎಲ್ಲಾ ಜಿಲ್ಲೆಗಳ ಸಮಗ್ರ ಅಧ್ಯಯನ ನಡೆಸಲಾಗುವುದು. ಈ ನಿಟ್ಟಿನಲ್ಲಿ ಇಲಾಖಾಧಿಕಾರಿಗಳು ಸೂಕ್ತ ಸಹಕಾರ ನೀಡಬೇಕು -ರಾಘವೇಂದ್ರ**

ಉದ್ಯಮಾಭಿವೃದ್ಧಿ, ಕೌಶಲಾಭಿವೃದ್ಧಿ ಮತ್ತು ಮೂಲಸೌಕರ್ಯ ವೃದ್ಧಿ ಜತೆಗೆ ವಿಶೇಷವಾಗಿ ಗ್ರಾಮೀಣ ಮಹಿಳೆಯರು, ಯುವಕರು ಹಾಗೂ ಸಣ್ಣ ರೈತರ ಸಬಲೀಕರಣ ಈ ಯೋಜನೆಯ ಮುಖ್ಯ ಉದ್ದೇಶವಾಗಿದೆ ಎಂದರು.


ಕೃಷಿ, ತೋಟಗಾರಿಕೆ, ಗ್ರಾಮೀಣಾಭಿವೃದ್ಧಿ, ಆರೋಗ್ಯ, ಲೀಡ್ ಬ್ಯಾಂಕ್, ಪ್ರವಾಸೋದ್ಯಮ, ಶಿಕ್ಷಣ, ಪಂಚಾಯತ್ ರಾಜ್, ಎನ್‌ಆರ್‌ಎಲ್‌ಎಂ, ಆಹಾರ, ಪಶುಸಂಗೋಪನಾ ಇಲಾಖೆ ಸೇರಿದಂತೆ ಇತರೆ ಇಲಾಖೆಗಳ ಅಧಿಕಾರಿಗಳು ತಮ್ಮ ಇಲಾಖೆಗಳಿಗೆ ಸಂಬಂಧಿಸಿ ಕೈಗೊಳ್ಳಬಹುದಾದ ಕಾರ್ಯಕ್ರಮಗಳ ಮತ್ತು ಯೋಜನೆಗಳ ರೂಪರೇಷೆ ಸಿದ್ಧಪಡಿಸುವಂತೆ ತಂದರು.

## ಕಂದಾಯ ಸಿಬ್ಬಂದಿಗಳ ನಿರ್ಲಕ್ಷ ಬೆಳೆ ಪರಿಹಾರ ಸಿಗದೆ ರೈತರು ಕಂಗಾಲು

• ಉದಯವಾಹಿನಿ ವಡಗೇರಾ

ಈಗಾಗಲೇ ತಾಲ್ಲೂಕಿನ ರೈತರಿಗೆ ಪರಿಹಾರ ಬಂದಿದೆ ಆದರೆ ಕಂದಾಯ ಸಿಬ್ಬಂದಿಗಳ ನಿರ್ಲಕ್ಷದಿಂದ ತಾಲ್ಲೂಕಿನ ಕಾಡಮಗೇರಾ,ತಡಬಿಡಿ, ಹುಂಡೆಕಲ್, ಶಂಕರ್ ಬಂಡಿ, ಕ್ಯಾತನಾಳ, ಗ್ರಾಮದ ಹಲವಾರು ರೈತರಿಗೆ ಬೆಳೆ ಪರಿಹಾರ ಸಿಕ್ಕಿಲ್ಲ ಇದರಿಂದ ರೈತರು ಕಂಗಾಲು ಕೂಡಲೆ ತಾಂತ್ರಿಕ ದೋಷ ನಿವಾರಿಸಿ ಪರಿಹಾರ ಒದಗಿಸುವಂತೆ ರೈತರು ವಡಗೇರಾ ತಹಶೀಲ್ದಾರರಿಗೆ ಮನವಿ ಸಲ್ಲಿಸಿ ಮಾತನಾಡಿದರು.ಯಾರದೂ ತಪ್ಪಿಗೆ ರೈತರು ಪರಿಹಾರ ಸಿಗದೇ ವಂಚಿತರಾಗಿದ್ದಾರೆ.

ಈಗಾಗಲೇ ರೈತರು ಸಾಲ ಸುಲಾ ಮಾಡಿ ದುಬಾರಿ ಪ್ರಮಾಣದಲ್ಲಿ ಹಣ ಕರ್ಚು ಮಾಡಿ ಹತ್ತಿ ತೊಗರಿ ಭತ್ತ ಸಜ್ಜೆ ಇನ್ನಿತರ ಬೆಳೆಗಳನ್ನು ಬೆಳೆದಿದ್ದಾರೆ ವಿಪರೀತ ಮಳೆಯಿಂದ ಕೈಗೆ ಬಂದ ತುತ್ತು ಬಾಯಿಗೆ ಬರದಂತ ಪರಿಸ್ಥಿತಿ ನಿರ್ಮಾಣವಾಗಿ ರೈತರು ತುಂಬಾ ಆತಂಕದಲ್ಲಿದ್ದಾರೆ ಬೆಳೆ ಪರಿಹಾರ ಬಾರದ



ಉದಯವಾಹಿನಿ ಚಿತ್ರ

ರೈತರನ್ನು ಗುರುತಿಸಿ ಮರು ನೊಂದಣಿ ಮಾಡಿ ಕೂಡಲೇ ಬೆಳೆ ಪರಿಹಾರವನ್ನು ರೈತರ ಖಾತೆಗೆ ಜಮೆ ಮಾಡಬೇಕು ಒಂದು ವೇಳೆ ನಿರ್ಲಕ್ಷ ವಹಿಸಿದ್ದಲ್ಲಿ ತಾಲ್ಲೂಕು ಆಡಳಿತ ಕಚೇರಿ ಮುಂದೆ ಉಗ್ರ ಹೋರಾಟ ಮಾಡುವುದಾಗಿ ತಿಳಿಸಿದರು. ಬಸವರಾಜಪ್ಪ ಗೌಡ ಮಾಲಿಪಾಟೀಲ್, ಭೀಮಣ್ಣ, ಬಸಣ್ಣ ಗೌಡ, ಸಿದ್ದು ಆನೂರು ,ಮಲ್ಲಣ್ಣ, ಯಲ್ಲಪ್ಪ, ಸಿದ್ದಪ್ಪ, ಶಾಂತಪ್ಪ, ದೇವೇಂದ್ರಪ್ಪ,ರಂಗಪ್ಪ ಇನ್ನಿತರರು ಇದ್ದರು.

## ಅಭಿವೃದ್ಧಿ ಕ್ರಿಯಾಯೋಜನೆ ಬೇಡಿಕೆಗಳ ಪ್ರಸ್ತಾವನೆ ಶೀಘ್ರ ಸಲ್ಲಿಸಿ

• ಉದಯವಾಹಿನಿ ಹುಮನಾಬಾದ್

ಮುಂಬರುವ 2026-27ನೇ ಸಾಲಿನಲ್ಲಿ ತಾಲ್ಲೂಕಿನಲ್ಲಿ ಕೈಗೊಳ್ಳಬೇಕಿರುವ ಅತ್ಯವಶ್ಯಕವಾದ ಅಭಿವೃದ್ಧಿ ಕಾರ್ಯಗಳ ಕುರಿತು ಈಗಾಗಲೇ ಪ್ರಸ್ತಾವನೆ ಸಲ್ಲಿಸಿದ ಇಲಾಖೆ ಅಧಿಕಾರಿಗಳನ್ನು ಹೊರತುಪಡಿಸಿ, ಇನ್ನುಳಿದ ಇಲಾಖೆಗಳ ಅಧಿಕಾರಿಗಳು ಶೀಘ್ರ ಅಗತ್ಯ ಮಾಹಿತಿಯನ್ನು ಸಲ್ಲಿಸಬೇಕೆಂದು ಶಾಸಕ ಡಾ.ಸಿದ್ದು ಪಾಟೀಲ ಸೂಚಿಸಿದರು. ಪಟ್ಟಣದ ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ನಡೆದ ಕರಡು ಅಭಿವೃದ್ಧಿ ಯೋಜನೆ ಪ್ರಸ್ತಾವನೆ ಸಲ್ಲಿಕೆ, ತಾಲ್ಲೂಕು ಮಟ್ಟದ ಅನುಷ್ಟಾನ ಅಧಿಕಾರಿಗಳು, ಪಿಡಿಓ ಸಮಾಲೋಚನಾ ಸಭೆಯಲ್ಲಿ ಮಾತನಾಡಿ, ಕ್ಷೇತ್ರದ ಜನತೆಯ ಹಿತದೃಷ್ಟಿಯಿಂದ ಕೈಗೊಳ್ಳಬೇಕಾಗಿರುವ ಅಭಿವೃದ್ಧಿ ಯೋಜನೆಗಳ ಬಗ್ಗೆ ಇಲಾಖಾವಾರು, ಗ್ರಾಪಂಗಳಲ್ಲಿ ವಿಶೇಷ ಸಭೆ ನಡೆಸಿ ಅಭಿವೃದ್ಧಿ ಕಾರ್ಯಗಳ ಕುರಿತಾದ ಬೇಡಿಗಳ ಪ್ರಸ್ತಾವನೆ ಸಲ್ಲಸಬೇಕೆಂದರು.


ಉದಯವಾಹಿನಿ ಚಿತ್ರ

**ಅಭಿವೃದ್ಧಿ ಯೋಜನೆ ಪ್ರಸ್ತಾವನೆ ಸಲ್ಲಿಕೆ**

ವಿಧಾನ ಪರಿಷತ್ ಸದಸ್ಯ ಡಾ.ಚಂದ್ರಶೇಖರ ಪಾಟೀಲ ಮಾತನಾಡಿ, ಯಾವುದೇ ಗ್ರಾಮಗಳನ್ನು ಕೈಬಿಡದೇ ಪ್ರತಿಯೊಂದು ಗ್ರಾಮಗಳ ಅಭಿವೃದ್ಧಿ ಗಮನದಲ್ಲಿಟ್ಟುಕೊಂಡು ಬೇಡಿಕೆಗಳ ಪ್ರಸ್ತಾವನೆ ಸಲ್ಲಿಸಬೇಕು. ಗ್ರಾಮಸ್ಥರೊಂದಿಗೆ ಚರ್ಚಿಸದೇ ಅಂದಾಜು ಹಾರಿಕೆ ಮಾಹಿತಿ ನೀಡುವುದರಿಂದ ಅಭಿವೃದ್ಧಿ ಕುಂಠಿತಗೊಳ್ಳುತ್ತವೆ. ಆ ನಿಟ್ಟಿನಲ್ಲಿ ಸಲಹೆ ಗಂಭೀರ ಪರಿಗಣಿಸುವಂತೆ ಸೂಚಿಸಿದರು. ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ ಸೂರ್ಯಕಾಂತ ಬಿರಾದಾರ, ತಾಲ್ಲೂಕು ಪಂಚಾಯಿತಿ ಪರೀಕ್ಷಾರ್ಥ ಕಾರ್ಯನಿರ್ವಾಹಕ ಅಧಿಕಾರಿ ರಮ್ಯಾ, ಆರ್ಥಿಕ ವಿಭಾಗದ ಮುಖ್ಯಸ್ಥರಾದ ದೀಪಿಕಾ ನಾಯ್ಕರ್, ಸೇರಿದಂತೆ ಅನೇಕರು ಇದ್ದರು.

## ಲಿಕ್ಕರ್ ಷಾಪ್ ಹತ್ತಿರ ಶಾಲೆ ಆರಂಭಕ್ಕೆ ಅನುಮತಿ ಸರಿನಾ?

• ಉದಯವಾಹಿನಿ ಬಳ್ಳಾರಿ

ಲಿಕ್ಕರ್ ಷಾಪ್ ಹತ್ತಿರ ಶಾಲೆ ಆರಂಭಿಸುವುದು ಸರಿನಾ. ನಗರದ ಪೂರ್ವ ವಲಯ ಕ್ಷೇತ್ರ ಶಿಕ್ಷಣಾಧಿಕಾರಿಗಳು ಸರ್ಕಾರದ ನಿಯಮಾವಳಿಗಳನ್ನು ಪಾಲಿಸದೇ ಮದ್ಯದ ಮಳಿಗೆ ಹತ್ತಿರ ಅಕ್ಷರ ಗ್ಲೋಬಲ್ ಶಾಲೆಗೆ ಅನುಮೋದನೆ ನೀಡಿದ್ದಾರೆ. ಈ ಶಾಲೆಯ ಅನುಮೋದನೆಯನ್ನು ರದ್ದು ಪಡಿಸಿ ಅನುಮೋದನೆ ನೀಡಿದ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮೇಲೆ ಕ್ರಮ ಕೈಗೊಳ್ಳಬೇಕೆಂದು ಸಾಮಾಜಿಕ ಹೋರಾಟಗಾರ ಸಿದ್ದೇಶ್ ಊಳೂರು ಜಿಲ್ಲಾಡಳಿತಕ್ಕೆ ಮನವಿ ಮಾಡಿದ್ದಾರೆ. ಶಾಲಾ ಶಿಕ್ಷಣ ಇಲಾಖೆಯ ಪ್ರಕಾರ ಯಾವುದೇ ಒಂದು


ಉದಯವಾಹಿನಿ ಚಿತ್ರ

ಶಾಲೆಗೆ ಅನುಮತಿ ನೀಡಬೇಕಾದರೆ. ಆ ಶಾಲೆ ಮದ್ಯದ ಮಳಿಗೆ ಇರುವ ಸ್ಥಳದಿಂದ 100 ಮೀ ಅಂತರವನ್ನು ಹೊಂದಿರಬೇಕು ಎಂಬ ನಿಯಮ ಇದೆ. ಆದರೆ ನಗರದ ಎಸ್.ಎನ್. ಪೇಟೆಯ ಬ್ಲೂ ಡಾಲ್ ಲಿಕ್ಕರ್ ಷಾಪ್ ಪಕ್ಕದಲ್ಲಿಯೇ ಅಕ್ಷರ ಗ್ಲೋಬಲ್ ಶಾಲೆಗೆ ಅನುಮತಿ ನೀಡಿದೆ. ಆದ್ದರಿಂದ ಶಾಲಾ ಶಿಕ್ಷಣ ಇಲಾಖೆಯ ನಿಯಮಗಳನ್ನು ಪಾಲಿಸದೇ ನಿಯಮ ಬಾಹಿರವಾಗಿ ಅಕ್ಷರ ಗ್ಲೋಬಲ್ ಶಾಲೆಗೆ ಅನುಮೋದನೆ ನೀಡಿದ ಶಾಲೆಯ ಅನುಮೋದನೆಯನ್ನು ಈ ಕೂಡಲೇ ರದ್ದು ಪಡಿಸಿ ಹಾಗೂ ಅನುಮೋದನೆ ನೀಡಿದ ಪೂರ್ವ ವಲಯ ಶಿಕ್ಷಣಾಧಿಕಾರಿಗಳ ವಿರುದ್ಧ ನಿಯಮಾನುಸಾರ ಸೂಕ್ತ ಶಿಸ್ತು ಕ್ರಮ ಜರುಗಿಸಬೇಕೆಂದು ಕೋರಿದ್ದಾರೆ.

## ಗಾಂಧಿ ಗ್ರಾಮ ಪುರಸ್ಕಾರಕ್ಕೆ ಗುಂಡಗುರ್ತಿ ಆಯ್ಕೆ

• ಉದಯವಾಹಿನಿ ಕಲಬುರಗಿ

ಕರ್ನಾಟಕ ಸರ್ಕಾರ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ ಇಲಾಖೆಯ ಅಡಿಯಲ್ಲಿ ನೀಡುವ ಗಾಂಧಿ ಗ್ರಾಮ ಪುರಸ್ಕಾರಕ್ಕೆ ಕಲಬುರಗಿ ಜಿಲ್ಲೆಯ ಚಿತ್ತಾಪೂರ ತಾಲ್ಲೂಕಿನ ಗುಂಡಗುರ್ತಿ ಗ್ರಾಮವು ಆಯ್ಕೆಗೊಂಡಿದ್ದು,ಇಲಾಖೆಯ ಸಚಿವರಾದ ಪ್ರಿಯಾಂಕ ಖರ್ಗೆ ಅವರು ಗ್ರಾಮ ಪಂಚಾಯತ ಅಧ್ಯಕ್ಷರಾದ ಶ್ರೀಮತಿ ಸಂಪೂರ್ಣ ಗಂಡ



ಉದಯವಾಹಿನಿ ಚಿತ್ರ

ಶ್ರೀನಿವಾಸ ಬಣ್ಣಕ್ಕಿ, ಜಿಲ್ಲಾ ಪಂಚಾಯತ ಉಪ ಕಾರ್ಯದರ್ಶಿ ಲಕ್ಷ್ಮಣ ಶೃಂಗೇರಿ ಹಾಗೂ ಪಿಡಿಓ ಜಗದೇವಪ್ಪ ಅವರಿಗೆ ಸ್ಮರಣಿಕೆಯನ್ನು ನೀಡಿದರು.

### ಸಮಾಜದ ವಿವಿಧ ರಂಗಗಳಲ್ಲಿ ಸೇವೆ ಸಲ್ಲಿಸಿ ಹೆಸರುವಾಸಿಯಾದ ಹಲವರನ್ನು ಸನ್ಮಾನಿಸುವ ಕಾರ್ಯವೂ ನಮ್ಮ ಕರವೇ ಮಾಡುತ್ತಿದೆ

# 70ನೇ ಕನ್ನಡ ರಾಜ್ಯೋತ್ಸವ ನಿಮಿತ್ತ ಕರವೇ 21ರ ಸಂಭ್ರಮ ಕಾರ್ಯಕ್ರಮ

• ಉದಯವಾಹಿನಿ ಕೆಂಭಾವಿ

ಕರ್ನಾಟಕ ರಕ್ಷಣಾ ವೇದಿಕೆ ಕೆಂಭಾವಿ ವಲಯ ಘಟಕದಿಂದ ಡಿ. 5ರಂದು ಸಂಜೆ ಪಟ್ಟಣದ ಪುರಸಭೆ ಕಾರ್ಯಾಲಯದ ಮುಂದೆ 70ನೇ ಕನ್ನಡ ರಾಜ್ಯೋತ್ಸವ ನಿಮಿತ್ತ ಕರವೇ 21ರ ಸಂಭ್ರಮ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಕರವೇ ಸುರಪುರ ತಾಲ್ಲೂಕು ಘಟಕದ ಅಧ್ಯಕ್ಷ ವೆಂಕಟೇಶ ನಾಯಕ ಭೈರಿಮಡ್ಡಿ ಹೇಳಿದರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಸೋಮವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಟಿ.ಎ. ನಾರಾಯಣಗೌಡ ಅವರ ನೇತೃತ್ವದ ಕರ್ನಾಟಕ ರಕ್ಷಣಾ ವೇದಿಕೆಯು ಕಳೆದ ಹಲವಾರು ದಶಕಗಳಿಂದ ನಾಡು, ನುಡಿ, ಗಡಿ ಭಾಷೆಯ ಉಳಿವಿಗೆ ನಿರಂತರ ಹೋರಾಟ ಮಾಡುವುದರ ಜತೆಗೆ ಕಲೆ, ಸಾಹಿತ್ಯ, ಸಂಸ್ಕೃತಿ ಉಳಿಸಿ ಬೆಳೆಸುವ ಕೆಸಲ ಮಾಡುತ್ತಿದೆ. ಸಮಾಜದ ವಿವಿಧ ರಂಗಗಳಲ್ಲಿ ಸೇವೆ ಸಲ್ಲಿಸಿ ಹೆಸರುವಾಸಿಯಾದ ಹಲವರನ್ನು ಸನ್ಮಾನಿಸುವ ಕಾರ್ಯವೂ ನಮ್ಮ ಕರವೇ ಮಾಡುತ್ತಿದೆ ಎಂದು ತಿಳಿಸಿದರು. ಅಂದು ನಡೆಯುವ ಕಾರ್ಯಕ್ರಮದ ಸಾನಿಧ್ಯವನ್ನು ಕೆಂಭಾವಿ ಹಿರೇಮಠ ಸಂಸ್ಥಾನದ


ಉದಯವಾಹಿನಿ ಚಿತ್ರ

**ವಿವಿಧ ಸಾಧಕರಿಗೆ ಕುವೆಂಪು ಪ್ರಶಸ್ತಿ**

ಸಾಧಕರಾದ ಗುರಣ್ಣಗೌಡ ಬಿರಾದರ (ದೇಶಸೇವೆ), ಮಾಳಪ್ಪ ಸುಂಕದ (ಶಿಲ್ಪಕಲೆ), ಯಮನೇಶ ಯಾಳಗಿ (ಸಂಗೀತ), ಶ್ರೀಮತಿ ಮಾಸಾಬಿ ಭಾಗವಾನ್ (ಸೇವಾಕ್ಷೇತ್ರ), ಡಾ. ರಕ್ಷಿತಾ ಎಸ್ ನ್ಯಾಮಗೊಂಡ (ವೈದ್ಯಕೀಯ), ಶ್ರೀಮತಿ ಉಮಾದೇವಿ ಪೊಲೀಸ್ ಪಾಟೀಲ (ಸಾಹಿತ್ಯ), ವಿಶ್ವನಾಥ ಹರಸೂರ (ಶಿಕ್ಷಣ), ವಿಜಯಾಚಾರ್ಯ ಪುರೋಹಿತ (ಮಾಧ್ಯಮ ಕ್ಷೇತ್ರ), ಹೊನ್ನಪ್ಪ ದೇವೇಂದ್ರಪ್ಪ ನಗನೂರ (ರಂಗಕಲೆ), ರಮೇಶ ಆರ್. ಸೊನ್ನದ (ಸಮಾಜ ಸೇವೆ), ದಂಡಪ್ಪ ಮಲ್ಲಪ್ಪ ಮ್ಯಾಗೇರಿ (ಕೃಷಿ) ಅವರಿಗೆ ಕಾರ್ಯಕ್ರಮದಲ್ಲಿ ಕುವೆಂಪು ಪ್ರಶಸ್ತಿ ನೀಡಿ ಗೌರವಿಸಲಾಗುತ್ತದೆ ಎಂದು ಕರವೇ ಸುರಪುರ ತಾಲ್ಲೂಕು ಘಟಕದ ಅಧ್ಯಕ್ಷ ವೆಂಕಟೇಶ ನಾಯಕ ಭೈರಿಮಡ್ಡಿ ತಿಳಿಸಿದರು.

ಪೀಠಾಧಿಪತಿ ಷ.ಬ್ರ. ಶ್ರೀ ಚನ್ನಬಸವ ಶಿವಾಚಾರ್ಯರು, ಕರಡಕಲ್ ಕೋರಿಸಿದ್ದೇಶ್ವರ ಶಾಖಾ ಮಠದ ಪೀಠಾಧಿಪತಿ ಪೂಜ್ಯ ಶಾಂತರುದ್ರಮುನಿ ಶಿವಾಚಾರ್ಯರು, ವೀರಗೊಟ್ಟದ ಪೂಜ್ಯ ಶ್ರೀ ಅಡವಿಲಿಂಗ ಮಹಾರಾಜರು, ಮುದನೂರ ಕಂಠಿ ಮಠದ ಪೀಠಾಧಿಪತಿ ಷ.ಬ್ರ. ಶ್ರೀ ಸಿದ್ಧ ಚನ್ನಮಲ್ಲಿಕಾರ್ಜುನ ಶಿವಾಚಾರ್ಯರು ವಹಿಸುವರು ಎಂದು ಮಾಹಿತಿ ನೀಡಿದರು. ಕರವೇ ಜಿಲ್ಲಾಧ್ಯಕ್ಷ ಟಿ.ಎನ್. ಭೀಮುನಾಯಕ ಹಾಗೂ ತಮ್ಮ ಅಧ್ಯಕ್ಷತೆಯಲ್ಲಿ ನಡೆಯಲಿರುವ ಕಾರ್ಯಕ್ರಮವನ್ನು ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪಗೌಡ ದರ್ಶನಾಪೂರ ಅವರು ಉದ್ಘಾಟಿಸುವರು. ಬಿಜೆಪಿ ನಿಕಟಪೂರ್ವ ಜಿಲ್ಲಾಧ್ಯಕ್ಷ ಅಮೀನರೆಡ್ಡಿ ಮಾಲಿ ಪಾಟೀಲ ಯಾಳಗಿ ಅವರು ಜ್ಯೋತಿ ಬೆಳಗಿಸುವರು. ಮಾಜಿ ಶಾಸಕ ಗುರು ಪಾಟೀಲ ಶಿರವಾಳ ಅವರು ಶ್ರೀ ಭುವನೇಶ್ವರಿ ಭಾವಚಿತ್ರಕ್ಕೆ ಪೂಜೆ ಸಲ್ಲಿಸುವರು. ವಿಶೇಷ ಆಹ್ವಾನಿತರಾಗಿ ಜಿಪಂ ಮಾಜಿ ಸದಸ್ಯ ನಿಂಗನಗೌಡ ಮಾಲಿ ಪಾಟೀಲ, ಜಿಪಂ ಮಾಜಿ ಅಧ್ಯಕ್ಷರಾದ ಸಿದ್ದನಗೌಡ ಪೊಲೀಸ್ ಪಾಟೀಲ, ಬಸನಗೌಡ ಯಡಿಯಾಪೂರ, ಪುರಸಭೆ ನೂತನ ಅಧ್ಯಕ್ಷೆ ಪ್ರಿಯಾ ರಾಮನಗೌಡ ಪೊಲೀಸ್ ಪಾಟೀಲ, ಉಪಾಧ್ಯಕ್ಷೆ ಲಕ್ಷ್ಮೀಬಾಯಿ ಕಂಬಾರ, ಮುಖ್ಯಾಧಿಕಾರಿ ಮಹ್ಮದ್ ಯೂಸೂಫ್, ಆಶ್ರಯ ಸಮಿತಿ ಅಧ್ಯಕ್ಷ ಶರಣಬಸವ (ಕಾಕಾ) ಡಿಗ್ಗಾವಿ, ಜಿಲ್ಲಾ ಕಾಂಗ್ರೆಸ್ ಉಪಾಧ್ಯಕ್ಷ ಮಹಿಪಾಲರೆಡ್ಡಿ ಸಾಹು ಡಿಗ್ಗಾವಿ, ಪಿಎಲ್‌ಡಿ ಬ್ಯಾಂಕ್ ನಿರ್ದೇಶಕ ವಾಮನರಾವ ದೇಶಪಾಂಡೆ, ಪುರಸಭೆ ವಿರೋಧ ಪಕ್ಷದ ನಾಯಕ ಶರಣಪ್ಪ ಯಾಳಗಿ ಸೇರಿದಂತೆ ಇತರರು ಭಾಗವಹಿಸಲಿದ್ದಾರೆ ಎಂದು ತಿಳಿಸಿದರು.

**ನಾಡು, ನುಡಿ, ಗಡಿ ಭಾಷೆಯ ಉಳಿವಿಗೆ ನಿರಂತರ ಹೋರಾಟ**

ಈ ಸಂದರ್ಭದಲ್ಲಿ ಕರವೇ ಸುರಪುರ ತಾಲ್ಲೂಕು ಕಜಾಂಚಿ ಶ್ರೀಶೈಲ್ ಕಾಚಾಪೂರ, ತಾಲ್ಲೂಕು ಉಪಾಧ್ಯಕ್ಷರಾದ ಮಲ್ಲು ವಿಷ್ಣು ಸೇನಾ, ನಾಂಗೇಂದ್ರ ಚಂದಲಾಪುರ, ಆನಂದ ಮಾಚಗುಂಡಾಳ, ವಲಯ ಅಧ್ಯಕ್ಷ ಕುಮಾರ ಮೋಪಗಾರ, ಪ್ರಧಾನ ಕಾರ್ಯದರ್ಶಿ ಶಿವು ಮಲ್ಲಿಭಾವಿ, ಮಲ್ಲಿಕಾರ್ಜುನ ಸ್ವಾಮಿ ಹಿರೇಮಠ ಪರಸನಹಳ್ಳಿ, ಪದಾಧಿಕಾರಿಗಳಾದ ವಿಠ್ಠಲ್ ವಾಸ್ಟರ್, ನಿಂಗಣ್ಣ ಪೂಜಾರಿ, ಚಿದಾನಂದ ದೊಡಮನಿ, ಅಂಬಯ್ಯ ಬಡಿಗೇರ, ರಮೇಶ ಚಿಂಚೋಳಿ, ಮಲ್ಲನಗೌಡ ಕದ್ನಳ್ಳಿ, ದೇವು ಹಡಪದ, ದೇವಪ್ಪ ಹಂದ್ರಾಳ, ಪರಶುರಾಮ ಮಲ್ಲಾ, ಬಾವಾಸಾಬ ನದಾಫ್, ರವಿಕಾಂತ ಉಪ್ಪಾರ ನಗನೂರ, ವೀರೇಶ ಪರಸನಹಳ್ಳಿ, ಮೌನೇಶ ತಳ್ಳಳ್ಳಿ, ಭಾಗಣ್ಣ ಗೌಡಗೇರಾ ಸೇರಿದಂತೆ ಇತರರಿದ್ದರು.

## ಮಕ್ಕಳಿಗೆ ಪ್ರತಿಭಾ ಕಾರಂಜಿ ಉತ್ತಮ ವೇದಿಕೆ : ಪಾಂಚಾಳ

• ಉದಯವಾಹಿನಿ ಔರಾದ್

ವಿದ್ಯಾರ್ಥಿಗಳು ಪಠ್ಯದ ಜತೆಗೆ ಪಠ್ಯೇತರ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಬೇಕು. ಮಕ್ಕಳಿಗೆ ಪ್ರತಿಭಾ ಕಾರಂಜಿ ಉತ್ತಮ ವೇದಿಕೆಯಾಗಿದೆ ಎಂದು ಎಸ್‌ಡಿಎಂಸಿ ಅಧ್ಯಕ್ಷ ತುಳಸಿರಾಮ ಪಾಂಚಾಳ ಹೇಳಿದರು.

ತಾಲ್ಲೂಕಿನ ಗುಡಪಳ್ಳಿ ಗ್ರಾಮದಲ್ಲಿ ಜರುಗಿದ ವಲಯ ಮಟ್ಟದ ಪ್ರತಿಭಾ ಕಾರಂಜಿ ಮತ್ತು ಕಲೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಶಿಕ್ಷಣದಲ್ಲಿ ಅಂಕಗಳ ಜತೆಗೆ ಜೀವನ ಮೌಲ್ಯಗಳು, ಉತ್ತಮ ಸಂಸ್ಕೃತಿ, ಸಂಸ್ಕಾರ ಬೆಳೆಸಿಕೊಳ್ಳಲು ಪ್ರತಿಭಾ ಕಾರಂಜಿ ಉತ್ತಮ ಸಮಾಜ ನಿರ್ಮಾಣವಾಗಲು ಸಾಧ್ಯವಾಗಿದೆ. ಮಕ್ಕಳ ಪ್ರತಿಭೆಗೆ ಶಿಕ್ಷಕರು,ಪೋಷಕರು ಮಾರ್ಗದರ್ಶನ ನೀಡುವ ಮೂಲಕ ಮಕ್ಕಳ ಯಶಸ್ಸಿಗೆ ಮುಂದಾಗಬೇಕು ಎಂದು ಹೇಳಿದರು. ಸರ್ಕಾರಿ ನೌಕರರ ಸಂಘದ ತಾಲ್ಲೂಕು ಅಧ್ಯಕ್ಷ ಪಂಡರಿ ಆಡೆ ಮಾತನಾಡಿ , ಮಗುವಿನಲ್ಲಿ ಅಡಗಿರುವ ಪ್ರತಿಭೆಯನ್ನು ಹೊರಹಾಕಲು ಮತ್ತು ಸರ್ಕಾರ , ಶಿಕ್ಷಣ ಇಲಾಖೆ ಹೊರ ತಂದಿರುವ ಪ್ರತಿಭಾ ಕಾರಂಜಿ ಸೂಕ್ತ ವೇದಿಕೆಯಾಗಿದೆ. ಮಕ್ಕಳು ಬೌದ್ಧಿಕ ಸಾಮರ್ಥ್ಯವನ್ನು ವೃದ್ಧಿಸಿಕೊಳ್ಳಲು ಪ್ರತಿಭಾ ಕಾರಂಜಿ , ಕಲೋತ್ಸವ ಸಹಕಾರಿಯಾಗಿದೆ ಎಂದು ಹೇಳಿದರು.

## ಮಾದರಿ ಅಂಗನವಾಡಿ ಕೇಂದ್ರ ಉದ್ಘಾಟನೆ

• ಉದಯವಾಹಿನಿ ಹಾನಗಲ್

ತಾಲ್ಲೂಕಿನ ಬಮ್ಮನಹಳ್ಳಿ ಮತ್ತು ಹನುಮಸಾಗರ ಗ್ರಾಮಗಳಲ್ಲಿ ಮೂಲಭೂತ ಸೌಲಭ್ಯಗಳನ್ನು ಹೊಂದಿರುವ ಮಾದರಿ ಅಂಗನವಾಡಿ ಕೇಂದ್ರಗಳನ್ನು ಶಾಸಕ ಶ್ರೀನಿವಾಸ ಮಾನೆ ಉದ್ಘಾಟಿಸಿದರು.

ತಾಲ್ಲೂಕಿನ 42 ಗ್ರಾಪಂ ವ್ಯಾಪ್ತಿಗಳಲ್ಲಿನ ಒಟ್ಟು 50 ಅಂಗನವಾಡಿ ಕೇಂದ್ರಗಳನ್ನು ಗುರುತಿಸಿ, ಮಾದರಿ ಅಂಗನವಾಡಿ ಕೇಂದ್ರಗಳನ್ನಾಗಿ ರೂಪಿಸಲಾಗುತ್ತಿದೆ. ಗ್ಯಾರಂಟಿ ಅನುಷ್ಠಾನ ಸಮಿತಿ ಈ ನಿಟ್ಟಿನಲ್ಲಿ ವಿಶೇಷ ಕಾಳಜಿ ವಹಿಸಿ ಮಾದರಿ ಅಂಗನವಾಡಿ ಕೇಂದ್ರಗಳನ್ನು ಸ್ಥಳೀಯ ಗ್ರಾಪಂಗಳ ಸಹಯೋಗದಲ್ಲಿ ರೂಪಿಸುತ್ತಿದೆ. ಗ್ರಾಮೀಣ ಪ್ರದೇಶದ ಮಕ್ಕಳಿಗೆ ಪೂರ್ವ ಪ್ರಾಥಮಿಕ ಹಂತದಿಂದಲೇ ಉತ್ತಮ ಶಿಕ್ಷಣ ನೀಡುವ ಉದ್ದೇಶ ಹೊಂದಲಾಗಿದ್ದು, ಸಂತಸದ ಕಲಿಕೆಗೆ ಈ ಕೇಂದ್ರಗಳು ಪೂರಕವಾಗಿರಲಿವೆ. ಕೇಂದ್ರದಲ್ಲಿ ಬಣ್ಣ, ಚಿತ್ತಾರ, ಚಿತ್ರಪಟಗಳು, ಉದ್ಯಾನವನ, ಆಸನಗಳು ಸೇರಿದಂತೆ ಅವಶ್ಯ ಸೌಲಭ್ಯಗಳನ್ನು ಕಲ್ಪಿಸಲಾಗುತ್ತಿರುವುದು ವಿಶೇಷ ಸಂಗತಿ ಎಂದು ಶಾಸಕ ಮಾನೆ ಈ ಸಂದರ್ಭದಲ್ಲಿ ತಿಳಿಸಿದರು.

## ವಿಶ್ವ ಏಡ್ಸ್ ದಿನಾಚರಣೆ


• ಉದಯವಾಹಿನಿ ನವಲಗುಂದ

ಎಚ್‌ಐವಿ , ಏಡ್ಸ್ ಬಗ್ಗೆ ಯುವಜನತೆ ಜಾಗೃತರಾಗಬೇಕು. ಈ ರೋಗದ ಬಗ್ಗೆ ಇರುವ ತಪ್ಪು ಕಲ್ಪನೆಗಳನ್ನು ಹೋಗಲಾಡಿಸಿ, ಆರೋಗ್ಯಕರ ಸಮಾಜ ನಿರ್ಮಾಣದಲ್ಲಿ ಎನ್.ಎಸ್.ಎಸ್. ಸ್ವಯಂಸೇವಕರು ಪ್ರಮುಖ ಪಾತ್ರ ವಹಿಸಬೇಕು, ಎಂದು . ಶ್ರೀ ಶಂಕರ ಮಹಾವಿದ್ಯಾಲಯ ಪ್ರಾಚಾರ್ಯರಾದ ಶ್ರೀನಿವಾಸ್ ಬಡಿಗೇರ ಹೇಳಿದರು. ಅವರು ಪಟ್ಟಣದ ಶ್ರೀ ಶಂಕರ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯದ ಎನ್.ಎಸ್.ಎಸ್. ಘಟಕದದಿಂದ ಮಹಾವಿದ್ಯಾಲಯದ ಸಭಾಂಗಣದಲ್ಲಿ 'ವಿಶ್ವ ಏಡ್ಸ್ ದಿನ' ಆಚರಣೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಪದವಿ ಪೂರ್ವ ಕಾಲೇಜಿನ ಪ್ರಾಚಾರ್ಯರಾದ ಜಯರಾಮ್ ಲಮಾಣಿ ಹಾಗೂ ವಿದ್ಯಾರ್ಥಿ ಒಕ್ಕೂಟದ ಕಾರ್ಯಾಧ್ಯಕ್ಷ ಹಾರೋಗೇರಿ ಅವರು ಏಡ್ಸ್ ರೋಗದ ಲಕ್ಷಣಗಳು, ಹರಡುವ ವಿಧಾನಗಳು ಮತ್ತು ಅದನ್ನು ತಡೆಗಟ್ಟುವ ಕ್ರಮಗಳ ಕುರಿತು ವಿದ್ಯಾರ್ಥಿಗಳಲ್ಲಿ ಮಾಹಿತಿ ನೀಡಿದರು.

# ಬಿಜೆಪಿಗೆ ಹತ್ತಿರವೋ ದೂರವೋ; ಗೊಂದಲದಲ್ಲಿ ಅಮಿತ್ ಶಾ?

## ಯಾವ ಕಾರಣಕ್ಕೂ ಬಿಜೆಪಿ, ಎಐಎಡಿಎಂಕೆ ಜೊತೆ ಮೈತ್ರಿಯಿಲ್ಲ ಎಂದಿರುವ ದಳಪತಿ ವಿಜಯ್

**ಚೆನ್ನೈ:** ಕರೂರ್ ಕಾಲ್ತುಳಿತದ ಘಟನೆಯ ನಂತರ ತಮಿಳುನಾಡು ವಿಧಾನಸಭಾ ಚುನಾವಣೆಯ ಪೂರ್ವ ತಯಾರಿಯ ದಿಕ್ಕು ಬದಲಾಗಬಹುದು ಎನ್ನುವ ನಿರೀಕ್ಷೆಯಿತ್ತು. ಅದರಲ್ಲೂ ಪ್ರಮುಖವಾಗಿ, ಅಲ್ಲಿನ




ರಾಜಕೀಯದಲ್ಲಿ ಸಂಚಲನ ಮೂಡಿಸುತ್ತಿರುವ ದಳಪತಿ ವಿಜಯ್ ಅವರ ಟಿವಿಕೆ ಬೆಂಬಲ ಯಾರಿಗೆ ಸಿಗಬಹುದು ಎನ್ನುವುದು ಕುತೂಹಲಕ್ಕೆ ಕಾರಣವಾಗಿತ್ತು. ಆದರೆ, ಎಐಎಡಿಎಂಕೆಯಲ್ಲಿ ಉತ್ತಮ ಸ್ಥಾನದಲ್ಲಿದ್ದ ಸೆಂಗೊಟ್ಟೈಯನ್ ಅವರನ್ನು ಪಾರ್ಟಿಯ ಪ್ರಧಾನ ಕಾರ್ಯದರ್ಶಿ ಎಡಪ್ಪಾಡಿ ಪಳನಿಸ್ವಾಮಿ ಉಚ್ಚಾಟಿಸಿದ ನಂತರ, ಅವರು ವಿಜಯ್ ಅವರ ಪಾರ್ಟಿಗೆ ಸೇರ್ಪಡೆಗೊಂಡಿದ್ದಾರೆ. ಆ ಮೂಲಕ, ಎನ್‌ಡಿಎ ಮೈತ್ರಿಕೂಟದ ಜೊತೆಗೆ ಯಾವುದೇ ಹೊಂದಾಣಿಕೆಯಿಲ್ಲ ಎಂದು ಪರೋಕ್ಷವಾಗಿ ಸಾರಿದ್ದಾರೆ.

ಜಯಲಲಿತಾ ನಿಧನದ ನಂತರ, ಎಐಎಡಿಎಂಕೆ ಪಾರ್ಟಿಯು ಹರಿದು ಹಂಚಿ ಹೋಗಿದೆ. ಪನ್ನೀರಸೆಲ್ವಂ, ಶಶಿಕಲಾ, ಟಿಟಿವಿ ದಿನಕರನ್, ಒಬ್ಬೊಬ್ಬರದ್ದು ಒಂದೊಂದು ರಾಜಕೀಯವಾಗಿರುವುದು, ಬಿಜೆಪಿಗೆ ತಲೆನೋವಾಗಿ ಪರಿಣಮಿಸುತ್ತಿದೆ.

ವಿಜಯ್ ಪಾರ್ಟಿಗೆ ಬೀಳುವ ಮತಗಳು ಯಾವ ಮೈತ್ರಿಕೂಟಕ್ಕೆ ಸೇರಿದ್ದಾಗಿರುತ್ತದೆ ಎನ್ನುವುದನ್ನು ಅಮಿತ್ ಶಾಗೆ ಅಂದಾಜು ಮಾಡಲು ಸಾಧ್ಯವಾಗುತ್ತಿಲ್ಲ.

**ಎಐಎಡಿಎಂಕೆ ಪಾರ್ಟಿಯ ಪ್ರಧಾನ ಕಾರ್ಯದರ್ಶಿ ಟಿಟಿವಿ ದಿನಕರನ್:** ಬಿಜೆಪಿಯ ದೆಹಲಿ ನಾಯಕರು ಎಎಂಎಂಕೆ ಪಾರ್ಟಿಯ ಪ್ರಧಾನ ಕಾರ್ಯದರ್ಶಿ ಟಿಟಿವಿ ದಿನಕರನ್ ಅವರನ್ನು ಇತ್ತೀಚೆಗೆ



ಸಂಪರ್ಕಿಸಿದ್ದಾರೆ. ಇದಕ್ಕೆ ಕಾರಣ, ದಿನಕರನ್ ಕೆಲವು ದಿನಗಳ ಹಿಂದೆ, ವಿಜಯ್ ಅವರ ಪಾರ್ಟಿಯೊಂದಿಗೆ ಹೊಂದಾಣಿಕೆ ಮಾಡಿಕೊಳ್ಳುವ ನಿರ್ಧಾರವನ್ನು ತೆಗೆದುಕೊಂಡಿದ್ದರು. ಇದಕ್ಕಾಗಿ, ದೆಹಲಿ ಬಿಜೆಪಿ ನಾಯಕರು, ತಮ್ಮ ನಿರ್ಧಾರವನ್ನು ಸ್ವಲ್ಪದಿನದ ಮಟ್ಟಿಗೆ ತಡೆ ಹಿಡಿಯಲು ವಿನಂತಿಸಿಕೊಂಡಿದ್ದಾರೆ. ಬಿಜೆಪಿ ನಾಯಕರ ಮನವಿಗೆ ಸ್ಪಂದಿಸಿರುವ ದಿನಕರನ್, ಒಂದಕ್ಕೊಂದು ಕಂಡೀಷನ್ ಹಾಕಿದ್ದಾರೆ ಎನ್ನುವ ಸುದ್ದಿಗಳು ಹರಿದಾಡುತ್ತಿವೆ.

### ದಿನಕರನ್ ಪಾರ್ಟಿ ಎನ್‌ಡಿಎ ಮೈತ್ರಿಕೂಟಕ್ಕೆ ಸೇರ್ಪಡೆ

**ದಿನಕರನ್ ಅವರ ಪಾರ್ಟಿಯನ್ನು ಎನ್‌ಡಿಎ ಮೈತ್ರಿಕೂಟಕ್ಕೆ ಸೇರಿಸಿಕೊಳ್ಳಲು ಬಿಜೆಪಿ ತುದಿಗಾಲಿನಲ್ಲಿ ನಿಂತಿದೆ. ಆದರೆ, ಹೊಂದಾಣಿಕೆ ಮಾಡಿಕೊಳ್ಳಬೇಕಾದರೆ, ಎಡಪ್ಪಾಡಿ ಪಳನಿಸ್ವಾಮಿಯವರನ್ನು ಮುಖ್ಯಮಂತ್ರಿ ಅಭ್ಯರ್ಥಿಯನ್ನಾಗಿ ಘೋಷಿಸಬಾರದು ಎನ್ನುವ ಷರತ್ತನ್ನು ದಿನಕರನ್ ಹಾಕಿದ್ದಾರೆ. ಇದು ಅಸಾಧ್ಯವಾದರೂ, ವಿಜಯ್ ಪಾರ್ಟಿ ಜೊತೆ ಹೊಂದಾಣಿಕೆ ಮಾಡಿಕೊಳ್ಳುವ ಬಗ್ಗೆ ಬಹಿರಂಗ ಹೇಳಿಕೆಯನ್ನು ನೀಡದಂತೆ ಬಿಜೆಪಿ ನಾಯಕರು ಸೂಚಿಸಿದ್ದಾರೆ. ಸದ್ಯ ಇದಕ್ಕೆ ದಿನಕರನ್ ಒಪ್ಪಿಕೊಂಡಿದ್ದಾರೆ.**

**ಬಿಜೆಪಿ, ಎಐಎಡಿಎಂಕೆ ಜೊತೆ ಮೈತ್ರಿ ಮಾಡಿಕೊಳ್ಳುವುದಿಲ್ಲ**

ಬಿಜೆಪಿ, ಎಐಎಡಿಎಂಕೆ ಜೊತೆ ಮೈತ್ರಿ ಮಾಡಿಕೊಳ್ಳುವುದಿಲ್ಲ ಎಂದು ವಿಜಯ್ ಎಲ್ಲಾ ಕಡೆ ಸ್ಪಷ್ಟನೆಯನ್ನು ಕೊಡುತ್ತಿದ್ದಾರೆ. ಆದರೆ, ಬಿಜೆಪಿಯ ಮಾತಿಗೆ ಸೊಪ್ಪು ಹಾಕದಿದ್ದರೂ, ನಮ್ಮ ಮಾತಿಗೆ ಒಪ್ಪಿಕೊಳ್ಳುತ್ತಾರೆ ಎನ್ನುವ ವಿಶ್ವಾಸದಲ್ಲಿದ್ದಾರೆ ಎಡಪ್ಪಾಡಿ ಪಳನಿಸ್ವಾಮಿ. ಹಾಗಾಗಿ, ಎಲ್ಲಾ ಆಯ್ಕೆಯನ್ನು ಎಐಎಡಿಎಂಕೆ ಓಪನ್ ಆಗಿ ಇಟ್ಟುಕೊಂಡಿದೆ. ವಿಜಯ್ ಹೋದಲೆಲ್ಲಾ, ಭಾರೀ ಸಂಖ್ಯೆಯಲ್ಲಿ ಜನ ಸೇರುತ್ತಿದ್ದಾರೆ. ಆದರೆ, ಇದು ಮತವಾಗಿ ಪರಿವರ್ತನೆಯಾಗುತ್ತದಾ ಅಥವಾ ಚಿತ್ರನಟನನ್ನು ನೋಡಲು ಜನರು ಬಂದಿದ್ದಾರಾ ಅದಲ್ಲದೇ ಇವರ ಮತಬ್ಯಾಂಕ್, ಯಾರಿಗೆ ಎಫೆಕ್ಟ್ ಆಗಲಿದೆ ಎನ್ನುವ ಲೆಕ್ಕಾಚಾರ, ಎನ್‌ಡಿಎ ಅಥವಾ ಡಿಎಂಕೆ ಮೈತ್ರಿಕೂಟಕ್ಕೆ ಸದ್ಯ ಇಲ್ಲದೇ ಇರುವುದು, ಕಾರ್ಯತಂತ್ರ ರೂಪಿಸಲು ಹಿನ್ನಡೆಯಾಗುತ್ತಿದೆ.

**ಮಾಸಾಂತ್ಯದಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಭೇಟಿ:** ಈ ಮಾಸಾಂತ್ಯದಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ, ತಮಿಳುನಾಡಿಗೆ ಭೇಟಿ ನೀಡಲಿದ್ದಾರೆ. ರಾಜ್ಯದಲ್ಲಿ ಎನ್‌ಡಿಎ ಮೈತ್ರಿಕೂಟವನ್ನು ಬಲ ಪಡಿಸಲು ಏನೇನು ಕ್ರಮವನ್ನು ತೆಗೆದುಕೊಳ್ಳಬೇಕು ಎನ್ನುವ ಕಾರ್ಯತಂತ್ರವನ್ನು ರೂಪಿಸಲಿದ್ದಾರೆ ಎಂದು ತಮಿಳುನಾಡು ಬಿಜೆಪಿ ಘಟಕದ ಅಧ್ಯಕ್ಷ ನೈನಾರ್ ರಾಜೇಂದ್ರನ್ ಹೇಳಿದ್ದಾರೆ. ದಿನಕರನ್ ಅವರನ್ನು ಸೆಳೆಯಲು ಸ್ಪಷ್ಟವಾದ ಮಾರ್ಗಸೂಚಿ ಬಿಜೆಪಿಯಲ್ಲಿ ಸದ್ಯದ ಮಟ್ಟಿಗೆ ಇಲ್ಲದಿದ್ದರೂ, ಅಮಿತ್ ಶಾ ಅವರನ್ನು ಸೆಳೆಯಬಲ್ಲರು ಎನ್ನುವುದು ಬಿಜೆಪಿಯ ವಿಶ್ವಾಸದ ಮಾತಾಗಿದೆ.

**ಮೈತ್ರಿಕೂಟ ಪೂರ್ವ ಸಿದ್ದತೆ**

**ಮುಂದಿನ ವರ್ಷ ತಮಿಳುನಾಡಿನಲ್ಲಿ ನಡೆಯಲಿರುವ ವಿಧಾನಸಭಾ ಚುನಾವಣೆಗೆ ಎನ್‌ಡಿಎ, ಇಂಡಿಯಾ ಮೈತ್ರಿಕೂಟ ಪೂರ್ವ ಸಿದ್ದತೆಯನ್ನು ಮಾಡಿಕೊಳ್ಳುತ್ತಿದೆ. ಈ ಬಾರಿಯ ಚುನಾವಣೆಯಲ್ಲಿ ತಮಿಳು ಚಿತ್ರರಂಗದಲ್ಲಿ ಭಾರೀ ಹೆಸರನ್ನು ಮಾಡಿರುವ ದಳಪತಿ ವಿಜಯ್ ಅವರ ಪಾರ್ಟಿ ಎಂಟ್ರಿ ಕೊಟ್ಟಿರುವುದು ಕುತೂಹಲಕ್ಕೆ ಕಾರಣವಾಗಿದೆ.**

**ದಳಪತಿ ವಿಜಯ್ ಬೆಂಬಲ ಯಾರಿಗೆ**

**ಇಪ್ಪತ್ತಕ್ಕೂ ಹೆಚ್ಚು ಕ್ಷೇತ್ರಗಳಲ್ಲಿ ದಿನಕರನ್ ಪಾರ್ಟಿ ನಿರ್ಣಾಯಕ:** ವೋಟ್ ಬ್ಯಾಂಕ್ ದೃಷ್ಟಿಯಲ್ಲಿ ದಿನಕರನ್ ಅವರ ಪಾರ್ಟಿಯನ್ನು ತಮ್ಮತ್ತ ಸೆಳೆಯುವುದು ಬಿಜೆಪಿಗೆ ಬಹುಮುಖ್ಯವಾಗಲಿದೆ. ಯಾಕೆಂದರೆ, ಕಳೆದ ಅಂದರೆ 2021ರ ಚುನಾವಣೆಯಲ್ಲಿ, ದಕ್ಷಿಣ ತಮಿಳುನಾಡಿನ ಸುಮಾರು ಇಪ್ಪತ್ತಕ್ಕೂ ಹೆಚ್ಚು ಕ್ಷೇತ್ರಗಳಲ್ಲಿ, ಈ ಪಾರ್ಟಿಯ ಅಭ್ಯರ್ಥಿಗಳು ಮೂವತ್ತು ಸಾವಿರಕ್ಕೂ ಹೆಚ್ಚು ಮತಗಳನ್ನು ಮತ್ತಷ್ಟು ಕ್ಷೇತ್ರಗಳಲ್ಲಿ ಹತ್ತು ಸಾವಿರಕ್ಕೂ ಹೆಚ್ಚು ಮತಗಳನ್ನು ಪಡೆಯಲು ಯಶಸ್ವಿಯಾಗಿದ್ದರು. ಇದು, ನೆಕ್-ಟು-ನೆಕ್ ಇರುವ ಕ್ಷೇತ್ರಗಳಲ್ಲಿ ನಿರ್ಣಾಯಕ ಪಾತ್ರವನ್ನು ವಹಿಸಬಲ್ಲದು ಎನ್ನುವುದು ಬಿಜೆಪಿಯ ಲೆಕ್ಕಾಚಾರವಾಗಿದೆ. ಹಾಗಾಗಿ, ವಿಜಯ್ ಪಾರ್ಟಿಯ ಜೊತೆಗೆ ಹೋಗದಂತೆ, ಮನವೊಲಿಕೆಯ ಕೆಲಸ ನಡೆಯುತ್ತಿದೆ.


**ಏನು ನಿರ್ಧಾರ ತೆಗೆದುಕೊಳ್ಳಬೇಕು ಎನ್ನುವ ಗೊಂದಲದಲ್ಲಿ ಅಮಿತ್ ಶಾ:** ಕಾಲ್ತುಳಿತದ ಘಟನೆಯ ನಂತರ, ಮಾಜಿ ಮುಖ್ಯಮಂತ್ರಿ ಎಡಪ್ಪಾಡಿ ಪಳನಿಸ್ವಾಮಿ, ವಿಜಯ್ ಅವರನ್ನು ಭೇಟಿಯಾಗಿದ್ದರು. ಎಲ್ಲಾ ರೀತಿಯ ಬೆಂಬಲವನ್ನು ನೀಡುವ ಭರವಸೆಯನ್ನು ಎಡಪ್ಪಾಡಿ ನೀಡಿದ್ದರು.

# ಪ್ರಧಾನಿ ಮೋದಿಗೆ ಆರ್‌ಎಸ್‌ಎಸ್ ಮುಖ್ಯಸ್ಥ ಮೋಹನ್ ಭಾಗವತ್ ಪ್ರಶಂಸೆ

**ಪುಣೆ:** ಪ್ರಧಾನಿ ನರೇಂದ್ರ ಮೋದಿ ಮಾತನಾಡುವಾಗ ವಿಶ್ವನಾಯಕರು ಎಚ್ಚರಿಕೆಯಿಂದ ಆಲಿಸುತ್ತಾರೆ ಎಂದು ರಾಷ್ಟ್ರೀಯ ಸ್ವಯಂಸೇವಕ ಸಂಘದ ಮುಖ್ಯಸ್ಥ ಮೋಹನ್ ಭಾಗವತ್ ಹೇಳಿದ್ದಾರೆ. ಆರ್‌ಎಸ್‌ಎಸ್‌ನ 100ನೇ ವರ್ಷಾಚರಣೆ ಹಿನ್ನೆಲೆಯಲ್ಲಿ ಪುಣೆಯಲ್ಲಿ ಆಯೋಜಿಸಲಾದ ಕಾರ್ಯಕ್ರಮವೊಂದರಲ್ಲಿ ಮಾತನಾಡಿದ ಭಾಗವತ್, ಭಾರತದ ಶಕ್ತಿ ಪ್ರಕಟವಾಗುತ್ತಿರುವುದರಿಂದ ದೇಶವು ತನ್ನ ಸರಿಯಾದ ಸ್ಥಾನವನ್ನು ಕಂಡುಕೊಳ್ಳುತ್ತಿದೆ ಎಂದು ಹೇಳಿದ್ದಾರೆ. ಜಯಂತಿಗಳು, ಶತಮಾನೋತ್ಸವಗಳಂತಹ ಮೈಲಿಗಲ್ಲುಗಳನ್ನು ಆಚರಿಸಲು ಎದುರು ನೋಡಬಾರದು, ಆದರೆ ನಿಗದಿತ ಸಮಯದೊಳಗೆ ನೀಡಲಾದ ಕಾರ್ಯವನ್ನು ಪೂರ್ಣಗೊಳಿಸುವ ಗುರಿಯನ್ನು ಹೊಂದಿರಬೇಕು ಎಂದು ಸಲಹೆ ನೀಡಿದರು.

ಸಂಘವು ಅದನ್ನೇ ಮಾಡುತ್ತಿದೆ. ಸಂಘವು 100 ವರ್ಷಗಳನ್ನು ಪೂರೈಸಿದ್ದರೂ, ಸವಾಲುಗಳನ್ನು, ಅನೇಕ ಬಿರುಗಾಳಿಗಳನ್ನು ಎದುರಿಸಿದ್ದರೂ, ಇಡೀ ಸಮಾಜವನ್ನು ಒಂದುಗೂಡಿಸುವ ಕಾರ್ಯವು ಏಕೆ ಇಷ್ಟು ಸಮಯ ತೆಗೆದುಕೊಂಡಿತು ಎಂಬುದನ್ನು ಆತ್ಮವಲೋಕನ ಮಾಡಿಕೊಳ್ಳುವ ಸಮಯ ಇದು ಎಂದು ಹೇಳಿದರು. ಭಾರತವು ಉದಯಿಸಿದಾಗ, ಜಾಗತಿಕ ಸಮಸ್ಯೆಗಳು ಬಗೆಹರಿಯುತ್ತವೆ, ಸಂಘರ್ಷಗಳು ಕಡಿಮೆಯಾಗುತ್ತವೆ ಮತ್ತು ಶಾಂತಿ ನೆಲೆಸುತ್ತದೆ ಎಂದು ಸಾಮಾನ್ಯವಾಗಿ ನಂಬಲಾಗಿದೆ ಎಂದು ಆರ್‌ಎಸ್‌ಎಸ್ ನಾಯಕ ಅಭಿಪ್ರಾಯಪಟ್ಟರು.

ಇದು ಇತಿಹಾಸದಲ್ಲಿ ದಾಖಲಾಗಿದೆ ಮತ್ತು ನಾವು ಅದನ್ನು ಮರುಸೃಷ್ಟಿಸಬೇಕು. ಇದು ಇಂದಿನ ಅಗತ್ಯ. ಪ್ರಸ್ತುತ ಜಾಗತಿಕ ಪರಿಸ್ಥಿತಿ ಭಾರತದಿಂದ ಇದನ್ನು ಬೇಡುತ್ತದೆ. ಮತ್ತು ಅದಕ್ಕಾಗಿಯೇ ಸಂಘದ ಸ್ವಯಂಸೇವಕರು ಮೊದಲ ದಿನದಿಂದಲೇ ಈ ಧ್ಯೇಯವನ್ನು



**ಸಂಘವು ಸಂವಾದ, ಸಾಮೂಹಿಕ ಕೆಲಸದ ಬಲದ ಬಗ್ಗೆ ಮಾತನಾಡುವಾಗ, ಅದು ಇಡೀ ಸಮಾಜವನ್ನು ಸೂಚಿಸುತ್ತದೆ ಎಂದು ಅವರು ದೃಢಪಡಿಸಿದರು. ನಮ್ಮ ಅಭಿಪ್ರಾಯವು ವೈವಿಧ್ಯದ ಮೂಲಕ ಏಕತೆಯಲ್ಲಿದೆ. ನಾವು ಒಟ್ಟಿಗೆ ನಡೆಯಬೇಕು, ಅದಕ್ಕಾಗಿ ಧರ್ಮ ಅತ್ಯಗತ್ಯ. ಭಾರತದಲ್ಲಿ, ಎಲ್ಲಾ ತತ್ವಶಾಸ್ತ್ರಗಳು ಒಂದೇ ಮೂಲದಿಂದ ಹುಟ್ಟಿಕೊಂಡಿವೆ. ಏಕೆಂದರೆ ಎಲ್ಲವೂ ಪರಸ್ಪರ ಸಂಬಂಧ ಹೊಂದಿವೆ ಮತ್ತು ನಾವು ಸಾಮರಸ್ಯದಿಂದ ಮುಂದುವರಿಯಬೇಕು.**

**-ಮೋಹನ್ ಭಾಗವತ್**

ಪೂರ್ಣಗೊಳಿಸುವ ಸಂಕಲ್ಪದೊಂದಿಗೆ ಕೆಲಸ ಮಾಡುತ್ತಿದ್ದಾರೆ ಎಂದರು. ಜಾಗತಿಕ ಮಟ್ಟದಲ್ಲಿ ಭಾರತದ ಬೆಳೆಯುತ್ತಿರುವ ನಿಲುವನ್ನು ಎತ್ತಿ ತೋರಿಸುತ್ತಾ, ಭಾಗವತ್, ಪ್ರಧಾನಿ ಅವರ ಮಾತನ್ನು ಜಾಗತಿಕವಾಗಿ ಏಕೆ ತೀವ್ರವಾಗಿ ಕೇಳಲಾಗುತ್ತಿದೆ ಭಾರತದ ಶಕ್ತಿ ಈಗ ಸರಿಯಾಗಿ ವಾದ, ಹಾದಿಯಲ್ಲಿದೆ ಎಂದು ಹೇಳಿದರು

# ಶ್ರೀಲಂಕಾಕ್ಕೆ ಅವಧಿ ಮುಗಿದ ಆಹಾರ, ಔಷಧ ಕಳುಹಿಸಿದ ಪಾಕಿಸ್ತಾನ

**ಇಸ್ಲಾಮಾಬಾದ್:** ದಿತ್ವಾ ಚಂಡಮಾರುತದಿಂದ ತತ್ತರಿಸಿರುವ ದ್ವೀಪ ರಾಷ್ಟ್ರ ಶ್ರೀಲಂಕಾಕ್ಕೆ ಅವಧಿ ಮೀರಿದ ಪರಿಹಾರ ಪ್ಯಾಕೇಜ್ ರವಾನಿಸುವ ಮೂಲಕ ಪಾಕಿಸ್ತಾನವು ಜಗತ್ತಿನ ಎದುರು ಭಾರಿ ಮುಖಭಂಗಕ್ಕೆ ಒಳಗಾಗಿದೆ. ಚಂಡಮಾರುತದಿಂದ ಶ್ರೀಲಂಕಾದಲ್ಲಿ ದಿಢೀರ್ ಪ್ರವಾಹ ಉಂಟಾಗಿದ್ದು, ಅಪಾರ ಜೀವ, ಆಸ್ತಿ ಹಾನಿಯಾಗಿದೆ. ಭಾರತ ಸೇರಿದಂತೆ ಹಲವು ದೇಶಗಳು ಶ್ರೀಲಂಕಾಕ್ಕೆ ನೆರವಿನ ಹಸ್ತ ಚಾಚಿವೆ. ಪಾಕಿಸ್ತಾನವೂ ಆಹಾರ ಸಾಮಾಗ್ರಿಗಳನ್ನೊಳಗೊಂಡ ಪರಿಹಾರ ಪ್ಯಾಕೇಜ್ ಅನ್ನು ಕಳುಹಿಸಿತ್ತು. ಈ ಬಗ್ಗೆ ಫೋಟೊದೊಂದಿಗೆ ಎಕ್ಸ್‌ನಲ್ಲಿ ಪೋಸ್ಟ್ ಹಂಚಿಕೊಂಡಿದ್ದ ಶ್ರೀಲಂಕಾದಲ್ಲಿರುವ ಪಾಕಿಸ್ತಾನ ರಾಜತಾಂತ್ರಿಕ ಕಚೇರಿ, ಶ್ರೀಲಂಕಾದಲ್ಲಿರುವ



ಸಹೋದರ-ಸಹೋದರಿಯರಿಗೆ ಪಾಕಿಸ್ತಾನವು ಸಹಾಯಹಸ್ತ ಚಾಚಿದೆ ಎಂದು ಬರೆದುಕೊಂಡಿತ್ತು. ಆದರೆ, ಫೋಟೊದಲ್ಲಿರುವ ಆಹಾರ ಪೊಟ್ಟಣದಲ್ಲಿ ಬಳಕೆಯ ಅವಧಿ (ಎಕ್ಸ್‌ಪೈರಿ ಡೇಟ್) 10/2024 ಎಂದು ನಮೂದಾಗಿರುವುದು ಎಲ್ಲರ ಗಮನ ಸೆಳೆದಿದೆ. ಈ ಬಗ್ಗೆ ಸಾಮಾಜಿಕ ಮಾಧ್ಯಮದಲ್ಲಿ ತೀವ್ರ ಟೀಕೆ ವ್ಯಕ್ತವಾಗುತ್ತಿದ್ದಂತೆ ಎಚ್ಚೆತ್ತ ರಾಜತಾಂತ್ರಿಕ ಕಚೇರಿ, ತಕ್ಷಣ ಪೋಸ್ಟ್ ಅನ್ನು ಅಳಿಸಿ ಹಾಕಿದೆ. ಏತನ್ಮಧ್ಯೆ, ಪರಿಹಾರ ಪ್ಯಾಕೇಜ್ ಅನ್ನು ಶ್ರೀಲಂಕಾಕ್ಕೆ ರವಾನಿಸಲು ಪಾಕಿಸ್ತಾನ ವಿಮಾನಕ್ಕೆ ತನ್ನ ವಾಯು ಪ್ರದೇಶದ ಮೂಲಕ ಹಾದುಹೋಗಲು ಭಾರತ ಅನುವು ಮಾಡಿಕೊಟ್ಟಿತ್ತು.

ಪ್ರವಾಹ ಪೀಡಿತ ಶ್ರೀಲಂಕಾಕ್ಕೆ ಆಪರೇಷನ್ ಸಾಗರ ಬಂಧು ಅಡಿಯಲ್ಲಿ ಭಾರತವು 53 ಟನ್ ಪರಿಹಾರ ಸಾಮಾಗ್ರಿಗಳನ್ನು ಕಳುಹಿಸಿದೆ. ಐವರು ವೈದ್ಯರು ಸೇರಿದಂತೆ ಎನ್‌ಡಿಆರ್‌ಎಫ್‌ನ 80 ಮಂದಿಯ ತುಕಡಿಯನ್ನು ರಕ್ಷಣಾ, ಪರಿಹಾರ ಕಾರ್ಯಕ್ಕೆ ಶ್ರೀಲಂಕಾಕ್ಕೆ ಕಳುಹಿಸಿದೆ.

# ಲಾರೆನ್ಸ್ ಬಿಷ್ಣೋಯ್ ಸಹಚರ ಗ್ಯಾಂಗ್ ವಾರ್‌ನಲ್ಲಿ ಸಾವು

**ಚಂಡೀಗಢ:** ಗ್ಯಾಂಗ್‌ಸ್ಟರ್ ಲಾರೆನ್ಸ್ ಬಿಷ್ಣೋಯ್ ಸಹಚರನನ್ನು ಗುಂಡಿಕ್ಕಿ ಹತ್ಯೆ ಮಾಡಿರುವ ಘಟನೆ ಚಂಡೀಗಢದ ಸೆಕ್ಟರ್ 26ರ ಟಿಂಬರ್ ಮಾರ್ಕೆಟ್ ಬಳಿ ನಡೆದಿದೆ. ಇಂದ್ರಪ್ರೀತ್ ಸಿಂಗ್ ಅಲಿಯಾಸ್ ಪರ್ರಿ, (35) ಹತ್ಯೆಯಾದ ಸಹಚರ. ಘಟನೆ ಬಳಿಕ ಪರ್ರಿಯನ್ನು ಆಸ್ಪತ್ರೆಗೆ ಕರೆದೊಯ್ಯಲಾಯಿತು. ಆದರೆ ಅಷ್ಟುಹೊತ್ತಿಗಾಗಲೇ ಆತ ಮೃತಪಟ್ಟಿರುವುದಾಗಿ ವೈದ್ಯರು ದೃಢಪಡಿಸಿದರು. ಗ್ಯಾಂಗ್ ವಾರ್‌ನಿಂದಾಗಿ ಈ ಹತ್ಯೆ ನಡೆದಿರಬಹುದು ಎಂದು ಪೊಲೀಸರು ಶಂಕಿಸಿದ್ದು, ಘಟನೆ ಸಂಬಂಧ ಪ್ರಕರಣ ದಾಖಲಿಸಿ ಕೊಂಡಿದ್ದಾರೆ. ಪರ್ರಿ ಸಂಜೆ ಎಸ್‌ಯುವಿ ಕಾರಿನಲ್ಲಿ ಖಾಸಗಿ ಕ್ಲಬ್‌ನಿಂದ ಹೊರಟಿದ್ದ. ಈ ವೇಳೆ ಆತನ ಜೊತೆ ಮತ್ತೊಬ್ಬ ವ್ಯಕ್ತಿ ಕೂಡ ಇದ್ದ. ಆತನ ಗುರುತು ಇನ್ನೂ ಪತ್ತೆಯಾಗಿಲ್ಲ ಎಂದು

**ಖಾಲಿ ಶೆಲ್‌ಗಳು ಪತ್ತೆ**


ಪ್ರಾಥಮಿಕ ತನಿಖೆಯಿಂದ ತಿಳಿದುಬಂದಿದೆ. ವಾಹನವು ಸ್ವಲ್ಪ ದೂರ ಚಲಿಸಿದ ಕೂಡಲೇ, ಪರ್ರಿ ಜೊತೆಗಿದ್ದ ಮತ್ತೊಬ್ಬ ವ್ಯಕ್ತಿ ಪರ್ರಿ ಮೇಲೆ ಗುಂಡು ಹಾರಿಸಿದ್ದಾನೆ. ಗುಂಡು ಹಾರಿಸಿದ ಬಳಿಕ ಆ ವ್ಯಕ್ತಿ ಕಾರಿನಿಂದ ಕೆಳಗಿಳಿದು ಮತ್ತೆ ಪರ್ರಿ ಮೇಲೆ ಗುಂಡು ಹಾರಿಸಿದ್ದಾನೆ. ಈ ವೇಳೆ ಪರ್ರಿ ಕಾರನ್ನು ಹಿಂಬಾಲಿಸುತ್ತಿದ್ದ ಮತ್ತೊಂದು ಕಾರು ಅಲ್ಲಿ ಬಂದು ನಿಂತಿದೆ.

ಪರ್ರಿ ಸಾವನ್ನು ಖಚಿತಪಡಿಸಿಕೊಂಡ ನಂತರ ವ್ಯಕ್ತಿ ಮತ್ತೊಂದು ಕಾರು ಹತ್ತಿ ಅಲ್ಲಿಂದ ಪರಾರಿಯಾಗಿದ್ದಾನೆ. ಎಸ್‌ಯುವಿಯೊಳಗೆ ಸುಮಾರು ಐದು ಖಾಲಿ ಶೆಲ್‌ಗಳು ಪತ್ತೆಯಾಗಿದೆ. ದಾಳಿಯಲ್ಲಿ 10ಕ್ಕೂ ಹೆಚ್ಚು ಗುಂಡು ಹಾರಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

# ಅಯೋಧ್ಯೆ ದೇವಾಲಯ ಮ್ಯೂಸಿಯಂ ವಿಸ್ತರಣೆಗೆ ಅನುಮತಿ: ಟಾಟಾ ಸನ್ಸ್‌ನಿಂದ ನಿರ್ಮಾಣ

**ಉತ್ತರಪ್ರದೇಶ:** ಅಯೋಧ್ಯೆಯಲ್ಲಿ ಪ್ರಸ್ತಾವಿತ ದೇವಾಲಯ ವಸ್ತು ಸಂಗ್ರಹಾಲಯ ವಿಸ್ತರಿಸಲು ಉತ್ತರ ಪ್ರದೇಶ ಸಚಿವ ಸಂಪುಟವು ಮಂಗಳವಾರ ಒಪ್ಪಿಗೆ ನೀಡಿದೆ. 52 ಎಕರೆ ಜಾಗದಲ್ಲಿ ಸಂಗ್ರಹಾಲಯವು ನಿರ್ಮಾಣವಾಗಲಿದ್ದು, ಟಾಟಾ ಸನ್ಸ್ ಸಂಸ್ಥೆಯು ಅಭಿವೃದ್ಧಿಪಡಿಸಿ, ನಿರ್ವಹಿಸಲಿದೆ. ಯೋಗಿ ಆದಿತ್ಯನಾಥ ಅವರ ನೇತೃತ್ವದಲ್ಲಿ ನಡೆದ ಸಚಿವ ಸಂಪುಟ ಸಭೆಯ ಬಳಿಕ ಸಂಸದೀಯ ವ್ಯವಹಾರಗಳ ಖಾತೆ ಸಚಿ ಸುರೇಶ್ ಕುಮಾರ್ ಖನ್ನಾ ಅವರು ಈ ಕುರಿತು ಮಾಹಿತಿ ನೀಡಿದ್ದಾರೆ.

ಅತ್ಯಾಧುನಿಕ ವಸ್ತು ಸಂಗ್ರಹಾಲಯವನ್ನು ಸ್ಥಾಪಿಸಲು ಟಾಟಾ



ಸನ್ಸ್ ಸಂಸ್ಥೆ ಆಸಕ್ತಿ ವಹಿಸಿದ್ದು, ವಿಶೇಷ ಉದ್ದೇಶ ಘಟಕ (ಎಸ್‌ಪಿವಿ)ದ ಮೂಲಕ ಕಾರ್ಪೊರೇಟ್ ಸಾಮಾಜಿಕ ಹೊಣೆಗಾರಿಕೆಯ ಅಡಿಯಲ್ಲಿ ನಿರ್ವಹಿಸಲು ಒಪ್ಪಿಗೆ ನೀಡಿದೆ. ಎಸ್‌ಪಿವಿಯಲ್ಲಿ ರಾಜ್ಯ ಹಾಗೂ ಕೇಂದ್ರ ಸರ್ಕಾರದ ಪ್ರತಿನಿಧಿಗಳು ಇರಲಿದ್ದಾರೆ ಎಂದು ಖನ್ನಾ ತಿಳಿಸಿದ್ದಾರೆ. ಮ್ಯೂಸಿಯಂ ನಿರ್ಮಾಣ, ಜಾಗ ಮಂಜೂರಾತಿ ಕುರಿತಂತೆ 2024ರ ಸೆಪ್ಟೆಂಬರ್ 3ರಂದೇ ಕೇಂದ್ರ, ರಾಜ್ಯ ಸರ್ಕಾರ, ಟಾಟಾ ಸನ್ಸ್‌ನ ಪ್ರತಿನಿಧಿಗಳ ಜೊತೆ ಒಡಂಬಡಿಕೆ ನಡೆದಿತ್ತು. ಇದರಂತೆ, ಅಯೋಧ್ಯೆಯ ಜಮತಾರಾ ಗ್ರಾಮದಲ್ಲಿ 25 ಎಕರೆ ಜಮೀನು ಮಂಜೂರು ಮಾಡಲು ರಾಜ್ಯ ಸರ್ಕಾರ ಒಪ್ಪಿಗೆ ನೀಡಿತ್ತು. ಯೋಜನೆಯ ವಾಸ್ತುಶಿಲ್ಪದ ಭವ್ಯತೆಯನ್ನು ಜಾರಿಗೊಳಿಸಲು ಹೆಚ್ಚುವರಿ ಜಮೀನು ನೀಡುವಂತೆ ಟಾಟಾ ಸನ್ಸ್ ಸಂಸ್ಥೆ ಮನವಿ ಮಾಡಿತ್ತು. ಅದರ ಅನ್ವಯ, ಹೆಚ್ಚುವರಿಯಾಗಿ 27.102 ಎಕರೆ ಭೂಮಿಯನ್ನು ವಸತಿ ಹಾಗೂ ನಗರಾಭಿವೃದ್ಧಿ ಇಲಾಖೆಯಿಂದ ಉಚಿತವಾಗಿ ನೀಡಲು ನಿರ್ಧರಿಸಲಾಗಿದೆ.

52.102 ಎಕರೆ ಭೂಮಿಯಲ್ಲಿ ಒಟ್ಟು ಯೋಜನೆಯು ಜಾರಿಯಾಗಲಿದೆ ಎಂದು ಸಚಿವ ಸುರೇಶ್ ಕುಮಾರ್ ಖನ್ನಾ ತಿಳಿಸಿದ್ದಾರೆ. ಅಯೋಧ್ಯೆಯ ಶ್ರೀರಾಮಜನ್ಮಭೂಮಿ ದೇವಾಲಯದಲ್ಲಿ ಪ್ರಾಣಪ್ರತಿಷ್ಠೆಯಾದ ಬಳಿಕ ಭಕ್ತರ ಸಂಖ್ಯೆಯು ತೀವ್ರ ಸಂಖ್ಯೆಯಲ್ಲಿ ಏರಿಕೆಯಾಗಿದ್ದು, ನಿತ್ಯವೂ 2 ಲಕ್ಷದಿಂದ 4 ಲಕ್ಷ ಭಕ್ತರು ನಗರಕ್ಕೆ ಭೇಟಿ ನೀಡುತ್ತಿದ್ದಾರೆ.

# ದಿತ್ವಾ ಚಂಡಮಾರುತ: ಮೃತರ ಸಂಖ್ಯೆ 410ಕ್ಕೆ ಏರಿಕೆ

**ಶ್ರೀಲಂಕಾ:** ದ್ವೀಪ ರಾಷ್ಟ್ರ ಶ್ರೀಲಂಕಾದಲ್ಲಿ 'ದಿತ್ವಾ' ಚಂಡಮಾರುತದಿಂದ ಉಂಟಾದ ಭೂಕುಸಿತ ಹಾಗೂ ಪ್ರವಾಹದಿಂದಾಗಿ ಈವರೆಗೆ 410 ಮಂದಿ ಮೃತಪಟ್ಟಿದ್ದು, 336 ಜನ ಕಾಣೆಯಾಗಿದ್ದಾರೆ. 4.07 ಲಕ್ಷ ಕುಟುಂಬಗಳ 14.66 ಲಕ್ಷ ಜನರು ಬಾಧಿತರಾಗಿದ್ದಾರೆ. 15 ಪ್ರಮುಖ ಸೇತುವೆಗಳು, 256 ರಸ್ತೆಗಳು ಹಾನಿಗೊಳಗಾಗಿವೆ ಎಂದು ವಿಪತ್ತು ನಿರ್ವಹಣಾ ಕೇಂದ್ರ ತಿಳಿಸಿದೆ.

ಸೇನಾ ಪಡೆ ಮತ್ತು ಪೊಲೀಸ್ ಇಲಾಖೆಯ ನೂರಾರು ಸಿಬ್ಬಂದಿ ರಕ್ಷಣಾ ಕಾರ್ಯಾಚರಣೆ ಕೈಗೊಂಡಿದ್ದಾರೆ. ಮಣ್ಣಿನಡಿ ಸಿಲುಕಿರುವ ಜನರಿಗಾಗಿ ಶೋಧ ಕಾರ್ಯ ನಡೆಸುತ್ತಿದ್ದಾರೆ. ರಸ್ತೆ, ವಿದ್ಯುತ್ ಸಂಪರ್ಕ ಮರುಸ್ಥಾಪಿಸುವ ಕಾರ್ಯ ಸಮರೋಪಾದಿಯಲ್ಲಿ ಸಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಇತ್ತೀಚಿನ ದಿನಗಳಲ್ಲಿ ದಕ್ಷಿಣ, ಆಗ್ನೇಯ ಏಷ್ಯಾದಾದ್ಯಂತ ಮಾರಕ ಬಿರುಗಾಳಿ ಬೀಸಿದ್ದು, ಇಂಡೋನೇಷ್ಯಾ, ಮಲೇಷ್ಯಾ, ಥಾಯ್ಲೆಂಡ್‌ನ ಹೆಚ್ಚಿನ




ಭಾಗಗಳನ್ನು ಧ್ವಂಸಗೊಳಿಸಿದೆ. ನೂರಾರು ಜೀವಗಳನ್ನು ಬಲಿ ಪಡೆದಿದೆ.

**ತುರ್ತು ಸ್ಪಂದನೆ: ಪ್ರಮುಖ ಪಾತ್ರ ವಹಿಸಿದ ಭಾರತ;** ದಿತ್ವಾ ಚಂಡಮಾರುತದಿಂದ ಉದ್ಭವಿಸಿರುವ ತುರ್ತು ಪರಿಸ್ಥಿತಿಯನ್ನು ಸಮರ್ಪಕವಾಗಿ ನಿಭಾಯಿಸುವ ಕಾರ್ಯದಲ್ಲಿ ಭಾರತವು ಪ್ರಮುಖ ಪಾತ್ರ ವಹಿಸಿದೆ ಎಂದು ಶ್ರೀಲಂಕಾದ ಅಧ್ಯಕ್ಷ ಅನುರಾ ಕುಮಾರ ದಿಸ್ಸನಾಯಕೆ ಅವರ ಕಚೇರಿ ಮಂಗಳವಾರ ತಿಳಿಸಿದೆ. ಪ್ರಧಾನಿ ನರೇಂದ್ರ ಮೋದಿ ಅವರು ಅನುರಾ ಕುಮಾರ ದಿಸ್ಸನಾಯಕೆ ಅವರ ಜೊತೆ ಮಾತನಾಡಿ ಚಂಡಮಾರುತದಿಂದಾದ ಅವಘಡಗಳಲ್ಲಿ ಮೃತರಿಗೆ ಸಂತಾಪ ಸೂಚಿಸಿದ್ದಾರೆ. ಈ ಕಷ್ಟದ ಸಮಯದಲ್ಲಿ ಭಾರತವು ಶ್ರೀಲಂಕಾ ಮತ್ತು ಅದರ ಜನರೊಂದಿಗೆ ದೃಢವಾಗಿ ನಿಲ್ಲುತ್ತದೆ ಎಂದು ಪುನರುಚ್ಚರಿಸಿದ್ದಾರೆ ಎಂದು ಹೇಳಿದೆ.

ದ್ವೀಪ ರಾಷ್ಟ್ರವು ವ್ಯಾಪಕ ಪ್ರವಾಹ ಭೂಕುಸಿತ ಮತ್ತು ಮೂಲಸೌಕರ್ಯ ನಾಶದಿಂದ ಸಂಕಷ್ಟಕ್ಕೆ ಸಿಲುಕಿದೆ. ಹಲವು ಜಿಲ್ಲೆಗಳು ಪ್ರತ್ಯೇಕಗೊಂಡಿವೆ. ಭಾರತವು ಸಾಗರ ಬಂಧು' ಕಾರ್ಯಾಚರಣೆಯಡಿ ಎನ್‌ಡಿಆರ್‌ಎಫ್‌ನ 80 ಸಿಬ್ಬಂದಿಯನ್ನು ದ್ವೀಪ ರಾಷ್ಟ್ರಕ್ಕೆ ಕಳುಹಿಸಿದೆ. ಇಂಡೋನೇಷ್ಯಾ ಮೃತರ ಸಂಖ್ಯೆ 753ಕ್ಕೆ ಏರಿಕೆ ಜಕಾರ್ತ (ರಾಯಿಟರ್ಸ್) ಇಂಡೋನೇಷ್ಯಾದ ಸುಮಾತ್ರ ದ್ವೀಪದಲ್ಲಿ ಉಂಟಾದ ಪ್ರವಾಹ, ಭೂಕುಸಿತದಿಂದ ಮೃತಪಟ್ಟವರ ಸಂಖ್ಯೆ 753ಕ್ಕೆ ಏರಿಕೆಯಾಗಿದೆ. 504 ಮಂದಿ ನಾಪತ್ತೆಯಾಗಿದ್ದಾರೆ ಎಂದು ಮೂಲಗಳು ತಿಳಿಸಿವೆ.

# ಶಬರಿಮಲೆ ಅಯ್ಯಪ್ಪನ ಹುಂಡಿಗೆ 15 ದಿನದಲ್ಲೇ 92 ಕೋಟಿ ರೂ.



**ತಿರುವನಂತಪುರಂ:** ಶಬರಿಮಲೆ ಅಯ್ಯಪ್ಪನ ವಾರ್ಷಿಕ ಯಾತ್ರೆಯ ಮೊದಲ 15 ದಿನದಲ್ಲೇ ಹುಂಡಿಗೆ 92 ಕೋಟಿ ರೂ. ಹರಿದುಬಂದಿದೆ. ಈ ಕುರಿತು ಶಬರಿಮಲೆ ದೇಗುಲದ ಆಡಳಿತ ಮಂಡಳಿ ಮಾಹಿತಿ ನೀಡಿದ್ದು, ಕಳೆದ ವರ್ಷ ಇದೇ ಅವಧಿಯಲ್ಲಿ ದೇಗುಲಕ್ಕೆ 69 ಕೋಟಿ ರೂ. ಆದಾಯ ಬಂದಿತ್ತು.

ಈ ಸಲ ಶೇ.33ರಷ್ಟು ಹೆಚ್ಚಳದೊಂದಿಗೆ 92 ಕೋಟಿ ರೂ. ಸಂಗ್ರಹವಾಗಿದೆ ಎಂದು ತಿಳಿಸಿದೆ. ಇದೇ ಅವಧಿಯಲ್ಲಿ ಕಳೆದ ವರ್ಷ ಸಂಗ್ರಹವಾಗಿದ್ದ ಮೊತ್ತಕ್ಕಿಂತ ಇದು 23 ಕೋಟಿ ರೂ. ಅಧಿಕ. ಅದರಲ್ಲಿ 47 ಕೋಟಿ ರೂ. ಅರವಣ ಮಾರಾಟದಿಂದ ಸಂಗ್ರಹವಾಗಿದೆ. ಕಳೆದ ಬಾರಿ ಅರವಣ ಮಾರಾಟದಿಂದ 32 ಕೋಟಿ ರೂ. ಸಂಗ್ರಹವಾಗಿತ್ತು.

ಈ ವರ್ಷ ಯಾತ್ರೆ ಆರಂಭವಾದಾಗಿನಿಂದ ನ.30ರವರೆಗೆ 1.3 ಮಿಲಿಯನ್ ಯಾತ್ರಿಕರು ಭೇಟಿ ನೀಡಿದ್ದಾರೆ ಎಂದು ಮಂಡಳಿ ಹೇಳಿದೆ.

## ಮಿನಿ ನ್ಯೂಸ್

### ಮೊಟ್ಟೆ, ಚಿಕನ್ ಅಲ್ಲ: ಸರ್ಕಾರಿ ಶಾಲೆಯ ಬಿಸಿಯೂಟದಲ್ಲಿತ್ತು ಕಪ್ಪೆಸಾಂಬರ್

**ಇಂದೋರ್:** ಸರ್ಕಾರಿ ಶಾಲೆಗಳ ಬಿಸಿಯೂಟದ ಮೆನುವಿನಲ್ಲಿ ಮೊಟ್ಟೆ, ಚಿಕನ್ ಸೇರಿದಂತೆ ಮಾಂಸಾಹಾರ ಅಡುಗೆಯನ್ನು ಸೇರಿಸಬೇಕು ಎನ್ನುವ ಅಭಿಪ್ರಾಯವು ಸಾಮಾನ್ಯವಾಗಿ ಕೇಳಿಬರುತ್ತದೆ. ಆದರೆ, ಮಧ್ಯಪ್ರದೇಶದ ಸರ್ಕಾರಿ ಶಾಲೆಯೊಂದರ ಬಿಸಿಯೂಟದಲ್ಲಿ ಕಪ್ಪೆ ಸಾಂಬರ್ ಮಾಡಲಾಗಿದೆ. ಮಧ್ಯಪ್ರದೇಶದ ಸರ್ಕಾರಿ ಶಾಲೆಯೊಂದರಲ್ಲಿ ಬಿಸಿಯೂಟ ತಯಾರಿಕೆಯ ವೇಳೆ ಅಡುಗೆಯವರ ಅಜಾಗರೂಕತೆಯಿಂದ ಸಾಂಬರ್‌ನಲ್ಲಿ ಕಪ್ಪೆ ಬಿದ್ದಿದೆ. ಸಾಂಬರ್ ಪಾತ್ರೆಯೊಳಗೆ ಸತ್ತ ಕಪ್ಪೆಯು ತೇಲುತ್ತಿರುವ ವಿಡಿಯೋ, ಸಾಮಾಜಿಕ ಜಾಲತಾಣದಲ್ಲಿ ಹರಿದಾಡುತ್ತಿದೆ. ಕಾಂಗ್ರೆಸ್ ಪಕ್ಷದ ಅಧಿಕೃತ ಜಾಲತಾಣ ಖಾತೆಯಲ್ಲಿ ಕೂಡ ಈ ವಿಡಿಯೊವನ್ನು ಹಂಚಿಕೊಳ್ಳಲಾಗಿದೆ. ಬಿಜೆಪಿ ನಾಯಕರು ಮತ್ತು ಸಚಿವರು ತಮ್ಮ ಮಕ್ಕಳಿಗೆ ಕಪ್ಪೆ ಸಾಂಬರ್ ತಿನ್ನಿಸುತ್ತಾರೆಯೇ ಎಂದು ಕಾಂಗ್ರೆಸ್ ಪ್ರಶ್ನಿಸಿದೆ. ತಮ್ಮ ಮಕ್ಕಳಿಗೆ ಉತ್ತಮ ಸೌಲಭ್ಯ ಒದಗಿಸುವ ಬಿಜೆಪಿ ನಾಯಕರು, ಬಡವರ ಮಕ್ಕಳಿಗೆ ಮಾತ್ರ ಕಪ್ಪೆ ಸಾಂಬರ್ ನೀಡುತ್ತಾರೆ. ಅವರಿಗೆ ನಾಚಿಕೆಯಾಗಬೇಕು ಎಂದು ಕಿಡಿಕಾರಿದೆ. ಕಪ್ಪೆ ಸಾಂಬರ್ ವಿಡಿಯೋ ಸಾಮಾಜಿಕ ಜಾಲತಾಣದಲ್ಲಿ ಹರಿದಾಡುತ್ತಿದ್ದು, ನೆಟ್ಟಿಗರು ವ್ಯಾಪಕ ಟೀಕೆ ವ್ಯಕ್ತಪಡಿಸಿದ್ದಾರೆ.

### ತುಟಿ ಸುಡಲಿದೆ ಸಿಗರೇಟ್; ಬಾಯಿ ಹುಣ್ಣಾಗಿಸಲಿದೆ ಗುಟ್ಕಾ: ಬೆಲೆ ಹೆಚ್ಚಳ

**ನವದೆಹಲಿ:** ದೇಶದಲ್ಲಿ ಸಿಗರೇಟ್, ಪಾನ್ ಮಸಾಲ, ಗುಟ್ಕಾ ಮೇಲಿನ ತೆರಿಗೆ ಪದ್ಧತಿಯನ್ನು ಬದಲಾಯಿಸಲು ಕೇಂದ್ರ ಸರ್ಕಾರ ನಿರ್ಧರಿಸಿದ್ದು ಈ ಉತ್ಪನ್ನಗಳ ಬೆಲೆ ತುಟ್ಟಿಯಾಗಲಿದೆ. ಚಳಿಗಾಲದ ಸಂಸತ್ ಅಧಿವೇಶನದಲ್ಲಿ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಲೋಕಸಭೆಯಲ್ಲಿ ಎರಡು ಪ್ರಮುಖ. ಮಸೂದೆಗಳನ್ನು ಮಂಡಿಸಲಿದ್ದಾರೆ.

ಆರೋಗ್ಯ ಭದ್ರತೆ, ರಾಷ್ಟ್ರೀಯ ಭದ್ರತಾ ಸೆಸ್ ಮಸೂದೆ 2025, ಕೇಂದ್ರ ಅಬಕಾರಿ ಕಾಯ್ದೆ ತಿದ್ದುಪಡಿ ಮಸೂದೆ ಎಂಬ ಎರಡು ವಸೂದೆಗಳನ್ನು ಈ ಅಧಿವೇಶನದ ಅವಧಿಯೊಳಗೆ ಮಂಡಿಸುವರು ಎಂದು ಮೂಲಗಳು ತಿಳಿಸಿವೆ. ಪ್ರಸ್ತುತ ಸಿಗರೇಟ್, ಪಾನ್ ಮಸಾಲ ಮತ್ತು ಗುಟ್ಕಾದಂತಹ ಉತ್ಪನ್ನಗಳಿಗೆ ಶೇ.28ರಷ್ಟು ಜಿಎಸ್‌ಟಿ ಜೊತೆಗೆ ಪರಿಹಾರ ಸೆಸ್ ತೆರಿಗೆ ವಿಧಿಸಲಾಗುತ್ತಿದೆ. ಇದನ್ನು ತೆಗೆದು ಹಾಕಿ ಹೊಸದಾಗಿ ಮಂಡಿಸುತ್ತಿರುವ ಎರಡು ಮಸೂದೆಗಳ ಅಡಿಯಲ್ಲಿ ತೆರಿಗೆ ವಿಧಿಸುವುದರಿಂದ ಈ ಉತ್ಪನ್ನಗಳ ಬೆಲೆ ಈಗಿನ ದರಕ್ಕಿಂತೆ ತುಟ್ಟಿಯಾಗಲಿದೆ ಎನ್ನಲಾಗಿದೆ.

ಸಚಿವರು ಮಸೂದೆ ಮಂಡಿಸಿದ ಬಳಿಕ ಹೊಸ ತೆರಿಗೆ ವಿಧಾನ ಗೊತ್ತಾಗಲಿದೆ. ಈ ತೆರಿಗೆ ಪದ್ಧತಿ 2026 ಏಪ್ರಿಲ್‌ನಿಂದ ಜಾರಿಗೆಯಾಗಲಿದೆ ಎಂದು ವರದಿಗಳು ಹೇಳಿವೆ. ಬೆಲೆ ಎಷ್ಟು ಹೆಚ್ಚಳವಾಗಲಿದೆ ಎಂಬ ಮಾಹಿತಿ ಲಭ್ಯವಾಗಿಲ್ಲ. ಸಿಗರೇಟ್ ಮತ್ತು ಇತರ ತಂಬಾಕು ಉತ್ಪನ್ನಗಳನ್ನು ಜಿಎಸ್‌ಟಿ ವ್ಯಾಪ್ತಿಯಿಂದ ತೆಗೆದುಹಾಕಿ ಕೇಂದ್ರ ಅಬಕಾರಿ ತೆರಿಗೆ ಅಡಿಯಲ್ಲಿ ಮರಳಿ ತರಲು ಕೇಂದ್ರ ಸರ್ಕಾರ ಯೋಜಿಸಿದೆ. ಇದರಿಂದ ತೆರಿಗೆ ಸಂಗ್ರಹವನ್ನು ಸುಲಭಗೊಳಿಸುವುದು, ಪಾರದರ್ಶಕತೆಯನ್ನು ಹೆಚ್ಚಿಸುವ ಗುರಿಯನ್ನು ಹೊಂದಿದೆ. ಪಾನ್ ಮಸಾಲಾ, ಗುಟ್ಕಾ, ತಂಬಾಕು ಆಧಾರಿತ ಉತ್ಪನ್ನಗಳು ಆರೋಗ್ಯಕ್ಕೆ ಹಾನಿಕಾರಕ. ಈ ಕಾರಣಕ್ಕಾಗಿ, ಕೇಂದ್ರ ಸರ್ಕಾರವು ಅವುಗಳ ಬಳಕೆಯನ್ನು ಕಡಿಮೆ ಮಾಡಲು ಹೆಚ್ಚಿನ ತೆರಿಗೆಗಳನ್ನು ವಿಧಿಸುವ ನೀತಿಯನ್ನು ಮುಂದುವರಿಸುತ್ತದೆ ಎಂದು ಹೇಳಲಾಗಿದೆ.

### ಕೆ.ಜಿ ಬಾಳೆಹಣ್ಣಿಗೆ 50 ಪೈಸೆ ಸರ್ಕಾರದ ವಿರುದ್ಧ ಜಗನ್ ಕಿಡಿ

**ಅಮರಾವತಿ:** ಆಂಧ್ರಪ್ರದೇಶದಲ್ಲಿ ಒಂದು ಕೆ.ಜಿ ಬಾಳೆಹಣ್ಣು 50 ಪೈಸೆಗಿಂತ ಕಡಿಮೆ ದರದಲ್ಲಿ ಮಾರಾಟವಾಗುತ್ತಿದೆ. ಇದು ಒಂದು ಬೆಂಕಿಪೊಟ್ಟಣ, ಒಂದು ಬಿಸ್ಕತ್‌ಗಿಂತ ಕಡಿಮೆ ಬೆಲೆಯಾಗಿದೆ. ಸರ್ಕಾರ ರೈತರ ಬಗ್ಗೆ ಕಾಳಜಿ ತೋರಿಸುತ್ತಿಲ್ಲ ಎಂದು ವೈಎಸ್‌ಆರ್‌ಸಿಪಿ ಮುಖ್ಯಸ್ಥ ವೈ.ಎಸ್. ಜಗನ್ ಮೋಹನ್ ರೆಡ್ಡಿ ಆರೋಪಿಸಿದ್ದಾರೆ. ಲಕ್ಷಾಂತರ ರೂಪಾಯಿಗಳನ್ನು ಹೂಡಿಕೆ ಮಾಡಿ ತಿಂಗಳುಗಟ್ಟಲೆ ಶ್ರಮಪಟ್ಟ ರೈತರನ್ನು ಸರ್ಕಾರ ನಿರ್ದಯವಾಗಿ ನೋಡುತ್ತಿದೆ. ಇದರಿಂದ ರೈತರು ನೋವು ಅನುಭವಿಸುತ್ತಿದ್ದಾರೆ ಎಂದು ಹೇಳಿದ್ದಾರೆ. ಈ ಕುರಿತು ಸಾಮಾಜಿಕ ಮಾಧ್ಯಮ ಎಕ್ಸ್‌ನಲ್ಲಿ ಬರೆದುಕೊಂಡಿರುವ ಜಗನ್, ಹಲೋ ಭಾರತ. ಆಂಧ್ರಪ್ರದೇಶದತ್ತ ಒಮ್ಮೆ ನೋಡಿ. ಒಂದು ಕೆ.ಜಿ ಬಾಳೆಹಣ್ಣು ಕೇವಲ 50 ಪೈಸೆಗೆ ಮಾರಾಟವಾಗುತ್ತಿದೆ. ಇದು ಆಂಧ್ರಪ್ರದೇಶದಲ್ಲಿ ಬಾಳೆ ಬೆಳೆಯುವ ರೈತರ ದುಃಸ್ಥಿತಿ. ಕೇವಲ ಬಾಳೆಹಣ್ಣಲ್ಲ ಈರುಳ್ಳಿ, ಟೊಮೆಟೊ ಸೇರಿದಂತೆ ಇತರ ಬೆಳೆಗಳೂ ಕಡಿಮೆ ದರದಲ್ಲಿ ಮಾರಾಟವಾಗುತ್ತಿದೆ. ಟಿಡಿಪಿ ನೇತೃತ್ವದ ಎನ್‌ಡಿಎ ಸರ್ಕಾರವು ಭರವಸೆ ನೀಡಿದಂತೆ ಉಚಿತ ಬೆಳೆ ವಿಮೆ, ವಿಪತ್ತುಗಳ ಸಮಯದಲ್ಲಿ ಸಹಾಯಧನ ಮತ್ತು ಬೆಂಬಲ ಬೆಲೆಯನ್ನೂ ರೈತರಿಗೆ ನೀಡಿಲ್ಲ ಎಂದಿದ್ದಾರೆ. ಈ ಕುರಿತು ಟಿಡಿಪಿ ಯಾವುದೇ ಪ್ರತಿಕ್ರಿಯೆ ನೀಡಿಲ್ಲ.



# ಸಂಸದೀಯ ಪ್ರಜಾಪ್ರಭುತ್ವದಲ್ಲಿ, ನಾವು ಸಂವಾದ ನಡೆಸಬೇಕು

## ಸಂಸತ್ ಅಧಿವೇಶನದಲ್ಲಿ ಎಸ್‌ಐಆರ್ ಬಗ್ಗೆ ಚರ್ಚಿಸಲು ಸರ್ಕಾರ ಸಿದ್ಧ, ವಿಪಕ್ಷಗಳು ಸಮಯ ನಿಗದಿ ಮಾಡಬಾರದು: ಕಿರಣ್ ರಿಜಿಜು

**ಹೊಸದಿಲ್ಲಿ:** ಸಂಸತ್ತಿನಲ್ಲಿ ವಿಶೇಷ ತೀವ್ರ ಮತದಾರರ ಪಟ್ಟಿ ಪರಿಷ್ಕರಣೆ ಬಗ್ಗೆ ಚರ್ಚೆಗೆ ಸರ್ಕಾರ ಸಿದ್ಧವಿದೆ, ಆದರೆ ವಿರೋಧ ಪಕ್ಷಗಳು ಸಮಯ ನಿಗದಿ ಮಾಡಬಾರದು ಎಂದು ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಹೇಳಿದ್ದಾರೆ. ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ ಅವರು ತಕ್ಷಣವೇ ಈ ಮಹತ್ವದ ವಿಷಯದ ಬಗ್ಗೆ ಚರ್ಚೆ ನಡೆಸಬೇಕೆಂದು ಒತ್ತಾಯಿಸಿದಾಗ, ರಿಜಿಜು ಅವರು ವಿವಿಧ ಪಕ್ಷಗಳ ನಾಯಕರೊಂದಿಗೆ ಸಮಾಲೋಚನೆ ನಡೆಸಿ ಪರಿಹಾರ ಕಂಡುಕೊಳ್ಳುವುದಾಗಿ ತಿಳಿಸಿದರು. ರಾಜ್ಯಸಭೆಯಲ್ಲಿ ಸದನದ ನಾಯಕ ಜೆ.ಪಿ. ನಡ್ಡಾ ಅವರು, ಸಂಸದೀಯ ವ್ಯವಹಾರಗಳ ಸಚಿವರು ಈಗಾಗಲೇ ಈ ಬಗ್ಗೆ ಮಾತನಾಡುವುದಾಗಿ ಹೇಳಿದ್ದಾರೆ ಎಂದರು. ವಿರೋಧ ಪಕ್ಷದ ನಾಯಕರೊಂದಿಗೆ ಶೀಘ್ರದಲ್ಲೇ ಸಭೆ ನಡೆಯಲಿದ್ದು, ನಿರ್ಧಾರ ಕೈಗೊಳ್ಳಲಾಗುವುದು ಎಂದು ನಡ್ಡಾ ಹೇಳಿದರು.

**ಯಾವುದಕ್ಕೂ ಸಮಯ ನಿಗದಿ ಮಾಡಬೇಡಿ:** ಖರ್ಗೆ ಅವರ ತಕ್ಷಣದ ಚರ್ಚೆಯ ಬೇಡಿಕೆಗೆ ಪ್ರತಿಕ್ರಿಯಿಸಿದ ರಿಜಿಜು, ಯಾವುದಕ್ಕೂ ಸಮಯ ನಿಗದಿ ಮಾಡಬೇಡಿ ಎಂದು ಮನವಿ ಮಾಡಿದರು. ನಾನು ವಿವಿಧ ರಾಜಕೀಯ ಪಕ್ಷಗಳ ನಾಯಕರೊಂದಿಗೆ ಔಪಚಾರಿಕವಾಗಿ ಅಥವಾ ಅನೌಪಚಾರಿಕವಾಗಿ ಸಂಪರ್ಕಕ್ಕೆ ಬರುತ್ತೇನೆ. ಅಂತಿಮವಾಗಿ, ನಾವು ಸಮಾಲೋಚನೆ ಆರಂಭಿಸಿದಾಗ ನಿಮಗೆ ತಿಳಿಯುತ್ತದೆ. ನೀವು ಸಮಯದ ಬಗ್ಗೆ ಪ್ರಶ್ನಿಸಲು ಪ್ರಾರಂಭಿಸಿದಾಗ ಸಮಸ್ಯೆ



**ಸಭೆ ನಡೆಸಿ ನಿರ್ಧಾರ**

ಉದ್ಭವಿಸುತ್ತದೆ. ಎಲ್ಲವೂ ಯಾಂತ್ರಿಕವಾಗಿರಲು ಸಾಧ್ಯವಿಲ್ಲ. ಸಂಸದೀಯ ಪ್ರಜಾಪ್ರಭುತ್ವದಲ್ಲಿ, ನಾವು ಸಂವಾದ ನಡೆಸಬೇಕು, ಚರ್ಚೆ ನಡೆಸಬೇಕು ಎಂದು ರಿಜಿಜು ಹೇಳಿದರು. ದೇಶದಲ್ಲಿ ಅನೇಕ ಸಮಸ್ಯೆಗಳಿವೆ, ಆದರೆ ಒಂದು ಸಮಸ್ಯೆಯನ್ನು ಕಡಿಮೆ ಮಾಡಿ ಮತ್ತೊಂದು ಸಮಸ್ಯೆಯನ್ನು ತೆಗೆದುಕೊಳ್ಳಬಾರದು. ಏಕೆಂದರೆ ಎಲ್ಲಾ ಸಮಸ್ಯೆಗಳೂ ಮುಖ್ಯವಾಗಿವೆ ಎಂದರು. ನೀವು ಚುನಾವಣೆಗಳಲ್ಲಿ ಗೆಲ್ಲಲು ಸಾಧ್ಯವಾಗುತ್ತಿಲ್ಲ, ಜನರು ನಿಮ್ಮನ್ನು

**ಎಸ್‌ಐಆರ್ ಎಂದರೆ ವಿಶೇಷ ತೀವ್ರ ಮತದಾರರ ಪಟ್ಟಿ ಪರಿಷ್ಕರಣೆ . ಇದು ಮತದಾರರ ಪಟ್ಟಿಯನ್ನು ನವೀಕರಿಸುವ ಪ್ರಕ್ರಿಯೆಯಾಗಿದೆ. ಈ ಕೆಲಸದಲ್ಲಿ ಬೂತ್ ಮಟ್ಟದ ಅಧಿಕಾರಿಗಳು ತೊಡಗಿಸಿಕೊಂಡಿರುತ್ತಾರೆ. ಈ ಕೆಲಸದ ಒತ್ತಡದಿಂದ ಕೆಲವರು ಮೃತಪಟ್ಟಿದ್ದಾರೆ ಎಂದು ವಿರೋಧ ಪಕ್ಷಗಳು ಆರೋಪಿಸಿವೆ. ಈ ವಿಷಯದ ಬಗ್ಗೆ ತಕ್ಷಣವೇ ಚರ್ಚೆ ನಡೆಸಬೇಕೆಂದು ವಿರೋಧ ಪಕ್ಷಗಳು ಒತ್ತಾಯಿಸುತ್ತಿವೆ. ಸರ್ಕಾರ ಚರ್ಚೆಗೆ ಸಿದ್ಧವಿದ್ದರೂ, ವಿರೋಧ ಪಕ್ಷಗಳು ಸಮಯ ನಿಗದಿ ಮಾಡಬಾರದು.**

**-ಕಿರಣ್ ರಿಜಿಜು, ಸಂಸದೀಯ ವ್ಯವಹಾರಗಳ ಸಚಿವ**

ನಂಬುತ್ತಿಲ್ಲ, ಆದ್ದರಿಂದ ನೀವು ಸಂಸತ್ತಿನಲ್ಲಿ ನಿಮ್ಮ ಕೋಪವನ್ನು ಹೊರಹಾಕುತ್ತಿದ್ದೀರಿ. ಇದು ಸರಿಯಲ್ಲ. ಪ್ರಜಾಪ್ರಭುತ್ವದಲ್ಲಿ, ಜನರೊಂದಿಗೆ ಚುನಾವಣೆಗಳ ವೇದಿಕೆ ಇದೆ. ನಾವು ನಿನ್ನೆ ಕೂಡ

**ಎಸ್‌ಐಆರ್ ಬಗ್ಗೆ ತಕ್ಷಣವೇ ಚರ್ಚೆ ನಡೆಯಬೇಕು**

**ಎಸ್‌ಐಆರ್ ಬಗ್ಗೆ ತಕ್ಷಣವೇ ಚರ್ಚೆ ನಡೆಯಬೇಕು ಎಂಬುದು ನಮ್ಮ ಮನವಿ. ಇದು ಬಹಳ ಗಂಭೀರವಾದ ವಿಷಯ, ಏಕೆಂದರೆ ದೇಶದಲ್ಲಿ ಬೂತ್ ಮಟ್ಟದ ಅಧಿಕಾರಿಗಳ ಜೀವಕ್ಕೆ ಅಪಾಯವಿದೆ. ಎಸ್‌ಐಆರ್ ಬಗ್ಗೆ ಚರ್ಚೆ ದೇಶ, ನಾಗರಿಕರು ಮತ್ತು ಪ್ರಜಾಪ್ರಭುತ್ವದ ಹಿತಾಸಕ್ತಿ ಹೊಂದಿದೆ. ನಾವು ಈ ವಿಷಯದ ಬಗ್ಗೆ ಸರ್ಕಾರದೊಂದಿಗೆ ಚರ್ಚಿಸಲು ಸಿದ್ಧರಿದ್ದೇವೆ, ಎಂದು ಅವರು ಹೇಳಿದರು. ವಿರೋಧ ಪಕ್ಷದ ನಾಯಕರು ಈ ವಿಷಯಗಳು ತುರ್ತು ಎಂದು ಹೇಳಿದರು, ಏಕೆಂದರೆ ಎಸ್‌ಐಆರ್ ಕೆಲಸದ ಒತ್ತಡದಿಂದ 28ಕ್ಕೂ ಹೆಚ್ಚು ಜನರು ಮೃತಪಟ್ಟಿದ್ದಾರೆ. ನಾನು ಚರ್ಚೆ ಈಗಲೇ ನಡೆಯಬೇಕೆಂದು ಬಯಸುತ್ತೇನೆ, ಕೇವಲ ಪ್ರಜಾಪ್ರಭುತ್ವ, ನಾಗರಿಕರು ಮತ್ತು ನಮ್ಮ ದೇಶದ ಹಿತಾಸಕ್ತಿಗಾಗಿ. ದಯವಿಟ್ಟು ಚರ್ಚೆಗೆ ಅವಕಾಶ ನೀಡಿ ಎಂದು ನಾನು ವಿನಂತಿಸುತ್ತೇನೆ. ನೀವು ಅವಕಾಶ ನೀಡಿದರೆ ನಾವು ನಿಮ್ಮೊಂದಿಗೆ ಸಹಕರಿಸುತ್ತೇವೆ, ಎಂದು ಅವರು ಒತ್ತಿ ಹೇಳಿದರು.**

ಹೇಳಿದ್ದೇವೆ, ನಾವು ಚರ್ಚಿಸಲು ಸಿದ್ಧರಿದ್ದೇವೆ ಮತ್ತು ನೀವು ಕನಿಷ್ಠ ಸಮಾಲೋಚನೆ ನಡೆಸಬೇಕು. ಆದರೆ, ಅವರು ಸಮಯವನ್ನು ನಿಗದಿ ಮಾಡಲು ಪ್ರಯತ್ನಿಸುತ್ತಾರೆ, ಸರ್ಕಾರ ಈಗಲೇ ಹೇಳಬೇಕು ಎನ್ನುತ್ತಾರೆ. ಇದು ಸರಿಯಲ್ಲ, ಎಂದು ರಿಜಿಜು ವಿರೋಧ ಪಕ್ಷದವರನ್ನು ಕುಟುಕಿದರು. ಇದಕ್ಕೂ ಮುನ್ನ, ಖರ್ಗೆ ಅವರು ಮಂಗಳವಾರ ನಿಯಮ 267ರ ಅಡಿಯಲ್ಲಿ ನೋಟಿಸ್ ನೀಡಿದ್ದಾಗಿ ತಿಳಿಸಿದರು. ಆದರೆ, ಸಭಾಪತಿಗಳು ವಿಷಯ ಮತ್ತು ಕಾರಣಗಳನ್ನು ತಿಳಿಸದೆ ಅದನ್ನು ತಿರಸ್ಕರಿಸಿದ್ದಾರೆ. ಇದು ಸಂಪ್ರದಾಯವಲ್ಲ ಎಂದು ಅವರು ಹೇಳಿದರು. ನೋಟಿಸ್ ನೀಡಿದ ಸದಸ್ಯರ ಹೆಸರು, ವಿಷಯವನ್ನು ಓದುವುದಿಲ್ಲ ಎಂಬುದು ದಿಢೀರನೆ ನಡೆದಿದೆ ಎಂದರು.

# ಅವಮಾನದ ಬಗ್ಗೆ ದುಲ್ಕರ್ ಮಾತು

ಪ್ರೋಷಕ ಪಾತ್ರ, ರೀತಿಯ ನಾಯಕ ಪಾತ್ರಗಳಿಗಷ್ಟೆ ದಕ್ಷಿಣದ ನಾಯಕ ನಟರನ್ನು ಬಾಲಿವುಡ್‌ಗೆ ಕರೆಸಿಕೊಳ್ಳಲಾಗುತ್ತಿತ್ತು. ದಕ್ಷಿಣದ ಸ್ಟಾರ್ ನಟ ದುಲ್ಕರ್ ಸಲ್ಮಾನ್ ಸಹ ಇದೇ ರೀತಿಯ ಪಾತ್ರಗಳಿಗಾಗಿ ಈ ಹಿಂದೆ ಬಾಲಿವುಡ್‌ಗೆ ಹೋಗಿದ್ದರು. ಆದರೆ ಅಲ್ಲಿ ಅವರಿಗೆ ಆದ ಅವಮಾನದ ಬಗ್ಗೆ ಇದೀಗ ಸ್ವತಃ ದುಲ್ಕರ್ ಸಲ್ಮಾನ್ ಮಾತನಾಡಿದ್ದಾರೆ. ತಮಗೆ ಆಗಿದ್ದ ಅವಮಾನದ ಬಗ್ಗೆ ಅವರು ಹೇಳಿಕೊಂಡಿದ್ದಾರೆ. ದಕ್ಷಿಣ ಭಾರತದ ನಟ-ನಟಿಯರು ದಶಕಗಳಿಂದಲೂ ಬಾಲಿವುಡ್ ಸಿನಿಮಾಗಳಲ್ಲಿ ನಟಿಸುತ್ತಾ ಬಂದಿದ್ದಾರೆ.



ಆದರೆ ತೀರ ಇತ್ತೀಚೆಗಷ್ಟೆ ದಕ್ಷಿಣದ ನಟರಿಗೆ ಬಾಲಿವುಡ್‌ನಲ್ಲಿ ಕನಿಷ್ಟ ಗೌರವ ಲಭ್ಯವಾಗುತ್ತಿವೆ. ಕೆಲವೇ ವರ್ಷಗಳ ಹಿಂದೆ ಸಹ ಬಾಲಿವುಡ್‌ನವರು ದಕ್ಷಿಣದ ನಟರನ್ನು ಕ್ಷುಲ್ಲಕವಾಗಿ ಕಾಣುತ್ತಿದ್ದರು.

ಯಾವುದೋ ಪೋಷಕ ಪಾತ್ರ, ರೀತಿಯ ನಾಯಕ ಪಾತ್ರಗಳಿಗಷ್ಟೆ ದಕ್ಷಿಣದ ನಾಯಕ ನಟರನ್ನು ಬಾಲಿವುಡ್‌ಗೆ ಕರೆಸಿಕೊಳ್ಳಲಾಗುತ್ತಿತ್ತು. ದಕ್ಷಿಣದ ಸ್ಟಾರ್ ನಟ ದುಲ್ಕರ್ ಸಲ್ಮಾನ್ ಸಹ ಇದೇ ರೀತಿಯ ಪಾತ್ರಗಳಿಗಾಗಿ ಈ ಹಿಂದೆ ಬಾಲಿವುಡ್‌ಗೆ ಹೋಗಿದ್ದರು. ಆದರೆ ಅಲ್ಲಿ ಅವರಿಗೆ ಆದ ಅವಮಾನದ ಬಗ್ಗೆ ಇದೀಗ ಸ್ವತಃ ದುಲ್ಕರ್ ಸಲ್ಮಾನ್ ಮಾತನಾಡಿದ್ದಾರೆ.

ದುಲ್ಕರ್ ಸಲ್ಮಾನ್ ಅವರು ಇತ್ತೀಚೆಗಷ್ಟೆ ಹಾಲಿವುಡ್ ರಿಪೋರ್ಟರ್ ಯೂಟ್ಯೂಬ್‌ನ ಚಾನೆಲ್‌ನ ರೌಂಡ್‌ಟೇಬಲ್ ಸಂದರ್ಶನದಲ್ಲಿ ಮಾತನಾಡಿದ್ದು, ಬಾಲಿವುಡ್ ತಮಗೆ ಮಾಡಿದ ಅವಮಾನ, ತಮ್ಮನ್ನು ನಡೆಸಿಕೊಂಡ ರೀತಿಯ ಬಗ್ಗೆ ಮಾತನಾಡಿದ್ದಾರೆ. ದುಲ್ಕರ್ ಸಲ್ಮಾನ್ ಹೇಳಿರುವಂತೆ 'ಬಾಲಿವುಡ್‌ನಲ್ಲಿ ತಾವು ಸೂಪರ್ ಸ್ಟಾರ್ ಎಂದು ತೋರಿಸಿಕೊಳ್ಳಬೇಕಾಗುತ್ತದೆ. ಇಲ್ಲವಾದರೆ ನಿಮ್ಮನ್ನು ಯಾರೂ ಕೇರ್ ಸಹ ಮಾಡುವುದಿಲ್ಲ' ಎಂದಿದ್ದಾರೆ. ಮಾತ್ರವಲ್ಲದೇ ತಮ್ಮದೇ ಉದಾಹರಣೆ ನೀಡಿದ್ದಾರೆ.

# ನೋವಾಗಿದ್ದರೆ ಕ್ಷಮಿಸಿ ರಣವೀರ್



ತುಳುನಾಡಿನ ದೈವದ ಬಗ್ಗೆ ನಟ ರಿಷಬ್ ಶೆಟ್ಟಿಯ ಅದ್ಭುತ ಅಭಿನಯ ತೋರಿಸೋದು ನನ್ನ ಉದ್ದೇಶವಾಗಿತ್ತು. ಆ ಭರದಲ್ಲಿ ತಪ್ಪಾಗಿದೆ. ನನ್ನಿಂದ ನೋವಾಗಿದ್ದರೆ ಕ್ಷಮಿಸಿ ಎಂದು ಬಾಲಿವುಡ್ ನಟ ರಣವೀರ್ ಸಿಂಗ್ ಕ್ಷಮೆಯಾಚಿಸಿದ್ದಾರೆ. ಈ ಕುರಿತು ರಣವೀರ್ ಇನ್‌ಸ್ಟಾಗ್ರಾಂನಲ್ಲಿ ಸ್ಟೋರಿ ಹಂಚಿಕೊಂಡಿದ್ದಾರೆ. 'ಕಾಂತಾರ ಚಾಪ್ಟರ್ 1 ಚಿತ್ರದಲ್ಲಿ ರಿಷಬ್ ಅವರ ಅದ್ಭುತ ಅಭಿನಯವನ್ನು ಎತ್ತಿ ತೋರಿಸುವುದು ನನ್ನ ಉದ್ದೇಶವಾಗಿತ್ತು. ನಾನೊಬ್ಬ ನಟನಾಗಿ ಆ ನಿರ್ದಿಷ್ಟ ದೃಶ್ಯದಲ್ಲಿ ನಟಿಸುವುದು ಎಷ್ಟು ಸವಾಲಾಗಿರುತ್ತದೆ ಎನ್ನೋದು ನನಗೆ ಚೆನ್ನಾಗಿ ಗೊತ್ತು. ಅವರ ನಟನೆಗೆ ಅಪಾರ ಮೆಚ್ಚುಗೆಯಿದೆ. ನಮ್ಮ ದೇಶದ ಪ್ರತಿಯೊಂದು ಸಂಸ್ಕೃತಿ, ಸಂಪ್ರದಾಯ ಹಾಗೂ ನಂಬಿಕೆಯನ್ನು ನಾನು ಗೌರವಿಸುತ್ತೇನೆ. ನನ್ನಿಂದ ನಿಮ್ಮ ಭಾವನೆಗಳಿಗೆ ನೋವಾಗಿದ್ದರೆ ಕ್ಷಮೆಯಿರಲಿ. ಪ್ರಾಮಾಣಿಕವಾಗಿ ಕ್ಷಮೆಯಾಚಿಸುತ್ತೇನೆ ಎಂದು ಬರೆದುಕೊಂಡಿದ್ದಾರೆ. ಈ ಸಂಬಂಧ ಹಿಂದೂ ಜನಜಾಗೃತಿ ಸಮಿತಿ ರಣವೀರ್ ಸಿಂಗ್ ವಿರುದ್ಧ ದೂರು ದಾಖಲಿಸಿದೆ.

ಸಮುದಾಯ ಆರಾಧಿಸುವ ಚಾಮುಂಡಿದೇವಿಯನ್ನು ಹೆಣ್ಣು ದೆವ್ವ ಎಂದು ಅವಮಾನಿಸಿದ್ದಾರೆ ಎಂದು ದೂರಿನಲ್ಲಿ ಉಲ್ಲೇಖಿಸಿದ್ದಾರೆ.

ಗೋವಾದಲ್ಲಿ ನಡೆದ 56ನೇ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವದಲ್ಲಿ ರಿಷಬ್ ಶೆಟ್ಟಿ ನಟನೆಯನ್ನು ಹೊಗಳುವ ಭರದಲ್ಲಿ ರಣವೀರ್ ಸಿಂಗ್ ಅಪಹಾಸ್ಯ ಮಾಡಿದ್ದರು. ಇದರ ಬೆನ್ನಲ್ಲೇ ತುಳುನಾಡಿನ ದೈವಕ್ಕೆ ರಣವೀರ್ ಸಿಂಗ್ ಅಪಮಾನ ಮಾಡಿದ್ದಾರೆಂದು ಸೋಷಿಯಲ್ ಮೀಡಿಯಾ ವ್ಯಾಪಕ ಟೀಕೆ ವ್ಯಕ್ತವಾಗಿತ್ತು. ರಿಷಬ್ ಅವರ ಕಾಂತಾರ ಸಿನಿಮಾವನ್ನು ಥಿಯೇಟರ್‌ನಲ್ಲಿ ನೋಡಿದ್ದೆ. ಅದ್ಭುತವಾಗಿತ್ತು ನಿಮ್ಮ ನಟನೆ. ಅದರಲ್ಲೂ ಹೆಣ್ಣು ದೆವ್ವ ನಿಮ್ಮ ಮೈಸೇರುವ ದೃಶ್ಯವಂತೂ ಅತ್ಯದ್ಭುತವಾಗಿತ್ತು. ಆ ದೃಶ್ಯದಲ್ಲಿ ನಿಮ್ಮ ನಟನೆ ಹಾಗೂ ನಿಮ್ಮ ನೋಟ ಮಜವಾಗಿತ್ತು ಅಂತ ರಣವೀರ್ ಸಿಂಗ್ ಅನುಕರಣೆ ಮಾಡಿದ್ದರು. ಅನುಕರಣೆ ಮಾಡಿದ್ದಕ್ಕೆ ದೈವಾರಾಧಕರು ಆಕ್ರೋಶ ಹೊರಹಾಕಿದ್ದರು. ಕಾರ್ಯಕ್ರಮ ನಡೆಯುವಾಗ ರಿಷಬ್ ಶೆಟ್ಟಿ ಮುಂದಿನ ಸಾಲಿನಲ್ಲೇ ಕುಳಿತಿದ್ದರು. ರಣವೀರ್ ಅನುಕರಣೆಗೆ ಸ್ವತಃ ರಿಷಬ್ ಅವರೇ ನಕ್ಕಿದ್ದಾರೆ ಎನ್ನಲಾಗಿತ್ತು.

# ಕಾಶಿಯಲ್ಲಿ ರಮೇಶ್ ದೈಜಿ ಟೀಮ್

ಈಗಾಗಲೇ ಟೀಸರ್ ನಿಂದ ಕುತೂಹಲ ಕೆರಳಿಸಿರುವ ಸೂಪರ್ ನ್ಯಾಚುರಲ್ ಥ್ರಿಲ್ಲರ್ ದೈಜಿ ಸಿನಿಮಾ ತಂಡವು ಮಹತ್ತರವಾದ ಚಿತ್ರೀಕರಣ ಒಂದನ್ನು ಭಾರತದ ಅತ್ಯಂತ ಪ್ರಾಚೀನ, ಅಧ್ಯಾತ್ಮಿಕ ನಗರವಾದ ವಾರಣಾಸಿಯಲ್ಲಿ ಚಿತ್ರೀಕರಿಸಿಕೊಂಡು ಹಿಂದಿರುಗಿದೆ. ವಾರಾಣಸಿಯ, ಅಲೌಕಿಕತೆ, ಅಧ್ಯಾತ್ಮಿಕತೆ, ಅಲ್ಲಿನ ಘಾಟ್ ಗಳು, ಅಲ್ಲಿಯ ಕಾಲಾತೀತತೆಯಿಂದ ಕೂಡಿದ ಜೀವನ ಇವುಗಳು ದೈಜಿ ಸಿನೆಮಾದ ಮುಖ್ಯ ವಿಷಯವಾದ ಅಗೋಚರ, ಅತೀಂದ್ರಿಯ ಶಕ್ತಿ, ನಂಬಿಕೆ, ಮನುಷ್ಯನ ಕಾಡುವ ಈ ಶಕ್ತಿಗಳ ಬಗೆಗಿನ ಕಥೆಗೆ ಸರಿಯಾದ ಒಂದು ವಾತಾವರಣ ಒದಗಿಸಿ ಕೊಟ್ಟಿತು. ಶಿವಾಜಿ ಸುರತ್ಕಲ್ 1 ಮತ್ತು 2 ಯಶಸ್ವಿ ಚಿತ್ರಗಳನ್ನು ಕೊಟ್ಟ ನಿರ್ದೇಶಕ ಆಕಾಶ್ ಶ್ರೀವತ್ಸ ರವರ ನಿರ್ದೇಶನ ಹಾಗೂ ವಿಭಾ ಕಶ್ಯಪ್ ಪ್ರೊಡಕ್ಷನ್ಸ್ ನ ಅಡಿಯಲ್ಲಿ ನಿರ್ಮಿಸುತ್ತಿರುವ ನಿರ್ಮಾಪಕ ರವಿ ಕಶ್ಯಪ್ ರವರ ಈ ಸಿನಿಮಾ ದೈಜಿ ನೈಜ ಘಟನೆ ಆಧಾರಿತ ಚಿತ್ರವಾಗಿದ್ದು ಇದು ಮನುಷ್ಯ ಹಾಗೂ ಅಲೌಕಿಕ, ಅತೀಂದ್ರಿಯ, ಅಗೋಚರ ಶಕ್ತಿಗಳ ನಡುವಿನ ಸಂಕೀರ್ಣ ಸಂಬಂಧಗಳ ಅನ್ವೇಷಣೆಯೇ ಇದರ ತಿರುಳು. ಚಿತ್ರತಂಡವು ಸತತವಾಗಿ ಮೂರು ದಿನಗಳ ಕಾಲ ರಾತ್ರಿಯಲ್ಲಿ ಚಿತ್ರೀಕರಣ ಮಾಡಿದ್ದು, ಇಲ್ಲಿಯ ಘಾಟ್ ಗಳು, ಸಣ್ಣ ಸಣ್ಣ ಓಣಿಗಳು, ಗಂಗಾರತಿ, ಅಧ್ಯಾತ್ಮಿಕತೆಯಿಂದ ಕೂಡಿದ ಭಕ್ತ ಸಮೂಹದ ಅನಿಯಂತ್ರಿತ ವಾತವರಣದಲ್ಲೇ, ಜನಜಂಗುಳಿಗಳ ಮಧ್ಯೆ ಸಿನಿಮಾದ ಮಹತ್ತರದ ದೃಶ್ಯಗಳನ್ನು ಚಿತ್ರೀಕರಿಸಲಾಗಿದೆ. ಈ ರೀತಿಯ ಚಿತ್ರೀಕರಣದಿಂದ ಸಿನಿಮಾಗೆ ಬೇಕಾದ ಕಚ್ಚಾ, ವೈವಿಧ್ಯಮಯ ಹಾಗೂ ರೋಮಾಂಚಕತೆಯ ದೃಶ್ಯಾವಳಿಗಳು ದೈಜಿ ಕಥೆಗೆ ಸರಿಯಾಗಿ ಹೊಂದುವ ವಾತಾವರಣ ಲಭ್ಯವಾಗಿಸಿತು. ಇದೇ ಸಂದರ್ಭದಲ್ಲಿ ದೈಜಿ ತಂಡಕ್ಕೆ ಮತ್ತೋರ್ವ ಕಲಾವಿದರಾದ, ಕನ್ನಡ ಸಿನಿಮಾದ ಹೆಸರಾಂತ ನಿರ್ದೇಶಕ ಗುರು ದೇಶಪಾಂಡೆಯವರು ಚಿತ್ರೀಕರಣದಲ್ಲಿ ಅತಿಥಿ ಪಾತ್ರದಲ್ಲಿ ಪಾಲ್ಗೊಂಡರು. ರಾಜಾ ಹುಲಿ, ರುದ್ರತಾಂಡವದಂತಹ ಅನೇಕ ಸಿನಿಮಾಗಳನ್ನು ನಿರ್ದೇಶಿಸಿರುವ ಗುರು ದೇಶಪಾಂಡೆಯವರು, ಈ ಚಿತ್ರದಲ್ಲಿ ಕಥೆಯ ಓಘಕ್ಕೆ ಹೊಂದುಕೊಂಡಂತೆ, ಅದಕ್ಕೆ ಮಹತ್ತರವಾದ ತಿರುವನ್ನು ತಂದುಕೊಡುವಂತಹ ಪ್ರಮುಖ ಪಾತ್ರದಲ್ಲಿ ನಟಿಸಿದ್ದಾರೆ.



**ಮೂರು ದಿನಗಳ ಕಾಲ ರಾತ್ರಿಯಲ್ಲಿ ಚಿತ್ರೀಕರಣ**

# ಪವನ್ ವೆಂಕಟೇಶ್ ನಿರ್ದೇಶನದಲ್ಲಿ ಫಸ್ಟ್ ಸ್ಯಾಲರಿ

ಶ್ರೀ ರಾಘವೇಂದ್ರ ಚಿತ್ರವಾಣಿ ಸಂಸ್ಥೆಯ ಸುಧೀಂದ್ರ, ವೆಂಕಟೇಶ್ ನಿರ್ಮಾಣ ಮಾಡಿರುವ, ಅವರ ಪುತ್ರ ಪವನ್ ವೆಂಕಟೇಶ್ ನಿರ್ದೇಶನ ಮಾಡಿರುವ ಫಸ್ಟ್ ಸ್ಯಾಲರಿ ಫಸ್ಟ್ ಶೋ ಇತ್ತೀಚೆಗೆ ನಡೆಯಿತು.

ಮೊದಲ ಪ್ರದರ್ಶನದಲ್ಲಿ ಹಿರಿಯ ನಿರ್ಮಾಪಕ ರಾಕ್ ಲೈನ್ ವೆಂಕಟೇಶ್, ನಟಿ ಶೃತಿ ಹಾಗೂ ಗುರುಗಳಾದ ಕಮಲಾಕರ್ ಅವರು ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದರು.

ನಂತರ ಗಣ್ಯರು ಹಾಗೂ ತಂಡದ ಸದಸ್ಯರು ಮಾತನಾಡಿದರು. ಡಿ.ವಿ.ಸುಧೀಂದ್ರ ಅವರು ನನಗೆ ಬಹಳ ಆತ್ಮೀಯರು. ಈಗ ಪಿ.ಆರ್.ಓ ವೆಂಕಟೇಶ್ ಪುತ್ರ ಪವನ್ ವೆಂಕಟೇಶ್, 'ಫಸ್ಟ್ ಸ್ಯಾಲರಿ' ಕಿರುಚಿತ್ರವನ್ನು ನಿರ್ದೇಶಿಸುವ ಮೂಲಕ ಚಲನಚಿತ್ರ ಕ್ಷೇತ್ರಕ್ಕೆ ಪಾದಾರ್ಪಣೆ ಮಾಡಿದ್ದಾರೆ. ಕಿರುಚಿತ್ರ ಬಹಳ ಚೆನ್ನಾಗಿ ಮೂಡಿಬಂದಿದೆ.

ಕಲಾವಿದರು ಕೂಡ ಅದ್ಭುತವಾಗಿ ಅಭಿನಯಿಸಿದ್ದಾರೆ. ಮುಂದಿನ ದಿನಗಳಲ್ಲಿ ಕನ್ನಡ ಚಿತ್ರರಂಗದಲ್ಲಿ ಈ ಹುಡುಗನಿಗೆ ಉತ್ತಮ ಅವಕಾಶಗಳು ಸಿಗಲಿ ಎಂದು ರಾಕ್ ಲೈನ್ ವೆಂಕಟೇಶ್ ಹಾರೈಸಿದರು.

ನಾನು ಡಿ.ವಿ.ಸುಧೀಂದ್ರ ಅವರ ನಿರ್ಮಾಣದ ನಗುನಗುತಾ ನಲಿ ಚಿತ್ರದಲ್ಲಿ ಅಭಿನಯಿಸಿದ್ದೆ. ಇಂದು ಅವರ ಕುಟುಂಬದ ಪವನ್ ವೆಂಕಟೇಶ್ ಕಿರುಚಿತ್ರ ನಿರ್ಮಾಣ ಮಾಡಿದ್ದಾನೆ.



# ಟಾಕ್ಸಿಕ್ ಮ್ಯೂಸಿಕ್ ಕನ್ನಡಿಗನಿಗೆ ಅವಕಾಶ




ಯಶ್ ನಟನೆಯ 'ಟಾಕ್ಸಿಕ್' ಚಿತ್ರಕ್ಕೆ ಕನ್ನಡಿಗರೊಬ್ಬರು ಸಂಗೀತ ಸಂಯೋಜನೆ ಮಾಡಲಿದ್ದಾರೆ. ಅನಿರುದ್ಧ್ ರವಿಚಂದರ್ ಹೆಸರು ಕೇಳಿಬಂದಿದ್ದರೂ, ಅಂತಿಮವಾಗಿ 'ಕೆಜಿಎಫ್' ಖ್ಯಾತಿಯ ರವಿ ಬಸ್ರೂರು ಅವರನ್ನೇ ತಂಡ ಆಯ್ಕೆ ಮಾಡಿದೆ. ಮಲಯಾಳಂನ ಗೀತು ಮೋಹನ್‌ದಾಸ್ ನಿರ್ದೇಶನದ ಈ ಚಿತ್ರ ಕನ್ನಡ ಹಾಗೂ ಇಂಗ್ಲಿಷ್‌ನಲ್ಲಿ ಮೂಡಿಬರಲಿದ್ದು, ಹಾಲಿವುಡ್ ಮಟ್ಟದ ಮೇಕಿಂಗ್‌ಗೆ ಸಿದ್ಧತೆ ನಡೆದಿದೆ. ಯಶ್ ನಟನೆಯ 'ಟಾಕ್ಸಿಕ್' ಸಿನಿಮಾ ಬಗ್ಗೆ ಅಭಿಮಾನಿಗಳಿಗೆ ಸಾಕಷ್ಟು ನಿರೀಕ್ಷೆ ಇದೆ. ಈ ಚಿತ್ರಕ್ಕೆ ಮಲಯಾಳಂನ ಗೀತು ಮೋಹನ್‌ದಾಸ್ ಅವರು ನಿರ್ದೇಶನ ಮಾಡುತ್ತಿದ್ದಾರೆ. ಈ ಸಿನಿಮಾ ಬಗ್ಗೆ ಅದೆಷ್ಟು ಎಚ್ಚರಿಕೆ ವಹಿಸಲಾಗುತ್ತಿದೆ ಎಂದರೆ ಯಾವುದೇ ಪ್ರಮುಖ ವಿಷಯಗಳು ಲೀಕ್ ಆಗುತ್ತಿಲ್ಲ. ಈ ಸಿನಿಮಾಗೆ ಮ್ಯೂಸಿಕ್ ಯಾರು ಮಾಡ್ತಾರೆ ಎಂಬ ಬಗ್ಗೆ ಚರ್ಚೆಗಳು ನಡೆದಿದ್ದವು. ಕೊನೆಗೂ ಇದಕ್ಕೆ ಉತ್ತರ ಸಿಕ್ಕಿದೆ. ಕನ್ನಡದ ಮ್ಯೂಸಿಕ್ ಕಂಪೋಸರ್‌ನ ಚಿತ್ರಕ್ಕೆ ಆಯ್ಕೆ ಮಾಡಿಕೊಳ್ಳಲಾಗಿದೆ ಎಂದು ವರದಿ ಆಗಿದೆ. 'ಟಾಕ್ಸಿಕ್' ಸಿನಿಮಾ ಕನ್ನಡದ ಜೊತೆಗೆ ಇಂಗ್ಲಿಷ್‌ನಲ್ಲೂ ರಿಲೀಸ್ ಆಗುತ್ತಿದೆ. ಎರಡೂ ಭಾಷೆಯಲ್ಲಿ ಒಟ್ಟಿಗೆ ಸಿನಿಮಾನ ಶೂಟ್ ಮಾಡಲಾಗುತ್ತಿದೆ. ಹಾಲಿವುಡ್ ಮಾರುಕಟ್ಟೆಯಲ್ಲಿ ಸಿನಿಮಾ ಮಾರಾಟ ಆಗಬೇಕು ಎಂದರೆ ಅದಕ್ಕೆ ಸಾಕಷ್ಟು ಸಿದ್ಧತೆ ಬೇಕು. ಈ ಕಾರಣದಿಂದಲೇ 'ಟಾಕ್ಸಿಕ್'ಗೆ ತಂಡದವರು ಹೆಚ್ಚು ಶ್ರಮ ಹಾಕುತ್ತಿದ್ದಾರೆ. ಈ ಸಿನಿಮಾಗೆ ರಾಜೀವ್ ರವಿ ಛಾಯಾಗ್ರಹಣ ಮಾಡಿದರೆ, ಸ್ಟಂಟ್‌ಗಳನ್ನು ಹಾಲಿವುಡ್‌ನ ಜೆಜೆ ಪೆರ್ರಿ ನಿರ್ದೇಶನ ಮಾಡಿದ್ದಾರೆ. ಈ ಸಿನಿಮಾಗೆ ಸಂಗೀತ ಸಂಯೋಜನೆ ಮಾಡೋದು ಯಾರು ಎಂಬ ಪ್ರಶ್ನೆ ಇತ್ತು. ಈ ಪ್ರಶ್ನೆಗೆ ಉತ್ತರ ಸಿಕ್ಕಿದ್ದು, ರವಿ ಬಸ್ರೂರು ಅವರೇ ಸಿನಿಮಾಗೆ ಮ್ಯೂಸಿಕ್ ಕಂಪೋಸ್ ಮಾಡುತ್ತಿದ್ದಾರಂತೆ. ಅನಿರುದ್ಧ್ ರವಿಚಂದರ್ ಅವರು ಈ ಸಿನಿಮಾಗೆ ಮ್ಯೂಸಿಕ್ ಮಾಡುತ್ತಾರೆ ಎಂಬ ಸುದ್ದಿ ಈ ಮೊದಲು ಹರಿದಾಡಿತ್ತು. ಚಿತ್ರಕ್ಕಾಗಿ 15 ಕೋಟಿ ರೂಪಾಯಿ ಸಂಭಾವನೆ ಪಡೆಯುತ್ತಿದ್ದಾರೆ.

**ಸಿನಿಮಾ ಬಗ್ಗೆ ಸಾಕಷ್ಟು ನಿರೀಕ್ಷೆ**

# 2 ಕೋಟಿ ರೂ. ಮೂಲ ಬೆಲೆ ಘೋಷಿಸಿದ 45 ಆಟಗಾರರ ಪಟ್ಟಿ

ಇಂಡಿಯನ್ ಪ್ರೀಮಿಯರ್ ಲೀಗ್ ಸೀಸನ್ 19ರ ಮಿನಿ ಹರಾಜು ಡಿಸೆಂಬರ್ 16 ರಂದು ನಡೆಯಲಿದೆ. ಅಬುಧಾಬಿಯಲ್ಲಿ ಜರುಗಲಿರುವ ಈ ಆಕ್ಷನ್ ಪ್ರಕ್ರಿಯೆಗಾಗಿ ಬರೋಬ್ಬರಿ 1355 ಆಟಗಾರರು ಹೆಸರು ನೀಡಿದ್ದಾರೆ.



ಈ ಆಟಗಾರರ ಪಟ್ಟಿಯನ್ನು ಶಾರ್ಟ್ ಲಿಸ್ಟ್ ಮಾಡಲಿದ್ದು, ಇದಾದ ಬಳಿಕ ಫೈನಲ್ ಪಟ್ಟಿ ಹೊರಬೀಳಲಿದೆ. ಇಂಡಿಯನ್ ಪ್ರೀಮಿಯರ್ ಲೀಗ್ ಸೀಸನ್-19ರ ಮಿನಿ ಹರಾಜಿಗಾಗಿ ಬರೋಬ್ಬರಿ 1355 ಆಟಗಾರರು ಹೆಸರು ನೋಂದಾಯಿಸಿಕೊಂಡಿದ್ದಾರೆ. ಹೀಗೆ ಹೆಸರು ನೋಂದಣಿ ಮಾಡಿಕೊಂಡ ಆಟಗಾರರಲ್ಲಿ 45 ಮಂದಿ ಗರಿಷ್ಠ ಬೇಸ್ ಪ್ರೈಸ್ ಘೋಷಿಸಿದ್ದಾರೆ. ಐಪಿಎಲ್ ಹರಾಜಿನ ಗರಿಷ್ಠ ಮೂಲ ಬೆಲೆ 2 ಕೋಟಿ ರೂ. ಇದೀಗ ನಲ್ವತ್ತೈದು ಆಟಗಾರರು ತಮ್ಮ ಆರಂಭಿಕ ಹರಾಜು ಮೊತ್ತ 2 ಕೋಟಿ ರೂ. ಎಂದು ಘೋಷಿಸಿದ್ದಾರೆ. ಈ ಪಟ್ಟಿಯಲ್ಲಿ ಭಾರತೀಯರಾದ ವೆಂಕಟೇಶ್ ಅಯ್ಯರ್ ಹಾಗೂ ರವಿ ಬಿಷ್ಣೋಯ್ ಕೂಡ ಇದ್ದಾರೆ. ಅದರಂತೆ ಹರಾಜು ಲಿಸ್ಟ್‌ನಲ್ಲಿ 2 ಕೋಟಿ ರೂ. ಬೇಸ್ ಪ್ರೈಸ್ ಘೋಷಿಸಿದ 45 ಆಟಗಾರರ ಪಟ್ಟಿ ಈ ಕೆಳಗಿನಂತಿದೆ...

ಜೇಕ್ ಫ್ರೇಸರ್-ಮೆಕ್‌ಗುರ್ಕ್, ಕ್ಯಾಮರೋನ್ ಗ್ರೀನ್, ಜೋಶ್ ಇಂಗ್ಲಿಸ್, ಮುಜೀಬ್ ಉರ್ ರೆಹಮಾನ್, ನವೀನ್ ಉಲ್ ಹಕ್, ಶಾನ್ ಅಬಾಟ್, ಅಷ್ಟನ್ ಅಗರ್, ಕೂಪರ್ ಕೊನೊಲಿ, ಸ್ಟೀವ್ ಸ್ಮಿತ್, ಮುಸ್ತಾಫಿಜುರ್ ರೆಹಮಾನ್, ಗಸ್ ಅಟ್ಕಿನ್ಸನ್, ಟಾಮ್ ಬ್ಯಾಂಟನ್. ಲಿಯಾಮ್ ಲಿವಿಂಗ್‌ಸ್ಟೋನ್, ಟಾಮ್ ಕರನ್, ಲಿಯಾಮ್ ಡಾಸನ್, ಬೆನ್ ಡಕೆಟ್, ಡ್ಯಾನ್ ಲಾರೆನ್ಸ್, ಟೈಮಲ್ ಮಿಲ್ಸ್, ಜೇಮಿ ಸ್ಮಿತ್, ಫಿನ್ ಅಲೆನ್, ಮೈಕೆಲ್ ಬ್ರೇಸ್‌ವೆಲ್, ಡೆವೊನ್ ಕಾನ್ವೇ, ಜೇಕಬ್ ಡಫಿ, ಮ್ಯಾಟ್ ಹೆನ್ರಿ, ಕೈಲ್ ಜೇಮಿಸನ್, ಆಡಮ್ ಮಿಲ್ನ್, ಡೇರಿಲ್ ಮಿಚೆಲ್, ವಿಲಿಯಂ ಓರೋಕ್. ರಚಿನ್ ರವೀಂದ್ರ, ಜೆರಾಲ್ಡ್ ಕೋಟ್ಝಿ, ಡೇವಿಡ್ ಮಿಲ್ಲರ್, ಅನ್ರಿಕ್ ನೋಕಿಯ, ಲುಂಗಿ ಎನ್‌ಗಿಡಿ, ರೈಲಿ ರೊಸ್ಸೊ, ತಬ್ರೇಝ್ ಶಮ್ಸಿ, ಡೇವಿಡ್ ವೀಝು, ವನಿಂದು ಹಸರಂಗ, ಮತೀಶ ಪತಿರಾಣ, ಮಹೀಶ್ ತೀಕ್ಷಣ, ಜೇಸನ್ ಹೋಲ್ಡರ್, ಶಾಯ್ ಹೋಪ್, ಅಕೇಲ್ ಹೊಸೈನ್, ಅಲ್ಝಾರಿ ಜೋಸೆಫ್, ರವಿ ಬಿಷ್ಣೋಯ್, ವೆಂಕಟೇಶ್ ಅಯ್ಯರ್.

# 6,6,6,6,6,6 ಸ್ಫೋಟಕ ಸೆಂಚುರಿ ಸಿಡಿಸಿದ ದೇವದತ್ ಪಡಿಕ್ಕಲ್

**ಆರಂಭದಿಂದಲೇ ಬಿರುಸಿನ ಬ್ಯಾಟಿಂಗ್**

ಸೈಯ್ಯದ್ ಮುಷ್ತಾಕ್ ಅಲಿ ಟೂರ್ನಿಯ ಗ್ರೂಪ್ ಡಿ ಪಂದ್ಯದಲ್ಲಿ ತಮಿಳುನಾಡು ವಿರುದ್ಧ ಕರ್ನಾಟಕ ತಂಡ ಭರ್ಜರಿ ಬ್ಯಾಟಿಂಗ್ ಪ್ರದರ್ಶಿಸಿದೆ. ಈ ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿರುವ ಕರ್ನಾಟಕ ಪರ ದೇವದತ್ ಪಡಿಕ್ಕಲ್ ಶತಕ ಸಿಡಿಸಿದ್ದು, ಈ ಮೂಲಕ ಕರ್ನಾಟಕ ತಂಡ ಬೃಹತ್ ಮೊತ್ತ ಪೇರಿಸಿದೆ.

ಸೈಯ್ಯದ್ ಮುಷ್ತಾಕ್ ಅಲಿ ಟೂರ್ನಿಯಲ್ಲಿ ಕರ್ನಾಟಕದ ಯುವ ದಾಂಡಿಗ ದೇವದತ್ ಪಡಿಕ್ಕಲ್ ಭರ್ಜರಿ ಸೆಂಚುರಿ ಸಿಡಿಸಿದ್ದಾರೆ. ಅಹಮದಾಬಾದ್‌ನ ನರೇಂದ್ರ ಮೋದಿ ಸ್ಟೇಡಿಯಂನಲ್ಲಿ ನಡೆಯುತ್ತಿರುವ ಈ ಪಂದ್ಯದಲ್ಲಿ ಕರ್ನಾಟಕ ಮತ್ತು ತಮಿಳುನಾಡು ತಂಡಗಳು ಮುಖಾಮುಖಿಯಾಗಿವೆ. ಈ ಪಂದ್ಯದಲ್ಲಿ ಟಾಸ್ ಗೆದ್ದ ತಮಿಳುನಾಡು ತಂಡದ ನಾಯಕ ವರುಣ್ ಚಕ್ರವರ್ತಿ ಬೌಲಿಂಗ್ ಆಯ್ದುಕೊಂಡಿದ್ದರು. ಅದರಂತೆ ಮೊದಲು ಬ್ಯಾಟ್ ಮಾಡಿದ ಕರ್ನಾಟಕ ತಂಡಕ್ಕೆ ಮಯಾಂಕ್ ಅಗರ್ವಾಲ್ (24) ಹಾಗೂ ಶರತ್ ಬಿಆರ್ (53) ಉತ್ತಮ ಆರಂಭ ಒದಗಿಸಿದ್ದರು. ಇನ್ನು ಮೂರನೇ ಕ್ರಮಾಂಕದಲ್ಲಿ ಕಣಕ್ಕಿಳಿದ ದೇವದತ್ ಪಡಿಕ್ಕಲ್ ವಿಸ್ಫೋಟಕ ಬ್ಯಾಟಿಂಗ್ ಪ್ರದರ್ಶಿಸಿದರು. ಆರಂಭದಿಂದಲೇ ಬಿರುಸಿನ ಬ್ಯಾಟಿಂಗ್‌ಗೆ ಒತ್ತು ನೀಡಿದ ದೇವದತ್ ಪಡಿಕ್ಕಲ್ ತಮಿಳುನಾಡು ಬೌಲರ್‌ಗಳ ಬೆಂಡೆತ್ತಿದರು. ಪರಿಣಾಮ ಪಡಿಕ್ಕಲ್ ಬ್ಯಾಟ್‌ನಿಂದ 6 ಭರ್ಜರಿ ಸಿಕ್ಸರ್ ಹಾಗೂ 10 ಫೋರ್‌ಗಳು ಮೂಡಿಬಂದವು. ಈ ಮೂಲಕ ಕೇವಲ 45 ಎಸೆತಗಳಲ್ಲಿ ಶತಕ ಪೂರೈಸಿದರು. ಅಂತಿಮವಾಗಿ 46 ಎಸೆತಗಳನ್ನು ಎದುರಿಸಿದ ದೇವದತ್ ಪಡಿಕ್ಕಲ್ 10 ಫೋರ್ ಹಾಗೂ 6 ಸಿಕ್ಸ್‌ಗಳೊಂದಿಗೆ ಅಜೇಯ 102 ರನ್ ಬಾರಿಸಿದರು. ಪಡಿಕ್ಕಲ್ ಅವರ ಈ ವಿಸ್ಫೋಟಕ ಸೆಂಚುರಿ ನೆರವಿನೊಂದಿಗೆ ಕರ್ನಾಟಕ ತಂಡವು 20 ಓವರ್‌ಗಳಲ್ಲಿ 3 ವಿಕೆಟ್ ಕಳೆದುಕೊಂಡು 245 ರನ್ ಕಲೆಹಾಕಿದೆ. ಅಂದಹಾಗೆ ಇದು ಟಿ20 ಕ್ರಿಕೆಟ್‌ನಲ್ಲಿ ದೇವದತ್ ಪಡಿಕ್ಕಲ್ ಅವರ 4ನೇ ಶತಕ. ಇದಕ್ಕೂ ಮುನ್ನ ಆರಂಭಿಕನಾಗಿ ಎರಡು ಸೆಂಚುರಿಗಳನ್ನು ಸಿಡಿಸಿದ್ದರು. ಆ ಬಳಿಕ ನಾಲ್ಕನೇ ಕ್ರಮಾಂಕದಲ್ಲಿ ಕಣಕ್ಕಿಳಿದು ಒಂದು ಶತಕ ಬಾರಿಸಿದ್ದರು. ಇದೀಗ ಮೂರನೇ ಕ್ರಮಾಂಕದಲ್ಲೂ ಬ್ಯಾಟ್ ಬೀಸಿ ಮೂರಂಕಿ ರನ್‌ಗಳಿಸಲು ಯಶಸ್ವಿಯಾಗಿದ್ದಾರೆ.



# ಟೆಸ್ಟ್‌ನಲ್ಲಿ ಹೊಸ ಇತಿಹಾಸ ಬರೆದ ಕೇನ್



2024 ರಲ್ಲಿ ಇಂಗ್ಲೆಂಡ್ ವಿರುದ್ಧ ಕೊನೆಯ ಟೆಸ್ಟ್ ಪಂದ್ಯವಾಡಿದ್ದ ಕೇನ್ ವಿಲಿಯಮ್ಸನ್ ಇದೀಗ ವೆಸ್ಟ್ ಇಂಡೀಸ್ ವಿರುದ್ಧದ ಮೊದಲ ಟೆಸ್ಟ್ ಪಂದ್ಯದ ಮೂಲಕ ಕಂಬ್ಯಾಕ್ ಮಾಡಿದ್ದಾರೆ. ಒಂದು ವರ್ಷದ ಬಳಿಕ ಕಣಕ್ಕಿಳಿದ ಮೊದಲ ಮ್ಯಾಚ್‌ನಲ್ಲೇ ಆಕರ್ಷಕ ಅರ್ಧಶತಕ ಬಾರಿಸಿದ ವಿಶೇಷ ದಾಖಲೆಯನ್ನು ತಮ್ಮದಾಗಿಸಿಕೊಂಡಿದ್ದಾರೆ. ಬರೋಬ್ಬರಿ 1 ವರ್ಷಗಳ ಬಳಿಕ ಕೇನ್ ವಿಲಿಯಮ್ಸನ್ ಟೆಸ್ಟ್ ಕ್ರಿಕೆಟ್‌ಗೆ ಮರಳಿದ್ದಾರೆ. ಈ ಮರಳುವಿಕೆಯ ಪಂದ್ಯದಲ್ಲೇ ಆಕರ್ಷಕ ಅರ್ಧಶತಕ ಬಾರಿಸಿ ವಿಶೇಷ ದಾಖಲೆಯನ್ನು ಸಹ ನಿರ್ಮಿಸಿದ್ದಾರೆ. ಈ ಮೂಲಕ ಟೆಸ್ಟ್ ಇತಿಹಾಸದಲ್ಲೇ ಈ ಸಾಧನೆ ಮಾಡಿದ ನ್ಯೂಝಿಲೆಂಡ್‌ನ ಏಕೈಕ ಬ್ಯಾಟರ್ ಎನಿಸಿಕೊಂಡಿದ್ದಾರೆ. ಕ್ರೈಸ್ಟ್‌ಚರ್ಚ್‌ನ ಹೆಂಗ್ಲೆ ಓವಲ್ ಮೈದಾನದಲ್ಲಿ ನಡೆಯುತ್ತಿರುವ ಈ ಪಂದ್ಯದಲ್ಲಿ ಟಾಸ್ ಗೆದ್ದ ವೆಸ್ಟ್ ಇಂಡೀಸ್ ತಂಡವು ಬೌಲಿಂಗ್ ಆಯ್ದುಕೊಂಡಿದೆ. ಅದರಂತೆ ಮೊದಲು ಬ್ಯಾಟ್ ಮಾಡಿದ ನ್ಯೂಝಿಲೆಂಡ್ ತಂಡವು ಮೊದಲ ಓವರ್‌ನಲ್ಲೇ ಡೆವೊನ್ ಕಾನ್ವೆ (0) ವಿಕೆಟ್ ಕಳೆದುಕೊಂಡಿತು.

ಈ ವೇಳೆ ಕ್ರೀಸ್‌ಗೆ ಆಗಮಿಸಿದ ಕೇನ್ ವಿಲಿಯಮ್ಸನ್ ಜವಾಬ್ದಾರಿಯುತ ಬ್ಯಾಟಿಂಗ್ ಪ್ರದರ್ಶಿಸಿದರು. ಎಚ್ಚರಿಕೆಯ ಬ್ಯಾಟಿಂಗ್‌ಗೆ ಒತ್ತು ನೀಡಿದ ಕೇನ್ ವಿಲಿಯಮ್ಸನ್ 102 ಎಸೆತಗಳನ್ನು ಎದುರಿಸಿ 6 ಫೋರ್‌ಸೇರಿದಂತೆ 52 ರನ್ ಬಾರಿಸಿದರು. ಈ ಮೂಲಕ ವೆಸ್ಟ್ ಇಂಡೀಸ್ ವಿರುದ್ಧದ ಟೆಸ್ಟ್ ಕ್ರಿಕೆಟ್‌ನಲ್ಲಿ 1000 ರನ್ ಪೂರೈಸಿದ ನ್ಯೂಝಿಲೆಂಡ್‌ನ 2ನೇ ಬ್ಯಾಟರ್ ಎನಿಸಿಕೊಂಡರು. ಇದಕ್ಕೂ ಮುನ್ನ ರಾಸ್ ಟೇಲರ್ (1136) ಈ ಸಾಧನೆ ಮಾಡಿದ್ದರು.


ಇದೀಗ ವೆಸ್ಟ್ ಇಂಡೀಸ್ ವಿರುದ್ಧ 18 ಇನಿಂಗ್ಸ್‌ಗಳಲ್ಲಿ ಸಾವಿರ ರನ್ ಪೂರೈಸುವ ಮೂಲಕ ಕೇನ್ ವಿಲಿಯಮ್ಸನ್ ಐದು ದೇಶಗಳ ವಿರುದ್ಧ ಟೆಸ್ಟ್‌ನಲ್ಲಿ 1000+ ರನ್ ಕಲೆಹಾಕಿದ ನ್ಯೂಝಿಲೆಂಡ್‌ನ ಮೊದಲ ಬ್ಯಾಟರ್ ಎನಿಸಿಕೊಂಡಿದ್ದಾರೆ. ಇದಕ್ಕೂ ಮೊದಲು ಅವರು ಇಂಗ್ಲೆಂಡ್, ಪಾಕಿಸ್ತಾನ್, ಸೌತ್ ಆಫ್ರಿಕಾ ಮತ್ತು ಶ್ರೀಲಂಕಾ ವಿರುದ್ಧ ಟೆಸ್ಟ್‌ನಲ್ಲಿ 1000+ ರನ್ ಕಲೆಹಾಕಿದ್ದರು.

# ಅಬ್ಬರ ನಿಲ್ಲಿಸದ ವೈಭವ್



**ಯುವ ದಾಂಡಿಗನ ಅಬ್ಬರ ಶುರು**

ವೈಭವ್ ಸೂರ್ಯವಂಶಿ ಇಂಡಿಯನ್ ಪ್ರೀಮಿಯರ್ ಲೀಗ್‌ನಲ್ಲಿ ಕೇವಲ 35 ಎಸೆತಗಳಲ್ಲಿ ಸೆಂಚುರಿ ಸಿಡಿಸಿ ದಾಖಲೆ ನಿರ್ಮಿಸಿದ್ದರು. ಇದಾದ ಬಳಿಕ ಭಾರತ ಎ ಪರ 32 ಎಸೆತಗಳಲ್ಲಿ ಶತಕ ಬಾರಿಸಿದ ಸಾಧನೆ ಮಾಡಿದ್ದರು. ಇದೀಗ ಸೈಯ್ಯದ್ ಮುಷ್ತಾಕ್ ಅಲಿ ಟಿ20 ಟೂರ್ನಿಯಲ್ಲೂ ಸೆಂಚುರಿ ಸಿಡಿಸಿದ್ದಾರೆ. ಟಿ20 ಕ್ರಿಕೆಟ್‌ನಲ್ಲಿ ವೈಭವ್ ಸೂರ್ಯವಂಶಿ ಸಿಡಿಲಬ್ಬರ ಮುಂದುವರೆದಿದೆ. ಇತ್ತೀಚೆಗಷ್ಟೇ ರೈಸಿಂಗ್ ಸ್ಟಾರ್ಸ್ ಏಷ್ಯಾಕಪ್ ಟೂರ್ನಿಯಲ್ಲಿ ಸೆಂಚುರಿ ಸಿಡಿಸಿದ್ದ ವೈಭವ್ ಇದೀಗ ಮತ್ತೊಂದು ಶತಕ ಬಾರಿಸಿದ್ದಾರೆ. ಈ ಬಾರಿ ಯುವ ದಾಂಡಿಗ ಶತಕ ಮೂಡಿಬಂದಿದ್ದು ದೇಶೀಯ ಅಂಗಳದಲ್ಲಿ ಎಂಬುದು ವಿಶೇಷ. ಕೊಲ್ಕತ್ತಾದ ಈಡನ್ ಗಾರ್ಡನ್ಸ್ ಸ್ಟೇಡಿಯಂನಲ್ಲಿ ನಡೆಯುತ್ತಿರುವ ಸೈಯ್ಯದ್ ಮುಷ್ತಾಕ್ ಅಲಿ ಟೂರ್ನಿಯಲ್ಲಿ ಮಹಾರಾಷ್ಟ್ರ ವಿರುದ್ಧ ವೈಭವ್ ಸೂರ್ಯವಂಶಿ ಸ್ಫೋಟಕ ಸೆಂಚುರಿ ಸಿಡಿಸಿದ್ದಾರೆ. ಈ ಪಂದ್ಯದಲ್ಲಿ ಟಾಸ್ ಗೆದ್ದ ಮಹಾರಾಷ್ಟ್ರ ತಂಡದ ನಾಯಕ ಪೃಥ್ವಿ ಶಾ ಬೌಲಿಂಗ್ ಆಯ್ದುಕೊಂಡಿದ್ದರು. ಅದರಂತೆ ಬಿಹಾರ ಪರ ಇನಿಂಗ್ಸ್ ಆರಂಭಿಸಿದ ವೈಭವ್ ಸೂರ್ಯವಂಶಿ ಆರಂಭದಲ್ಲಿ ಎಚ್ಚರಿಕೆಯ ಬ್ಯಾಟಿಂಗ್ ಪ್ರದರ್ಶಿಸಿದ್ದರು. ಅದರಂತೆ ಅರ್ಧಶತಕ ಪೂರೈಸಲು 34 ಎಸೆತಗಳನ್ನು ತೆಗೆದುಕೊಂಡಿದ್ದರು. ಆದರೆ ಹಾಫ್ ಸೆಂಚುರಿ ಪೂರ್ಣಗೊಂಡ ಬೆನ್ನಲ್ಲೇ ಯುವ ದಾಂಡಿಗನ ಅಬ್ಬರ ಶುರುವಾಗಿತ್ತು. ಮಹಾರಾಷ್ಟ್ರ ತಂಡದ ಅನುಭವಿ ಬೌಲರ್‌ಗಳನ್ನು ಮನಸೋ ಇಚ್ಛೆ ದಂಡಿಸಿದ ವೈಭವ್ ಸೂರ್ಯವಂಶಿ 58 ಎಸೆತಗಳಲ್ಲಿ ಶತಕ ಪೂರೈಸಿದರು. ಅಲ್ಲದೆ ಈ ಪಂದ್ಯದಲ್ಲಿ 61 ಎಸೆತಗಳನ್ನು ಎದುರಿಸಿದ ಯುವ ದಾಂಡಿಗ 7 ಭರ್ಜರಿ ಸಿಕ್ಸ್, 7 ಫೋರ್‌ಗಳೊಂದಿಗೆ ಅಜೇಯ 108 ರನ್ ಬಾರಿಸಿದರು. ವೈಭವ್ ಸೂರ್ಯವಂಶಿ ಬಾರಿಸಿದ ಈ ಶತಕದ ನೆರವಿನೊಂದಿಗೆ ಬಿಹಾರ ತಂಡ 20 ಓವರ್‌ಗಳಲ್ಲಿ 176 ರನ್ ಕಲೆಹಾಕಿದೆ. ಇದಕ್ಕೂ ಮುನ್ನ ರೈಸಿಂಗ್ ಸ್ಟಾರ್ಸ್ ಏಷ್ಯಾಕಪ್ ಟೂರ್ನಿಯಲ್ಲಿ ವೈಭವ್ ಸೂರ್ಯವಂಶಿ 32 ಎಸೆತಗಳಲ್ಲಿ ಶತಕ ಸಿಡಿಸಿದ್ದರು. ಯುಎಇ ವಿರುದ್ಧದ ಈ ಪಂದ್ಯದಲ್ಲಿ ಕೇವಲ 42 ಎಸೆತಗಳನ್ನು ಎದುರಿಸಿದ ವೈಭವ್ ಅಂತಿಮವಾಗಿ 15 ಭರ್ಜರಿ ಸಿಕ್ಸ್ ಹಾಗೂ 11 ಫೋರ್‌ಗಳೊಂದಿಗೆ 144 ರನ್ ಚಚ್ಚಿದರು.



Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966